# 2 ರಾಜರುಗಳು

### ಅಹಜ್ಯನಿಗೆ ಒಂದು ಸಂದೇಶ

1 ಅಹಾಬನು ಸತ್ತನಂತರ, ಮೋವಾಬ್ಯರು ಇಸ್ರೇಲಿನ
ಆಳ್ವಿಕೆಗೆ ವಿರೋಧವಾಗಿ ದಂಗೆ ಎದ್ದರು.
2 ಒಂದು ದಿನ, ಅಹಜ್ಯನು ಸಮಾರ್ಯದ ತನ್ನ ಮನೆಯ
ಮಾಳಿಗೆಯ ಮೇಲಿದ್ದನು. ಅಹಜ್ಯನು ಮನೆಯ ಮೇಲಿನ
ಮರದ ಕಂಬಗಳ ಮೂಲಕ ಕೆಳಕ್ಕೆ ಬಿದ್ದನು. ಅವನಿಗೆ
ಬಹಳ ಗಾಯಗಳಾದವು. ಅಹಜ್ಯನು ಸಂದೇಶಕರನ್ನು
ಕರೆದು ಅವರಿಗೆ, ‘‘ಎಕ್ರೋನಿನ ದೇವರಾದ ಬಾಳ್ಜೆ
ಬೂಬನ ಅರ್ಚಕರ ಬಳಿಗೆ ಹೋಗಿ, ನನ್ನ ಗಾಯಗಳು
ಗುಣವಾಗುತ್ತವೆಯೇ ಎಂಬುದನ್ನು ಅವರಿಂದ ತಿಳಿದು
ಕೊಳ್ಳಿ’’ ಎಂದು ಹೇಳಿದನು.

3 ಆದರೆ ಯೆಹೋವನ ದೂತನೊಬ್ಬನು ತಿಷ್ಬೀಯನಾದ
ಎಲೀಯನಿಗೆ, ‘‘ರಾಜನಾದ ಅಹಜ್ಯನು ಸಮಾರ್ಯ
ದಿಂದ ಕೆಲವು ಸಂದೇಶಕರನ್ನು ಕಳುಹಿಸಿದ್ದಾನೆ. ನೀನು
ಹೋಗಿ ಅವರನ್ನು ಭೇಟಿಯಾಗಿ ಅವರಿಗೆ, ‘ಇಸ್ರೇಲಿ
ನಲ್ಲಿಯೂ ಒಬ್ಬ ದೇವರಿದ್ದಾನೆ! ಹೀಗಿರುವಾಗ ನೀವು
ಎಕ್ರೋನಿನ ದೇವರಾದ ಬಾಳ್ಜೆಬೂಬನ ಬಳಿಗೆ ಹೋಗಿ
ಪ್ರಶ್ನೆಗಳನ್ನು ಕೇಳುವುದೇಕೆ? 4 ರಾಜನಾದ ಅಹಜ್ಯನಿಗೆ ಈ
ಸಂಗತಿಗಳನ್ನು ತಿಳಿಸಿ: ಬಾಳ್ಜೆಬೂಬನಿಂದ ಪ್ರಶ್ನೆಗಳನ್ನು
ಕೇಳುವುದಕ್ಕೆ ನೀನು ಸಂದೇಶಕರನ್ನು ಕಳುಹಿಸಿದೆ. ನೀನು
ಈ ಕಾರ್ಯವನ್ನು ಮಾಡಿದುದರಿಂದ, ಯೆಹೋವನು
ಇಂತೆನ್ನುವನು: ‘ನೀನು ನಿನ್ನ ಹಾಸಿಗೆಯಿಂದ ಮೇಲಕ್ಕೇ
ಳುವುದಿಲ್ಲ. ನೀನು ಅಲ್ಲೇ, ಸಾಯುವೆ’ ಎಂದು ತಿಳಿಸು’’
ಎಂಬುದಾಗಿ ಹೇಳಿದನು. ಎಲೀಯನು ಅಹಜ್ಯನ ಸೇವಕ
ರಿಗೆ ಈ ಮಾತುಗಳನ್ನು ಹೇಳಿ ಅಲ್ಲಿಂದ ಹೊರಟು
ಹೋದನು.

5 ಸಂದೇಶಕರು ಅಹಜ್ಯನ ಬಳಿಗೆ ಹಿಂದಿರುಗಿ ಬಂದರು.
ಅಹಜ್ಯನುಸಂದೇಶಕರನ್ನು, ‘‘ನೀವು ಇಷ್ಟು ಬೇಗ ಹಿಂದಕ್ಕೆ
ಬಂದುದೇಕೆ?’’ ಎಂದು ಕೇಳಿದನು.

6 ಸಂದೇಶಕರು ಅಹಜ್ಯನಿಗೆ, ‘‘ಒಬ್ಬನು ನಮ್ಮನ್ನು ಭೇಟಿ
ಯಾಗಿ ‘‘ನಿಮ್ಮನ್ನು ಕಳುಹಿಸಿದ ರಾಜನ ಬಳಿಗೆ ಹಿಂದಿರುಗಿ
ಹೋಗಿ ಯೆಹೋವನು ಹೇಳುವುದನ್ನು ಅವನಿಗೆ ತಿಳಿಸಿ.
ಯೆಹೋವನು ಹೇಳುವುದೇನಂದರೆ: ‘ಇಸ್ರೇಲಿನಲ್ಲಿ
ಒಬ್ಬ ದೇವರಿದ್ದಾನೆ! ಹೀಗಿರುವಾಗ ನೀನು ಎಕ್ರೋನಿನ
ದೇವರಾದ ಬಾಳ್ಜೆಬೂಬನನ್ನು ವಿಚಾರಿಸುವುದಕ್ಕೆ
ಸಂದೇಶಕರನ್ನು ಕಳುಹಿಸಿದುದೇಕೆ? ನೀನು ಈ ಕಾರ್ಯ
ವನ್ನು ಮಾಡಿದ್ದರಿಂದ ನಿನ್ನ ಹಾಸಿಗೆಯಿಂದ ಮೇಲ
ಕ್ಕೇಳುವುದಿಲ್ಲ. ನೀನು ಅಲ್ಲೇ ಸಾಯುವೆ!’’’ ಎಂಬುದಾಗಿ
ಹೇಳಿದರು.

7 ಅಹಜ್ಯನು ಸಂದೇಶಕರನ್ನು, ‘‘ನಿಮ್ಮನ್ನು ಭೇಟಿಮಾಡಿ
ಈ ಮಾತುಗಳನ್ನು ತಿಳಿಸಿದ ಮನುಷ್ಯನು ಹೇಗಿದ್ದನು?’’
ಎಂದು ಕೇಳಿದನು.

8 ಸಂದೇಶಕರು ಅಹಜ್ಯನಿಗೆ, ‘‘ಅವನು ಉಣ್ಣೆಯ
ಮೇಲಂಗಿಯನ್ನು ಧರಿಸಿದ್ದನು ಮತ್ತು ಸೊಂಟಕ್ಕೆ
ಚರ್ಮದ ಪಟ್ಟಿಯನ್ನು ಕಟ್ಟಿಕೊಂಡಿದ್ದನು’’ಎಂದರು.
ಆಗ ಅಹಜ್ಯನು, ‘‘ಅವನು ತಿಷ್ಬೀಯನಾದ ಎಲೀ
ಯನು’’ ಎಂದು ಹೇಳಿದನು.

### ಅಹಜ್ಯನು ಕಳುಹಿಸಿದ ಬೆಂಕಿಯಿಂದ ಸೇನಾಧಿಪತಿಗಳ ನಾಶನ

9 ಅಹಜ್ಯನು ಎಲೀಯನ ಬಳಿಗೆ ಒಬ್ಬ ಸೇನಾಧಿ
ಪತಿಯನ್ನು ಮತ್ತು ಐವತ್ತು ಮಂದಿ ಜನರನ್ನು ಕಳುಹಿಸಿ
ದನು. ಸೇನಾಧಿಪತಿಯು ಎಲೀಯನ ಬಳಿಗೆ ಹೋದನು.
ಆ ಸಮಯದಲ್ಲಿ ಎಲೀಯನು ಬೆಟ್ಟದ ತುದಿಯಲ್ಲಿ
ಕುಳಿತಿದ್ದನು. ಆ ಸೇನಾಧಿಪತಿಯು ಎಲೀಯನಿಗೆ, ‘‘ದೇವ
ಮನುಷ್ಯನೇ, ರಾಜನು ಹೇಳುತ್ತಾನೆ, ‘ಕೆಳಗಿಳಿದು ಬಾ’
’’ ಎಂದು ಹೇಳಿದನು.

10 ಎಲೀಯನು ಐವತ್ತು ಮಂದಿಯ ಸೇನಾಧಿಪತಿಗೆ,
‘‘ನಾನು ಒಬ್ಬ ದೇವಮನುಷ್ಯನಾದರೆ ಪರಲೋಕದಿಂದ
ಬೆಂಕಿಯು ಕೆಳಗಿಳಿದು ಬಂದು ನಿನ್ನನ್ನೂ ನಿನ್ನ ಐವತ್ತು
ಸೈನಿಕರನ್ನೂ ನಾಶಗೊಳಿಸಲಿ!’’ ಎಂದು ಉತ್ತರಿಸಿದನು.

ಆಗ ಬೆಂಕಿಯು ಪರಲೋಕದಿಂದ ಬಂದು ಆ ಸೇನಾಧಿ
ಪತಿಯನ್ನು ಮತ್ತು ಅವನ ಐವತ್ತು ಮಂದಿ ಸೈನಿಕರನ್ನು
ನಾಶಗೊಳಿಸಿತು.

11 ಅಹಜ್ಯನು ಬೇರೊಬ್ಬ ಸೇನಾಧಿಪತಿಯನ್ನು ಮತ್ತು
ಐವತ್ತು ಜನರನ್ನು ಎಲೀಯನ ಬಳಿಗೆ ಕಳುಹಿಸಿದನು.

ಸೇನಾಧಿಪತಿಯು ಎಲೀಯನಿಗೆ, ''ದೇವಮನುಷ್ಯನೇ, ರಾಜನು ಹೇಳುತ್ತಾನೆ, 'ತ್ವರಿತವಾಗಿ ಕೆಳಗಿಳಿದು ಬಾ!' ''ಎಂದು ಹೇಳಿದನು.

12ಎಲೀಯನು ಸೇನಾಧಿಪತಿಗೆ ಮತ್ತು ಅವನ ಐವತ್ತು ಮಂದಿ ಜನರಿಗೆ, ''ನಾನು ದೇವಮನುಷ್ಯನಾಗಿದ್ದರೆ ಪರಲೋಕದಿಂದ ಬೆಂಕಿಯು ಕೆಳಗಿಳಿದು ಬಂದು ನಿನ್ನನ್ನೂ ನಿನ್ನ ಐವತ್ತು ಜನರನ್ನೂ ನಾಶಗೊಳಿಸಲಿ!'' ಎಂದು ಹೇಳಿದನು.

ಆಗ ಪರಲೋಕದಿಂದ ದೇವರ ಬೆಂಕಿಯು ಇಳಿದು ಬಂದು ಸೇನಾಧಿಪತಿಯನ್ನೂ ಅವನ ಐವತ್ತು ಜನರನ್ನೂ ನಾಶಗೊಳಿಸಿತು.

13ಅಹಜ್ಯನು ಮೂರನೆಯ ಸೇನಾಧಿಪತಿಯನ್ನು ಐವತ್ತು ಜನರೊಂದಿಗೆ ಕಳುಹಿಸಿದನು. ಐವತ್ತು ಮಂದಿಯ ಮೂರನೆಯ ಸೇನಾಧಿಪತಿಯು ಎಲೀಯನ ಬಳಿಗೆ ಬಂದನು. ಸೇನಾಧಿಪತಿಯು ತನ್ನ ಮೊಣಕಾಲುಗಳ ಮೇಲೆ ಬಿದ್ದು ನಮಸ್ಕರಿಸಿದನು. ಸೇನಾಧಿಪತಿಯು ಎಲೀಯನನ್ನು ಬೇಡಿಕೊಳ್ಳುತ್ತಾ ಅವನಿಗೆ, ''ದೇವಮನುಷ್ಯನೇ, ನನ್ನ ಮತ್ತು ಈ ಐವತ್ತು ಜನರ ಪ್ರಾಣವು ನಿನ್ನ ದೃಷ್ಟಿಯಲ್ಲಿ ಬೆಲೆಯುಳ್ಳದ್ದಾಗಿರಲಿ! 14ಪರಲೋಕದಿಂದ ಕೆಳಗಿಳಿದು ಬಂದ ಬೆಂಕಿಯು ಮೊದಲ ಇಬ್ಬರು ಸೇನಾಧಿಪತಿಗಳನ್ನೂ ಅವರ ಐವತ್ತು ಜನರನ್ನೂ ನಾಶಗೊಳಿಸಿತು. ಆದರೆ ಈಗ ನಮ್ಮ ಮೇಲೆ ಕನಿಕರ ತೋರಿ ಜೀವಿಸಲು ಅವಕಾಶ ಮಾಡಿಕೊಡು'' ಎಂದು ಹೇಳಿದನು.

15ಯೆಹೋವನ ದೂತನು ಎಲೀಯನಿಗೆ, ''ಸೇನಾಧಿಪತಿಯೊಡನೆ ಹೋಗು, ಅವನಿಗೆ ಹೆದರಬೇಡ'' ಎಂದು ಹೇಳಿದನು.

ಎಲೀಯನು ರಾಜನಾದ ಅಹಜ್ಯನನ್ನು ನೋಡಲು ಆ ಸೇನಾಧಿಪತಿಯೊಡನೆ ಹೋದನು.

16ಎಲೀಯನು ಅಹಜ್ಯನಿಗೆ, ''ಇಸ್ರೇಲಿನಲ್ಲಿ ದೇವರಿದ್ದಾನೆ. ಹೀಗಿರುವಾಗ ನೀನು ಎಕ್ರೋನಿನ ದೇವರಾದ ಬಾಳ್ಜೆಬೂಬನನ್ನು ಪ್ರಶ್ನೆಗಳನ್ನು ಕೇಳಲು ಸಂದೇಶಕರನ್ನು ಏಕೆ ಕಳುಹಿಸಿದೆ? ನೀನು ಈ ಕಾರ್ಯವನ್ನು ಮಾಡಿದ್ದರಿಂದ ನಿನ್ನ ಹಾಸಿಗೆಯಿಂದ ನೀನು ಮೇಲಕ್ಕೇಳುವುದಿಲ್ಲ. ನೀನು ಅಲ್ಲೇ ಸಾಯುವೆ!'' ಎಂದನು.

17ಎಲೀಯನ ಮೂಲಕ ಯೆಹೋವನು ಹೇಳಿದಂತೆಯೇ ಅಹಜ್ಯನು ಸತ್ತುಹೋದನು. ಅಹಜ್ಯನಿಗೆ ಮಕ್ಕಳಿರಲಿಲ್ಲ. ಆದ್ದರಿಂದ ಅಹಜ್ಯನಿಗೆ ನಂತರ ಯೋರಾಮನು ಹೊಸ ರಾಜನಾದನು. ಯೆಹೋಷಾಫಾಟನ ಮಗನಾದ ಯೆಹೋರಾಮನು ಯೆಹೂದದ ರಾಜನಾಗಿದ್ದ ಎರಡನೆಯ ವರ್ಷದಲ್ಲಿ ಯೊಹೋರಾಮನು ಆಳುವುದಕ್ಕೆ ಆರಂಭಿಸಿದನು. 18ಅಹಜ್ಯನು ಮಾಡಿದ ಇತರ ಕಾರ್ಯಗಳ ಬಗ್ಗೆ ''ಇಸ್ರೇಲಿನ ರಾಜರುಗಳ ಇತಿಹಾಸ'' ಎಂಬ ಪುಸ್ತಕದಲ್ಲಿ ಬರೆಯಲಾಗಿದೆ.

### ಎಲೀಯನ ಪರಲೋಕಾರೋಹಣ

2 ಯೆಹೋವನು ಎಲೀಯನನ್ನು ಸುಂಟರಗಾಳಿಯ ಮೂಲಕ ಪರಲೋಕಕ್ಕೆ ಕರೆದುಕೊಳ್ಳುವ ಕಾಲ ಹತ್ತಿರ ಬಂದಿತು. ಎಲೀಯನು ಎಲೀಷನೊಡನೆ ಗಿಲ್ಗಾಲಿನಿಂದ ಹೋದನು.

2ಎಲೀಯನು ಎಲೀಷನಿಗೆ, ''ದಯವಿಟ್ಟು ಇಲ್ಲಿಯೇ ಇರು; ಏಕೆಂದರೆ ಬೇತೇಲಿಗೆ ಹೋಗುವಂತೆ ಯೆಹೋವನು ನನಗೆ ಆಜ್ಞಾಪಿಸಿದ್ದಾನೆ'' ಎಂದು ಹೇಳಿದನು.

ಆದರೆ ಎಲೀಷನು, ''ಯೆಹೋವನಾಣೆ, ನಿನ್ನಾಣೆ, ನಾನು ನಿನ್ನನ್ನು ಬಿಟ್ಟಿರುವುದಿಲ್ಲವೆಂದು ಪ್ರಮಾಣ ಮಾಡುತ್ತೇನೆ''ಎಂದು ಹೇಳಿದನು. ಇಬ್ಬರೂ ಬೇತೇಲಿಗೆ ಹೋದರು.

3ಬೇತೇಲಿನಲ್ಲಿ ಪ್ರವಾದಿಗಳ ಗುಂಪೊಂದು ಎಲೀಷನ ಬಳಿಗೆ ಬಂದು, ಅವನಿಗೆ, ''ಯೆಹೋವನು ಈ ದಿನ ನಿನ್ನ ಒಡೆಯನನ್ನು ನಿನ್ನಿಂದ ತೆಗೆದುಕೊಳ್ಳುತ್ತಾನೆಂಬುದು ನಿನಗೆ ತಿಳಿದಿದೆಯೇ'' ಎಂದು ಕೇಳಿದರು.

ಎಲೀಷನು, ''ಹೌದು, ನನಗೆ ಅದು ತಿಳಿದಿದೆ. ಅದರ ಬಗ್ಗೆ ಮಾತನಾಡಬೇಡಿ'' ಎಂದನು.

4ಎಲೀಯನು ಎಲೀಷನಿಗೆ, ''ದಯವಿಟ್ಟು ಇಲ್ಲಿಯೇ ಇರು, ಏಕೆಂದರೆ ಯೆಹೋವನು ಜೆರಿಕೋವಿಗೆ ಹೋಗುವಂತೆ ನನಗೆ ಆಜ್ಞಾಪಿಸಿದ್ದಾನೆ'' ಎಂದು ಹೇಳಿದನು.

ಆದರೆ ಎಲೀಷನು, ''ಯೆಹೋವನಾಣೆ, ನಿನ್ನಾಣೆ, ನಾನು ನಿನ್ನನ್ನು ಬಿಟ್ಟಿರುವುದಿಲ್ಲವೆಂದು ಪ್ರಮಾಣ ಮಾಡುತ್ತೇನೆ!'' ಎಂದು ಹೇಳಿದನು. ಇಬ್ಬರೂ ಜೆರಿಕೋವಿಗೆ ಹೋದರು.

5ಜೆರಿಕೋದಲ್ಲಿ ಪ್ರವಾದಿಗಳ ಗುಂಪೊಂದು ಎಲೀಷನ ಬಳಿಗೆ ಬಂದು ಅವನಿಗೆ, ''ಯೆಹೋವನು ಈ ದಿನ ನಿನ್ನ ಒಡೆಯನನ್ನು ನಿನ್ನಿಂದ ತೆಗೆದುಕೊಳ್ಳುತ್ತಾನೆಂಬುದು ನಿನಗೆ ತಿಳಿದಿದೆಯೇ?'' ಎಂದು ಕೇಳಿದರು.

ಎಲೀಷನು, ''ಹೌದು, ನನಗೆ ಅದು ತಿಳಿದಿದೆ. ಅದರ ಬಗ್ಗೆ ಮಾತನಾಡಬೇಡಿ''ಎಂದನು.

6ಎಲೀಯನು ಎಲೀಷನಿಗೆ, ''ದಯವಿಟ್ಟು ಇಲ್ಲಿಯೇ ಇರು, ಏಕೆಂದರೆ ಯೆಹೋವನು ಜೋರ್ಡನ್ ನದಿಗೆ ಹೋಗುವಂತೆ ನನಗೆ ಆಜ್ಞಾಪಿಸಿದ್ದಾನೆ'' ಎಂದು ಹೇಳಿದನು.

ಎಲೀಷನು, ''ಯೆಹೋವನಾಣೆ, ನಿನ್ನಾಣೆ, ನಾನು ನಿನ್ನನ್ನು ಬಿಟ್ಟಿರುವುದಿಲ್ಲವೆಂದು ಪ್ರಮಾಣ ಮಾಡುತ್ತೇನೆ'' ಎಂದು ಹೇಳಿದನು. ಅವರಿಬ್ಬರೂ ಮುಂದೆ ಸಾಗಿದರು.

[7]ಅವರನ್ನು ಹಿಂಬಾಲಿಸಿಕೊಂಡು ಬಂದ ಪ್ರವಾದಿಗಳ
ಗುಂಪಿನಲ್ಲಿ ಐವತ್ತು ಮಂದಿ ಅಲ್ಲಿದ್ದರು. ಎಲೀಯ ಮತ್ತು
ಎಲೀಷರು ಜೋರ್ಡನ್ ನದಿಯ ಹತ್ತಿರ ನಿಂತು
ಕೊಂಡರು. ಆ ಐವತ್ತು ಮಂದಿ ಜನರು ಎಲೀಯ ಮತ್ತು
ಎಲೀಷರಿಗಿಂತ ಬಹುದೂರದಲ್ಲಿ ನಿಂತುಕೊಂಡರು.
[8]ಎಲೀಯನು ತನ್ನ ಮೇಲಂಗಿಯನ್ನು ತೆಗೆದು ಅದರಿಂದ
ನೀರನ್ನು ಹೊಡೆದನು. ಈಗ ನೀರು ಎರಡು ಭಾಗವಾಗಿ
ಬಲಗಡೆಯಲ್ಲಿಯೂ ಎಡಗಡೆಯಲ್ಲಿಯೂ ನಿಂತು
ಕೊಂಡಿತು. ನಂತರ ಎಲೀಯ ಮತ್ತು ಎಲೀಷರು
ಒಣನೆಲದ ಮೇಲೆ ನದಿಯನ್ನು ದಾಟಿದರು.

[9]ಅವರು ನದಿಯನ್ನು ದಾಟಿದ ಮೇಲೆ ಎಲೀಯನು
ಎಲೀಷನಿಗೆ, ‘‘ದೇವರು ನನ್ನನ್ನು ನಿನ್ನಿಂದ ತೆಗೆದು
ಕೊಳ್ಳುವುದಕ್ಕೆ ಮುಂಚೆ, ನಾನು ನಿನಗೆ ಏನು ಮಾಡ
ಬೇಕೆಂದು ನೀನು ಅಪೇಕ್ಷಿಸುವೆ?’’ ಎಂದು ಕೇಳಿದನು.
ಎಲೀಷನು, ‘‘ನಿನ್ನ ಆತ್ಮವು ನನ್ನ ಮೇಲೆ ಎರಡ
ರಷ್ಟಿರಬೇಕೆಂದು ನಾನು ನಿನ್ನಲ್ಲಿ ಬೇಡುತ್ತೇನೆ’’ ಎಂದು
ಹೇಳಿದನು.

[10]ಎಲೀಯನು, ‘‘ನೀನು ಕಷ್ಟಕರವಾದುದನ್ನು ಬೇಡಿ
ಕೊಂಡೆ. ನಿನ್ನಿಂದ ನನ್ನನ್ನು ತೆಗೆದುಕೊಳ್ಳುವಾಗ ನೀನು
ನನ್ನನ್ನು ಕಂಡರೆ,ಅದು ನಿನಗೆ ದೊರೆಯುವುದು. ಆದರೆ
ನಿನ್ನಿಂದ ನನ್ನನ್ನು ತೆಗೆದುಕೊಳ್ಳುವಾಗ ನೀನು ನನ್ನನ್ನು
ಕಾಣದಿದ್ದರೆ, ಅದು ನಿನಗೆ ದೊರೆಯುವುದಿಲ್ಲ’’ ಎಂದು
ಹೇಳಿದನು.

[11]ಎಲೀಯ ಮತ್ತು ಎಲೀಷ ಒಟ್ಟಿಗೆ ನಡೆಯುತ್ತಾ
ಮಾತನಾಡುತ್ತಿದ್ದರು. ಇದ್ದಕ್ಕಿದ್ದಂತೆ, ಕೆಲವು ಕುದುರೆಗಳು
ಮತ್ತು ರಥಗಳು ಬಂದು ಎಲೀಯನನ್ನು ಎಲೀಷನಿಂದ
ಬೇರ್ಪಡಿಸಿದವು. ಆ ಕುದುರೆಗಳು ಮತ್ತು ರಥಗಳು
ಬೆಂಕಿಯಂತಿದ್ದವು! ನಂತರ ಎಲೀಯನು ಸುಂಟರ
ಗಾಳಿಯಲ್ಲಿ ಪರಲೋಕಕ್ಕೆ ಏರಿಹೋದನು.

[12]ಎಲೀಷನು ಅದನ್ನು ನೋಡಿ, ‘‘ನನ್ನ ತಂದೆಯೇ! ನನ್ನ
ತಂದೆಯೇ! ಇಸ್ರೇಲಿಗೆ ರಥರಥಾಶ್ವಗಳೂ ಮತ್ತು ಅಶ್ವ
ದಳವೂ ಆಗಿದ್ದವನೇ!’’ ಎಂದು ಕೂಗಿಕೊಂಡನು.

ಎಲೀಷನು ಎಲೀಯನನ್ನು ಮತ್ತೆ ನೋಡಲಿಲ್ಲ.
ಎಲೀಷನು ತನ್ನ ಬಟ್ಟೆಗಳನ್ನು ಹಿಡಿದುಕೊಂಡು, ತನ್ನ
ದುಃಖವನ್ನು ತೋರ್ಪಡಿಸಲು ಅವುಗಳನ್ನು ಹರಿದು
ಚೂರುಚೂರು ಮಾಡಿದನು. [13]ಎಲೀಯನ ಮೇಲಂ
ಗಿಯು ನೆಲದ ಮೇಲೆ ಬಿತ್ತು. ಎಲೀಷನು ಅದನ್ನು ಎತ್ತಿ
ಕೊಂಡು ಅದರಿಂದ ನೀರನ್ನು ಹೊಡೆದು, ‘‘ಎಲೀಯನ
ದೇವರಾದ ಯೆಹೋವನು ಎಲ್ಲಿದ್ದಾನೆ?’’ ಎಂದು
ಕೇಳಿದನು.

[14]ಎಲೀಷನು ನೀರನ್ನು ಹೊಡೆದಾಗ, ನೀರು ಎರಡು
ಭಾಗವಾಗಿ ಬಲಗಡೆಯಲ್ಲೂ ಎಡಗಡೆಯಲ್ಲೂ ನಿಂತು
ಕೊಂಡಿತು! ಎಲೀಷನು ನದಿಯನ್ನು ದಾಟಿದನು.

### ಎಲೀಯನ ಬಗ್ಗೆ ಪ್ರವಾದಿಗಳ ವಿಚಾರ

[15]ಜೆರಿಕೋದಲ್ಲಿ ಪ್ರವಾದಿಗಳ ಗುಂಪೊಂದು ಎಲಿ
ೀಷನನ್ನು ಕಂಡು, ‘‘ಎಲೀಯನ ಆತ್ಮವು ಈಗ ಎಲೀಷನ
ಮೇಲಿದೆ!’’ ಎಂದು ಹೇಳಿ ಎಲೀಷನನ್ನು ಭೇಟಿಮಾಡಲು
ಬಂದರು. ಅವರು ಎಲೀಷನಿಗೆ ಸಾಷ್ಟಾಂಗ ನಮಸ್ಕಾರ
ಮಾಡಿದರು. [16]ಅವರು ಅವನಿಗೆ, ‘‘ನೋಡು, ನಮ್ಮಲ್ಲಿ
ಐವತ್ತು ಮಂದಿ ಒಳ್ಳೆಯ ಜನರಿದ್ದಾರೆ. ನಿನ್ನ ಒಡೆಯನನ್ನು
ಹುಡುಕಲು ದಯವಿಟ್ಟು ಅವರಿಗೆ ಅವಕಾಶ ಕೊಡು.
ಯೆಹೋವನ ಆತ್ಮವು ಎಲೀಯನನ್ನು ಮೇಲಕ್ಕೆ ಎತ್ತಿ
ಕೊಂಡು ಹೋಗಿ ಯಾವುದಾದರೂ ಬೆಟ್ಟದ ಮೇಲಾ
ಗಲೀ ಅಥವಾ ಕಣಿವೆಯಲ್ಲಾಗಲೀ ಬೀಳಿಸಿರಬೇಕು’’
ಎಂದು ಹೇಳಿದರು.

ಆದರೆ ಎಲೀಷನು, ‘‘ಇಲ್ಲ, ಎಲೀಯನನ್ನು ಹುಡು
ಕಲು ಜನರನ್ನು ಕಳುಹಿಸಬೇಡಿ!’’ ಎಂದು ಉತ್ತರಿಸಿದನು.

[17]ಎಲೀಷನು ಕಿರಿಕಿರಿಗೊಂಡು ಒಪ್ಪಿಕೊಳ್ಳುವವರೆಗೆ ಆ
ಪ್ರವಾದಿಗಳ ಗುಂಪು ಅವನನ್ನು ಬೇಡಿಕೊಂಡರು. ನಂತರ
ಎಲೀಷನು, ‘‘ಸರಿ, ಎಲೀಯನನ್ನು ಹುಡುಕಲು ಜನರನ್ನು
ಕಳುಹಿಸಿ’’ ಎಂದು ಹೇಳಿದನು.

ಪ್ರವಾದಿಗಳ ಗುಂಪು ಎಲೀಯನನ್ನು ಹುಡುಕಲು
ಐವತ್ತು ಮಂದಿ ಜನರನ್ನು ಕುಳುಹಿಸಿದರು. ಅವರು
ಮೂರು ದಿನ ಹುಡುಕಿದರೂ ಎಲೀಯನನ್ನು ಕಂಡು
ಹಿಡಿಯಲಾಗಲಿಲ್ಲ. [18]ಅವರು ಎಲೀಷನು ನೆಲೆಸಿದ್ದ
ಜೆರಿಕೋವಿಗೆ ಹೋದರು. ಅವರು ಎಲೀಯನನ್ನು
ಕಂಡುಹಿಡಿಯಲಾಗಲಿಲ್ಲವೆಂದು ಎಲೀಷನಿಗೆ ಹೇಳಿ
ದರು. ಎಲೀಷನು ಅವರಿಗೆ, ‘‘ನಾನು ನಿಮಗೆ ಹೋಗ
ಬೇಡವೆಂದು ಹೇಳಿದೆನಲ್ಲ’’ ಎಂದನು.

### ಎಲೀಷನು ನೀರನ್ನು ಶುಚಿಗೂಳಿಸಿದನು

[19]ನಗರದ ಜನರು ಎಲೀಷನಿಗೆ, ‘‘ಸ್ವಾಮೀ, ಈ
ನಗರವು ಒಳ್ಳೆಯ ಸ್ಥಳದಲ್ಲಿದೆಯೆಂಬುದನ್ನು ನೀನು
ನೋಡುತ್ತಿರುವೆ. ಆದರೆ ನೀರು ತುಂಬಾ ಕೆಟ್ಟಿದೆ. ಆ
ಕಾರಣದಿಂದಲೇ ಈ ಭೂಮಿಯಲ್ಲಿ ಬೆಳೆಗಳನ್ನು ಬೆಳೆ
ಯಲಾಗುತ್ತಿಲ್ಲ’’ ಎಂದು ಹೇಳಿದರು.

[20]ಎಲೀಷನು, ‘‘ಒಂದು ಹೊಸ ಬೋಗುಣಿಯನ್ನು
ತಂದು ಅದರಲ್ಲಿ ಉಪ್ಪನ್ನು ಹಾಕಿ’’ ಎಂದನು.

ಜನರು ಎಲೀಷನ ಬಳಿಗೆ ಒಂದು ಬೋಗುಣಿಯನ್ನು
ತಂದರು.[21]ನಂತರ ಎಲೀಷನು ನೆಲದಿಂದ ನೀರು
ಹರಿಯುತ್ತಿದ್ದ ಸ್ಥಳಕ್ಕೆ ಹೋದನು. ಎಲೀಷನು ಉಪ್ಪನ್ನು
ನೀರಿನಲ್ಲಿ ಎಸೆದು, ‘‘ನಾನು ಈ ನೀರನ್ನು ಶುಚಿ
ಗೊಳಿಸಿದ್ದೇನೆ! ಇಲ್ಲಿಂದಾಚೆಗೆ ಈ ನೀರು ಯಾರಿಗೂ
ಸಾವನ್ನು ಉಂಟುಮಾಡುವುದಿಲ್ಲ ಮತ್ತು ಈ ಭೂಮಿ
ಯಲ್ಲಿ ಬೆಳೆಗಳು ಬೆಳೆಯುತ್ತವೆ’ ಎಂದು ಯೆಹೋವನು
ಹೇಳುತ್ತಾನೆ’’ ಎಂದನು.

22ಆ ನೀರು ಶುದ್ಧವಾಯಿತು. ಇಂದು ಆ ನೀರು ಇನ್ನೂ ಶುದ್ಧವಾಗಿದೆ. ಎಲೀಷನು ಹೇಳಿದಂತೆಯೇ ಅದು ಸಂಭವಿಸಿತು.

### ಕೆಲವು ಬಾಲಕರು ಎಲೀಷನನ್ನು ಅಪಹಾಸ್ಯ ಮಾಡಿದರು

23ಎಲೀಷನು ಆ ನಗರದಿಂದ ಬೇತೇಲಿಗೆ ಹೋದನು. ಎಲೀಷನು ನಗರದಿಂದ ಬೆಟ್ಟದ ಮೇಲಕ್ಕೆ ಹೋಗುತ್ತಿದ್ದಾಗ, ಕೆಲವು ಬಾಲಕರು ನಗರದ ಕಡೆಯಿಂದ ಇಳಿಯುತ್ತಿದ್ದರು. ಅವರು ಎಲೀಷನನ್ನು ಹಾಸ್ಯಮಾಡಿ, ‘‘ಮೇಲಕ್ಕೆ ಹೋಗು, ಬೋಳುತಲೆಯವನೇ, ಮೇಲಕ್ಕೆ ಹೋಗು, ಬೋಳುತಲೆಯವನೇ’’ಎಂದರು.

24ಎಲೀಷನು ಹಿಂದಕ್ಕೆ ತಿರುಗಿ ಅವರನ್ನು ನೋಡಿ ಅವರಿಗೆ ಕೇಡಾಗುವಂತೆ ಯೆಹೋವನನ್ನು ಕೇಳಿಕೊಂಡನು. ಆಗ ಕಾಡಿನಿಂದ ಎರಡು ಕರಡಿಗಳು ಹೊರಗೆ ಬಂದು ಅವರ ಮೇಲೆರಗಿ ನಲವತ್ತೆರಡು ಮಂದಿ ಬಾಲಕರನ್ನು ಸೀಳಿಹಾಕಿದವು.

25ಎಲೀಷನು ಬೇತೇಲನ್ನು ಬಿಟ್ಟು ಕಾರ್ಮೆಲ್ ಬೆಟ್ಟಕ್ಕೆ ಹೋದನು. ಅಲ್ಲಿಂದ ಎಲೀಷನು ಸಮಾರ್ಯಕ್ಕೆ ಹಿಂದಿರುಗಿ ಹೋದನು.

### ಯೋರಾಮನು ಇಸ್ರೇಲಿನ ರಾಜನಾದನು

3 ಅಹಾಬನ ಮಗನಾದ ಯೋರಾಮನು ಸಮಾರ್ಯದಲ್ಲಿ ಇಸ್ರೇಲಿನ ರಾಜನಾದನು. ಯೆಹೋಷಾಫಾಟನ ಹದಿನೆಂಟನೆಯ ವರ್ಷದ ಆಳ್ವಿಕೆಯಲ್ಲಿ ಯೋರಾಮನು ಯೆಹೂದದ ರಾಜನಾಗಿ ಆಳಲಾರಂಭಿಸಿದನು. ಯೋರಾಮನು ಹನ್ನೆರಡು ವರ್ಷ ಆಳಿದನು. 2ಯೆಹೋವನು ಕೆಟ್ಟದ್ದೆಂದು ಹೇಳಿದ ಕಾರ್ಯಗಳನ್ನು ಯೋರಾಮನು ಮಾಡಿದನು. ಆದರೆ ಯೋರಾಮನು ಅವನ ತಂದೆತಾಯಿಗಳಂತೆ ಇರಲಿಲ್ಲ. ಸುಳ್ಳುದೇವರಾದ ಬಾಳನನ್ನು ಪೂಜಿಸಲು ತನ್ನ ತಂದೆಯು ನಿರ್ಮಿಸಿದ್ದ ಸ್ತಂಭವನ್ನು ಅವನು ಕಿತ್ತುಹಾಕಿಸಿದನು. 3ಆದರೆ ನೆಬಾಟನ ಮಗನಾದ ಯಾರೊಬ್ಬಮನು ಮಾಡಿದ ಪಾಪಗಳನ್ನೇ ಅವನು ಮುಂದುವರಿಸಿದನು. ಇಸ್ರೇಲರು ಪಾಪಗಳನ್ನು ಮಾಡುವಂತೆ ಯಾರೊಬ್ಬಾಮನು ಪ್ರೇರೇಪಿಸಿದ್ದನು. ಯೋರಾಮನು ಯಾರೊಬ್ಬಾಮನ ಪಾಪಗಳನ್ನು ನಿಲ್ಲಿಸಲಿಲ್ಲ.

### ಮೋವಾಬ್ ದೇಶವು ಇಸ್ರೇಲಿನಿಂದ ಬೇರ್ಪಟ್ಟಿತು

4ಮೇಷನು ಮೋವಾಬಿನ ರಾಜನಾಗಿದ್ದನು. ಮೇಷನು ಅನೇಕ ಕುರಿಗಳ ಒಡೆಯನಾಗಿದ್ದನು. ಮೇಷನು ಒಂದು ಲಕ್ಷ ಕುರಿಗಳ ಮತ್ತು ಒಂದು ಲಕ್ಷ ಟಗರುಗಳ ಉಣ್ಣೆಯನ್ನು ಇಸ್ರೇಲಿನ ರಾಜನಿಗೆ ಕೊಡುತ್ತಿದ್ದನು. 5ಆದರೆ ಅಹಾಬನು ಸತ್ತಾಗ ಮೋವಾಬಿನ ರಾಜನು ಇಸ್ರೇಲಿನ ರಾಜನ ವಿರುದ್ಧವಾಗಿ ದಂಗಯೆದ್ದು ಅವನ ಆಳ್ವಿಕೆಯಿಂದ ಬೇರೆಯಾದನು.

6ಆಗ ರಾಜನಾದ ಯೋರಾಮನು ಸಮಾರ್ಯದಿಂದ ಹೊರಗೆ ಹೋಗಿ, ಇಸ್ರೇಲಿನ ಜನರನ್ನೆಲ್ಲ ಒಟ್ಟುಗೂಡಿಸಿದನು. 7ಯೋರಾಮನು ಯೆಹೂದದ ರಾಜನಾದ ಯೆಹೋಷಾಫಾಟನ ಬಳಿಗೆ ಸಂದೇಶಕರನ್ನು ಕಳುಹಿಸಿ, ‘‘ನನ್ನ ಆಳ್ವಿಕೆಯಿಂದ ಮೋವಾಬಿನ ರಾಜನು ಬೇರ್ಪಟ್ಟಿದ್ದಾನೆ. ಮೋವಾಬಿನ ವಿರುದ್ಧ ಹೋರಾಡಲು ನನ್ನ ಜೊತೆ ಬರುವೆಯಾ?’’ ಎಂದು ಕೇಳಿದನು.

ಯೆಹೋಷಾಫಾಟನು, ‘‘ಆಗಲಿ, ನಿನ್ನ ಜೊತೆ ನಾನೂ ಬರುತ್ತೇನೆ. ನಾನೂ ನೀನೂ ಒಂದೇ. ನನ್ನ ಜನರೂ ನಿನ್ನ ಜನರೂ ಒಂದೇ. ನನ್ನ ಕುದುರೆಗಳೂ ನಿನ್ನ ಕುದುರೆಗಳೂ ಒಂದೇ’’ ಎಂದು ಹೇಳಿದನು.

### ಮೂವರು ರಾಜರು ಎಲೀಷನ ಸಲಹೆ ಕೇಳುವರು

8ಯೆಹೋಷಾಫಾಟನು ಯೋರಾಮನನ್ನು, ‘‘ನಾವು ಯಾವ ಮಾರ್ಗದಲ್ಲಿ ಹೋಗೋಣ’’ ಎಂದು ಕೇಳಿದನು.

‘‘ನಾವು ಎದೋಮಿನ ಮರಳುಗಾಡಿನ ಮೂಲಕ ಹೋಗೋಣ’’ ಎಂದು ಯೋರಾಮನು ಉತ್ತರಿಸಿದನು.

9ಆದುದರಿಂದ ಇಸ್ರೇಲಿನ ರಾಜನು ಯೆಹೂದದ ಮತ್ತು ಎದೋಮಿನ ರಾಜರೊಂದಿಗೆ ಹೋದನು. ಅವರು ಏಳು ದಿನಗಳ ಕಾಲ ಪ್ರಯಾಣ ಮಾಡಿದರು. ಅವರ ಸೇನೆಗೆ ಮತ್ತು ಪ್ರಾಣಿಗಳಿಗೆ ಸಾಕಾಗುವಷ್ಟು ನೀರು ಅಲ್ಲಿ ಇರಲಿಲ್ಲ. 10ಆಗ ಇಸ್ರೇಲಿನ ರಾಜನು (ಯೋರಾಮ), ‘‘ಅಯ್ಯೋ, ಮೂವರು ರಾಜರಾದ ನಮ್ಮನ್ನು ನಿಜ ವಾಗಿಯೂ ಒಟ್ಟಿಗೆ ಬರಮಾಡಿದ ಯೆಹೋವನು ನಮ್ಮನ್ನು ಮೋವಾಬ್ಯರು ಸೋಲಿಸುವಂತೆ ಮಾಡಿದ ನಲ್ಲಾ!’’ಎಂದು ಹೇಳಿದನು.

11ಆದರೆ ಯೆಹೋಷಾಫಾಟನು, ‘‘ಯೆಹೋವನ ಪ್ರವಾದಿಗಳಲ್ಲಿ ನಿಜವಾಗಿಯೂ ಯಾರಾದರೊಬ್ಬರು ಇಲ್ಲಿರಬೇಕು. ನಾವೇನು ಮಾಡಬೇಕೆಂದು ಯೆಹೋವನು ಹೇಳುತ್ತಾನೆ. ಅದಕ್ಕಾಗಿ ನಾವು ಆ ಪ್ರವಾದಿಯನ್ನು ಕೇಳೋಣ’’ ಎಂದು ಹೇಳಿದನು.

ಇಸ್ರೇಲಿನ ರಾಜನ ಸೇವಕರಲ್ಲಿ ಒಬ್ಬನು, ‘‘ಶಾಫಾಟನ ಮಗನಾದ ಎಲೀಷನು ಇಲ್ಲಿಯೇ ಇದ್ದಾನೆ. ಎಲೀಷನು ಎಲೀಯನ ಸೇವಕನಾಗಿದ್ದನು*’’ ಎಂದು ಹೇಳಿದನು.

12ಯೆಹೋಷಾಫಾಟನು, ‘‘ಯೆಹೋವನ ನುಡಿಗಳು ಎಲೀಷನಲ್ಲಿವೆ!’’ ಎಂದು ಹೇಳಿದನು.

ಇಸ್ರೇಲಿನ ರಾಜನಾದ ಯೋರಾಮನು, ಯೆಹೋಷಾಫಾಟನು ಮತ್ತು ಎದೋಮಿನ ರಾಜನು ಎಲೀಷನನ್ನು

---

**ಎಲೀಷನು ಎಲೀಯನ ಸೇವಕನಾಗಿದ್ದನು** ಅಕ್ಷರಶಃ ಎಲೀಷನು ಎಲೀಯನ ಹಸ್ತಗಳ ಮೇಲೆ ನೀರನ್ನು ಸುರಿದನು.

ನೋಡಲು ಹೋದರು. 13ಎಲೀಷನು ಇಸ್ರೇಲಿನ
ರಾಜನಿಗೆ, ‘‘ನನ್ನಿಂದ ನಿನಗೆ ಏನು ಬೇಕಾಗಿದೆ? ನಿನ್ನ
ತಂದೆತಾಯಿಯರ ಪ್ರವಾದಿಗಳ ಬಳಿಗೆ ಹೋಗು!’’
ಎಂದು ಹೇಳಿದನು.

ಇಸ್ರೇಲಿನ ರಾಜನು ಎಲೀಷನಿಗೆ, ‘‘ಇಲ್ಲ, ನಾವು
ನಿನ್ನನ್ನು ನೋಡಲೆಂದು ಇಲ್ಲಿಗೆ ಬಂದಿದ್ದೇವೆ, ಏಕೆಂದರೆ
ಯೆಹೋವನು ಮೂವರು ರಾಜರನ್ನು ಒಟ್ಟಿಗೆ ಬರ
ಮಾಡಿ, ನಮ್ಮನ್ನು ಮೋವಾಬ್ಯರು ಸೋಲಿಸುವಂತೆ
ಮಾಡಿದ್ದಾನೆ. ನಾವು ನಿನ್ನ ಸಹಾಯವನ್ನು ಬಯಸಿ
ದ್ದೇವೆ’’ ಎಂದನು.

14ಎಲೀಷನು, ‘‘ಸರ್ವಶಕ್ತನಾದ ಯೆಹೋವನ ಸೇವೆ
ಯನ್ನು ಮಾಡುವವನು ನಾನು. ಯೆಹೋವನಾಣೆ, ನಾನು
ನಿಜವನ್ನು ಹೇಳುತ್ತೇನೆ. ಯೆಹೂದದ ರಾಜನಾದ
ಯೆಹೋಷಾಫಾಟನು ಇಲ್ಲಿ ಇಲ್ಲದಿದ್ದರೆ, ನಾನು ನಿನ್ನನ್ನು
ಕಣ್ಣೆತ್ತಿಯೂ ನೋಡುತ್ತಿರಲಿಲ್ಲ; ನಿನ್ನನ್ನು ಗಮನಿಸು
ತ್ತಲೂ ಇರಲಿಲ್ಲ. 15ಆದರೆ ಈಗ ಕಿನ್ನರಿ ಬಾರಿಸುವ
ಒಬ್ಬನನ್ನು ನನ್ನ ಬಳಿಗೆ ಕರೆತನ್ನಿ’’ ಎಂದು ಹೇಳಿದನು.

ಅವನು ಕಿನ್ನರಿಯನ್ನು ಬಾರಿಸಿದಾಗ ಯೆಹೋವನ
ಶಕ್ತಿಯು ಎಲೀಷನ ಮೇಲೆ ಬಂದಿತು. 16ಆಗ ಎಲೀಷನು,
‘‘ಯೆಹೋವನು ಇಂತೆನ್ನುತ್ತಾನೆ: ಕಣಿವೆಯಲ್ಲಿ ಗುಂಡಿ
ಗಳನ್ನು ತೋಡಿರಿ. 17ನೀವು ಗಾಳಿಯನ್ನು ನೋಡು
ವುದಿಲ್ಲ, ಮಳೆಯನ್ನೂ ನೋಡುವುದಿಲ್ಲ; ಆದರೆ ಆ
ಕಣಿವೆಯು ನೀರಿನಿಂದ ತುಂಬಿಕೊಳ್ಳುತ್ತದೆ. ಆಗ ನಿಮಗೆ,
ನಿಮ್ಮ ಹಸುಗಳಿಗೆ ಮತ್ತು ಇತರ ಪಶುಗಳಿಗೆ ಕುಡಿಯಲು
ನೀರು ಸಿಗುತ್ತದೆ. 18ಯೆಹೋವನಿಗೆ ಸುಲಭ ಸಾಧ್ಯ.
ಮೋವಾಬ್ಯರನ್ನು ನೀವು ಸೋಲಿಸುವಂತೆ ಆತನೇ ಅವ
ಕಾಶ ಮಾಡುತ್ತಾನೆ. 19ಪ್ರತಿಯೊಂದು ಬಲಾಢ್ಯವಾದ
ನಗರವನ್ನು ಮತ್ತು ಉತ್ತಮ ನಗರವನ್ನು ನೀವು ಮುತ್ತಿಗೆ
ಹಾಕುವಿರಿ. ಪ್ರತಿಯೊಂದು ಒಳ್ಳೆಯ ಮರವನ್ನೂ ನೀವು
ಕಡಿದು ಉರುಳಿಸುತ್ತೀರಿ. ಎಲ್ಲಾ ನೀರಿನ ಬುಗ್ಗೆಗಳನ್ನೂ
ನೀವು ನಿಲ್ಲಿಸುವಿರಿ. ನೀವು ಕಲ್ಲುಗಳನ್ನೆಸೆದು ಪ್ರತಿ
ಯೊಂದು ಒಳ್ಳೆಯ ತೋಟವನ್ನು ನಾಶಗೊಳಿಸುತ್ತೀರಿ.’’

20ಮುಂಜಾನೆ, ಯಜ್ಞಗಳನ್ನು ಅರ್ಪಿಸುವ ಕಾಲದಲ್ಲಿ
ಎದೋಮಿನ ಕಡೆಯಿಂದ ನೀರು ಹರಿಯಲಾರಂಭಿಸಿತು
ಮತ್ತು ಕಣಿವೆಯು ತುಂಬಿಕೊಂಡಿತು.

21ರಾಜರುಗಳು ತಮ್ಮ ವಿರುದ್ಧ ಹೋರಾಡಲು
ಬಂದಿದ್ದಾರೆಂಬುದು ಮೋವಾಬ್ಯರ ಜನರಿಗೆ ತಿಳಿಯಿತು.
ಮೋವಾಬಿನ ಗಂಡಸರು ಅಂದರೆ ಯುದ್ಧಕವಚಗಳನ್ನು
ಧರಿಸಿಕೊಳ್ಳಲು ಶಕ್ತರಾಗಿದ್ದ ಎಲ್ಲರು ಒಟ್ಟಾಗಿ ಸೇರಿ
ಬಂದು (ಯುದ್ಧಕ್ಕೆ ಸಿದ್ಧರಾಗಿ) ಗಡಿಯಲ್ಲಿ ಕಾಯ
ತೊಡಗಿದರು. 22ಮೋವಾಬಿನ ಜನರು ಅಂದು
ಮುಂಜಾನೆ ನಸುಕಿನಲ್ಲೇ ಮೇಲೆದ್ದರು. ಸೂರ್ಯನ
ಕಿರಣಗಳು ಕಣಿವೆಯ ನೀರಿನ ಮೇಲೆ ಹೊಳೆಯುತ್ತಿದ್ದವು.
ಮೋವಾಬಿನ ಜನರಿಗೆ ಅವು ರಕ್ತದಂತೆ ಕಂಡವು.
23ಮೋವಾಬಿನ ಜನರು, ‘‘ರಕ್ತದತ್ತ ನೋಡಿ! ರಾಜರು
ಗಳು ಪರಸ್ಪರ ಹೋರಾಡಿರಲೇಬೇಕು. ಅವರು ಒಬ್ಬರ
ನ್ನೊಬ್ಬರು ನಾಶಗೊಳಿಸಿರಲೇಬೇಕು. ಸತ್ತಿರುವ ದೇಹಗ
ಳಿಂದ ಬೆಲೆಬಾಳುವ ವಸ್ತುಗಳನ್ನು ದೋಚಿಕೊಳ್ಳೋಣ!’’
ಎಂದು ಹೇಳಿದರು.

24ಮೋವಾಬಿನ ಜನರು ಇಸ್ರೇಲರ ಪಾಳೆಯಕ್ಕೆ
ಬಂದರು. ಆದರೆ ಇಸ್ರೇಲರು ಹೊರಗೆ ಬಂದು
ಮೋವಾಬಿನ ಸೈನ್ಯದ ಮೇಲೆ ಆಕ್ರಮಣ ಮಾಡಿದರು.
ಮೋವಾಬಿನ ಜನರು ಇಸ್ರೇಲಿಯರಿಂದ ತಪ್ಪಿಸಿಕೊಂಡು
ಓಡಿಹೋದರು. ಇಸ್ರೇಲರು ಮುನ್ನುಗ್ಗಿ ಮೋವಾಬಿನವ
ರನ್ನು ಕೊಂದುಹಾಕಿದರು. 25ಇಸ್ರೇಲರು ನಗರಗಳನ್ನು
ಕೆಡವಿಹಾಕಿದರು. ಅವರು ಮೋವಾಬಿನ ಪ್ರತಿಯೊಂದು
ಉತ್ತಮ ತೋಟದ ಕಡೆಗೆ ಕಲ್ಲುಗಳನ್ನೆಸೆದರು. ಅವರು
ನೀರಿನ ಬುಗ್ಗೆಗಳನ್ನೆಲ್ಲ ನಿಲ್ಲಿಸಿದರು. ಅವರು ಉತ್ತಮ
ವಾದ ಮರಗಳನ್ನು ಕಡಿದು ಉರುಳಿಸಿದರು. ಇಸ್ರೇಲರು
ಕೀರ್ಹರೆಷೆತ್‌ನ ಮಾರ್ಗದುದ್ದಕ್ಕೂ ಹೋರಾಟ ಮಾಡಿ
ದರು. ಸೈನಿಕರು ಕೀರ್ಹರೆಷೆತ್‌ನ್ನು ಸುತ್ತುವರಿದು ಅದಕ್ಕೂ
ಮುತ್ತಿಗೆ ಹಾಕಿದರು.

26ಆ ಯುದ್ಧವು ತನ್ನ ಶಕ್ತಿಯನ್ನು ಮೀರಿ ಹೋಯಿ
ತೆಂದು ಮೋವಾಬಿನ ರಾಜನು ಗ್ರಹಿಸಿಕೊಂಡನು.
ಆದ್ದರಿಂದ ಅವನು ಎದೋಮಿನ ರಾಜನನ್ನು ಕೊಂದು
ಹಾಕಲು ಖಡ್ಗಗಳನ್ನು ಹಿಡಿದ ತನ್ನ ಏಳುನೂರು ಜನ
ರೊಂದಿಗೆ ನುಗ್ಗಿಹೋಗಲು ಪ್ರಯತ್ನಿಸಿದನು. ಆದರೆ
ಅವರು ಎದೋಮಿನ ರಾಜನ ಬಳಿಗೆ ನುಗ್ಗಿ ಹೋಗ
ಲಾಗಲಿಲ್ಲ.

27ಆಗ ಮೋವಾಬಿನ ರಾಜನು, ತನ್ನ ನಂತರ ರಾಜ
ನಾಗುವ ಹಿರಿಯ ಮಗನನ್ನು ಕರೆದೊಯ್ದನು. ಮೋವಾ
ಬಿನ ರಾಜನು ನಗರವನ್ನು ಸುತ್ತವರಿದಿರುವ ಗೋಡೆಯ
ಮೇಲೆ ತನ್ನ ಮಗನನ್ನು ವಧಿಸಿ ಸರ್ವಾಂಗ ಹೋಮವ
ನ್ನಾಗಿ ಅರ್ಪಿಸಿದನು. ಈ ಕಾರ್ಯವು ಇಸ್ರೇಲಿನ ಜನರನ್ನು
ತಳಮಳಗೊಳಿಸಿತು. ಇಸ್ರೇಲಿನ ಜನರು ಮೋವಾಬಿನ
ರಾಜನನ್ನು ಬಿಟ್ಟು ತಮ್ಮ ಸ್ವಂತ ದೇಶಕ್ಕೆ ಹಿಂದಿರುಗಿ
ಹೋದರು.

### ವಿಧವೆಯ ಬೇಡಿಕೆ

4 ಒಂದು ದಿನ ಪ್ರವಾದಿ ಮಂಡಲಿಯವರಲ್ಲೊಬ್ಬನ
ಪತ್ನಿಯು ಗೋಳಾಡುತ್ತಾ ಎಲೀಷನಲ್ಲಿಗೆ ಹೋಗಿ,
‘‘ನನ್ನ ಗಂಡನು ನಿನಗೆ ಸೇವಕನಂತಿದ್ದನು. ಈಗ ನನ್ನ
ಗಂಡ ಸತ್ತಿದ್ದಾನೆ! ಅವನು ಯೆಹೋವನಲ್ಲಿ ಭಯಭಕ್ತಿ
ಉಳ್ಳವನಾಗಿದ್ದದು ನಿನಗೆ ತಿಳಿದಿದೆ. ಆದರೆ ಅವನು ಒಬ್ಬ
ಮನುಷ್ಯನಿಗೆ ಹಣವನ್ನು ಕೊಡಬೇಕಾಗಿದೆ. ಈಗ ಆ
ಮನುಷ್ಯನು ನನ್ನ ಎರಡು ಗಂಡು ಮಕ್ಕಳನ್ನು

ತೆಗೆದುಕೊಂಡು ತನ್ನ ಗುಲಾಮರನ್ನಾಗಿ ಮಾಡಿಕೊಳ್ಳಲು ಬರುತ್ತಿದ್ದಾನೆ!'' ಎಂದು ಹೇಳಿದಳು.

2ಎಲೀಷನು, ''ನಾನು ನಿನಗೆ ಹೇಗೆ ಸಹಾಯ ಮಾಡಲಿ? ನಿನ್ನ ಮನೆಯಲ್ಲಿ ಏನಿದೆ? ನನಗೆ ಅದನ್ನು ತಿಳಿಸು'' ಎಂದು ಕೇಳಿದನು.

ಆ ಸ್ತ್ರೀಯು, ''ನನ್ನ ಮನೆಯಲ್ಲಿ ನನ್ನ ಹತ್ತಿರ ಏನೂ ಇಲ್ಲ. ನನ್ನ ಹತ್ತಿರ ಒಂದು ಪಾತ್ರೆ ಆಲೀವ್ ಎಣ್ಣೆ ಮಾತ್ರ ಇದೆ'' ಎಂದು ಹೇಳಿದಳು.

3ಆಗ ಎಲೀಷನು, ''ಹೋಗಿ ನಿನ್ನ ನೆರೆಯವರೆಲ್ಲರಿಂದ
ಪಾತ್ರೆಗಳನ್ನು ತೆಗೆದುಕೊ. ಅವು ಬರಿದಾಗಿರಬೇಕು.
ಆದಷ್ಟು ಪಾತ್ರೆಗಳನ್ನು ತೆಗೆದುಕೊ. 4ನಂತರ ನಿನ್ನ ಮನೆಗೆ
ಹೋಗಿ ಬಾಗಿಲುಗಳನ್ನು ಮುಚ್ಚು. ನೀನು ಮತ್ತು ನಿನ್ನ ಮಕ್ಕಳು ಮಾತ್ರ ಮನೆಯಲ್ಲಿರಬೇಕು. ಈ ಪಾತ್ರೆಗಳಿಗೆಲ್ಲಾ ಎಣ್ಣೆಯನ್ನು ತುಂಬಿಸಿ ಪ್ರತ್ಯೇಕವಾದ ಸ್ಥಳದಲ್ಲಿಡು'' ಎಂದು ಹೇಳಿದನು.

5ಆ ಸ್ತ್ರೀಯು ಎಲೀಷನ ಬಳಿಯಿಂದ ತನ್ನ ಮನೆಯೊಳಕ್ಕೆ
ಹೋಗಿ ಬಾಗಿಲನ್ನು ಮುಚ್ಚಿದಳು. ಅವಳು ಮತ್ತು ಅವಳ ಮಕ್ಕಳು ಮಾತ್ರ ಮನೆಯಲ್ಲಿದ್ದರು. ಅವಳ ಮಕ್ಕಳು ಪಾತ್ರೆಗಳನ್ನು ಅವಳ ಬಳಿಗೆ ತಂದರು; ಅವಳು ಆ
ಪಾತ್ರೆಗಳಿಗೆ ಎಣ್ಣೆಯನ್ನು ಸುರಿದಳು. 6ಅವಳು ಅನೇಕ
ಪಾತ್ರೆಗಳನ್ನು ತುಂಬಿಸಿಟ್ಟು ತನ್ನ ಮಗನಿಗೆ, ''ಇನ್ನೊಂದು ಪಾತ್ರೆಯನ್ನು ನನ್ನ ಬಳಿಗೆ ತೆಗೆದುಕೊಂಡು ಬಾ'' ಎಂದಳು.

ಆದರೆ ಎಲ್ಲಾ ಪಾತ್ರೆಗಳು ತುಂಬಿಹೋಗಿದ್ದವು. ಅವಳ ಮಕ್ಕಳಲ್ಲಿ ಒಬ್ಬನು, ''ಇಲ್ಲಿ ಯಾವ ಪಾತ್ರೆಗಳೂ ಇಲ್ಲ'' ಎಂದು ಹೇಳಿದನು. ಆ ಸಮಯಕ್ಕೆ ಸರಿಯಾಗಿ ಪಾತ್ರೆಯಲ್ಲಿದ್ದ ಎಣ್ಣೆಯು ಮುಗಿದಿತ್ತು.

7ಆಗ ಆ ಸ್ತ್ರೀಯು ದೇವರ ಮನುಷ್ಯನ (ಎಲೀಷನ) ಬಳಿಗೆ ಬಂದು ನಡೆದದ್ದನ್ನೆಲ್ಲಾ ತಿಳಿಸಿದಳು. ಎಲೀಷನು ಅವಳಿಗೆ, ''ಹೋಗು, ಎಣ್ಣೆಯನ್ನು ಮಾರಾಟ ಮಾಡಿ, ನಿನ್ನ ಸಾಲವನ್ನು ತೀರಿಸು. ಉಳಿದ ಹಣದಲ್ಲಿ ನೀನು ಮತ್ತು ನಿನ್ನ ಮಕ್ಕಳು ಜೀವನ ಮಾಡಿ'' ಎಂದು ಹೇಳಿದನು.

### ಎಲೀಷ ಮತ್ತು ಶೂನೇಮಿನ ಸ್ತ್ರೀ

8ಒಂದು ದಿನ ಎಲೀಷನು ಶೂನೇಮಿಗೆ ಹೋದನು. ಪ್ರಮುಖಳಾದ ಸ್ತ್ರೀಯೊಬ್ಬಳು ಶೂನೇಮಿನಲ್ಲಿ ವಾಸಿಸುತ್ತಿದ್ದಳು. ಆ ಸ್ತ್ರೀಯು ತನ್ನ ಮನೆಯಲ್ಲಿ ಊಟ ಮಾಡಿಕೊಂಡು ಹೋಗುವಂತೆ ಎಲೀಷನನ್ನು ಕೇಳಿಕೊಂಡಳು. ಅಂದಿನಿಂದ ಎಲೀಷನು ಆ ಸ್ಥಳದ ಮೂಲಕ ಹೋಗುವಾಗಲೆಲ್ಲಾ ಅವಳ ಮನೆಯಲ್ಲಿ ಊಟ ಮಾಡುತ್ತಿದ್ದನು.

9ಆ ಸ್ತ್ರೀಯು ತನ್ನ ಗಂಡನಿಗೆ, ''ನೋಡಿ, ನಮ್ಮ ಮನೆಯ ದಾರಿಯಲ್ಲಿ ಹಾದುಹೋಗುವ ಎಲೀಷನು ಪರಿಶುದ್ಧನೂ ದೇವಮನುಷ್ಯನೂ ಎಂದು ನನಗೆ
ತೋರುತ್ತದೆ. 10 ದಯವಿಟ್ಟು, ಎಲೀಷನಿಗಾಗಿ ಮಾಳಿಗೆಯ ಮೇಲೆ ಚಿಕ್ಕದೊಂದು ಕೊಠಡಿಯನ್ನು ಕಟ್ಟೋಣ. ಆ ಕೊಠಡಿಯಲ್ಲಿ ಹಾಸಿಗೆಯೊಂದನ್ನು ಹಾಕೋಣ. ಅಲ್ಲಿ ಒಂದು ಮೇಜು, ಕುರ್ಚಿ ಮತ್ತು ದೀಪಸ್ತಂಭವನ್ನು ಇಡೋಣ. ಅವನು ನಮ್ಮ ಮನೆಗೆ ಬಂದಾಗ, ಈ ಕೊಠಡಿಯನ್ನು ತನಗಾಗಿ ಉಪಯೋಗಿಸಲಿ'' ಎಂದು ಹೇಳಿದನು.

11ಒಂದು ದಿನ ಎಲೀಷನು ಆ ಸ್ತ್ರೀಯ ಮನೆಗೆ ಬಂದನು.
ಅವನು ಆ ಕೊಠಡಿಗೆ ಹೋಗಿ ವಿಶ್ರಾಂತಿಯನ್ನು ಪಡೆದನು. 12ಎಲೀಷನು ತನ್ನ ಸೇವಕನಾದ ಗೇಹಜಿಗೆ,
''ಶೂನೇಮ್ಯಳಾದ ಆ ಸ್ತ್ರೀಯನ್ನು ಕರೆದುಕೊಂಡು ಬಾ'' ಎಂದು ಹೇಳಿದನು.

ಸೇವಕನು ಶೂನೇಮ್ಯಳಾದ ಆ ಸ್ತ್ರೀಯನ್ನು ಕರೆದುಕೊಂಡು ಬಂದಾಗ ಆಕೆಯು ಎಲೀಷನ ಎದುರಿನಲ್ಲಿ
ನಿಂತುಕೊಂಡಳು. 13ಎಲೀಷನು ಗೇಹಜಿಗೆ (ಸೇವಕನಿಗೆ), ''ನೀನು ಆ ಸ್ತ್ರೀಯ ಬಳಿಗೆ ಹೋಗಿ, 'ನೋಡು, ನೀನು ನಮ್ಮನ್ನು ಉಪಚರಿಸುವುದಕ್ಕಾಗಿ ನಿನ್ನಿಂದ ಸಾಧ್ಯವಾದಷ್ಟು ಮಾಡಿರುವೆ. ನಮ್ಮಿಂದ ನಿನಗೇನಾದರೂ ಉಪಕಾರವಾಗಬೇಕೇ? ನಿನ್ನ ಬಗ್ಗೆ ರಾಜನ ಬಳಿಯಲ್ಲಾದರೂ ಅಥವಾ ಸೈನ್ಯಾಧಿಕಾರಿಯ ಬಳಿಯಲ್ಲಾದರೂ ನಾವು ಮಾತನಾಡಬೇಕೇ?' ಎಂದು ಕೇಳು'' ಎಂಬುದಾಗಿ ಹೇಳಿದನು.

ಆ ಸ್ತ್ರೀಯು, ''ಇಲ್ಲಿ ನಾನು ನನ್ನ ಜನರೊಡನೆ ಸುಖವಾಗಿ ಜೀವಿಸುತ್ತಿದ್ದೇನೆ'' ಎಂದು ಉತ್ತರಿಸಿದಳು.

14ಎಲೀಷನು ಗೇಹಜಿಗೆ, ''ನಾನು ಅವಳಿಗೆ ಏನು ಮಾಡಲಿ?'' ಎಂದು ಕೇಳಿದನು.

ಗೇಹಜಿಯು, ''ನನಗೆ ತಿಳಿದಿದೆ! ಅವಳಿಗೆ ಮಕ್ಕಳಿಲ್ಲ, ಅವಳ ಗಂಡ ಮುದುಕನಾಗಿದ್ದಾನೆ'' ಎಂದು ಉತ್ತರಿಸಿದನು.

15ಆಗ ಎಲೀಷನು, ''ಅವಳನ್ನು ಕರೆದುಕೊಂಡು ಬಾ'' ಎಂದು ಹೇಳಿದನು.

ಗೇಹಜಿಯು ಆ ಸ್ತ್ರೀಯನ್ನು ಕರೆದನು. ಆಕೆಯು
ಬಂದು ಅವನ ಬಾಗಿಲಿನ ಹತ್ತಿರ ನಿಂತಳು. 16ಎಲೀಷನು
ಆ ಸ್ತ್ರೀಗೆ, ''ಮುಂದಿನ ವಸಂತಮಾಸದ ಈ ಕಾಲಕ್ಕೆ ನೀನು ನಿನ್ನ ಗಂಡುಮಗುವನ್ನು ಅಪ್ಪಿಕೊಂಡಿರುವೆ'' ಎಂದು ಹೇಳಿದಳು.

ಆ ಸ್ತ್ರೀಯು, ''ದೇವಮನುಷ್ಯನೇ, ಹೀಗೆ ಹೇಳಿ ನಿನ್ನ ಸೇವಕಿಯನ್ನು ವಂಚಿಸಬೇಡ'' ಎಂದು ಹೇಳಿದಳು.

17ಆ ಸ್ತ್ರೀಯು ಗರ್ಭಿಣಿಯಾದಳು. ಎಲೀಷನು ಹೇಳಿದಂತೆ, ಮುಂದಿನ ವಂಸತದಲ್ಲಿ ಅವಳು ಒಬ್ಬ ಮಗನಿಗೆ ಜನ್ಮ ನೀಡಿದಳು.

18ಬಾಲಕನು ಬೆಳೆದನು. ಒಂದು ದಿನ, ಹೊಲದಲ್ಲಿ ಬೆಳೆಕೊಯ್ಯುತ್ತಿದ್ದ ಜನರೊಂದಿಗಿದ್ದ ತನ್ನ ತಂದೆಯನ್ನು

ನೋಡಲು ಆ ಬಾಲಕನು ಹೊಲಕ್ಕೆ ಹೋಗಿದ್ದನು. 19ಈ ಬಾಲಕನು ತನ್ನ ತಂದೆಗೆ, ''ಅಯ್ಯೋ, ನನ್ನ ತಲೆ ನೋಯುತ್ತಿದೆ! ನನ್ನ ತಲೆ ನೋಯುತ್ತಿದೆ!'' ಎಂದು ಹೇಳಿದನು.

ತಂದೆಯು ತನ್ನ ಸೇವಕನಿಗೆ, ''ಅವನ ತಾಯಿಯ ಬಳಿಗೆ ಅವನನ್ನು ಕೊಂಡೊಯ್ಯಿರಿ'' ಎಂದು ಹೇಳಿದನು.

20ಆ ಸೇವಕನು ಬಾಲಕನನ್ನು ಅವನ ತಾಯಿಯ ಬಳಿಗೆ ಕರೆದೊಯ್ದನು. ಬಾಲಕನು ಮಧ್ಯಾಹ್ನದವರೆಗೆ ತಾಯಿಯ ತೊಡೆಯ ಮೇಲೆ ಕುಳಿತಿದ್ದನು. ನಂತರ ಅವನು ಸತ್ತುಹೋದನು.

## ಶೂನೇಮಿನ ಸ್ತ್ರೀಯು ಎಲೀಷನನ್ನು ನೋಡಲು ಹೋಗುವಳು

21ಆ ಸ್ತ್ರೀಯು ಬಾಲಕನನ್ನು ದೇವಮನುಷ್ಯನ (ಎಲೀಷನ) ಹಾಸಿಗೆಯ ಮೇಲೆ ಮಲಗಿಸಿದಳು. ನಂತರ ಅವಳು ಬಾಗಿಲನ್ನು ಮುಚ್ಚಿಕೊಂಡು, ಹೊರಗೆ ಹೋದಳು, 22ಅವಳು ತನ್ನ ಗಂಡನನ್ನು ಕರೆದು, ''ದಯವಿಟ್ಟು ಒಬ್ಬ ಸೇವಕನನ್ನೂ ಒಂದು ಹೇಸರಕತ್ತೆಯನ್ನೂ ನನಗೆ ಕಳುಹಿಸಿಕೊಡಿ. ನಾನು ದೇವಮನುಷ್ಯನನ್ನು ಕರೆತರಲು ಬೇಗ ಹೋಗಿ ಹಿಂದಿರುಗಿ ಬರುತ್ತೇನೆ'' ಎಂದು ಹೇಳಿದಳು.

23ಆ ಸ್ತ್ರೀಯ ಗಂಡನು, ''ಈ ದಿನ ದೇವಮನುಷ್ಯನ ಬಳಿ ಹೋಗಲು ನೀನೇಕೆ ಅಪೇಕ್ಷೆ ಪಡುವೆ? ಇಂದು ಅಮಾವಾಸ್ಯೆಯೂ ಅಲ್ಲ, ಸಬ್ಬತ್ ದಿನವೂ ಅಲ್ಲ'' ಎಂದು ಹೇಳಿದನು.,

ಅವಳು, ''ಚಿಂತಿಸಬೇಡ, ಎಲ್ಲವೂ ಸರಿಹೋಗುತ್ತದೆ'' ಎಂದು ಹೇಳಿದಳು.

24ನಂತರ ಅವಳು ಒಂದು ತಡಿಯನ್ನು ಕತ್ತೆಯ ಮೇಲೆ ಹಾಕಿ ತನ್ನ ಸೇವಕನಿಗೆ, ''ಬೇಗ ಬಾ! ನಾವು ವೇಗವಾಗಿ ಸವಾರಿ ಮಾಡಿಕೊಂಡು ಹೋಗೋಣ. ನಾನು ನಿನಗೆ ಹೇಳಿದಾಗ ನಿಧಾನಿಸು!'' ಎಂದು ಹೇಳಿದಳು.

25ಆ ಸ್ತ್ರೀಯು ದೇವಮನುಷ್ಯನನ್ನು ಕಾಣಲು ಕರ್ಮೆಲ್ ಪರ್ವತಕ್ಕೆ ಹೋದಳು.

ಶೂನೇಮಿನ ಸ್ತ್ರೀಯು ದೂರದಿಂದ ಬರುತ್ತಿರುವುದನ್ನು ಕಂಡ ಎಲೀಷನು ತನ್ನ ಸೇವಕನಾದ ಗೇಹಜಿಗೆ, ''ನೋಡು, ಶೂನೇಮ್ಯಳಾದ ಸ್ತ್ರೀಯು ಬರುತ್ತಿದ್ದಾಳೆ!
26ಅವಳನ್ನು ಭೇಟಿ ಮಾಡುವುದಕ್ಕೆ ಓಡಿಹೋಗಿ ಅವಳಿಗೆ, 'ನೀನು ಕ್ಷೇಮವಾಗಿರುವೆಯಾ? ನಿನ್ನ ಗಂಡ ಕ್ಷೇಮವಾಗಿರುವನೇ? ನಿನ್ನ ಮಗು ಕ್ಷೇಮವಾಗಿರುವುದೇ? ಎಂದು ಕೇಳು'' ಎಂಬುದಾಗಿ ಹೇಳಿ ಕಳುಹಿಸಿದನು.

ಅಂತೆಯೇ ಗೇಹಜಿಯು ಆಕೆಯನ್ನು ಕೇಳಿದನು. ಅವಳು, ''ಹೌದು, ಕ್ಷೇಮವಾಗಿದ್ದೇವೆ'' ಎಂದು ಉತ್ತರಿಸಿದಳು.

27ಆದರೆ ಶೂನೇಮಿನ ಈ ಸ್ತ್ರೀಯು ದೇವಮನುಷ್ಯನಿದ್ದ ಬೆಟ್ಟದವರೆಗೆ ಹೋದಳು. ಅವಳು ನೆಲಕ್ಕೆ ಬಾಗಿ, ಎಲೀಷನ ಪಾದಗಳನ್ನು ಹಿಡಿದುಕೊಂಡಳು. ಶೂನೇಮಿನ ಆ ಸ್ತ್ರೀಯನ್ನು ತಳ್ಳಿಬಿಡಲು ಗೇಹಜಿಯು ಹತ್ತಿರಕ್ಕೆ ಬಂದನು. ಆದರೆ ದೇವಮನುಷ್ಯನು ಗೇಹಜಿಗೆ, ''ಅವಳನ್ನು ತಡೆಯಬೇಡ! ಅವಳು ಬಹಳ ತಳಮಳಗೊಂಡಿದ್ದಾಳೆ. ಯೆಹೋವನು ನನಗೆ ಆಕೆಯ ದುಃಖವನ್ನು ಪ್ರಕಟಿಸಲಿಲ್ಲ; ನನಗೆ ಮರೆ ಮಾಡಿದ್ದಾನೆ'' ಎಂದು ಹೇಳಿದನು.

28ಆಗ ಶೂನೇಮಿನ ಆ ಸ್ತ್ರೀಯು, ''ಸ್ವಾಮೀ, ನಾನು ಮಗನನ್ನು ಕೇಳಲೇ ಇಲ್ಲ. 'ನನ್ನನ್ನು ವಂಚಿಸಬೇಡ' ಎಂದು ನಾನು ನಿನಗೆ ಹೇಳಿದೆ!'' ಎಂದಳು.

29ಎಲೀಷನು ಗೇಹಜಿಗೆ, ''ಹೊರಡಲು ಸಿದ್ಧನಾಗು. ನನ್ನ ಕೋಲನ್ನು ತೆಗೆದುಕೊಂಡು ಹೋಗು. ಯಾರ ಹತ್ತಿರವಾಗಲಿ ಮಾತನಾಡಲು ನಿಲ್ಲದಿರು! ನೀನು ಯಾರನ್ನಾದರೂ ಸಂಧಿಸಿದರೆ ಅವನಿಗೆ, 'ಕ್ಷೇಮವಾಗಿರುವೆಯಾ' ಎಂದು ಕೇಳದಿರು. ಯಾರಾದರೂ ನಿನ್ನನ್ನು 'ಕ್ಷೇಮವಾಗಿರುವೆಯಾ' ಎಂದು ಕೇಳಿದರೆ, ಅವನಿಗೆ ಉತ್ತರಿಸದಿರು. ಹೀಗೆ ನೀನು ಹೋಗಿ ,ನನ್ನ ಕೋಲನ್ನು ಮಗುವಿನ ಮುಖದ ಮೇಲೆ ಇಡು'' ಎಂದು ಹೇಳಿದನು.
30ಆದರೆ ಮಗುವಿನ ತಾಯಿಯು, ''ಯೆಹೋವನಾಣೆ, ನಿನ್ನಾಣೆ, ನಿನ್ನನ್ನು ಬಿಟ್ಟು ನಾನು ಹೋಗುವುದಿಲ್ಲ'' ಎಂದು ಹೇಳಿದಳು. ಎಲೀಷನು ಮೇಲೆದ್ದು ಶೂನೇಮಿನ ಆ ಸ್ತ್ರೀಯನ್ನು ಹಿಂಬಾಲಿಸಿದನು.

31ಶೂನೇಮಿನ ಆ ಸ್ತ್ರೀಯ ಮನೆಗೆ, ಎಲೀಷನು ಮತ್ತು ಶೂನೇಮಿನ ಸ್ತ್ರೀಯು ಬರುವುದಕ್ಕೆ ಮುಂಚೆಯೇ ಗೇಹಜಿಯು ಬಂದನು. ಗೇಹಜಿಯು ಮಗುವಿನ ಮುಖದ ಮೇಲೆ ಆ ಕೋಲನ್ನಿಟ್ಟನು. ಆದರೆ ಆ ಮಗು ಮಾತನಾಡಲಿಲ್ಲ; ಅಲುಗಾಡಲಿಲ್ಲ. ಆಗ ಗೇಹಜಿಯು ಎಲೀಷನನ್ನು ಸಂಧಿಸಲು ಹಿಂದಿರುಗಿ ಬಂದು ಎಲೀಷನಿಗೆ, ''ಮಗು ಎಚ್ಚರಗೊಳ್ಳಲಿಲ್ಲ'' ಎಂದು ಹೇಳಿದನು.

32ಎಲೀಷನು ಮನೆಯೊಳಕ್ಕೆ ಬಂದನು. ಆ ಮಗು ಅವನ ಹಾಸಿಗೆಯ ಮೇಲೆ ಸತ್ತುಬಿದ್ದಿತ್ತು. 33ಎಲೀಷನು ಕೊಠಡಿಯಲ್ಲಿ ಪ್ರವೇಶಿಸಿ ಬಾಗಿಲನ್ನು ಮುಚ್ಚಿದನು. ಈಗ ಎಲೀಷ ಮತ್ತು ಮಗು ಮಾತ್ರ ಕೊಠಡಿಯಲ್ಲಿದ್ದರು. ನಂತರ ಎಲೀಷನು ಯೆಹೋವನಲ್ಲಿ ಪ್ರಾರ್ಥಿಸಿದನು.
34ಎಲೀಷನು ಹಾಸಿಗೆಗೆ ಹೋಗಿ ಮಗುವಿನ ಮೇಲೆ ಮಲಗಿದನು. ಎಲೀಷನು ತನ್ನ ಬಾಯಿಯನ್ನು ಮಗುವಿನ ಬಾಯಿಯ ಮೇಲಿಟ್ಟನು. ಎಲೀಷನು ತನ್ನ ಕಣ್ಣುಗಳನ್ನು ಮಗುವಿನ ಕಣ್ಣುಗಳ ಮೇಲಿಟ್ಟನು. ಎಲೀಷನು ತನ್ನ ಕೈಗಳನ್ನು ಮಗುವಿನ ಕೈಗಳ ಮೇಲಿಟ್ಟನು. ಎಲೀಷನು ಕೈಚಾಚಿ ಮಗುವನ್ನು ಅಪ್ಪಿಕೊಂಡನು. ಆಗ ಮಗುವಿನ ದೇಹವು ಬೆಚ್ಚಗಾಯಿತು.

35ಎಲೀಷನು ಕೊಠಡಿಯಿಂದ ಹೊರಗೆ ಬಂದು ಮನೆಯಲ್ಲಿ ಸುತ್ತಲೂ ನಡೆದಾಡಿದನು. ನಂತರ ಅವನು ಕೊಠಡಿಯೊಳಕ್ಕೆ ಹಿಂದಿರುಗಿ ಹೋಗಿ ಕೈಚಾಚಿ ಮಗುವನ್ನು ಅಪ್ಪಿಕೊಂಡನು. ಆಗ ಮಗು ಏಳು ಸಾರಿ ಸೀನಿ ತನ್ನ ಕಣ್ಣುಗಳನ್ನು ತೆರೆಯಿತು.

36ಎಲೀಷನು ಗೇಹಜಿಯನ್ನು ಕರೆದು, ‘‘ಶೂನೇಮಿನ ಸ್ತ್ರೀಯನ್ನು ಕರೆ’’ ಎಂದು ಹೇಳಿದನು.

ಗೇಹಜಿಯು ಶೂನೇಮಿನ ಸ್ತ್ರೀಯನ್ನು ಕರೆದನು. ಅವಳು ಎಲೀಷನ ಹತ್ತಿರಕ್ಕೆ ಬಂದಳು. ಎಲೀಷನು, ‘‘ನಿನ್ನ ಮಗನನ್ನು ಎತ್ತಿಕೊ’’ ಎಂದು ಹೇಳಿದನು.

37ಆಗ ಶೂನೇಮಿನ ಆ ಸ್ತ್ರೀಯು ಕೊಠಡಿಯೊಳಕ್ಕೆ ಹೋಗಿ, ಎಲೀಷನ ಪಾದಗಳಿಗೆ ಬಾಗಿ ನಮಸ್ಕರಿಸಿದಳು. ನಂತರ ಅವಳು ತನ್ನ ಮಗನನ್ನು ಎತ್ತಿಕೊಂಡು ಹೊರಗೆ ಹೋದಳು.

### ಎಲೀಷ ಮತ್ತು ವಿಷದ ಸಾರು

38ಎಲೀಷನು ಗಿಲ್ಗಾಲಿಗೆ ಮತ್ತೆ ಬಂದನು. ಆಗ ಆ ದೇಶದಲ್ಲಿ ಬರಗಾಲವಿತ್ತು. ಪ್ರವಾದಿಗಳ ಗುಂಪು ಎಲೀಷನ ಎದುರಿನಲ್ಲಿ ಕುಳಿತಿದ್ದರು. ಎಲೀಷನು ತನ್ನ ಸೇವಕನಿಗೆ, ‘‘ಒಂದು ದೊಡ್ಡ ಪಾತ್ರೆಯನ್ನು ಒಲೆಯ ಮೇಲಿಟ್ಟು ಪ್ರವಾದಿಗಳ ಗುಂಪಿಗೆಲ್ಲ ಸಾರನ್ನು ಮಾಡು’’ ಎಂದು ಹೇಳಿದನು.

39ಒಬ್ಬನು ಅಡಿಗೆಯ ಸೊಪ್ಪಿಗಾಗಿ ತೋಟಕ್ಕೆ ಹೋದನು. ಅಲ್ಲಿ ಅವನು ಒಂದು ಕಾಡುಬಳ್ಳಿಯಿಂದ ಕಾಡುಸೋರೆಕಾಯಿಗಳನ್ನು ಕಿತ್ತುಕೊಂಡು, ಅವುಗಳನ್ನು ತನ್ನ ಮೇಲಂಗಿಯ ಜೇಬಿನಲ್ಲಿ ತುಂಬಿಸಿಕೊಂಡನು. ನಂತರ ಅವನು ಬಂದು, ಆ ಕಾಡುಸೋರೆ ಕಾಯಿಗಳನ್ನು ಪಾತ್ರೆಯಲ್ಲಿ ಹಾಕಿದನು. ಆದರೆ ಪ್ರವಾದಿಗಳ ಗುಂಪಿಗೆ ಅವು ಯಾವ ಜಾತಿಯ ಸೋರೆಕಾಯಿಗಳೆಂಬುದು ತಿಳಿದಿರಲಿಲ್ಲ.

40ನಂತರ ಅವರು ಸ್ವಲ್ಪ ಸಾರನ್ನು ಜನರಿಗೆ ತಿನ್ನಲು ಬಡಿಸಿದರು. ಆದರೆ ಅವರು ಆ ಸಾರನ್ನು ಊಟಮಾಡಲಾರಂಭಿಸಿದಾಗ , ಅವರು, ‘‘ದೇವಮನುಷ್ಯನೇ! ಪಾತ್ರೆಯಲ್ಲಿ ವಿಷವಿದೆ!’’ ಎಂದು ಎಲೀಷನನ್ನು ಕೂಗಿಕೊಂಡರು. ಆ ಆಹಾರವು ತಿನ್ನಲು ಯೋಗ್ಯವಾಗಿರಲಿಲ್ಲವಾದುದರಿಂದ ಅವರು ಆ ಪಾತ್ರೆಯಿಂದ ಏನನ್ನೂ ತಿನ್ನಲಿಲ್ಲ.

41ಆದರೆ ಎಲೀಷನು, ‘‘ಸ್ವಲ್ಪ ಹಿಟ್ಟನ್ನು ತನ್ನಿ’’ಎಂದು ಹೇಳಿದನು. ಅವರು ಎಲೀಷನ ಬಳಿಗೆ ಹಿಟ್ಟನ್ನು ತಂದರು. ಅವನು ಅದನ್ನು ಪಾತ್ರೆಯೊಳಗೆ ಹಾಕಿದನು. ನಂತರ ಎಲೀಷನು, ‘‘ಜನರಿಗೆ ಸಾರನ್ನು ಬಡಿಸಿ, ಅವರು ಊಟಮಾಡಲಿ’’ಎಂದು ಹೇಳಿದನು.

ಆಗ ಆ ಸಾರಿನಲ್ಲಿ ಯಾವ ದೋಷವು ಇರಲಿಲ್ಲ.

### ಎಲೀಷನು ಪ್ರವಾದಿಗಳ ಗುಂಪಿಗೆ ಊಟ ಒದಗಿಸಿದನು

42ಬಾಳ್‌ಷಾಲಿಷಾದಿಂದ ಒಬ್ಬ ಮನುಷ್ಯನು ಪ್ರಥಮ ಸುಗ್ಗಿಯ ರೊಟ್ಟಿಗಳನ್ನು ದೇವಮನುಷ್ಯನಿಗೆ (ಎಲೀಷನಿಗೆ) ತೆಗೆದುಕೊಂಡು ಬಂದನು. ಇವನು ಇಪ್ಪತ್ತು ಜವೆಗೋಧಿ ರೊಟ್ಟಿಗಳನ್ನೂ ಒಂದು ಚೀಲದಲ್ಲಿ ಹಸೀತೆನೆಗಳನ್ನೂ ತಂದನು. ಆಗ ಎಲೀಷನು, ‘‘ಜನರಿಗೆ ಈ ಆಹಾರವನ್ನು ಕೊಡು, ಅವರು ತಿನ್ನಲಿ’’ ಎಂದು ಹೇಳಿದನು.

43ಎಲೀಷನ ಸೇವಕನು, ‘‘ಏನು? ಇಲ್ಲಿ ನೂರು ಮಂದಿ ಜನರಿದ್ದಾರೆ. ಈ ಆಹಾರವನ್ನು ಇಲ್ಲಿರುವ ಜನರಿಗೆಲ್ಲ ನಾನು ಹೇಗೆ ಕೊಡಲಿ?’’ ಎಂದನು.

ಆದರೆ ಎಲೀಷನು, ‘‘ಜನರಿಗೆ ತಿನ್ನಲು ಆಹಾರವನ್ನು ಕೊಡು, ಯೆಹೋವನು ಇಂತೆನ್ನುವನು; ‘ಅವರು ತಿಂದರೂ ಆಹಾರವು ಉಳಿಯುತ್ತದೆ’ ’’ ಎಂದು ಹೇಳಿದನು.

44ಆಗ ಎಲೀಷನ ಸೇವಕನು ಪ್ರವಾದಿಗಳ ಗುಂಪಿನ ಮುಂದೆ ಆಹಾರವನ್ನು ಇಟ್ಟನು. ಆ ಗುಂಪಿನ ಪ್ರವಾದಿಗಳು ಸಾಕಾಗುವಷ್ಟು ತಿಂದರೂ ಆಹಾರವು ಉಳಿದು ಹೋಯಿತು. ಯೆಹೋವನು ಹೇಳಿದಂತೆಯೇ ಇದು ಸಂಭವಿಸಿತು.

### ನಾಮಾನನ ಸಮಸ್ಯೆ

5 ಅರಾಮ್ಯರ ರಾಜನ ಸೇನೆಯಲ್ಲಿ ನಾಮಾನನೆಂಬ ಸೇನಾಪತಿಯಿದ್ದನು. ನಾಮಾನನು ಅವನ ರಾಜನಿಗೆ ಬಹಳ ಪ್ರಮುಖನಾಗಿದ್ದನು. ಯೆಹೋವನು ನಾಮಾನನ ಮುಖಾಂತರ ಅರಾಮ್ಯರಿಗೆ ವಿಜಯವನ್ನು ತಂದು ಕೊಟ್ಟಿದ್ದರಿಂದ ಅವನು ಪ್ರಮುಖನಾಗಿದ್ದನು. ನಾಮಾನನು ಮಹಾಪುರುಷನೂ ಶಕ್ತಿಶಾಲಿಯೂ ಆದ ಮನುಷ್ಯನಾಗಿದ್ದನು. ಆದರೆ ಅವನು ಕುಷ್ಠರೋಗ ಪೀಡಿತನಾಗಿದ್ದನು.

2ಅರಾಮ್ಯರು ಇಸ್ರೇಲಿನಲ್ಲಿ ಹೋರಾಡಲು ಸೈನಿಕರ ಅನೇಕ ಗುಂಪುಗಳನ್ನು ಕಳುಹಿಸಿದರು. ಸೈನಿಕರು ಜನರನ್ನು ತಮ್ಮ ಗುಲಾಮರಂತೆ ಹಿಡಿದುತಂದರು. ಒಂದು ಸಲ ಚಿಕ್ಕ ಹುಡುಗಿಯೊಬ್ಬಳನ್ನು ಇಸ್ರೇಲ್ ದೇಶದಿಂದ ಹಿಡಿದುತಂದರು. ಈ ಚಿಕ್ಕ ಹುಡುಗಿಯು ನಾಮಾನನ ಪತ್ನಿಗೆ ಸೇವಕಿಯಾದಳು.
3ಈ ಹುಡುಗಿಯು ನಾಮಾನನ ಪತ್ನಿಗೆ, ‘‘ನನ್ನ ಒಡೆಯನಾದ ನಾಮಾನನು ಸಮಾರ್ಯದಲ್ಲಿ ವಾಸಿಸುವ ಪ್ರವಾದಿಯನ್ನು (ಎಲೀಷನನ್ನು) ಭೇಟಿ ಮಾಡಬೇಕೆಂದು ನಾನು ಆಶಿಸುತ್ತೇನೆ. ಆ ಪ್ರವಾದಿಯು ನಾಮಾನನ ಕುಷ್ಠರೋಗವನ್ನು ಗುಣಪಡಿಸಬಲ್ಲನು’’ ಎಂದು ಹೇಳಿದಳು.

4ನಾಮಾನನು ತನ್ನ ಒಡೆಯನಾದ ಅರಾಮ್ಯರ ರಾಜನ ಬಳಿಗೆ ಹೋದನು. ಇಸ್ರೇಲಿನ ಹುಡುಗಿಯು ಹೇಳಿದ

ಸಂಗತಿಗಳನ್ನು, ನಾಮಾನನು ಅರಾಮ್ಯರ ರಾಜನಿಗೆ
ಹೇಳಿದನು.
5ಆಗ ಅರಾಮ್ಯರ ರಾಜನು, ''ಈಗಲೇ ಹೋಗು,
ನಾನು ಇಸ್ರೇಲಿನ ರಾಜನಿಗೆ ಪತ್ರವೊಂದನ್ನು ಕಳುಹಿ
ಸುತ್ತೇನೆ'' ಎಂದು ಹೇಳಿದನು.
ನಾಮಾನನು ಇಸ್ರೇಲಿಗೆ ಹೋದನು. ನಾಮಾನನು
ಮೂನ್ನೂರ ನಲವತ್ತು ಕಿಲೋ. ಗ್ರಾಂ. ಬೆಳ್ಳಿ, ಆರುಸಾವಿರ
ಚಿನ್ನದ ನಾಣ್ಯಗಳನ್ನು ಮತ್ತು ಹತ್ತು ಥಾನು ಬಟ್ಟೆಗಳನ್ನು
ಕಾಣಿಕೆಯಾಗಿ ತೆಗೆದುಕೊಂಡು ಹೋದನು. 6ನಾಮಾ
ನನು ಅರಾಮ್ಯರ ರಾಜನಿಂದ ಇಸ್ರೇಲ್ ರಾಜನಿಗೆ
ಪತ್ರವೊಂದನ್ನು ತೆಗೆದುಕೊಂಡು ಹೋದನು. ಆ
ಪತ್ರದಲ್ಲಿ, ''... ನನ್ನ ಸೇವಕನಾದ ನಾಮಾನನನ್ನು ನಿಮ್ಮ
ಬಳಿಗೆ ನಾನು ಕಳುಹಿಸುತ್ತಿದ್ದೇನೆ. ಅವನ ಕುಷ್ಠ
ರೋಗವನ್ನು ಗುಣಪಡಿಸಿ'' ಎಂದು ಬರೆದಿತ್ತು.
7ಇಸ್ರೇಲಿನ ರಾಜನು ಪತ್ರವನ್ನು ಓದಿದಾಗ, ದುಃಖ
ದಿಂದ ತನ್ನ ಬಟ್ಟೆಗಳನ್ನು ಹರಿದುಕೊಂಡು,''ನಾನು
ದೇವರೇನು ? ಇಲ್ಲ! ಹುಟ್ಟು ಮತ್ತು ಸಾವುಗಳ ಮೇಲೆ
ನನಗೆ ಯಾವ ಶಕ್ತಿಯೂ ಇಲ್ಲ. ಹೀಗಿರುವಾಗ ಅರಾಮ್ಯರ
ರಾಜನು ಕುಷ್ಠರೋಗ ಪೀಡಿತನಾದ ಮನುಷ್ಯನನ್ನು ನನ್ನ
ಬಳಿಗೆ ಗುಣಪಡಿಸಲು ಏಕೆ ಕಳುಹಿಸಿದನು? ಇದರ ಬಗ್ಗೆ
ನೀವೇ ಯೋಚಿಸಿರಿ. ಇದು ಒಂದು ಕುತಂತ್ರವೆಂಬುದು
ನಿಮಗೇ ತಿಳಿಯುತ್ತದೆ. ಅರಾಮ್ಯರ ರಾಜನು ಯುದ್ಧ
ವನ್ನು ಆರಂಭಿಸಲು ಪ್ರಯತ್ನಿಸುತ್ತಿದ್ದಾನೆ!'' ಎಂದು
ಹೇಳಿದನು.
8ಇಸ್ರೇಲಿನ ರಾಜನು ದುಃಖದಿಂದ ತನ್ನ ಬಟ್ಟೆಗಳನ್ನು
ಹರಿದುಕೊಂಡನೆಂಬುದು ದೇವಮನುಷ್ಯನಾದ ಎಲೀಷ
ನಿಗೆ ತಿಳಿಯಿತು. ಎಲೀಷನು ರಾಜನಿಗೆ ಈ ಸಂದೇಶವನ್ನು
ಕಳುಹಿಸಿದನು: ''ನೀನು ನಿನ್ನ ಬಟ್ಟೆಗಳನ್ನು ಹರಿದು
ಕೊಂಡಿದ್ದು ಏಕೆ? ನಾಮಾನನು ನನ್ನ ಬಳಿಗೆ ಬರಲಿ.
ಇಸ್ರೇಲಿನಲ್ಲಿ ಒಬ್ಬ ಪ್ರವಾದಿ ಇದ್ದಾನೆಂಬುದು ಅವನಿಗೆ
ತಿಳಿಯುತ್ತದೆ!''
9ನಾಮಾನನು ತನ್ನ ಕುದುರೆಗಳೊಂದಿಗೆ ಮತ್ತು
ರಥಗಳೊಂದಿಗೆ ಎಲೀಷನ ಮನೆಗೆ ಬಂದು, ಬಾಗಿಲಿನ
ಹೊರಗಡೆ ನಿಂತುಕೊಂಡನು. 10ಎಲೀಷನು ತನ್ನ ಸಂದೇ
ಶಕನ ಮೂಲಕ ನಾಮಾನನಿಗೆ, ''ಹೋಗಿ, ಜೋರ್ಡನ್
ನದಿಯಲ್ಲಿ ಏಳು ಸಲ ಸ್ನಾನಮಾಡು. ಆಗ ನಿನ್ನ ಚರ್ಮ
ರೋಗವು ಗುಣವಾಗುವುದು. ನೀನು ಸಂಪೂರ್ಣ
ಶುದ್ಧನಾಗುವೆ'' ಎಂದು ತಿಳಿಸಿದನು.
11ನಾಮಾನನು ಕೋಪಗೊಂಡು, ''ಎಲೀಷನು
ಕೊನೆಯ ಪಕ್ಷ ಬಂದು, ನನ್ನೆದುರು ನಿಂತು, ತನ್ನ ದೇವ
ರಾದ ಯೆಹೋವನ ಹೆಸರಿನಲ್ಲಿ ನನ್ನನ್ನು ಕರೆಯುತ್ತಿದ್ದ
ನೆಂದು ನಾನು ಭಾವಿಸಿದ್ದೆನು. ಅವನು ತನ್ನ ಕೈಗಳನ್ನು ನನ್ನ
ದೇಹದ ಮೇಲೆ ಸವರಿ, ನನ್ನ ಕುಷ್ಠರೋಗವನ್ನು
ಗುಣಪಡಿಸುವನೆಂದು ನಾನು ಭಾವಿಸಿದ್ದೆನು. 12ದಮಸ್ಕದ
ಅಬಾನಾ ಮತ್ತು ಪರ್ಪರ್ ನದಿಗಳು ಇಸ್ರೇಲಿನ ಎಲ್ಲಾ
ನದಿಗಳಿಗಿಂತಲೂ ಉತ್ತಮ! ನಾನು ದಮಸ್ಕದ ಆ ನದಿ
ಗಳಲ್ಲಿ ಸ್ನಾನಮಾಡಿ, ಶುದ್ಧನಾಗಬಾರದೇಕೆ?'' ಎಂದು
ಕೊಂಡು ಕೋಪದಿಂದ ಹಿಂದಿರುಗಿ ಹೋದನು!
13ಆಗ ನಾಮಾನನ ಸೇವಕರು ಅವನ ಬಳಿಗೆ ಬಂದು
ಅವನಿಗೆ ''ತಂದೆಯೇ, ಪ್ರವಾದಿಯು ಒಂದು ಕಠಿಣವಾದ
ಕಾರ್ಯವನ್ನು ಹೇಳಿದ್ದರೆ, ನೀವು ಅದನ್ನು ಮಾಡುತ್ತಿದ್ದಿರಿ!
ಅಲ್ಲವೇ? ಹೀಗಿರಲು ಸುಲಭವಾದ ಒಂದು ಕಾರ್ಯ
ವನ್ನು ಅವನು ನಿಮಗೆ ಹೇಳಿರುವಾಗ ನೀವು ಅವನಿಗೆ
ವಿಧೇಯರಾಗಬಾರದೇಕೆ? ನೀವು ಸ್ನಾನಮಾಡಿದರೆ,
ಶುಚಿಗೊಂಡು ಶುದ್ಧರಾಗುವಿರಿ' ಎಂದು ಹೇಳಿದರು.
14ದೇವಮನುಷ್ಯನು (ಎಲೀಷನು) ಹೇಳಿದಂತೆಯೇ
ನಾಮಾನನು ಜೋರ್ಡನ್ ನದಿಯಲ್ಲಿ ಇಳಿದು ಏಳು
ಸಾರಿ ಮುಳುಗಿ ಮೇಲೆದ್ದನು. ಆಗ ನಾಮಾನನು
ಸಂಪೂರ್ಣ ಶುದ್ಧನಾದನು; ಅವನ ಚರ್ಮವು ಮಗುವಿನ
ಚರ್ಮದಂತೆ ಕೋಮಲವಾಯಿತು.
15ನಾಮಾನನು ತನ್ನ ಗುಂಪಿನೊಂದಿಗೆ ದೇವಮನುಷ್ಯನ
ಹತ್ತಿರಕ್ಕೆ ಹಿಂದಿರುಗಿ ಬಂದನು. ಅವನು ಎಲೀಷನ
ಮುಂದೆ ನಿಂತು,'' ನೋಡಿ, ಇಸ್ರೇಲಿನಲ್ಲಿಯೇ ಹೊರತು
ಭೂಮಂಡಲದ ಬೇರೆಲ್ಲಿಯೂ ದೇವರು ಇಲ್ಲವೇ ಇಲ್ಲ
ಎಂಬುದು ಈಗತಾನೇ ನನಗೆ ತಿಳಿಯಿತು! ಈಗ
ದಯಮಾಡಿ ನನ್ನ ಕಾಣಿಕೆಯನ್ನು ಸ್ವೀಕರಿಸಿ!'' ಎಂದು
ಹೇಳಿದನು.
16ಆದರೆ ಎಲೀಷನು, ''ನಾನು ಯೆಹೋವನ ಸೇವೆ
ಮಾಡುತ್ತೇನೆ. ಯೆಹೋವನಾಣೆಯಾಗಿ ಪ್ರಮಾಣ
ಮಾಡುತ್ತೇನೆ. ನಾನು ಯಾವ ಕಾಣಿಕೆಯನ್ನು ಸ್ವೀಕರಿಸು
ವುದಿಲ್ಲ'' ಎಂದು ಹೇಳಿದನು.
ಎಲೀಷನು ಕಾಣಿಕೆಯನ್ನು ಸ್ವೀಕರಿಸುವಂತೆ ನಾಮಾ
ನನು ಬಹಳ ಪ್ರಯತ್ನಿಸಿದನು. ಆದರೆ ಎಲೀಷನು
ನಿರಾಕರಿಸಿದನು. 17ಆಗ ನಾಮಾನನು, ''ನೀನು ಈ
ಕಾಣಿಕೆಯನ್ನು ಸ್ವೀಕರಿಸದಿದ್ದರೆ, ಕೊನೆಯ ಪಕ್ಷ ನನಗಾಗಿ
ಈ ಕಾರ್ಯವನ್ನು ಮಾಡು. ನನ್ನ ಎರಡು ಹೇಸರಕತ್ತೆಗಳ
ಮೇಲಿನ ಬುಟ್ಟಿಗಳು ತುಂಬುವಷ್ಟು ಇಸ್ರೇಲಿನ ಮಣ್ಣನ್ನು
ನನಗೆ ಕೊಡಿಸಬೇಕೆಂದು ಬೇಡುತ್ತೇನೆ. ಏಕೆಂದರೆ ಇತರ
ದೇವರುಗಳಿಗೆ ನಾನು ಮತ್ತೆ ಎಂದೆಂದಿಗೂ ಸರ್ವಾಂಗ
ಹೋಮವನ್ನಾಗಲೀ, ಯಜ್ಞಗಳನ್ನಾಗಲೀ ಅರ್ಪಿಸುವು
ದಿಲ್ಲ. ನಾನು ಯೆಹೋವನಿಗೆ ಮಾತ್ರ ಯಜ್ಞಗಳನ್ನು
ಅರ್ಪಿಸುತ್ತೇನೆ! 18ಆದರೆ ಈ ವಿಷಯದಲ್ಲಿ ಯೆಹೋವನು
ನನ್ನನ್ನು ಕ್ಷಮಿಸಲಿ. ನನ್ನ ಒಡೆಯನು (ಅರಾಮ್ಯರ ರಾಜ)
ಸುಳ್ಳುದೇವರಾದ ರಿಮ್ಮೋನನನ್ನು ಪೂಜಿಸಲು ಅವನ
ಆಲಯಕ್ಕೆ ಹೋಗಿ ನನ್ನ ಕೈಹಿಡಿದು ಆ ದೇವರಿಗೆ
ನಮಸ್ಕಾರ ಮಾಡುವಾಗ ನಾನೂ ನಮಸ್ಕಾರ

ಮಾಡಬೇಕಾಗುವುದು. ಈ ಒಂದು ವಿಷಯದಲ್ಲಿ
ಯೆಹೋವನು ನನಗೆ ಕ್ಷಮೆಯನ್ನು ಅನುಗ್ರಹಿಸಬೇಕು''
ಎಂದು ಹೇಳಿದನು. 19ಆಗ ಎಲೀಷನು, ''ಸಮಾಧಾನ
ದಿಂದ ಹೋಗು'' ಎಂದನು.

ನಾಮಾನನು ಎಲೀಷನ ಬಳಿಯಿಂದ ಸ್ವಲ್ಪ ದೂರ
ಹೋದನು. 20ಆದರೆ ದೇವಮನುಷ್ಯನಾದ ಎಲೀಷನ
ಸೇವಕನಾದ ಗೇಹಜಿಯು, ''ನೋಡು, ಅರಾಮ್ಯನಾದ
ನಾಮಾನನು ತಂದಿದ್ದ ಕಾಣಿಕೆಯನ್ನು ಸ್ವೀಕರಿಸದೆ ನನ್ನ
ಒಡೆಯನು (ಎಲೀಷನು) ಅವನನ್ನು ಕಳುಹಿಸಿಬಿಟ್ಟನು!
ಯೆಹೋವನಾಣೆಯಾಗಿ, ನಾನು ನಾಮಾನನ ಹಿಂದೆ
ಓಡಿಹೋಗಿ ಅವನಿಂದ ಏನನ್ನಾದರೂ ಪಡೆಯುತ್ತೇನೆ!''
ಎಂದು ತನ್ನೊಳಗೆ ಅಂದುಕೊಂಡನು, 21ನಾಮಾನನ
ಬಳಿಗೆ ಓಡಿದನು. ನಾಮಾನನು ತನ್ನ ಹಿಂದೆ ಓಡಿ
ಬರುತ್ತಿರುವ ಒಬ್ಬನನ್ನು ನೋಡಿ ಗೇಹಜಿಯನ್ನು ಸಂಧಿ
ಸಲು ರಥದಿಂದ ಇಳಿದನು. ನಾಮಾನನು, ''ಎಲ್ಲವೂ
ಕ್ಷೇಮವೇ?'' ಎಂದು ಕೇಳಿದನು.

22ಗೇಹಜಿಯು,''ಹೌದು, ಎಲ್ಲವೂ ಕ್ಷೇಮವಾಗಿದೆ.
ನನ್ನ ಒಡೆಯನು (ಎಲೀಷನು) ನನಗೆ, 'ನೋಡು, ಎಫ್ರಾ
ಯೀಮ್ ಬೆಟ್ಟಪ್ರಾಂತ್ಯದ ಪ್ರವಾದಿಗಳ ಗುಂಪಿನಿಂದ ನನ್ನ
ಬಳಿಗೆ ಇಬ್ಬರು ತರುಣರು ಬಂದಿದ್ದಾರೆ. ದಯವಿಟ್ಟು
ಅವರಿಗೆ ಮೂವತ್ತೈದು ಕಿಲೋ. ಗ್ರಾಂ. ಬೆಳ್ಳಿಯನ್ನು
ಮತ್ತು ಎರಡು ಥಾನು ಬಟ್ಟೆಯನ್ನು ತೆಗೆದುಕೊಂಡು ಬಾ'
ಎಂದು ನನ್ನನ್ನು ಕಳುಹಿಸಿದನು'' ಎಂದು ಹೇಳಿದನು.

23ನಾಮಾನನು, ''ದಯಮಾಡಿ ಎಪ್ಪತ್ತು ಕಿಲೋ.
ಗ್ರಾಂ. ತೆಗೆದುಕೊ!'' ಎಂದು ಗೇಹಜಿಗೆ ಒತ್ತಾಯಪಡಿಸಿ
ಎಪ್ಪತ್ತು ಕಿಲೋ ಗ್ರಾಂ ಬೆಳ್ಳಿಯನ್ನು ಎರಡು ಚೀಲಗಳಲ್ಲಿ
ಹಾಕಿದನು ಮತ್ತು ಎರಡು ಥಾನು ಬಟ್ಟೆಯನ್ನು
ತೆಗೆದುಕೊಂಡು ತನ್ನ ಸೇವಕರಿಗೆ ಕೊಟ್ಟನು. ಆ ಸೇವಕರು
ಈ ವಸ್ತುಗಳನ್ನು ತೆಗೆದುಕೊಂಡು ಗೇಹಜಿಯೊಡನೆ
ಹೋದರು. 24ಗೇಹಜಿಯು ಬೆಟ್ಟಕ್ಕೆ ಬಂದಾಗ, ಅವುಗ
ಳನ್ನು ಸೇವಕರಿಂದ ತೆಗೆದುಕೊಂಡು ಅವರನ್ನು ಕಳುಹಿಸಿ
ಬಿಟ್ಟನು. ನಂತರ ಗೇಹಜಿಯು ಅವುಗಳನ್ನು ಮನೆಯಲ್ಲಿ
ಅಡಗಿಸಿಟ್ಟನು.

25ಗೇಹಜಿಯು ಒಳಗೆ ಬಂದು ತನ್ನ ಒಡೆಯನಾದ
ಎಲೀಷನ ಮುಂದೆ ನಿಂತುಕೊಂಡನು. ಎಲೀಷನು
ಗೇಹಜಿಗೆ, ''ನೀನು ಎಲ್ಲಿಗೆ ಹೋಗಿದ್ದೆ?'' ಎಂದು
ಕೇಳಿದನು.

ಗೇಹಜಿಯು, ''ನಾನು ಎಲ್ಲಿಗೂ ಹೋಗಿರಲಿಲ್ಲ''
ಎಂದನು.

26ಎಲೀಷನು ಗೇಹಜಿಗೆ, ''ಅದು ನಿಜವಲ್ಲ! ನಾಮಾ
ನನು ನಿನ್ನನ್ನು ಸಂಧಿಸಲು ತನ್ನ ರಥದಿಂದ ಹಿಂದಕ್ಕೆ
ತಿರುಗಿದಾಗ ನನ್ನ ಹೃದಯವು ನಿನ್ನ ಹತ್ತಿರದಲ್ಲಿಯೇ
ಇತ್ತು. ಹಣವನ್ನು, ಬಟ್ಟೆಗಳನ್ನು, ಆಲೀವನ್ನು ದ್ರಾಕ್ಷಿ
ಯನ್ನು, ಕುರಿಗಳನ್ನು, ಹಸುಗಳನ್ನು ಅಥವಾ ಸೇವಕ
ಸೇವಕಿಯರನ್ನು ತೆಗೆದುಕೊಳ್ಳುವ ಕಾಲ ಇದಲ್ಲ. 27ಈಗ,
ನಿನ್ನನ್ನು ಮತ್ತು ನಿನ್ನ ಮಕ್ಕಳನ್ನು ನಾಮಾನನ ರೋಗವು
ಹಿಡಿದುಕೊಳ್ಳುವುದು. ನಿನಗೆ ಎಂದೆಂದಿಗೂ ಕುಷ್ಠರೋಗ
ವಿರುವುದು!'' ಎಂದು ಹೇಳಿದನು.

ಗೇಹಜಿಯು ಎಲೀಷನನ್ನು ಬಿಟ್ಟುಹೋದಾಗ, ಗೇಹ
ಜಿಯ ಚರ್ಮವು ಮಂಜುಗಡ್ಡೆಯಂತೆ ಬಿಳುಪಾಯಿತು!
ಗೇಹಜಿಯು ಕುಷ್ಠರೋಗ ಪೀಡಿತನಾದನು.

### ಎಲೀಷ ಮತ್ತು ಕೊಡಲಿ

6 ಪ್ರವಾದಿಗಳ ಗುಂಪು ಎಲೀಷನಿಗೆ, ''ನಾವು ಈ
ಸ್ಥಳದಲ್ಲಿಯೇ ವಾಸಮಾಡುತ್ತಿದ್ದೇವೆ. ಆದರೆ ಇದು
ನಮಗೆ ತುಂಬಾ ಚಿಕ್ಕದಾಗಿದೆ. 2ನಾವೆಲ್ಲ ಜೋರ್ಡನ್
ನದಿಗೆ ಹೋಗಿ ಸ್ವಲ್ಪ ಮರವನ್ನು ಕಡಿದುಕೊಂಡು
ಬರೋಣ. ಪ್ರತಿಯೊಬ್ಬರೂ ಒಂದೊಂದು ದಿಮ್ಮಿಯನ್ನು
ತಂದು ನಾವು ವಾಸಿಸಲು ಒಂದು ಮನೆಯನ್ನು
ಕಟ್ಟೋಣ'' ಎಂದು ಹೇಳಿದರು. ಎಲೀಷನು, ''ಸರಿ,
ಹಾಗೆಯೇ ಮಾಡಿ''ಎಂದು ಉತ್ತರಿಸಿದನು.

3ಒಬ್ಬ ವ್ಯಕ್ತಿಯು, ''ದಯವಿಟ್ಟು ನಮ್ಮ ಜೊತೆಯಲ್ಲಿ
ನೀನೂ ಬಾ''ಎಂದನು. ಎಲೀಷನು, ''ಸರಿ, ನಾನೂ
ನಿಮ್ಮ ಜೊತೆಯಲ್ಲಿ ಬರುತ್ತೇನೆ'' ಎಂದು ಹೇಳಿದನು.

4ಎಲೀಷನು ಪ್ರವಾದಿಗಳ ಗುಂಪಿನೊಂದಿಗೆ
ಹೋದನು. ಅವರು ಜೋರ್ಡನ್ ನದಿಯ ಬಳಿಗೆ
ಬಂದು ಕೆಲವು ಮರಗಳನ್ನು ಕಡಿಯಲಾರಂಭಿಸಿದರು.
5ಆದರೆ ಒಬ್ಬನು ಮರವೊಂದನ್ನು ಕಡಿದುರುಳಿಸಿದಾಗ,
ಕಬ್ಬಿಣದ ಕೊಡಲಿಯು ಕಾವುನಿಂದ ಕಳಚಿಕೊಂಡು
ನೀರಿನೊಳಕ್ಕೆ ಬಿದ್ದುಬಿಟ್ಟಿತು. ಆ ಮನುಷ್ಯನು, ''ಅಯ್ಯೋ
ಒಡೆಯನೇ! ನಾನು ಆ ಕೊಡಲಿಯನ್ನು ಎರವಲಾಗಿ
ತಂದಿದ್ದೇನಲ್ಲಾ'' ಎಂದು ಕೂಗಿಕೊಂಡನು.

6ದೇವಮನುಷ್ಯನು (ಎಲೀಷನು), ''ಅದು ಎಲ್ಲಿ
ಬಿದ್ದಿತು!'' ಎಂದು ಕೇಳಿದನು.

ಆ ಮನುಷ್ಯನು ಕೊಡಲಿಯು ಬಿದ್ದ ಸ್ಥಳವನ್ನು ಎಲೀಷ
ನಿಗೆ ತೋರಿಸಿದನು. ಆಗ ಎಲೀಷನು ಒಂದು ಕಡ್ಡಿಯನ್ನು
ಮುರಿದು ಅದನ್ನು ನೀರಿನೊಳಕ್ಕೆ ಎಸೆದನು. ಆ ಕಡ್ಡಿಯು
ಕಬ್ಬಿಣದ ಕೊಡಲಿಯನ್ನು ತೇಲುವಂತೆ ಮಾಡಿತು.
7ಎಲೀಷನು, ''ಕೊಡಲಿಯನ್ನು ಎತ್ತಿಕೊ'' ಎಂದು ಹೇಳಿ
ದನು. ಆ ಮನುಷ್ಯನು ಅಲ್ಲಿಗೆ ಹೋಗಿ, ಕೊಡಲಿಯನ್ನು
ತೆಗೆದುಕೊಂಡನು.

### ಅರಾಮ್ಯರ ರಾಜನು ಇಸ್ರೇಲಿನ ರಾಜನನ್ನು ಸಿಕ್ಕಿಹಾಕಿಸಲು ಪ್ರಯತ್ನಿಸಿದನು

8ಅರಾಮ್ಯರ ರಾಜನು ಇಸ್ರೇಲಿನ ವಿರುದ್ಧ ಯುದ್ಧ
ಮಾಡಲು ಬಂದನು. ಅವನು ತನ್ನ ಸೇನಾಧಿಕಾರಿಗಳ

ಸಭೆಸೇರಿಸಿ, ''ನೀವು ಈ ಜಾಗದಲ್ಲಿ ಅಡಗಿಕೊಂಡಿದ್ದು,
ಇಸ್ರೇಲರು ಇಲ್ಲಿಗೆ ಬಂದಾಗ ಅವರ ಮೇಲೆ ಆಕ್ರಮಣ
ಮಾಡಿ'' ಎಂದು ಹೇಳಿದನು.

9ಆದರೆ ದೇವಮನುಷ್ಯನು (ಎಲೀಷನು) ಇಸ್ರೇಲಿನ
ರಾಜನಿಗೆ ಒಂದು ಸಂದೇಶವನ್ನು ಕಳುಹಿಸಿ, ''ನೀವು
ಜಾಗರೂಕರಾಗಿರಿ! ನೀವು ಆ ಜಾಗದಲ್ಲಿ ತಿರುಗಾಡದಿರಿ!
ಅರಾಮ್ಯರ ಸೈನಿಕರು ಅಲ್ಲಿ ಅಡಗಿದ್ದಾರೆ!'' ಎಂದು
ಹೇಳಿದನು. 10ಇಸ್ರೇಲಿನ ರಾಜನು ತನ್ನ ಜನರಿಗೆ ಸಂದೇಶ
ವೊಂದನ್ನು ಕಳುಹಿಸಿ, ದೇವಮನುಷ್ಯನು ಎಚ್ಚರ
ವಾಗಿರಲು ತಿಳಿಸಿದ ಸ್ಥಳದಲ್ಲಿ ತಿರುಗಾಡದಿರುವಂತೆ
ಸೂಚಿಸಿ ಕೆಲವು ಜನರನ್ನು * ರಕ್ಷಿಸಿದನು.

11ಅರಾಮ್ಯರ ರಾಜನು ಇದರಿಂದ ಬಹಳ ತಳಮಳ
ಗೊಂಡನು. ಅರಾಮ್ಯರ ರಾಜನು ತನ್ನ ಸೇನಾಧಿಕಾರಿ
ಗಳನ್ನು ಕರೆದು ಅವರಿಗೆ, ''ಇಸ್ರೇಲಿನ ರಾಜನಿಗಾಗಿ
ಗೂಢಚರ್ಯೆ ನಡೆಸುತ್ತಿರುವವರು ಯಾರೆಂಬುದನ್ನು
ಹೇಳಿ'' ಎಂದು ಕೇಳಿದನು.

12ಅರಾಮ್ಯರ ರಾಜನ ಅಧಿಕಾರಿಗಳಲ್ಲೊಬ್ಬನು, ''ನನ್ನ
ಒಡೆಯನೇ, ರಾಜನೇ, ನಮ್ಮಲ್ಲಿ ಯಾರೊಬ್ಬರೂ ಗೂಢ
ಚಾರರಲ್ಲ. ಇಸ್ರೇಲಿನ ಪ್ರವಾದಿಯಾದ ಎಲೀಷನು
ಅನೇಕ ರಹಸ್ಯ ಸಂಗತಿಗಳನ್ನು ಅಂದರೆ ನೀವು ನಿಮ್ಮ
ಮಲಗುವ ಕೊಠಡಿಯಲ್ಲಿ ಮಾತನಾಡುವುದನ್ನೂ ಸಹ
ಇಸ್ರೇಲಿನ ರಾಜನಿಗೆ ತಿಳಿಸಬಲ್ಲವನಾಗಿದ್ದಾನೆ!'' ಎಂದು
ಹೇಳಿದನು.

13ಅರಾಮ್ಯರ ರಾಜನು, ''ಎಲೀಷನನ್ನು ಕಂಡು
ಹಿಡಿಯಿರಿ. ಅವನನ್ನು ಸೆರೆಹಿಡಿಯಲು ನಾನು ಸೈನಿಕರನ್ನು
ಕಳುಹಿಸುತ್ತೇನೆ'' ಎಂದನು.

ಸೇವಕರು ಅರಾಮ್ಯರ ರಾಜನಿಗೆ, ''ಎಲೀಷನು
ದೋತಾನಿನಲ್ಲಿದ್ದಾನೆ'' ಎಂದು ಹೇಳಿದರು.

14ಆಗ ಅರಾಮ್ಯರ ರಾಜನು ಕುದುರೆಗಳನ್ನು,
ರಥಗಳನ್ನು ಮತ್ತು ದೊಡ್ಡ ಸೇನೆಯನ್ನು ದೋತಾನಿಗೆ
ಕಳುಹಿಸಿದನು. ಅವರು ರಾತ್ರಿಯಲ್ಲಿ ಬಂದು ನಗರವನ್ನು
ಸುತ್ತುವರಿದರು. 15ಎಲೀಷನ ಸೇವಕನು ಹೊತ್ತಾರೆ ನಸುಕಿ
ನಲ್ಲಿಯೆ ಮೇಲೆಕ್ಕೆದ್ದನು. ಸೇವಕನು ಹೊರಕ್ಕೆ ಹೋದಾಗ
ರಥಗಳಿಂದ ಮತ್ತು ಕುದುರೆಗಳಿಂದ ಕೂಡಿದ ಸೈನ್ಯವು
ನಗರವನ್ನು ಸುತ್ತುವರಿದಿರುವುದನ್ನು ನೋಡಿದನು!

ಆ ಸೇವಕನು ಎಲೀಷನಿಗೆ, ''ಅಯ್ಯೋ, ನನ್ನ
ಒಡೆಯನೇ, ನಾವು ಈಗ ಏನು ಮಾಡೋಣ?''ಎಂದು
ಕೇಳಿದನು.

16ಎಲೀಷನು, ''ನೀನು ಹೆದರದಿರು! ನಮಗಾಗಿ
ಯುದ್ಧ ಮಾಡುವ ಸೇನೆಯು ಅರಾಮ್ಯರಿಗಾಗಿ ಯುದ್ಧ
ಮಾಡುವ ಸೇನೆಗಿಂತ ಬಹಳ ಹೆಚ್ಚಿನದಾಗಿದೆ!''ಎಂದು
ಹೇಳಿದನು.

17ನಂತರ ಎಲೀಷನು ಪ್ರಾರ್ಥಿಸುತ್ತಾ, ''ಯೆಹೋ
ವನೇ, ನನ್ನ ಸೇವಕನ ಕಣ್ಣುಗಳನ್ನು ತೆರೆದು ಅವನೂ
ನೋಡುವಂತೆ ಮಾಡೆಂದು ನಾನು ನಿನ್ನನ್ನು ಬೇಡಿ
ಕೊಳ್ಳುತ್ತೇನೆ''ಎಂದು ಹೇಳಿದನು.

ಯೆಹೋವನು ತರುಣನ ಕಣ್ಣುಗಳನ್ನು ತೆರೆದನು. ಆ
ಸೇವಕನು ಪರ್ವತವನ್ನು ತುಂಬಿರುವ ಬೆಂಕಿಯಂತಿರುವ
ಕುದುರೆಗಳನ್ನು ಮತ್ತು ರಥಗಳನ್ನು ನೋಡಿದನು. ಅವ
ರೆಲ್ಲ ಎಲೀಷನ ಸುತ್ತಲೂ ಇದ್ದರು!

18ಆ ಬೆಂಕಿಯಂತಿರುವ ಕುದುರೆಗಳು ಮತ್ತು ರಥಗಳು
ಎಲೀಷನ ಬಳಿಗೆ ಇಳಿದುಬಂದವು. ಎಲೀಷನು ಯೆಹೋ
ವನನ್ನು ಪ್ರಾರ್ಥಿಸಿ, ''ಈ ಜನರನ್ನು ಕುರುಡರನ್ನಾಗಿ
ಮಾಡ ಬೇಕೆಂದು ನಾನು ನಿನ್ನಲ್ಲಿ ಪ್ರಾರ್ಥಿಸು
ತ್ತೇನೆ''ಎಂದು ಹೇಳಿದನು.

ಆಗ ಯೆಹೋವನು ಎಲೀಷನ ಪ್ರಾರ್ಥನೆಯಂತೆ
ಅರಾಮ್ಯರ ಸೇನೆಯು ಕುರುಡರಾಗುವಂತೆ ಮಾಡಿದನು.
19ಎಲೀಷನು ಅರಾಮ್ಯರ ಸೇನೆಗೆ, ''ಇದು ಸರಿಯಾದ
ಮಾರ್ಗವಲ್ಲ, ಇದು ಸರಿಯಾದ ನಗರವೂ ಅಲ್ಲ. ನನ್ನನ್ನು
ಹಿಂಬಾಲಿಸಿ. ನೀವು ಹುಡುಕುತ್ತಿರುವ ಮನುಷ್ಯನ ಬಳಿಗೆ
ನಾನು ನಿಮ್ಮನ್ನು ಕರೆದೊಯ್ಯುತ್ತೇನೆ'' ಎಂದು ಹೇಳಿ
ದನು. ನಂತರ ಎಲೀಷನು ಅರಾಮ್ಯರ ಸೇನೆಯನ್ನು
ಸಮಾರ್ಯಕ್ಕೆ ನಡೆಸಿಕೊಂಡು ಬಂದನು.

20ಅವರು ಸಮಾರ್ಯಕ್ಕೆ ಬಂದು ಸೇರಿದಾಗ
ಎಲೀಷನು, ''ಯೆಹೋವನೇ, ಈ ಜನರ ಕಣ್ಣುಗಳನ್ನು
ತೆರೆದುಬಿಡು, ಅವರು ನೋಡಲಿ''ಎಂದು ಹೇಳಿದನು.

ಆಗ ಯೆಹೋವನು ಅವರ ಕಣ್ಣುಗಳನ್ನು ತೆರೆದನು.
ಅರಾಮ್ಯರ ಸೇನೆಗೆ ತಾವು ಸಮಾರ್ಯ ನಗರದಲ್ಲಿರು
ವುದು ತಿಳಿದುಬಂತು! 21ಅರಾಮ್ಯರ ಸೇನೆಯನ್ನು
ಇಸ್ರೇಲಿನ ರಾಜನು ನೋಡಿ ಎಲೀಷನಿಗೆ, ''ನನ್ನ
ತಂದೆಯೇ, ನಾನು ಅವರನ್ನು ಕೊಲ್ಲಲೇ? ಅವರನ್ನು
ಕೊಂದುಹಾಕಿಬಿಡಲೇ?'' ಎಂದು ಕೇಳಿದನು.

22ಎಲೀಷನು, ''ಬೇಡ, ಅವರನ್ನು ಕೊಲ್ಲಬೇಡ.
ನೀನು ಯುದ್ಧದಲ್ಲಿ, ನಿನ್ನ ಖಡ್ಗದಿಂದ, ನಿನ್ನ ಬಿಲ್ಲು
ಬಾಣಗಳಿಂದ ಸೆರೆಹಿಡಿದ ಜನರನ್ನು ಕೊಲ್ಲಬಾರದು.
ಅರಾಮ್ಯರ ಸೇನೆಗೆ ಸ್ವಲ್ಪ ನೀರನ್ನು ಮತ್ತು ರೊಟ್ಟಿಗಳನ್ನು
ಕೊಡು. ಅವರು ತಿಂದು, ನೀರು ಕುಡಿಯಲಿ. ನಂತರ
ಅವರು ತಮ್ಮ ಮನೆಗೆ, ಅವರ ಒಡೆಯನ ಬಳಿಗೆ
ಹೋಗಲಿ'' ಎಂದು ಉತ್ತರಿಸಿದನು.

23ಇಸ್ರೇಲಿನ ರಾಜನು ಅರಾಮ್ಯರ ಸೇನೆಗೆ ಆಹಾರ
ವನ್ನು ಹೇರಳವಾಗಿ ಸಿದ್ಧಪಡಿಸಿದನು. ಅರಾಮ್ಯರ
ಸೇನೆಯು ಊಟಮಾಡಿ, ನೀರನ್ನು ಕುಡಿದರು. ನಂತರ
ಇಸ್ರೇಲಿನ ರಾಜನು ಅರಾಮ್ಯರ ಸೇನೆಗೆ ತಮ್ಮ ಒಡೆಯನ

---

**ಕೆಲವು ಜನರನ್ನು** ಅಕ್ಷರಶಃ,''ಒಬ್ಬರನ್ನಲ್ಲ ಅಥವಾ ಇಬ್ಬರನ್ನಲ್ಲ''
ಇದು ''ಮತ್ತೆ ಮತ್ತೆ''ಎಂಬರ್ಥವನ್ನು ಕೊಡಬಲ್ಲದು.

ಬಳಿಗೆ ಹೋಗಲು ಆಜ್ಞಾಪಿಸಿದನು. ಅಂದಿನಿಂದ ಇಸ್ರೇಲ್ ದೇಶದ ಮೇಲೆ ಧಾಳಿಮಾಡಲು ಯಾವ ಸೈನಿಕರನ್ನೂ ಅರಾಮ್ಯರು ಕಳುಹಿಸಲಿಲ್ಲ.

### ಸಮಾರ್ಯದಲ್ಲಿ ಭೀಕರ ಬರಗಾಲ

24ಇದಾದನಂತರ, ಅರಾಮ್ಯರ ರಾಜನಾದ ಬೆನ್ಹದ
ದನು ತನ್ನ ಸೇನೆಯನ್ನೆಲ್ಲ ಒಟ್ಟಾಗಿ ಸೇರಿಸಿಕೊಂಡು,
ಸಮಾರ್ಯವನ್ನು ಸುತ್ತುವರಿದು ಆಕ್ರಮಣ ಮಾಡಲು
ಹೋದನು. 25ಜನರು ನಗರದೊಳಕ್ಕೆ ಆಹಾರವನ್ನು
ತರಲು ಸೈನಿಕರು ಅವಕಾಶ ಕೊಡಲಿಲ್ಲ. ಆದ್ದರಿಂದ ಸಮಾರ್ಯದಲ್ಲಿ ಭೀಕರ ಬರಗಾಲವು ಆ ಕಾಲ ದಲ್ಲಾಯಿತು. ಸಮಾರ್ಯದಲ್ಲಿ ಒಂದು ಹೇಸರಕತ್ತೆಯ ತಲೆಯು ಎಂಭತ್ತು ಬೆಳ್ಳಿಯ ನಾಣ್ಯಗಳಿಗೆ ಮಾರಾಟ ವಾಗುವಷ್ಟು ಕೆಟ್ಟ ಪರಿಸ್ಥಿತಿಯಿತ್ತು. ಅರ್ಧಸೇರು ಪಾರಿ ವಾಳದ ಮಲದ ಲದ್ದಿಯು ಐದು ಬೆಳ್ಳಿನಾಣ್ಯಗಳಿಗೆ ಮಾರಾಟವಾಗುತ್ತಿತ್ತು.

26ಇಸ್ರೇಲಿನ ರಾಜನು ನಗರದ ಸುತ್ತಲಿನ ಗೋಡೆಯ ಮೇಲೆ ನಡೆಯುತ್ತಿರಲು ಸ್ತ್ರೀಯೊಬ್ಬಳು ಅವನನ್ನು, ''ನನ್ನ ಪ್ರಭುವೇ, ರಾಜನೇ, ದಯವಿಟ್ಟು ನನಗೆ ಸಹಾಯ ಮಾಡು''ಎಂದು ಕೂಗಿಕೊಂಡಳು.

27ಇಸ್ರೇಲಿನ ರಾಜನು, ''ಯೆಹೋವನು ನಿನಗೆ
ಸಹಾಯ ಮಾಡದಿದ್ದರೆ, ನಾನು ನಿನಗೆ ಹೇಗೆ ಸಹಾಯ
ಮಾಡಲಿ? ನಿನಗೆ ಕೊಡಲು ನನ್ನ ಬಳಿ ಏನೂ ಇಲ್ಲ;
ಕಣದಲ್ಲಿ ಕಾಳುಗಳಿಲ್ಲ, ದ್ರಾಕ್ಷಿಯ ಆಲೆಯಲ್ಲಿ ದ್ರಾಕ್ಷಾ
ರಸವಿಲ್ಲ''ಎಂದನು. 28ನಂತರ ಇಸ್ರೇಲಿನ ರಾಜನು ಆ
ಸ್ತ್ರೀಗೆ, ''ನಿನ್ನ ತೊಂದರೆಯೇನು?''ಎಂದು ಕೇಳಿದನು.
ಆ ಸ್ತ್ರೀಯು, ''ಇವಳು ನನಗೆ, 'ನಿನ್ನ ಮಗನನ್ನು ನನಗೆ
ಕೊಡು. ನಾವು ಅವನನ್ನು ಕೊಂದು, ಈ ಹೊತ್ತು
ತಿನ್ನೋಣ. ನಾಳೆ ನನ್ನ ಮಗನನ್ನು ತಿನ್ನೋಣ' ಎಂದಳು.
29ನಾವು ನನ್ನ ಮಗನನ್ನು ಬೇಯಿಸಿ, ನಾವು ತಿಂದು
ಬಿಟ್ಟೆವು. ಮಾರನೆಯ ದಿನ ನಾನು ಈ ಸ್ತ್ರೀಗೆ, 'ನಿನ್ನ
ಮಗನನ್ನು ನಾವು ಕೊಂದು ತಿನ್ನೋಣ' ಎಂದು ಹೇಳಿ
ದೆನು. ಆದರೆ ಅವಳು ತನ್ನ ಮಗನನ್ನು ಅಡಗಿಸಿಟ್ಟಿದ್ದಾಳೆ!''
ಎಂದು ಹೇಳಿದಳು. 30ಆ ಸ್ತ್ರೀಯ ಮಾತುಗಳನ್ನು ರಾಜನು
ಕೇಳಿದಾಗ, ದುಃಖದಿಂದ ತನ್ನ ಬಟ್ಟೆಗಳನ್ನೆಲ್ಲಾ ಹರಿದು ಕೊಂಡನು. ಅವನ ಮೈಮೇಲೆ ಗೋಣಿತಟ್ಟಿರುವುದು ಜನರಿಗೆಲ್ಲಾ ಕಾಣಿಸಿತು.

31ಇದಲ್ಲದೆ ರಾಜನು, ''ಈ ದಿನದ ಅಂತ್ಯದೊಳಗೆ ನಾನು ಶಾಫಾಟನ ಮಗನಾದ ಎಲೀಷನ ತಲೆಯನ್ನು ಅವನ ದೇಹದ ಮೇಲೆ ಉಳಿಯುವಂತೆ ಮಾಡಿದರೆ ದೇವರು ನನ್ನನ್ನು ದಂಡಿಸಲಿ!'' ಎಂದು ಹೇಳಿದನು.

32ರಾಜನು ಎಲೀಷನ ಬಳಿಗೆ ಒಬ್ಬ ಸಂದೇಶಕನನ್ನು ಕಳುಹಿಸಿದನು. ಎಲೀಷನು ತನ್ನ ಮನೆಯಲ್ಲಿ ಕುಳಿತಿದ್ದನು; ಹಿರಿಯರು ಅವನೊಂದಿಗೆ ಕುಳಿತಿದ್ದರು. ಸಂದೇಶಕನು ಬರುವುದಕ್ಕೆ ಮುಂಚೆಯೇ ಎಲೀಷನು ಹಿರಿಯರಿಗೆ, ''ನೋಡಿ, ನನ್ನ ತಲೆಯನ್ನು ಕತ್ತರಿಸಿಹಾಕಲು ಕೊಲೆ ಗಾರನ (ಇಸ್ರೇಲಿನ ರಾಜ) ಮಗ ಜನರನ್ನು ಕಳುಹಿ ಸಿದ್ದಾನೆ! ಆ ಸಂದೇಶಕನು ಬಂದಾಗ ಬಾಗಿಲನ್ನು ಮುಚ್ಚಿ ಬಿಡಿ! ಅವನು ಒಳಗೆ ಪ್ರವೇಶಿಸದಂತೆ ಬಾಗಿಲನ್ನು ಹಿಡಿದು ಕೊಳ್ಳಿ! ಅವನ ಹಿಂದೆ ಬರುತ್ತಿರುವ ಅವನ ಒಡೆಯನ ಕಾಲ ಸಪ್ಪಳವು ನನಗೆ ಕೇಳಿಸುತ್ತಿದೆ!'' ಎಂದು ಹೇಳಿದನು.

33ಎಲೀಷನು ಹಿರಿಯರೊಂದಿಗೆ ಇನ್ನೂ ಮಾತನಾಡು ತ್ತಿರುವಾಗ ಸಂದೇಶಕನು ಅವನ ಬಳಿಗೆ ಬಂದನು. ಅವನ ಸಂದೇಶವು ಹೀಗಿತ್ತು: '' ಈ ಆಪತ್ತು ಯೆಹೋವ ನಿಂದಲೇ ಬಂದಿದೆ! ನಾನೇಕೆ ಆತನನ್ನು ನೀರಿಕ್ಷಿಸಿ ಕೊಂಡಿರಬೇಕು?''

7 ಎಲೀಷನು ಅವನಿಗೆ, ''ಯೆಹೋವನ ಸಂದೇಶವನ್ನು ಕೇಳು: 'ನಾಳೆ ಇದೇ ಸಮಯಕ್ಕೆ, ಅಧಿಕವಾದ ಆಹಾರವು ಬಹಳ ಕಡಿಮೆ ಬೆಲೆಗೆ ಸಿಗುತ್ತದೆ. ಒಂದು ರೂಪಾಯಿಗೆ ಒಂದು ಗೂಡೆ ಹಿಟ್ಟನ್ನೂ ಎರಡು ಗೂಡೆ ಜವೆಗೋಧಿಯನ್ನೂ ಸಮಾರ್ಯ ನಗರದ ಊರ ಬಾಗಿಲಿ ನಲ್ಲಿರುವ ಮಾರುಕಟ್ಟೆಯಲ್ಲಿ ಮಾರಲಾಗುವುದು'' ಎಂದನು.

2ಆಗ ರಾಜನಿಗೆ ಆಪ್ತನಾಗಿದ್ದ ಅಧಿಕಾರಿಯು ದೇವಮನುಷ್ಯನಿಗೆ (ಎಲೀಷನಿಗೆ), ''ಯೆಹೋವನು ಪರ ಲೋಕಕ್ಕೆ ಕಿಟಕಿಗಳನ್ನು ಮಾಡಿಸಿದರೂ ಇದು ಸಂಭವಿ ಸುವುದಿಲ್ಲ!'' ಎಂದು ಉತ್ತರಿಸಿದನು.

ಎಲೀಷನು, ''ನೀನು ನಿನ್ನ ಸ್ವಂತ ಕಣ್ಣುಗಳಿಂದಲೇ ಇದನ್ನು ನೋಡುವೆ. ಆದರೆ ಆ ಆಹಾರದಲ್ಲಿ ಯಾವು ದನ್ನೂ ನೀನು ತಿನ್ನುವುದಿಲ್ಲ''ಎಂದನು.

### ಅರಾಮ್ಯರ ಪಾಳೆಯವು ಬರಿದಾಗಿರುವುದನ್ನು ಕುಷ್ಠರೋಗಿಗಳು ಕಂಡುಹಿಡಿದರು

3ನಗರದ ಬಾಗಿಲಿನ ಹತ್ತಿರ ನಾಲ್ಕು ಮಂದಿ ಕುಷ್ಠ
ರೋಗಿಗಳಿದ್ದರು. ಅವರು, ''ನಾವು ಸಾಯುವುದನ್ನೇ
ಕಾಯುತ್ತಾ ಕುಳಿತಿರುವುದೇಕೆ? 4ಸಮಾರ್ಯದಲ್ಲಿ
ಆಹಾರವು ಇಲ್ಲವೇ ಇಲ್ಲ. ನಾವು ನಗರದ ಒಳಗೆ ಹೋದರೆ,ನಾವು ಅಲ್ಲೇ ಸಾಯುತ್ತೇವೆ. ನಾವು ಇಲ್ಲೇ ಕುಳಿತ್ತಿದ್ದರೂ, ಸಾಯುವುದು ನಿಶ್ಚಿತ. ಆದ್ದರಿಂದ ನಾವು ಅರಾಮ್ಯರ ಪಾಳೆಯಕ್ಕೆ ಹೋಗೋಣ. ಅವರು ನಮ್ಮನ್ನು ಬದುಕಿಸಿದರೆ ನಾವು ಬದುಕೋಣ. ಅವರು ನಮ್ಮನ್ನು ಕೊಂದರೆ ಸಾಯೋಣ'' ಎಂದು ಮಾತನಾಡಿಕೊಂಡರು.

5ಅಂದು ಸಂಜೆ ಆ ನಾಲ್ವರು ಕುಷ್ಠರೋಗಿಗಳು ಅರಾ
ಮ್ಯರ ಪಾಳೆಯಕ್ಕೆ ಹೋದರು. ಅವರು ಪಾಳೆಯದ ಹೊರ
ಅಂಚಿಗೆ ಬಂದರು. ಅಲ್ಲಿ ಜನರೇ ಇರಲಿಲ್ಲ! 6ಅರಾಮ್ಯರ
ಸೇನೆಯು ರಥಗಳ, ಕುದುರೆಗಳ ಮತ್ತು ಮಹಾಸೇನೆಯ

ರಣಘೋಷವನ್ನು ಕೇಳುವಂತೆ ಯೆಹೋವನು ಮಾಡಿ
ದ್ದನು. ಅರಾಮ್ಯ ಸೈನಿಕರು, ''ಇಸ್ರೇಲಿನ ರಾಜನು, ಹಿತ್ತೀ
ಯರಿಗೆ ಮತ್ತು ಈಜಿಪ್ಟಿನವರಿಗೆ ಹಣಕೊಟ್ಟು ನಮ್ಮ
ವಿರುದ್ಧ ಹೋರಾಟಕ್ಕೆ ಬರುವಂತೆ ಮಾಡಿದ್ದಾನೆ'' ಎಂದು
ಮಾತನಾಡಿಕೊಂಡು,
7ಸಂಜೆಗೆ ಮುಂಚೆಯೇ ಓಡಿಹೋಗಿದ್ದರು. ಅವರು
ಎಲ್ಲವನ್ನೂ ಅಲ್ಲಿಯೇ ಬಿಟ್ಟುಹೋಗಿದ್ದರು. ಅವರು
ತಮ್ಮ ಗುಡಾರಗಳನ್ನು, ಕುದುರೆಗಳನ್ನು, ಹೇಸರ ಕತ್ತೆ
ಗಳನ್ನು ಅಲ್ಲಿಯೇ ಬಿಟ್ಟು ತಮ್ಮ ಜೀವರಕ್ಷಣೆಗಾಗಿ ಓಡಿ
ಹೋಗಿದ್ದರು.

### ಅರಾಮ್ಯರ ಪಾಳೆಯದಲ್ಲಿ ಕುಷ್ಠರೋಗಿಗಳು

8ಈ ಕುಷ್ಠರೋಗಿಗಳು ಪಾಳೆಯವು ಆರಂಭ
ವಾಗಿದ್ದಲ್ಲಿಗೆ ಬಂದು, ಒಂದು ಗುಡಾರದೊಳಕ್ಕೆ
ಹೋದರು. ಅವರು ಅಲ್ಲಿ ತಿಂದರು ಮತ್ತು ಕುಡಿದರು.
ನಂತರ ಈ ನಾಲ್ವರು ಬೆಳ್ಳಿಬಂಗಾರಗಳನ್ನು ಮತ್ತು
ಬಟ್ಟೆಗಳನ್ನು ಪಾಳೆಯದಿಂದ ಹೊರಗೆ ತೆಗೆದುಕೊಂಡು
ಹೋದರು. ಅವರು ಬೆಳ್ಳಿಬಂಗಾರಗಳನ್ನು ಮತ್ತು
ಬಟ್ಟೆಗಳನ್ನು ಅಡಗಿಸಿಟ್ಟರು. ನಂತರ ಅವರು ಹಿಂದಿರುಗಿ
ಬಂದು, ಮತ್ತೊಂದು ಗುಡಾರವನ್ನು ಪ್ರವೇಶಿಸಿದರು. ಆ
ಗುಡಾರದಿಂದಲೂ ಅವರು ವಸ್ತುಗಳನ್ನು ಕೊಂಡೊ
ಯ್ದರು. ಅವರು ಹೊರಗೆ ಹೋಗಿ ಅವುಗಳನ್ನು ಅಡಗಿ
ಸಿಟ್ಟರು. 9ಆಗ ಆ ಕುಷ್ಠರೋಗಿಗಳು, ''ನಾವು ತಪ್ಪು
ಮಾಡುತ್ತಿದ್ದೇವೆ! ಈ ದಿನ ನಮಗೆ ಶುಭವಾರ್ತೆ ಸಿಕ್ಕಿದೆ.
ಆದರೆ ನಾವು ನಿಶ್ಯಬ್ದದಿಂದ ಇದ್ದೇವೆ. ಸೂರ್ಯನು
ಮೇಲಕ್ಕೇರಿ ಬರುವವರೆಗೆ ನಾವು ಸುಮ್ಮನಿದ್ದರೆ ನಮ್ಮನ್ನು
ದಂಡಿಸಲಾಗುವುದು. ಈಗ ನಾವು ರಾಜನ ಮನೆಗೆ
ಹೋಗಿ ಅಲ್ಲಿ ವಾಸಿಸುವ ಜನರಿಗೆ ಇದನ್ನು ತಿಳಿ
ಸೋಣ'' ಎಂದು ಮಾತನಾಡಿಕೊಂಡರು.

### ಕುಷ್ಠರೋಗಿಗಳು ತಿಳಿಸಿದ ಶುಭವಾರ್ತೆ

10ಈ ಕುಷ್ಠರೋಗಿಗಳು ನಗರದ ಬಾಗಿಲಿಗೆ ಬಂದು
ದ್ವಾರಪಾಲಕರನ್ನು ಕರೆದು. ''ನಾವು ಅರಾಮ್ಯರ ಪಾಳೆ
ಯಕ್ಕೆ ಹೋಗಿದ್ದೆವು. ಆದರೆ ನಾವು ಜನರ ಧ್ವನಿಯನ್ನು
ಕೇಳಲೇ ಇಲ್ಲ. ಅಲ್ಲಿ ಜನರ ಸುಳಿವಿಲ್ಲ. ಕುದುರೆಗಳು
ಮತ್ತು ಹೇಸರಕತ್ತೆಗಳು ಕಟ್ಟಿಹಾಕಿದಂತೆಯೇ ಇವೆ.
ಗುಡಾರಗಳಿನ್ನೂ ಯಥಾಸ್ಥಿತಿಯಲ್ಲಿವೆ. ಆದರೆ ಸೈನಿಕ
ರೆಲ್ಲರೂ ಹೊರಟುಹೋಗಿದ್ದಾರೆ'' ಎಂದು ಹೇಳಿದರು.
11ಆಗ ನಗರದ ದ್ವಾರಪಾಲಕರು ಕೂಗುತ್ತಾ ರಾಜನ
ಮನೆಯಲ್ಲಿದ್ದ ಜನರಿಗೆ ಈ ಸಂಗತಿಗಳನ್ನು ತಿಳಿಸಿದರು.
12ಆಗ ರಾತ್ರಿಯಾಗಿದ್ದರೂ ರಾಜನು ತನ್ನ ಹಾಸಿಗೆಯಿಂದ
ಮೇಲಕ್ಕೆದ್ದನು. ರಾಜನು ತನ್ನ ಅಧಿಕಾರಿಗಳಿಗೆ, ''ಅರಾ
ಮ್ಯರ ಸೈನಿಕರು ಮಾಡಬೇಕೆಂದಿರುವುದನ್ನು ನಾನು
ನಿಮಗೆ ಹೇಳುತ್ತೇನೆ. ನಾವು ಬಹಳ ಹಸಿದಿದ್ದೇವೆಂಬುದು
ಅವರಿಗೆ ತಿಳಿದಿದೆ. ಅವರು ಹೊಲಗಳಲ್ಲಿ ಅಡಗಿಕೊಳ್ಳಲು
ಪಾಳೆಯವನ್ನು ಬಿಟ್ಟುಹೋಗಿದ್ದಾರೆ. 'ಇಸ್ರೇಲರು ನಗರ
ದಿಂದ ಹೊರಗೆ ಬಂದಾಗ, ನಾವು ಅವರನ್ನು ಜೀವಂತ
ವಾಗಿ ಸೆರೆಹಿಡಿದು ಅವರ ನಗರವನ್ನು ಪ್ರವೇಶಿಸಬಹುದು'
ಎಂದು ಅರಾಮ್ಯರು ಆಲೋಚಿಸಿದ್ದಾರೆ ''ಎಂದು
ಹೇಳಿದನು.
13ರಾಜನ ಅಧಿಕಾರಿಗಳಲ್ಲಿ ಒಬ್ಬನು, ''ನಮ್ಮಲ್ಲಿ
ಕೆಲವರು ನಗರದಲ್ಲಿ ಉಳಿದಿರುವ ಐದು ಕುದುರೆಗಳನ್ನು
ತೆಗೆದುಕೊಳ್ಳೋಣ. ನಗರದಲ್ಲಿ ಉಳಿದಿರುವ ಇಸ್ರೇಲಿನ
ಜನರಂತೆ ಹೇಗಾದರೂ ಈ ಕುದುರೆಗಳೂ ಬಹುಬೇಗ
ಸತ್ತುಹೋಗುತ್ತವೆ. ಈ ಜನರನ್ನು ಕಳುಹಿಸಿ ಅಲ್ಲಿ ಏನು
ನಡೆದಿದೆಯೆಂಬುದನ್ನು ನಾವು ತಿಳಿದುಕೊಳ್ಳೋಣ''
ಎಂದು ಹೇಳಿದನು.
14ಕೂಡಲೇ ರಾಜನು ಎರಡು ರಥಗಳನ್ನು ತರಿಸಿ
ಅರಾಮ್ಯರ ಸೇನೆಯು ಎಲ್ಲಿದೆ ಎಂಬುದನ್ನು ನೋಡಿ
ಕೊಂಡು ಬರುವುದಕ್ಕಾಗಿ ಅವರನ್ನು ಕಳುಹಿಸಿದನು.
15ಅವರು ಅರಾಮ್ಯರ ಸೇನೆಗಾಗಿ ಹುಡುಕಿಕೊಂಡು
ಜೋರ್ಡನ್ ನದಿಯವರೆಗೂ ಹೋದರು. ರಸ್ತೆಯ
ದಾರಿಯಲ್ಲೆಲ್ಲಾ ಬಟ್ಟೆಗಳು ಮತ್ತು ಆಯುಧಗಳು ಬಿದ್ದಿ
ದ್ದವು. ಅರಾಮ್ಯರು ಆತುರಾತುರವಾಗಿ ಹೋಗುವಾಗ
ಅವುಗಳನ್ನೆಲ್ಲಾ ಬಿಸಾಡಿ ಹೋಗಿದ್ದರು. ಸಂದೇಶಕರು
ಸಮಾರ್ಯಕ್ಕೆ ಹಿಂದಿರುಗಿ ಬಂದು ರಾಜನಿಗೆ ವಿಷಯ
ವನ್ನು ಹೇಳಿದರು.
16ಆಗ ಜನರು ಅರಾಮ್ಯರ ಪಾಳೆಯಕ್ಕೆ ಓಡುತ್ತಾ
ಹೋಗಿ, ಅಲ್ಲಿನ ಬೆಲೆಬಾಳುವ ವಸ್ತುಗಳನ್ನು ತೆಗೆದು
ಕೊಂಡರು. ಪ್ರತಿಯೊಬ್ಬರಿಗೂ ಹೇರಳವಾಗಿ ದೊರೆ
ಯಿತು. ಯೆಹೋವನು ಹೇಳಿದಂತೆಯೇ ಇದಾಯಿತು.
ಒಬ್ಬನು ಉತ್ತಮವಾದ ಒಂದು ಗೂಡೆ ಹಿಟ್ಟನ್ನು ಮತ್ತು
ಎರಡು ಗೂಡೆ ಜವೆಗೋಧಿಯನ್ನು ಕೇವಲ ಒಂದು
ರೂಪಾಯಿಗೆ ಕೊಳ್ಳಬಹುದಾಗಿತ್ತು!
17ರಾಜನು ತನಗೆ ಆಪ್ತನಾಗಿದ್ದ ಅಧಿಕಾರಿಯನ್ನು
ಪಟ್ಟಣದ ಬಾಗಿಲನ್ನು ಕಾಯಲು ಆರಿಸಿಕೊಂಡನು.
ಆದರೆ ಜನರು ಶತ್ರುಗಳ ಪಾಳೆಯದಲ್ಲಿದ್ದ ಆಹಾರವನ್ನು
ಪಡೆಯಲು ಓಡಿಹೋಗುವಾಗ ಅವನು ಜನರ ತುಳಿತಕ್ಕೆ
ಸಿಕ್ಕಿಕೊಂಡು ಸತ್ತುಹೋದನು. ರಾಜನು ಎಲೀಷನ
ಮನೆಗೆ ಬಂದಿದ್ದಾಗ, ದೇವಮನುಷ್ಯನು (ಎಲೀಷನು)
ಹೇಳಿದಂತೆಯೆ ಈ ಸಂಗತಿಗಳೆಲ್ಲಾ ಸಂಭವಿಸಿದವು.
18ಎಲೀಷನು, ''ಒಂದು ರೂಪಾಯಿಗೆ ಒಂದು ಗೂಡೆ
ಹಿಟ್ಟನ್ನೂ ಎರಡು ಗೂಡೆ ಜವೆಗೋಧಿಯನ್ನೂ
ಸಮಾರ್ಯ ನಗರದ ಊರುಬಾಗಿಲಿನಲ್ಲಿರುವ ಮಾರು
ಕಟ್ಟೆಯ ಸ್ಥಳದಲ್ಲಿ ಮಾರಲ್ಪಡುವುದು'' ಎಂದು ಮೊದಲೇ
ಹೇಳಿದ್ದನು. 19ಆದರೆ ಆ ಅಧಿಕಾರಿಯು ದೇವ

ಮನುಷ್ಯನಿಗೆ, ''ಯೆಹೋವನು ಪರಲೋಕಕ್ಕೆ ಕಿಟಕಿ ಗಳನ್ನು ಮಾಡಿಸಿದರೂ ಇದು ಸಂಭವಿಸುವುದಿಲ್ಲ!'' ಎಂದು ಉತ್ತರಿಸಿದನು. ಎಲೀಷನು ಆ ಅಧಿಕಾರಿಗೆ, ''ನೀನು ನಿನ್ನ ಸ್ವಂತ ಕಣ್ಣುಗಳಿಂದಲೇ ಇದನ್ನು ನೋಡುವೆ. ಆದರೆ ಆ ಆಹಾರದಲ್ಲಿ ಯಾವುದನ್ನೂ ನೀನು ತಿನ್ನುವುದಿಲ್ಲ'' ಎಂದು ಹೇಳಿದ್ದನು. [20]ಆ
ಅಧಿಕಾರಿಗೆ ಅಂದು ಹೇಳಿದಂತೆಯೇ ಆಯಿತು. ಅವನು ಊರ ಬಾಗಿಲಿನಲ್ಲಿ ಜನರ ತುಳಿತಕ್ಕೆ ಸಿಕ್ಕಿಕೊಂಡು ಸತ್ತು ಹೋದನು.

### ಶೂನೇಮಿನ ಸ್ತ್ರೀಯ ವಿದೇಶ ಪ್ರಯಾಣ

8 ಎಲೀಷನು ತಾನು ಮರಳಿ ಜೀವಿಸುವಂತೆ ಮಾಡಿದ ಬಾಲಕನ ತಾಯಿಯೊಂದಿಗೆ ಮಾತನಾಡಿದನು. ಎಲೀಷನು, ''ನೀನು ಮತ್ತು ನಿನ್ನ ಕುಟುಂಬವು ಬೇರೆ ದೇಶಕ್ಕೆ ಹೋಗಬೇಕು. ಏಕೆಂದರೆ ಈ ದೇಶದಲ್ಲಿ ಬರಗಾಲವು ಏಳು ವರ್ಷಗಳವರೆಗೆ ಇರಬೇಕೆಂದು ಯೆಹೋವನು ತೀರ್ಮಾನಿಸಿದ್ದಾನೆ.

[2]ದೇವಮನುಷ್ಯನು ಹೇಳಿದಂತೆಯೇ ಆ ಸ್ತ್ರೀಯು ಫಿಲಿಷ್ಟಿಯರ ದೇಶದಲ್ಲಿ ಏಳು ವರ್ಷಗಳ ಕಾಲ ನೆಲೆಸಲು
ತನ್ನ ಕುಟುಂಬದೊಂದಿಗೆ ಹೋದಳು. [3]ಏಳು ವರ್ಷಗಳು
ಮುಗಿದ ನಂತರ ಆ ಸ್ತ್ರೀಯು ಫಿಲಿಷ್ಟಿಯರ ದೇಶದಿಂದ ಹಿಂದಿರುಗಿ ಬಂದಳು.

ಆ ಸ್ತ್ರೀಯು ತನ್ನ ಮನೆಯನ್ನು ಮತ್ತು ಭೂಮಿಯನ್ನು ತನಗೆ ಮತ್ತೆ ಕೊಡಿಸುವಂತೆ ಕೇಳಲು ರಾಜನ ಬಳಿಗೆ ಹೋದಳು.

[4]ಆ ಸಮಯದಲ್ಲಿ ರಾಜನು ದೇವಮನುಷ್ಯನ (ಎಲೀಷನ) ಸೇವಕನಾದ ಗೇಹಜಿಯ ಸಂಗಡ ಮಾತ ನಾಡುತ್ತಿದ್ದನು. ರಾಜನು ಗೇಹಜಿಗೆ, ''ಎಲೀಷನು ಮಾಡಿರುವ ಮಹತ್ಕಾರ್ಯಗಳೆಲ್ಲವುಗಳನ್ನು ನನಗೆ ದಯವಿಟ್ಟು ತಿಳಿಸು'' ಎಂದು ಕೇಳಿದನು.

[5]ಎಲೀಷನು ಸತ್ತಬಾಲಕನಿಗೆ ಮತ್ತೆ ಜೀವವನ್ನು ಬರುವಂತೆ ಮಾಡಿದ್ದರ ಬಗ್ಗೆ ಗೇಹಜಿಯು ರಾಜನಿಗೆ ಹೇಳುತ್ತಿದ್ದನು. ಎಲೀಷನು ಮರಳಿ ಜೀವಬರಿಸಿದ ಬಾಲ ಕನ ತಾಯಿಯು ಆ ಸಮಯದಲ್ಲಿ ರಾಜನ ಬಳಿಗೆ ಹೋದಳು. ತನ್ನ ಮನೆಯನ್ನು ಮತ್ತು ಭೂಮಿಯನ್ನು ತನಗೆ ಕೊಡಿಸಬೇಕೆಂದು ಕೇಳಿಕೊಳ್ಳಲು ಆಕೆ ಬಂದಿದ್ದಳು. ಗೇಹಜಿಯು, ''ನನ್ನ ಒಡೆಯನೇ, ರಾಜನೇ, ಇವಳೇ ಆ ಸ್ತ್ರೀಯು ! ಎಲೀಷನು ಮರಳಿ ಜೀವಬರಿಸಿದ ಬಾಲಕನು ಇವನೇ!'' ಎಂದು ಹೇಳಿದನು.

[6]ರಾಜನು ಆ ಸ್ತ್ರೀಯನ್ನು ಕೇಳಿದಾಗ, ಅವಳು ತನಗೆ ಸಂಭವಿಸಿದ್ದನ್ನು ಮತ್ತು ತನಗಿದ್ದ ಇಚ್ಛೆಯನ್ನು ತಿಳಿಸಿದಳು.

ಆಗ ರಾಜನು ಅವಳಿಗೆ ಸಹಾಯ ಮಾಡಲು ಒಬ್ಬ ಅಧಿಕಾರಿಯನ್ನು ಕರೆದು, ''ಅವಳಿಗೆ ಸೇರಬೇಕಾದ ಆಸ್ತಿಯೆಲ್ಲವನ್ನೂ ಆಕೆಗೆ ಕೊಡಿಸು. ಅವಳು ದೇಶವನ್ನು ಬಿಟ್ಟಂದಿನಿಂದ ಈವರೆಗಿನ ಆಕೆಯ ಭೂಮಿಯ ಉತ್ಪಾದನೆಯನ್ನೂ ಅವಳಿಗೆ ಕೊಡಿಸು'' ಎಂದು ಹೇಳಿದನು.

### ಬೆನ್ಹದದನು ಹಜಾಯೇಲನನ್ನು ಎಲೀಷನ ಬಳಿಗೆ ಕಳುಹಿಸುವನು

[7]ಎಲೀಷನು ದಮಸ್ಕಕ್ಕೆ ಹೋದನು. ಅರಾಮ್ಯರ ರಾಜ ನಾದ ಬೆನ್ಹದದನಿಗೆ ಕಾಯಿಲೆಯಾಗಿತ್ತು. ಬೆನ್ಹದದನಿಗೆ ಒಬ್ಬನು, ''ದೇವಮನುಷ್ಯನು ಇಲ್ಲಿಗೆ ಬಂದಿದ್ದಾನೆ'' ಎಂದು ಹೇಳಿದನು.

[8]ಆಗ ರಾಜನಾದ ಬೆನ್ಹದದನು ಹಜಾಯೇಲನಿಗೆ, ''ದೇವಮನುಷ್ಯನನ್ನು ಕಾಣಲು ಒಂದು ಕಾಣಿಕೆಯನ್ನು ತೆಗೆದುಕೊಂಡು ಹೋಗು. ನಾನು ನನ್ನ ಕಾಯಿಲೆಯಿಂದ ಗುಣವಾಗುತ್ತೇನೆಯೇ ಇಲ್ಲವೇ ಎಂಬುದನ್ನು ತಿಳಿದುಕೊಳ್ಳಲು ಅವನು ಯೆಹೋವನಲ್ಲಿ ಪ್ರಾರ್ಥಿಸಲಿ'' ಎಂದು ಹೇಳಿದನು.

[9]ಹಜಾಯೇಲನು ತನ್ನೊಡನೆ ಕಾಣಿಕೆಯನ್ನು ತೆಗೆದುಕೊಂಡು ಎಲೀಷನನ್ನು ಭೇಟಿ ಮಾಡಲು ಹೋದನು. ಅವನು ದಮಸ್ಕದಿಂದ ಎಲ್ಲಾ ವಿಧವಾದ ಉತ್ತಮ ವಸ್ತುಗಳನ್ನು ನಲವತ್ತು ಒಂಟೆಗಳ ಮೇಲೆ ಹೇರಿಸಿಕೊಂಡು ಹೋದನು. ಹಜಾಯೇಲನು ಎಲೀಷನ ಬಳಿಗೆ ಹೋಗಿ, ''ನಿನ್ನ ಹಿಂಬಾಲಕನೂ ಅರಾಮ್ಯರ ರಾಜನೂ ಆದ ಬೆನ್ಹದದನು ನನ್ನನ್ನು ನಿನ್ನ ಬಳಿಗೆ ಕಳುಹಿಸಿದನು. ತನ್ನ ಕಾಯಿಲೆಯು ವಾಸಿಯಾಗುತ್ತದೆಯೇ ಇಲ್ಲವೇ ಎಂಬುದನ್ನು ಅವನು ನಿನ್ನಿಂದ ತಿಳಿದುಕೊಳ್ಳ ಬೇಕೆಂದಿದ್ದಾನೆ'' ಎಂದು ಹೇಳಿದನು.

[10]ಆಗ ಎಲೀಷನು ಹಜಾಯೇಲನಿಗೆ, ''ವಾಸಿಯಾಗುವುದು' ಎಂದು ಬೆನ್ಹದದನಿಗೆ ಹೇಳು. ಆದರೆ, 'ಅವನು ಸಾಯುವುದು ಖಂಡಿತ' ಎಂದು ಯೆಹೋವನು ನನಗೆ ತಿಳಿಸಿದ್ದಾನೆ'' ಎಂದು ಹೇಳಿದನು.

### ಹಜಾಯೇಲನ ಬಗ್ಗೆ ಎಲೀಷನ ಪ್ರವಾದನೆ

[11]ಹಜಾಯೇಲನು ನಾಚಿಕೊಳ್ಳುವ ತನಕ ಎಲೀಷನು ಅವನನ್ನು ಒಂದೇ ಸಮನೆ ನೋಡಿದನು. ನಂತರ ದೇವ ಮನುಷ್ಯನು ಅಳತೊಡಗಿದನು. [12]ಹಜಾಯೇಲನು,
''ಸ್ವಾಮೀ, ನೀವು ಅಳುವುದೇಕೇ'' ಎಂದು ಕೇಳಿದನು.

ಎಲೀಷನು, ''ನಾನು ಅಳುತ್ತಿರುವುದೇಕೆಂದರೆ ನೀನು ಇಸ್ರೇಲರಿಗೆ ಮಾಡುವ ಕೆಟ್ಟ ಕಾರ್ಯಗಳು ನನಗೆ ತಿಳಿದಿವೆ. ನೀನು ಅವರ ನಗರಗಳ ಕೋಟೆಗಳನ್ನು ಸುಟ್ಟು ಹಾಕುವೆ. ನೀನು ಅವರ ತರುಣರನ್ನು ಖಡ್ಗಗಳಿಂದ ಇರಿದುಕೊಲ್ಲುವೆ . ನೀನು ಅವರ ಮಕ್ಕಳನ್ನು ಕೊಂದು ಹಾಕುವೆ. ನೀನು ಅವರ ಗರ್ಭಿಣಿ ಸ್ತ್ರೀಯರನ್ನು ಸೀಳಿ ಹಾಕುವೆ'' ಎಂದು ಹೇಳಿದನು.

13ಹಜಾಯೇಲನು, ''ನಾನು ಬಲಾಢ್ಯನಾದ ಮನುಷ್ಯ
ನಲ್ಲ! ನಾನು ಈ ಮಹತ್ಕಾರ್ಯಗಳನ್ನು ಮಾಡಲಾಗು
ವುದಿಲ್ಲ!'' ಎಂದು ಹೇಳಿದನು.
ಎಲೀಷನು, ''ನೀನು ಅರಾಮ್ಯರ ರಾಜನಾಗುವೆ
ಯೆಂದು ಯೆಹೋವನು ನನಗೆ ತಿಳಿಸಿದ್ದಾನೆ''ಎಂದು
ಹೇಳಿದನು. 14ಹಜಾಯೇಲನು ಎಲೀಷನ ಬಳಿಯಿಂದ
ಹೊರಟು ತನ್ನ ರಾಜನ ಬಳಿಗೆ ಹೋದನು. ಬೆನ್ಹದದನು
ಹಜಾಯೇಲನಿಗೆ, ''ಎಲೀಷನು ನಿನಗೆ ಏನು ಹೇಳಿದನು''
ಎಂದು ಕೇಳಿದನು.
ಹಜಾಯೇಲನು, ''ನಿನ್ನ ಕಾಯಿಲೆಯು ವಾಸಿಯಾಗು
ತ್ತದೆಯೆಂದು ಎಲೀಷನು ನನಗೆ ಹೇಳಿದನು'' ಎಂದನು.

### ಬೆನ್ಹದದನನ್ನು ಹಜಾಯೇಲನು ಕೊಂದುಹಾಕುವನು

15ಆದರೆ ಮಾರನೆಯ ದಿನ ಹಜಾಯೇಲನು ಒಂದು
ಹೊದಿಕೆಯನ್ನು ತೆಗೆದುಕೊಂಡು ನೀರಿನಲ್ಲಿ ನೆನೆಸಿದನು.
ನಂತರ ಅವನು ಆ ಹೊದಿಕೆಯನ್ನು ಬೆನ್ಹದದನ ಮುಖದ
ಮೇಲೆ ಹಾಕಿ, ಅವನ ಉಸಿರುಕಟ್ಟಿಸಿ ಸಾಯಿಸಿದನು. ಹಜಾ
ಯೇಲನು ನೂತನ ರಾಜನಾದನು.

### ಯೆಹೋರಾಮನು ತನ್ನ ಆಳ್ವಿಕೆಯನ್ನು ಆರಂಭಿಸುವನು

16ಯೆಹೋಷಾಫಾಟನ ಮಗನಾದ ಯೆಹೋ
ರಾಮನು ಯೆಹೂದದ ರಾಜನಾಗಿದ್ದನು. ಅಹಾಬನ
ಮಗನಾದ ಯೋರಾಮನು ಇಸ್ರೇಲಿನ ರಾಜನಾಗಿದ್ದ
ಐದನೆಯ ವರ್ಷದಲ್ಲಿ ಯೆಹೋರಾಮನು ಆಳಲಾರಂಭಿ
ಸಿದನು. 17ಯೆಹೋರಾಮನು ಆಳುವುದಕ್ಕೆ ಆರಂಭಿ
ಸಿದಾಗ ಅವನಿಗೆ ಮೂವತ್ತೆರಡು ವರ್ಷ ವಯಸ್ಸಾಗಿತ್ತು.
ಅವನು ಜೆರುಸಲೇಮಿನಲ್ಲಿ ಎಂಟು ವರ್ಷ ಆಳಿದನು.
18ಆದರೆ ಯೆಹೋರಾಮನು ಇಸ್ರೇಲಿನ ರಾಜರುಗಳಂತೆ
ಜೀವಿಸಿದನು ಮತ್ತು ಯೆಹೋವನು ಕೆಟ್ಟಕಾರ್ಯ
ಗಳೆಂದು ಹೇಳಿದ್ದನ್ನೇ ಮಾಡಿದನು. ಯೆಹೋರಾಮನು
ಅಹಾಬನ ಕುಟುಂಬದ ಜನರಂತೆ ಜೀವಿಸಿದನು. ಅವನ
ಪತ್ನಿಯು ಅಹಾಬನ ಮಗಳಾದ್ದರಿಂದ ಯೆಹೋ
ರಾಮನು ಹೀಗೆ ಜೀವಿಸಿದನು. 19ಆದರೆ ಯೆಹೋವನು
ತನ್ನ ಸೇವಕನಾದ ದಾವೀದನಿಗೆ ವಾಗ್ದಾನ ಮಾಡಿದ್ದುದ
ರಿಂದ ಯೆಹೂದವನ್ನು ನಾಶಗೊಳಿಸಲಿಲ್ಲ. ಯಾವಾ
ಗಲೂ ದಾವೀದನ ಕುಟುಂಬದ ಒಬ್ಬನು ರಾಜನಾಗಿ
ರುತ್ತಾನೆಂದು ಯೆಹೋವನು ವಾಗ್ದಾನ ಮಾಡಿದ್ದನು.
20ಯೆಹೋರಾಮನ ಕಾಲದಲ್ಲಿ ಎದೋಮ್ಯರು
ಯೆಹೂದದ ಆಳ್ವಿಕೆಗೆ ವಿರುದ್ಧವಾಗಿ ದಂಗೆ ಎದ್ದರು.
ಎದೋಮ್ಯರು ತಮ್ಮಲ್ಲೇ ಒಬ್ಬ ರಾಜನನ್ನು ಆರಿಸಿ
ಕೊಂಡಿದ್ದರು.
21ಆಗ ಯೆಹೋರಾಮನು ಮತ್ತು ಅವನ ರಥಗಳೆಲ್ಲ
ಚಾಯೀರಿಗೆ ಹೋದವು. ಎದೋಮಿನ ಸೇನೆಯು
ಅವರನ್ನು ಸುತ್ತುವರಿಯಿತು. ಯೆಹೋರಾಮನು ತನ್ನ
ಅಧಿಕಾರಿಗಳೊಂದಿಗೆ ಅವರನ್ನು ರಾತ್ರಿಯಲ್ಲಿ ಮುತ್ತಿಗೆ
ಹಾಕಿ ತಪ್ಪಿಸಿಕೊಂಡರು. ಆದರೆ ಅವನ ಸೈನಿಕರು ತಮ್ಮ
(ಗುಡಾರಗಳಿಗೆ) ಮನೆಗಳಿಗೆ ಓಡಿಹೋದರು. 22ಹೀಗೆ
ಎದೋಮ್ಯರು ಯೆಹೂದದ ಆಳ್ವಿಕೆಯಿಂದ ಬೇರ್ಪ
ಟ್ಟರು. ಅವರು ಇಂದಿನತನಕ ಯೆಹೂದದ ಆಳ್ವಿಕೆಯಿಂದ
ಬೇರ್ಪಟ್ಟು ಸ್ವತಂತ್ರರಾಗಿದ್ದಾರೆ.
ಅದೇ ಸಮಯದಲ್ಲಿ ಲಿಬ್ನದವರು ಯೆಹೂದದ ಆಳ್ವಿಕೆ
ಯಿಂದ ಬೇರೆಯಾದರು.
23ಯೆಹೂದದ ರಾಜರುಗಳು ಎಂಬ ಇತಿಹಾಸ
ಪುಸ್ತಕದಲ್ಲಿ ಯೆಹೋರಾಮನು ಮಾಡಿದ ಇತರ ಎಲ್ಲಾ
ಕಾರ್ಯಗಳನ್ನು ಬರೆಯಲಾಗಿದೆ.
24ಯೆಹೋರಾಮನು ಸತ್ತುಹೋದನು. ಅವನನ್ನು
ದಾವೀದನಗರದಲ್ಲಿ ಅವನ ಪೂರ್ವಿಕರ ಬಳಿ ಸಮಾಧಿ
ಮಾಡಿದರು. ಯೆಹೋರಾಮನ ಮಗನಾದ ಅಹಜ್ಯನು
ನೂತನ ರಾಜನಾದನು.

### ಅಹಜ್ಯನು ತನ್ನ ಆಳ್ವಿಕೆಯನ್ನು ಆರಂಭಿಸಿದನು

25ಅಹಾಬನ ಮಗನಾದ ಯೋರಾಮನು ಇಸ್ರೇಲಿನ
ರಾಜನಾಗಿದ್ದ ಹನ್ನೆರಡನೆಯ ವರ್ಷದಲ್ಲಿ ಯೆಹೋ
ರಾಮನ ಮಗನಾದ ಅಹಜ್ಯನು ಯೆಹೂದದ ರಾಜ
ನಾದನು. 26ಅಹಜ್ಯನು ಆಳಲಾರಂಭಿಸಿದಾಗ ಅವನಿಗೆ
ಇಪ್ಪತ್ತೆರಡು ವರ್ಷ ವಯಸ್ಸಾಗಿತ್ತು. ಅವನು ಜೆರುಸ
ಲೇಮಿನಲ್ಲಿ ಒಂದು ವರ್ಷ ಆಳಿದನು. ಅವನ ತಾಯಿಯ
ಹೆಸರು ಅತಲ್ಯ. ಅವಳು ಇಸ್ರೇಲಿನ ರಾಜನಾದ ಒಮ್ರಿಯ
ಮಗಳು. 27ಯೆಹೋವನು ಕೆಟ್ಟದ್ದೆಂದು ಹೇಳಿದ ಕಾರ್ಯ
ಗಳನ್ನು ಅಹಜ್ಯನು ಮಾಡಿದನು. ಅಹಜ್ಯನು ಅಹಾಬನ
ಕುಟುಂಬದ ಜನರಂತೆ ಜೀವಿಸಿದ್ದನು. ಅಹಜ್ಯನು
ಅಹಾಬನ ಅಳಿಯನಾದ್ದರಿಂದ ಅವನು ಹೀಗೆ
ಜೀವಿಸಿದನು.

### ಹಜಾಯೇಲನ ವಿರುದ್ಧದ ಯುದ್ಧದಲ್ಲಿ ಯೋರಾಮನು ಗಾಯಗೊಂಡನು

28ಅಹಜ್ಯನು ಅಹಾಬನ ಮಗನಾದ ಯೋರಾಮನ
ಜೊತೆಯಲ್ಲಿ ಅರಾಮ್ಯರ ರಾಜನಾದ ಹಜಾಯೇಲನ
ವಿರುದ್ಧ ಯುದ್ಧ ಮಾಡಲು ರಾಮೋತ್‌ಗಿಲ್ಯಾದಿಗೆ
ಹೋದನು. ಅರಾಮ್ಯರು ಯೋರಾಮನನ್ನು ಗಾಯ
ಗೊಳಿಸಿದರು. 29ರಾಜ ಯೋರಾಮನು ಹಜಾಯೇಲನ
ವಿರುದ್ಧವಾಗಿ ಹೋರಾಡಿದಾಗ ರಾಮಾದಲ್ಲಿ ಅರಾಮ್ಯ
ದಿಂದ ತನಗಾದ ಗಾಯಗಳನ್ನು ಗುಣಪಡಿಸಿಕೊಳ್ಳಲು
ಇಸ್ರೇಲಿನ ರಾಜನು ಇಜ್ರೇಲ್ ಎಂಬ ಪಟ್ಟಣಕ್ಕೆ ಹಿಂತಿ
ರುಗಿದನು. ಯೆಹೂದದ ರಾಜನೂ ಯೆಹೋರಾಮನ
ಮಗನೂ ಆದ ಅಹಜ್ಯನು, ಅಹಾಬನ ಮಗನಾದ

ಯೋರಾಮನನ್ನು ನೋಡಲು ಇಜ್ರೇಲಿಗೆ ಹೋದನು.
ಯಾಕೆಂದರೆ ಅವನಿಗೆ ಕಾಯಿಲೆಯಾಗಿತ್ತು.

### ಯೇಹುವನ್ನು ಅಭೀಷೇಕಿಸುವಂತೆ ಒಬ್ಬ ಯುವಪ್ರವಾದಿಗೆ ಎಲೀಷನು ತಿಳಿಸಿದನು

9 ಪ್ರವಾದಿಯಾದ ಎಲೀಷನು ಪ್ರವಾದಿಗಳ ಗುಂಪಿ
ನಿಂದ ಒಬ್ಬನನ್ನು ಕರೆದು ಅವನಿಗೆ, ''ಎಣ್ಣೆಯಿರುವ
ಈ ಸಣ್ಣ ಸೀಸೆಯನ್ನು ನಿನ್ನ ಕೈಗಳಲ್ಲಿ ತೆಗೆದುಕೊಂಡು
ರಾಮೋತ್‌ಗಿಲ್ಯಾದಿಗೆ ಹೋಗು. 2ನೀನು ಅಲ್ಲಿಗೆ
ಹೋದಾಗ ಯೆಹೋಷಾಫಾಟನ ಮಗನಾದ ಯೇಹು
ವನ್ನು ಕಂಡುಹಿಡಿ. ಯೆಹೋಷಾಫಾಟನು ನಿಂಷಿಯ
ಮಗ. ಅಲ್ಲಿಗೆ ಹೋಗಿ ಅವನನ್ನು ಅವನ ಸೋದರರ
ಮಧ್ಯದಿಂದ ಮೇಲಕ್ಕೆಬ್ಬಿಸಿ ಒಂದು ಒಳಕೋಣೆಗೆ ಕರೆದು
ಕೊಂಡು ಹೋಗು. 3ಯೇಹುವಿನ ತಲೆಯ ಮೇಲೆ ಈ
ಸಣ್ಣ ಸೀಸೆಯಲ್ಲಿರುವ ಎಣ್ಣೆಯನ್ನು ಸುರಿದುಬಿಡು.
ನಂತರ ಅವನಿಗೆ, 'ಯೆಹೋವನು ಇಂತೆನ್ನುತ್ತಾನೆ: ನಾನು
ನಿನ್ನನ್ನು ಇಸ್ರೇಲಿನ ನೂತನ ರಾಜನನ್ನಾಗಿ ಅಭಿಷೇಕಿ
ಸಿದ್ದೇನೆ!' ಎಂದು ಹೇಳು. ಆ ಬಳಿಕ ಬಾಗಿಲನ್ನು ತೆಗೆದು
ಓಡಿಬಿಡು. ಅಲ್ಲಿ ಇರಬೇಡ!'' ಎಂದು ಹೇಳಿದನು.

4ತರುಣ ಪ್ರವಾದಿಯು ರಾಮೋತ್‌ಗಿಲ್ಯಾದಿಗೆ
ಹೋದನು. 5ಆ ತರುಣನು ಅಲ್ಲಿಗೆ ಬಂದಾಗ ಸೇನಾಧಿಪತಿ
ಗಳು ಕುಳಿತಿರುವುದನ್ನು ನೋಡಿ, ''ಸೇನಾಧಿಪತಿಯೇ,
ನಿನಗೆ ಒಂದು ಸಂದೇಶವಿದೆ''ಎಂದು ಹೇಳಿದನು.

ಯೇಹುವು, ''ನಾವೆಲ್ಲರೂ ಇಲ್ಲಿದ್ದೇವೆ. ನಮ್ಮಲ್ಲಿ
ಸಂದೇಶವಿರುವುದು ಯಾರಿಗೆ?'' ಎಂದು ಕೇಳಿದನು.

ಆ ತರುಣನು, ''ಸಂದೇಶವು ಸೇನಾಧಿಪತಿಯಾದ
ನಿನಗೆ''ಎಂದು ಹೇಳಿದನು.

6ಯೇಹು ಮೇಲೆದ್ದು ಮನೆಯೊಳಕ್ಕೆ ಹೋದನು. ಆಗ
ಆ ತರುಣ ಪ್ರವಾದಿಯು ಯೇಹುವಿನ ತಲೆಯ ಮೇಲೆ
ಎಣ್ಣೆಯನ್ನು ಸುರಿದು ಯೇಹುವಿಗೆ, ''ಇಸ್ರೇಲಿನ ದೇವ
ರಾದ ಯೆಹೋವನು ಇಂತೆನ್ನುವನು: 'ಯೆಹೋವನ
ಜನರಾದ ಇಸ್ರೇಲರಿಗೆ ನೂತನ ರಾಜನನ್ನಾಗಿ ನಾನು
ನಿನ್ನನ್ನು ಅಭಿಷೇಕಿಸುತ್ತಿದ್ದೇನೆ. 7ನೀನು ನಿನ್ನ ರಾಜನಾದ
ಅಹಾಬನ ಕುಟುಂಬವನ್ನು ನಾಶಗೊಳಿಸಲೇಬೇಕು. ನನ್ನ
ಸೇವಕರಾದ ಪ್ರವಾದಿಗಳ ಸಾವಿಗೆ ಮತ್ತು ಯೆಹೋವನ
ಸೇವಕರನ್ನು ಕೊಲ್ಲಿಸಿದುದಕ್ಕೆ ಈಜೆಬೆಲಳನ್ನು ನಾನು ಈ
ರೀತಿ ಶಿಕ್ಷಿಸುತ್ತೇನೆ. 8ಅಹಾಬನ ಕುಟುಂಬವೆಲ್ಲ ಸಾಯು
ತ್ತದೆ. ಅಹಾಬನ ಕುಟುಂಬದಲ್ಲಿ ಒಬ್ಬ ಗಂಡಸಾದರೂ
ಜೀವಿಸಿರಲು ನಾನು ಬಿಡುವುದಿಲ್ಲ. ಆ ಗಂಡಸು ಇಸ್ರೇಲಿ
ನಲ್ಲಿ ಸ್ವತಂತ್ರವಾಗಿರಲೀ ಇಲ್ಲವೆ ಗುಲಾಮನಾಗಿರಲೀ
ಅದು ನನಗೆ ಮುಖ್ಯವಲ್ಲ. 9 ನೆಬಾಟನ ಮಗನಾದ
ಯಾರೊಬ್ಬಮನ ಕುಟುಂಬದಂತೆ ಮತ್ತು ಆಹೀಯನ
ಮಗನಾದ ಬಾಷಾನ ಕುಟುಂಬದಂತೆ ಅಹಾಬನ
ಕುಟುಂಬವನ್ನೂ ನಾಶ ಮಾಡುತ್ತೇನೆ. 10ಇಜ್ರೇಲಿನ
ಪ್ರದೇಶದಲ್ಲಿ ಈಜೆಬೆಲಳನ್ನು ನಾಯಿಗಳು ಕಿತ್ತುತಿನ್ನು
ತ್ತವೆ. ಈಜೆಬೆಲಳನ್ನು ಸಮಾಧಿಮಾಡುವುದಿಲ್ಲ'' ಎಂದು
ಹೇಳಿದನು.

ಬಳಿಕ ಯುವಪ್ರವಾದಿಯು ಬಾಗಿಲನ್ನು ತೆರೆದು ಓಡಿ
ಹೋದನು.

### ಯೇಹುವು ರಾಜನೆಂದು ಸೇವಕರು ಘೋಷಿಸುವರು

11ಯೇಹುವು ತನ್ನ ರಾಜನ ಅಧಿಕಾರಿಗಳ ಬಳಿಗೆ
ಹಿಂದಿರುಗಿದನು. ಒಬ್ಬ ಅಧಿಕಾರಿಯು ಯೇಹುವಿಗೆ,
''ಶುಭವಾರ್ತೆಯೇ? ಆ ಹುಚ್ಚನು ನಿನ್ನ ಬಳಿಗೆ ಬಂದು
ದ್ದೇಕೆ?''ಎಂದು ಕೇಳಿದರು.

ಯೇಹುವು ಸೇವಕರಿಗೆ, ''ನೀವು ಆ ಮನುಷ್ಯನನ್ನು
ಬಲ್ಲವರಾಗಿದ್ದೀರಿ; ಅವನ ಹುಚ್ಚಾಟದ ಮಾತುಗಳೂ
ನಿಮಗೆ ತಿಳಿದಿವೆ'' ಎಂದು ಉತ್ತರಿಸಿದನು.

12ಆ ಅಧಿಕಾರಿಗಳು, ''ಇಲ್ಲ! ನಮಗೆ ನಿಜವನ್ನು ಹೇಳು.
ಅವನು ಹೇಳಿದುದೇನು?'' ಎಂದು ಕೇಳಿದರು. ಆ
ತರುಣ ಪ್ರವಾದಿಯು ತಿಳಿಸಿದ್ದ ಸಂಗತಿಗಳನ್ನು ಯೇಹುವು
ಆ ಆಧಿಕಾರಿಗಳಿಗೆ ಹೇಳಿದನು. ಯೇಹುವು ಅವರಿಗೆ,
''ಅವನು ಹೇಳಿದ್ದೇನಂದರೆ, ಯೆಹೋವನು ಇಂತೆನ್ನು
ವನು: ಇಸ್ರೇಲಿನ ನೂತನ ರಾಜನನ್ನಾಗಿ ನಿನ್ನನ್ನು ನಾನು
ಅಭಿಷೇಕಿಸಿದ್ದೇನೆ''ಎಂದು ಹೇಳಿದನು.

13ಆಗ ಪ್ರತಿಯೊಬ್ಬ ಅಧಿಕಾರಿಯೂ ತಮ್ಮತಮ್ಮ ನಿಲು
ವಂಗಿಗಳನ್ನು ತೆಗೆದು, ಅವುಗಳನ್ನು ಮೆಟ್ಟಿಲುಗಳ ಮೇಲೆ,
ಯೇಹುವಿನ ಮುಂದೆ ಇಟ್ಟರು. ಅನಂತರ ಅವರು
ತುತ್ತೂರಿಯನ್ನೂದಿ, ''ಯೇಹು ರಾಜನು!'' ಎಂದು
ಘೋಷಿಸಿದರು.

### ಯೇಹು ಇಜ್ರೇಲಿಗೆ ಹೋಗುವನು

14ಯೆಹೋಷಾಫಾಟನ ಮಗನೂ ನಿಂಷಿಯ ಮೊಮ್ಮ
ಗನೂ ಆದ ಯೇಹುವು ಯೋರಾಮನ ವಿರುದ್ಧ ಒಳ
ಸಂಚು ಮಾಡಿದನು.

ಆ ಸಮಯದಲ್ಲಿ ರಾಮೋತ್‌ಗಿಲ್ಯಾದನ್ನು ಅರಾಮ್ಯರ
ರಾಜನಾದ ಹಜಾಯೇಲನಿಂದ ರಕ್ಷಿಸಲು, ಯೋರಾ
ಮನೂ ಇಸ್ರೇಲರೂ ಪ್ರಯತ್ನಿಸಿದ್ದರು. 15ಆದರೆ ರಾಜ
ನಾದ ಯೋರಾಮನಿಗೆ ಅರಾಮ್ಯರು ಗಾಯ
ಗೊಳಿಸಿದ್ದರಿಂದ ಅವನು ವಾಸಿಮಾಡಿಕೊಳ್ಳಲು ಇಜ್ರೇ
ಲಿಗೆ ಹಿಂದಿರುಗಿ ಬಂದಿದ್ದನು. (ಅರಾಮ್ಯರ ರಾಜನಾದ
ಹಜಾಯೇಲನ ವಿರುದ್ಧ ಯೋರಾಮನು ಹೋರಾಟ
ಮಾಡಿದಾಗ ಅರಾಮ್ಯರು ಅವನನ್ನು ಗಾಯ
ಗೊಳಿಸಿದ್ದರು.) ಯೇಹು ಅಧಿಕಾರಿಗಳಿಗೆ, ''ನಾನು
ನೂತನ ರಾಜನೆಂದು ನೀವು ಒಪ್ಪಿಕೊಂಡರೆ, ಈ ಸುದ್ದಿ
ಯನ್ನು ಇಜ್ರೇಲಿನಲ್ಲಿ ಹೇಳಲು ಯಾರೂ ನಗರದಿಂದ

ತಪ್ಪಿಸಿಕೊಂಡು ಹೋಗಲು ಅವಕಾಶ ಕೊಡದಿರಿ''ಎಂದು ಹೇಳಿದನು.

16ಯೋರಾಮನು ಇಜ್ರೇಲಿನಲ್ಲಿ ವಿಶ್ರಾಂತಿ ಪಡೆಯುತ್ತಿದ್ದನು. ಯೇಹು ರಥದಲ್ಲಿ ಇಜ್ರೇಲಿಗೆ ಹೋದನು. ಯೆಹೂದದ ಅರಸನಾದ ಅಹಜ್ಯನೂ ಯೋರಾಮನನ್ನು ನೋಡಲು ಇಜ್ರೇಲಿಗೆ ಬಂದಿದ್ದನು.

17ಇಜ್ರೇಲಿನ ಬುರುಜಿನಲ್ಲಿ ಒಬ್ಬ ಕಾವಲುಗಾರನು ನಿಂತಿದ್ದನು. ಅವನು ಯೇಹುವಿನ ದೊಡ್ಡ ಗುಂಪು ಬರುತ್ತಿರುವುದನ್ನು ನೋಡಿದನು. ಅವನು, ''ನಾನು ಜನರ ದೊಡ್ಡ ಗುಂಪನ್ನು ನೋಡುತ್ತಿರುವೆನು'' ಎಂದು ಹೇಳಿದನು.

ಯೋರಾಮನು, ''ಅವರನ್ನು ಸಂಧಿಸಲು ಯಾರನ್ನಾದರೂ ಕುದುರೆಯ ಮೇಲೆ ಕಳುಹಿಸಿ. 'ಶುಭವಾರ್ತೆಯುಂಟೋ?' ಎಂದು ಅವನು ಅವರನ್ನು ಕೇಳಲಿ'' ಎಂದು ಹೇಳಿದನು.

18ಯೇಹುವನ್ನು ಸಂಧಿಸಲು ಒಬ್ಬನು ಕುದುರೆಯ ಮೇಲೆ ಹೋಗಿ,''ರಾಜನಾದ ಯೋರಾಮನು 'ಶುಭವಾರ್ತೆಯುಂಟೋ?' ಎಂದು ಕೇಳುತ್ತಾನೆ'' ಅಂದನು.

ಯೇಹುವು, ''ನಮ್ಮ ಶುಭದಿಂದ ನೀನು ಮಾಡುವುದೇನಿದೆ ! ಬಾ, ನನ್ನನ್ನು ಹಿಂಬಾಲಿಸು'' ಎಂದು ಹೇಳಿದನು. ಕಾವಲುಗಾರನು ಯೋರಾಮನಿಗೆ, ''ಆ ಗುಂಪಿನ ಬಳಿಗೆ ಹೋದ ಸಂದೇಶಕನು, ಈವರೆವಿಗೂ ಹಿಂದಿರುಗಿ ಬರಲೇ ಇಲ್ಲ'' ಎಂದು ಹೇಳಿದನು.

19ಆಗ ಯೋರಾಮನು ಎರಡನೆಯವನನ್ನು ಕುದುರೆಯ ಮೇಲೆ ಕಳುಹಿಸಿದನು. ಅವನು ಯೇಹುವಿನ ಗುಂಪಿನ ಬಳಿಗೆ ಬಂದು, ''ರಾಜನಾದ ಯೋರಾಮನು, 'ಶುಭವಾರ್ತೆಯುಂಟೋ?' ಎಂದು ಕೇಳುತ್ತಿರುವನು'' ಎಂದು ಹೇಳಿದನು. ಯೇಹುವು, ''ನಮ್ಮ ಶುಭದಿಂದ ನೀನು ಮಾಡುವುದೇನಿದೆ! ಬಾ, ನನ್ನನ್ನು ಹಿಂಬಾಲಿಸು'' ಎಂದು ಹೇಳಿದನು.

20ಕಾವಲುಗಾರನು ಯೋರಾಮನಿಗೆ, ''ಆ ಗುಂಪಿನ ಬಳಿಗೆ ಹೋದ ಎರಡನೆಯವನೂ ಈವರೆವಿಗೂ ಹಿಂದುರುಗಿ ಬರಲೇ ಇಲ್ಲ. ರಥವನ್ನು ಓಡಿಸುತ್ತಿರುವವನು ಹುಚ್ಚನಂತೆ ರಥವನ್ನು ಓಡಿಸುತ್ತಿರುವುದನ್ನು ನೋಡಿದರೆ ಅವನು ನಿಂಷಿಯ ಮೊಮ್ಮಗನಾದ ಯೇಹುವಿರಬೇಕು!''
ಎಂದು ಹೇಳಿದನು. 21ಯೋರಾಮನು, ''ನನ್ನ ರಥವನ್ನು
ಸಿದ್ಧಗೊಳಿಸು!'' ಎಂದು ಹೇಳಿದನು.

ಯೋರಾಮನ ಸೇವಕನು ರಥವನ್ನು ಸಿದ್ಧಗೊಳಿಸಿದನು. ಇಸ್ರೇಲಿನ ರಾಜನಾದ ಯೋರಾಮನು ಮತ್ತು ಯೆಹೂದದ ರಾಜನಾದ ಅಹಜ್ಯನು ಯೇಹುವನ್ನು ಭೇಟಿ ಮಾಡಲು ತಮ್ಮ ರಥಗಳಲ್ಲಿ ಹೋದರು. ಅವರು ಇಜ್ರೇಲಿನವನಾದ ನಾಬೋತನ ಹೊಲದಲ್ಲಿ ಯೇಹುವನ್ನು ಸಂಧಿಸಿದರು.

22ಯೋರಾಮನು ಯೇಹುವನ್ನು, ''ಶುಭವಾರ್ತೆಯುಂಟೋ'' ಎಂದು ಕೇಳಿದನು.

ಯೇಹುವು, ''ನಿನ್ನ ತಾಯಿಯಾದ ಈಜೆಬೆಲಳು ಅನೇಕ ಅನೈತಿಕ ಮತ್ತು ಮಾಂತ್ರಿಕ ಕಾರ್ಯಗಳನ್ನು ಮಾಡುತ್ತಿರುವತನಕ ಶುಭವಿರುವುದಿಲ್ಲ'' ಎಂದು ಉತ್ತರಿಸಿದನು.

23ಯೋರಾಮನು ಓಡಿಹೋಗಲು ತನ್ನ ಕುದುರೆಗಳನ್ನು ತಿರುಗಿಸಿಕೊಂಡನು. ಯೋರಾಮನು ಅಹಜ್ಯನಿಗೆ, ''ಅಹಜ್ಯನೇ, ಇದು ಒಂದು ತಂತ್ರ!''ಎಂದು ಹೇಳಿದನು.

24ಆದರೆ ಯೇಹು ತನ್ನ ಬಿಲ್ಲನ್ನು ಸೆಳೆದು, ಶಕ್ತಿಯನ್ನೆಲ್ಲ ಒಗ್ಗೂಡಿಸಿ ಯೋರಾಮನ ಬೆನ್ನಿಗೆ ಬಾಣದಿಂದ ಹೊಡೆದನು. ಬಾಣವು ಯೋರಾಮನ ಹೃದಯವನ್ನು ಭೇದಿಸಿತು. ಯೋರಾಮನು ತನ್ನ ರಥದಲ್ಲಿಯೇ ಸತ್ತುಬಿದ್ದನು.

25ಯೇಹು ತನ್ನ ರಥದ ಸಾರಥಿಯಾದ ಬಿದ್ಕರನಿಗೆ, ''ಯೋರಾಮನ ದೇಹವನ್ನು ಎತ್ತಿ ಇಜ್ರೇಲಿಯನಾದ ನಾಬೋತನ ಹೊಲದಲ್ಲಿ ಎಸೆದುಬಿಡು. ನಾನು ಮತ್ತು ನೀನು ಯೋರಾಮನ ತಂದೆಯಾದ ಅಹಾಬನ ಸಂಗಡ
ಹೋಗುತ್ತಿರುವಾಗ 26ಯೆಹೋವನು, 'ನೀನು ನಿನ್ನೆ
ನಾಬೋತನ ಮತ್ತು ಅವನ ಮಕ್ಕಳ ರಕ್ತವನ್ನು ಯಾವ ಹೊಲದಲ್ಲಿ ಸುರಿಸಿದೆಯೋ ಅದೇ ಹೊಲದಲ್ಲಿ ನಿನಗೆ ಮುಯ್ಯಿ ತೀರಿಸುವೆನು' ಎಂದು ಪ್ರವಾದಿಯಿಂದ ಹೇಳಿಸಿದ್ದು ನಿನಗೆ ನೆನಪಿರುವುದಲ್ಲವೇ? ಯೆಹೋವನ ಮಾತು ನೆರವೇರುವಂತೆ ಯೋರಾಮನ ದೇಹವನ್ನು ತೆಗೆದು ಅದೇ ಹೊಲದಲ್ಲಿ ಎಸೆದುಬಿಡು!'' ಎಂದು ಹೇಳಿದನು.

27ಯೆಹೂದದ ರಾಜನಾದ ಅಹಜ್ಯನು ಇದನ್ನು ಕಂಡು ತೋಟದ ಮನೆಯ ಮೂಲಕ ಓಡಿಹೋದನು. ಯೇಹು ಅವನನ್ನು ಹಿಂಬಾಲಿಸಿಕೊಂಡು ಹೋಗಿ, ''ಅಹಜ್ಯನನ್ನೂ ಅವನ ರಥದಲ್ಲಿಯೇ ಹೊಡೆಯಿರಿ!'' ಎಂದು ಹೇಳಿದನು.

ಯೇಹುವಿನ ಜನರು ಅಹಜ್ಯನನ್ನು ಇಬ್ಲೆಯಾಮಿನ ಬಳಿಯಿರುವ ಗೂರ್‌ನಲ್ಲಿ ಹೊಡೆದುಹಾಕಿದರು. ಅಹಜ್ಯನು ಮೆಗಿದ್ದೋವಿಗೆ ಓಡಿಹೋದರೂ ಅಲ್ಲಿ ಸತ್ತು
ಹೋದನು. 28ಅಹಜ್ಯನ ಸೇವಕರು ಅವನ ದೇಹವನ್ನು
ಜೆರುಸಲೇಮಿಗೆ ತಂದರು. ಅವನನ್ನು ದಾವೀದ ನಗರದಲ್ಲಿ ಅವನ ಪೂರ್ವಿಕರ ಬಳಿಯಲ್ಲಿ ಸಮಾಧಿ
ಮಾಡಿದರು. 29ಯೋರಾಮನು ಇಸ್ರೇಲಿನ ರಾಜನಾಗಿದ್ದ
ಹನ್ನೊಂದನೆಯ ವರ್ಷದಲ್ಲಿ ಅಹಜ್ಯನು ಯೆಹೂದದ ರಾಜನಾದನು.

### ಈಜೆಬೆಲಳ ಭೀಕರ ಸಾವು

30ಯೇಹುವು ಇಜ್ರೇಲಿಗೆ ಹೋದನು. ಈಜೆಬೆಲಳಿಗೆ ಈ ಸುದ್ದಿಯು ತಿಳಿಯಿತು. ಅವಳು ತಲೆಗೂದಲನ್ನು

ಸುಂದರವಾಗಿ ಕಟ್ಟಿಕೊಂಡು, ಅಲಂಕರಸಿಕೊಂಡಳು.
ನಂತರ ಅವಳು ಹೊರಗೆ ನೋಡುತ್ತಾ ಕಿಟಕಿಯ ಹತ್ತಿರ
ನಿಂತುಕೊಂಡಳು. 31ಯೇಹು ನಗರದೊಳಕ್ಕೆ ಪ್ರವೇಶಿಸಿ
ದನು. ಈಜೆಬೆಲಳು, ‘‘ಜಿಮ್ರಿ* ಕ್ಷೇಮವೇ! ಅವ
ನಂತೆಯೇ ನೀನೂ ನಿನ್ನ ಒಡೆಯನನ್ನು ಕೊಂದು
ಹಾಕಿದೆ!’’ ಎಂದಳು.
32ಯೇಹು ಕಿಟಕಿಯ ಕಡೆ ಮೇಲೆ ನೋಡಿದನು.
ಅವನು, ‘‘ನನ್ನ ಪಕ್ಷದಲ್ಲಿರುವವರು ಯಾರು? ಯಾರಿ
ದ್ದೀರಿ?’’ ಎಂದನು.
ಆ ಕಿಟಕಿಯಿಂದ ಇಬ್ಬರು ಮೂವರು ಕಂಚುಕಿಗಳು
ಯೇಹುವಿನತ್ತ ನೋಡಿದರು. 33ಯೇಹುವು ‘‘ಈಜೆಬೆಲ
ಳನ್ನು ಹೊರಕ್ಕೆ ಎಸೆಯಿರಿ!’’ ಎಂದು ಅವರಿಗೆ ಹೇಳಿದನು.
ಆಗ ಕಂಚುಕಿಗಳು ಈಜೆಬೆಲಳನ್ನು ಕೆಳಕ್ಕೆ ಎಸೆದರು.
ಈಜೆಬೆಲಳ ರಕ್ತವು ಗೋಡೆಗಳ ಮೇಲೆ ಮತ್ತು
ಕುದುರೆಗಳ ಮೇಲೆ ಚಿಮ್ಮಿತು. ಕುದುರೆಗಳು ಈಜೆಬೆಲಳ
ದೇಹದ ಮೇಲೆ ತುಳಿದಾಡಿದವು. 34ಯೇಹುವು ಮನೆ
ಯೊಳಕ್ಕೆ ಹೋಗಿ ಅನ್ನಪಾನಗಳನ್ನು ತೆಗೆದುಕೊಂಡನು.
ನಂತರ ಅವನು, ‘‘ಈಗ ಶಾಪಗ್ರಸ್ತಳಾದ ಆ ಸ್ತ್ರೀಯನ್ನು
ನೋಡಿ. ಅವಳು ರಾಜನ ಮಗಳಾದ್ದರಿಂದ ಸಮಾಧಿ
ಮಾಡಿ’’ಎಂದು ಹೇಳಿದನು.
35ಈಜೆಬೆಲಳನ್ನು ಸಮಾಧಿಮಾಡಲು ಜನರು
ಹೋದರು. ಆದರೆ ಅವರಿಗೆ ಅವಳ ದೇಹವು ಸಿಗಲಿಲ್ಲ.
ಅವರಿಗೆ ಅವಳ ತಲೆಬುರುಡೆ, ಕೈಕಾಲುಗಳು ಮಾತ್ರ
ಸಿಕ್ಕಿದವು. 36ಜನರು ಹಿಂದಿರುಗಿ ಬಂದು ಯೇಹುವಿಗೆ
ಅದನ್ನು ಹೇಳಿದರು. ಯೇಹುವು, ‘‘ಯೆಹೋವನು ತನ್ನ
ಸೇವಕನೂ ತಿಷ್ಬೀಯನೂ ಆದ ಎಲೀಯನಿಗೆ ಈ ರೀತಿ
ಸಂದೇಶ ನೀಡಲು ಹೇಳಿದ್ದನು. ಎಲೀಯನು ಹೇಳಿದ್ದೇ
ನಂದರೆ: ಇಜ್ರೇಲ್ ಪ್ರದೇಶದಲ್ಲಿ ಈಜೆಬೆಲಳ ದೇಹ
ವನ್ನು ನಾಯಿಗಳು ತಿನ್ನುತ್ತವೆ. 37ಇಜ್ರೇಲ್ ಪ್ರದೇಶದ
ಹೊಲದಲ್ಲಿ ಈಜೆಬೆಲಳ ದೇಹವು ಸಗಣಿಯಂತಿರುತ್ತದೆ.
ಈಜೆಬೆಲಳ ದೇಹವನ್ನು ಜನರು ಗುರುತಿಸಲಾಗುವು
ದಿಲ್ಲ!’’ ಎಂದು ಹೇಳಿದ್ದನು.

## ಸಮಾರ್ಯದ ನಾಯಕರಿಗೆ ಯೇಹು ಬರೆಯುವನು

10 ಸಮಾರ್ಯದಲ್ಲಿ ಅಹಾಬನಿಗೆ ಎಪ್ಪತ್ತು ಮಂದಿ
ಮಕ್ಕಳಿದ್ದರು. ಯೇಹುವು ಇಜ್ರೇಲಿನ ನಾಯಕ
ರಿಗೆ ಮತ್ತು ಅಧಿಕಾರಿಗಳಿಗೆ ಪತ್ರಗಳನ್ನು ಬರೆದು
ಸಮಾರ್ಯಕ್ಕೆ ಕಳುಹಿಸಿದನು. ಅಹಾಬನ ಮಕ್ಕಳನ್ನು
ಬೆಳೆಸಿದ ಪಾಲಕರಿಗೂ ಅವನು ಪತ್ರಗಳನ್ನು ಕಳುಹಿಸಿ
ದನು. ಯೇಹುವು ಪತ್ರಗಳಲ್ಲಿ, 2-3‘‘ನಿಮ್ಮ ಕೈಗೆ ಈ ಪತ್ರವು
ತಲುಪಿದ ತಕ್ಷಣ, ನಿಮ್ಮ ಒಡೆಯನ ಕುಟುಂಬದಲ್ಲಿ ಬಹಳ
ಉತ್ತಮನಾದ ಮತ್ತು ಸಮರ್ಥನಾದ ಒಬ್ಬ ವ್ಯಕ್ತಿಯನ್ನು
ಆರಿಸಿರಿ. ನಿಮ್ಮ ಬಳಿ ರಥಗಳೂ ಕುದುರೆಗಳೂ ಇವೆ.
ನೀವು ಬಲಾಢ್ಯವಾದ ನಗರದಲ್ಲಿ ವಾಸಿಸುತ್ತಿರುವಿರಿ.
ನಿಮ್ಮ ಬಳಿ ಆಯುಧಗಳಿವೆ. ನೀವು ಆರಿಸಿದವನನ್ನು ಅವನ
ತಂದೆಯ ಸಿಂಹಾಸನದ ಮೇಲೆ ಕುಳ್ಳಿರಿಸಿರಿ. ನಂತರ ನಿಮ್ಮ
ತಂದೆಯ ಕುಟುಂಬಕ್ಕಾಗಿ ಹೋರಾಡಿ’’ ಎಂದು
ಬರೆದಿದ್ದನು.
4ಆದರೆ ಇಜ್ರೇಲಿನ ಅಧಿಕಾರಿಗಳು ಮತ್ತು ನಾಯಕರು
ಬಹಳ ಭಯಗೊಂಡಿದ್ದರು. ಅವರು, ‘‘ಇಬ್ಬರು ರಾಜರು
(ಯೋರಾಮ್ ಮತ್ತು ಅಹಜ್ಯ) ಯೇಹುವನ್ನು ತಡೆಯ
ಲಾಗಲಿಲ್ಲ. ನಾವೂ ಅವನನ್ನು ತಡೆಯಲಾಗುವುದಿಲ್ಲ’’
ಎಂದು ಹೇಳಿದರು.
5ಅಹಾಬನ ಮನೆಯನ್ನು ನೋಡಿಕೊಳ್ಳುವ ಗೃಹಾಧಿ
ಕಾರಿ, ನಗರವನ್ನು ನಿಯಂತ್ರಿಸುವ ನಗರಾಧಿಕಾರಿ, ಹಿರಿ
ಯರು ಮತ್ತು ಅಹಾಬನ ಮಕ್ಕಳ ಪಾಲಕರಾದ ಜನರೆ
ಲ್ಲರೂ ಯೇಹುವಿಗೆ ಈ ಸಂದೇಶವನ್ನು ಕಳುಹಿಸಿದರು:
‘‘ನಾವು ನಿನ್ನ ಸೇವಕರು. ನೀನು ನಮಗೆ ಹೇಳುವುದನ್ನೆಲ್ಲಾ
ನಾವು ಮಾಡುತ್ತೇವೆ. ನಾವು ಯಾರನ್ನೂ ರಾಜನನ್ನಾಗಿ
ಮಾಡುವುದಿಲ್ಲ. ನಿನಗೆ ಒಳ್ಳೆಯದೆಂದು ತೋಚಿದ್ದನ್ನು
ಮಾಡು.’’

## ಸಮಾರ್ಯದ ನಾಯಕರು ಅಹಾಬನ ಮಕ್ಕಳನ್ನು ಕೊಂದುಹಾಕುವರು

6ನಂತರ ಯೇಹು ಈ ನಾಯಕರಿಗೆ ಎರಡನೆಯ
ಪತ್ರವನ್ನು ಬರೆದನು. ಯೇಹುವು, ‘‘ನೀವು ನನಗೆ
ಬೆಂಬಲ ಕೊಡುವುದಾದರೆ ಮತ್ತು ವಿಧೇಯರಾಗಿರುವು
ದಾದರೆ ಅಹಾಬನ ಮಕ್ಕಳ ತಲೆಗಳನ್ನು ಕತ್ತರಿಸಿ ಹಾಕಿ.
ನಾಳೆ ಇದೇ ಸಮಯಕ್ಕೆ ಇಜ್ರೇಲಿಗೆ ನನ್ನ ಬಳಿಗೆ ಅವು
ಗಳನ್ನು ತನ್ನಿ. ಅಹಾಬನಿಗೆ ಎಪ್ಪತ್ತು ಮಂದಿ ಮಕ್ಕಳಿದ್ದರು.
ಅವರು ತಮ್ಮ ಪಾಲಕರಾದ ನಗರದ ನಾಯಕರ ಬಳಿ
ಯಲ್ಲಿದ್ದರು. 7ನಗರದ ನಾಯಕರಿಗೆ ಈ ಪತ್ರವು ಬಂದು
ತಲುಪಿದಾಗ, ಅವರು ರಾಜನ ಎಪ್ಪತ್ತು ಮಂದಿ ಮಕ್ಕಳನ್ನು
ಕರೆದುಕೊಂಡು ಹೋಗಿ ಕೊಂದುಹಾಕಿದರು. ನಂತರ ಆ
ನಾಯಕರು ರಾಜನ ಮಕ್ಕಳ ತಲೆಗಳನ್ನು ಬುಟ್ಟಿಗಳಲ್ಲಿ
ಹಾಕಿ ಇಜ್ರೇಲಿನಲ್ಲಿದ್ದ ಯೇಹುವಿನ ಬಳಿಗೆ ಕಳುಹಿ
ಸಿದರು. 8ಸಂದೇಶಕನೊಬ್ಬನು ಯೇಹುವಿಗೆ ಬಳಿಗೆ
ಬಂದು ಅವನಿಗೆ, ‘‘ಅವರು ರಾಜನ ಮಕ್ಕಳ ತಲೆಗಳನ್ನು
ತಂದಿದ್ದಾರೆ!’’ ಎಂದು ಹೇಳಿದನು.
ಆಗ ಯೇಹು, ‘‘ನಗರದ ಬಾಗಿಲಿನ ಬಳಿ ನಾಳೆ
ಮುಂಜಾನೆಯ ತನಕ ಆ ತಲೆಗಳನ್ನು ಎರಡು ರಾಶಿಗಳ
ನ್ನಾಗಿ ಹಾಕಿ’’ ಎಂದು ಹೇಳಿದನು.

---

**ಜಿಮ್ರಿ** ಅನೇಕ ವರ್ಷಗಳ ಹಿಂದೆ ಏಲಾ ಮತ್ತು ಇಸ್ರೇಲಿನ ಬಾಷಾನ ಕುಟುಂಬದವರನ್ನು ಕೊಂದವನೇ ಜಿಮ್ರಿ.

9ಮುಂಜಾನೆ, ಯೇಹು ಹೊರಗೆ ಬಂದು ಜನರ
ಮುಂದೆ ನಿಂತು ಅವರಿಗೆ, ''ನೀವು ನಿರಪರಾಧಿಗಳು.
ನಾನಾದರೊ ನನ್ನ ಒಡೆಯನ ಮೇಲೆ ಒಳಸಂಚು ಮಾಡಿ
ದವನು. ನಾನು ಅವನನ್ನು ಕೊಂದೆನು. ಆದರೆ ಅಹಾಬನ
ಮಕ್ಕಳನ್ನೆಲ್ಲ ಕೊಂದವರು ಯಾರು? ನೀವು ಅವರನ್ನು
ಕೊಂದಿದ್ದೀರಿ! 10ಯೆಹೋವನು ಹೇಳಿದ್ದೆಲ್ಲವೂ ಸಂಭ
ವಿಸುತ್ತದೆ ಎಂಬುದನ್ನು ನೀವು ತಿಳಿದಿರಬೇಕು. ಅಹಾಬನ
ಕುಟುಂಬಕ್ಕೆ ಇವುಗಳನ್ನು ಸಂಭವಿಸುತ್ತವೆಯೆಂದು
ಯೆಹೋವನು ಎಲೀಯನ ಮೂಲಕ ತಿಳಿಸಿದ್ದನು.
ಅಂತೆಯೇ ಆತನು ಮಾಡಿದ್ದಾನೆ'' ಅಂದನು. 11ಇಜ್ರೇಲಿ
ನಲ್ಲಿ ವಾಸಿಸುತ್ತಿದ್ದ ಅಹಾಬನ ಕುಟಂಬದ ಉಳಿದವ
ರನ್ನೆಲ್ಲ ಯೇಹು ಕೊಂದುಹಾಕಿದನು. ಅಹಾಬನ ಅಪ್ತ
ಮಿತ್ರರು, ಯಾಜಕರು ಮತ್ತು ಪ್ರಮುಖರನ್ನೆಲ್ಲ
ಯೇಹುವು ಕೊಂದುಹಾಕಿದನು. ಅಹಾಬನ ಜನರಲ್ಲಿ
ಯಾರನ್ನೂ ಉಳಿಸಲಿಲ್ಲ.

**ಅಹಜ್ಯನ ಬಂಧುಗಳನ್ನು ಯೇಹು ಕೊಂದುಹಾಕವನು**

12ಯೇಹು ಇಜ್ರೇಲನ್ನು ಬಿಟ್ಟು ಸಮಾರ್ಯಕ್ಕೆ
ಹೋದನು. ಯೇಹುವು ದಾರಿಯಲ್ಲಿ ಕುರುಬರ ಪಾಳ್ಯ
ವೆಂದು ಕರೆಯುವ ಸ್ಥಳದಲ್ಲಿ ತಂಗಿದನು. ಅವನು
ಬೆತ್ಎಕೇಡ್‌ನ ರಸ್ತೆಯಲ್ಲಿ, ಕುರುಬರು ಕುರಿಗಳಿಂದ
ತುಪ್ಪಟವನ್ನು ಕತ್ತರಿಸುವ ಒಂದು ಮನೆಗೆ ಹೋದನು.
13ಯೇಹು ಯೆಹೂದದ ರಾಜನಾದ ಅಹಜ್ಯನ ಬಂಧು
ಗಳನ್ನು ಭೇಟಿ ಮಾಡಿ ಅವರಿಗೆ, ''ನೀವು ಯಾರು?''
ಎಂದು ಕೇಳಿದನು.

ಅವರು, ''ನಾವು ಯೆಹೂದದ ರಾಜನಾದ ಅಹಜ್ಯನ
ಬಂಧುಗಳು. ನಾವು ರಾಜನ ಮಕ್ಕಳನ್ನು ಮತ್ತು ರಾಜ
ಮಾತೆಯ ಮಕ್ಕಳನ್ನು ನೋಡಲು ಬಂದಿದ್ದೇವೆ''
ಎಂದರು.

14ಆಗ ಯೇಹುವು ತನ್ನ ಜನರಿಗೆ, ''ಅವರನ್ನು ಜೀವ
ಸಹಿತ ಹಿಡಿದುತನ್ನಿ!'' ಎಂದು ಹೇಳಿದನು. ಯೇಹುವಿನ
ಜನರು ಅಹಜ್ಯನ ಬಂಧುಗಳನ್ನು ಜೀವಸಹಿತ ಹಿಡಿದು
ತಂದರು. ಅಲ್ಲಿ ನಲವತ್ತೆರಡು ಮಂದಿ ಜನರಿದ್ದರು.
ಯೇಹು ಬೆತ್ಎಕೇಡ್‌ನ ಬಾವಿಯ ಹತ್ತಿರ ಅವರನ್ನು
ಕೊಂದುಹಾಕಿದನು. ಯೇಹುವು ಯಾರನ್ನೂ ಜೀವಸಹಿತ
ಉಳಿಸಲಿಲ್ಲ.

**ಯೇಹು ಯೆಹೋನಾದಾಬನನ್ನು ಸಂಧಿಸಿದನು**

15ಯೇಹುವು ಅಲ್ಲಿಂದ ಹೋದ ಮೇಲೆ, ರೇಕಾಬನ
ಮಗನಾದ ಯೆಹೋನಾದಾಬನನ್ನು ಸಂಧಿಸಿದನು.
ಯೆಹೋನಾದಾಬನು ಯೇಹುವನ್ನು ಸಂಧಿಸಲು ಬರುತ್ತಿ
ದ್ದನು. ಯೇಹು ಯೆಹೋನಾದಾಬನನ್ನು ಅಭಿನಂದಿಸಿ
ಅವನಿಗೆ, ''ನಾನು ನಿನಗೆ ನಂಬಿಗಸ್ತನಾಗಿರುವಂತೆ ನೀನು
ನನಗೆ ನಂಬಿಗಸ್ತನಾದ ಸ್ನೇಹಿತನಾಗಿರುವಿಯಾ?'' ಎಂದು
ಕೇಳಿದನು.

ಯೆಹೋನಾದಾಬನು, ''ಹೌದು, ನಾನು ನಿನಗೆ
ನಂಬಿಗಸ್ಥನಾದ ಸ್ನೇಹಿತನು'' ಎಂದು ಉತ್ತರಿಸಿದನು.

ಯೇಹು, ''ನೀನು ನಂಬಿಗಸ್ಥನಾದರೆ, ನಿನ್ನ ಕೈಯನ್ನು
ಕೊಡು'' ಎಂದನು.

ನಂತರ ಯೇಹು ಹೊರಬಂದು, ಯೆಹೋನಾದಾ
ಬನನ್ನು ರಥದೊಳಕ್ಕೆ ಎಳೆದುಕೊಂಡನು.

16ಯೇಹು, ''ನನ್ನ ಸಂಗಡ ಬಾ. ಯೆಹೋವನಲ್ಲಿ
ನನಗಿರುವ ಆಸಕ್ತಿಯನ್ನು ನೀನು ನೋಡುವಿಯಂತೆ''
ಎಂದು ಹೇಳಿದನು. ಯೇಹುವಿನ ರಥದಲ್ಲಿ ಯೆಹೋನಾ
ದಾಬನೂ ಹೋದನು. 17ಯೇಹು ಸಮಾರ್ಯಕ್ಕೆ
ಬಂದು, ಅಹಾಬನ ಕುಟುಂಬದಲ್ಲಿ ಜೀವಸಹಿತನಾಗಿ
ಸಮಾರ್ಯದಲ್ಲಿ ಉಳಿದಿದ್ದವರನ್ನೆಲ್ಲಾ ಕೊಂದು ಹಾಕಿ
ದನು. ಯೆಹೋವನು ಎಲೀಯನಿಗೆ ಹೇಳಿದ್ದಂತೆಯೇ
ಯೇಹು ಮಾಡಿದನು.

**ಯೇಹು ಬಾಳನ ಭಕ್ತರನ್ನು ಕರೆದನು**

18ಯೇಹು ಜನರನ್ನೆಲ್ಲ ಒಟ್ಟಾಗಿ ಸೇರಿಸಿ, ''ಅಹಾಬನು
ಬಾಳನನ್ನು ಸ್ವಲ್ಪ ಮಾತ್ರ ಸೇವಿಸಿದನು. ಆದರೆ ಯೇಹು
ಬಾಳನನ್ನು ಅಧಿಕವಾಗಿ ಸೇವಿಸುತ್ತಾನೆ! 19ಬಾಳನ ಎಲ್ಲಾ
ಯಾಜಕರನ್ನೂ ಪ್ರವಾದಿಗಳನ್ನೂ ಕರೆಯಿರಿ. ಬಾಳನನ್ನು
ಆರಾಧಿಸುವ ಜನರೆಲ್ಲರನ್ನೂ ಒಟ್ಟಾಗಿ ಕರೆಯಿರಿ.
ಯಾರೂ ಈ ಸಭೆಯಿಂದ ತಪ್ಪಿಸಿಕೊಳ್ಳದಂತೆ ನೋಡಿ
ಕೊಳ್ಳಿ. ನಾನು ಬಾಳನಿಗೆ ಮಹಾಯಜ್ಞವನ್ನು ಅರ್ಪಿಸ
ಬೇಕೆಂದಿದ್ದೇನೆ. ಈ ಸಭೆಗೆ ಯಾರಾದರೂ ಬಾರದೆ ಇದ್ದರೆ
ಅವರನ್ನು ನಾನು ಕೊಂದುಹಾಕುತ್ತೇನೆ!'' ಎಂದು
ಹೇಳಿದನು.

ಆದರೆ ಅದು ಯೇಹುವಿನ ತಂತ್ರವಾಗಿತ್ತು. ಬಾಳನ
ಭಕ್ತರನ್ನು ನಾಶಪಡಿಸಬೇಕೆಂಬುದೇ ಅವನ ಅಪೇಕ್ಷೆ
ಯಾಗಿತ್ತು. 20ಯೇಹುವು,''ಬಾಳನಿಗೆ ಒಂದು ಪವಿತ್ರ
ಸಭೆಯನ್ನು ಸೇರಿಸಿರಿ'' ಎಂದು ಹೇಳಿದನು. 21ಬಳಿಕ
ಅವನು ಇಸ್ರೇಲಿನ ಪ್ರದೇಶದಲ್ಲೆಲ್ಲಾ ಒಂದು ಸಂದೇಶ
ವನ್ನು ಕಳುಹಿಸಿದನು. ಬಾಳನ ಆರಾಧಕರೆಲ್ಲರೂ
ಬಂದರು. ಮನೆಯಲ್ಲಿ ಯಾರೂ ಉಳಿಯಲಿಲ್ಲ. ಬಾಳನ
ಆರಾಧಕರೆಲ್ಲ ಬಾಳನ ಆಲಯಕ್ಕೆ ಬಂದರು. ಜನರಿಂದ
ಆಲಯವು ತುಂಬಿಹೋಯಿತು.

22ಯೇಹು ನಿಲುವಂಗಿಗಳ ಮೇಲ್ವಿಚಾರಕನಿಗೆ,
''ಬಾಳನ ಭಕ್ತರಿಗೆಲ್ಲ ನಿಲುವಂಗಿಗಳನ್ನು ತಂದುಕೊಡು''
ಎಂದು ಹೇಳಿದನು. ಅವನು ಬಾಳನ ಭಕ್ತರಿಗೆ ನಿಲು
ವಂಗಿಗಳನ್ನು ತಂದುಕೊಟ್ಟನು.

23ಆಗ ಯೇಹು ಮತ್ತು ರೇಕಾಬನ ಮಗನಾದ
ಯೆಹೋನಾದಾಬನು ಬಾಳನ ಆಲಯದೊಳಕ್ಕೆ

ಹೋದರು. ಯೇಹು ಬಾಳನ ಭಕ್ತರಿಗೆ,''ಯೆಹೋವನ
ಸೇವಕರು ಯಾರೂ ನಿಮ್ಮೊಡನೆ ಇಲ್ಲವೆಂಬುದನ್ನು
ಸುತ್ತಲೂ ನೋಡಿ ಖಚಿತಪಡಿಸಿಕೊಳ್ಳಿ. ಬಾಳನ ಭಕ್ತರಾದ
ಜನರು ಮಾತ್ರ ಇಲ್ಲಿದ್ದಾರೆಂಬುದನ್ನು ಖಚಿತಪಡಿಸಿ
ಕೊಳ್ಳಿ'' ಎಂದು ಹೇಳಿದನು. 24ಬಾಳನ ಆರಾಧಕರು
ಯಜ್ಞಗಳನ್ನು ಮತ್ತು ಸರ್ವಾಂಗಹೋಮಗಳನ್ನು ಅರ್ಪಿ
ಸಲು ಬಾಳನ ಆಲಯದೊಳಕ್ಕೆ ಹೋದರು.

ಆದರೆ ಹೊರಗಡೆ ಯೇಹುವಿನ ಎಂಭತ್ತು ಜನರು
ಕಾಯುತ್ತಿದ್ದರು. ಯೇಹು ಅವರಿಗೆ, ''ಯಾರೂ ತಪ್ಪಿಸಿ
ಕೊಂಡು ಹೋಗಲು ಬಿಡಬೇಡಿ. ಯಾರಾದರೂ ಒಬ್ಬ
ಮನುಷ್ಯನನ್ನು ತಪ್ಪಿಸಿಕೊಂಡು ಹೋಗಲು ಬಿಟ್ಟರೆ,
ಅವನು ತನ್ನ ಜೀವವನ್ನು ಬೆಲೆಯಾಗಿ ಕೊಡ
ಬೇಕಾಗುತ್ತದೆ'' ಎಂದು ಹೇಳಿದನು.

25ಯೇಹುವು ಸರ್ವಾಂಗಹೋಮಗಳನ್ನು ಅರ್ಪಿಸಿದ
ತಕ್ಷಣ, ಕಾವಲುಗಾರರಿಗೂ ಸೇನಾಧಿಪತಿಗಳಿಗೂ,
''ಒಳಕೋಣೆಗೆ* ಹೋಗಿ ಬಾಳನ ಆರಾಧಕರನ್ನೆಲ್ಲ
ಕೊಂದುಹಾಕಿ! ಜೀವಸಹಿತ ಯಾರೂ ಆಲಯದಿಂದ
ಹೊರಕ್ಕೆ ಬರಲು ಬಿಡಬೇಡಿ!'' ಎಂದು ಹೇಳಿದನು.

ಸೇನಾಧಿಪತಿಗಳು ಚೂಪಾದ ಖಡ್ಗದಿಂದ ಬಾಳನ
ಭಕ್ತರನ್ನೆಲ್ಲ ಕೊಂದುಹಾಕಿದರು. ಬಾಳನ ಭಕ್ತರ
ದೇಹಗಳನ್ನು ಕಾವಲುಗಾರರು ಮತ್ತು ಸೇನಾಧಿಪತಿಗಳು
ಹೊರಕ್ಕೆ ಎಸೆದರು. ನಂತರ ಆ ಕಾವಲುಗಾರರು ಮತ್ತು
ಸೇನಾಧಿಪತಿಗಳು ಬಾಳನ ಆಲಯದ ಒಳಕೋಣೆಯನ್ನು
ಪ್ರವೇಶಿಸಿದರು. 26ಅವರು ಬಾಳನ ಆಲಯದಲ್ಲಿದ್ದ
ಸ್ಮಾರಕಸ್ತಂಭಗಳನ್ನು* ಹೊರತಂದು, ಆಲಯವನ್ನು
ಸುಟ್ಟುಹಾಕಿದರು. ನಂತರ ಅವರು ಬಾಳನ ಸ್ಮಾರಕ
ಸ್ತಂಭಗಳನ್ನು ಚೂರುಚೂರು ಮಾಡಿದರು. 27ಬಾಳನ
ಆಲಯವನ್ನೂ ಅವರು ಹಾಳುಗೆಡವಿದರು. ಅವರು
ಬಾಳನ ಆಲಯವನ್ನು ಶೌಚಗೃಹವನ್ನಾಗಿ ಮಾಡಿದರು.
ಇಂದೂ ಸಹ ಅದನ್ನು ಶೌಚಗೃಹವಾಗಿ ಬಳಸುತ್ತಾರೆ.

28ಯೇಹುವು ಇಸ್ರೇಲಿನಲ್ಲಿ ಬಾಳನ ಪೂಜೆಯನ್ನು
ನಿಲ್ಲಿಸಿದನು.

29ಆದರೂ ಇಸ್ರೇಲಿನ ಪಾಪಗಳಿಗೆ ಪ್ರೇರಕನಾದ,
ನೆಬಾಟನ ಮಗನಾದ ಯಾರೊಬ್ಬಾಮನ ಪಾಪಗಳಿಂದ
ಯೇಹುವು ಸಂಪೂರ್ಣವಾಗಿ ವಿಮುಖನಾಗಲಿಲ್ಲ,
ಬೇತೆಲ್ ಮತ್ತು ದಾನ್‌ಗಳಲ್ಲಿದ್ದ ಬಂಗಾರದ ಕರು
ಗಳನ್ನು ಯೇಹುವು ನಾಶಗೊಳಿಸಲಿಲ್ಲ.

### ಇಸ್ರೇಲನ್ನು ಯೇಹು ಆಳುವನು

30ಯೆಹೋವನು ಯೇಹುವಿಗೆ, ''ನೀನು ಒಳ್ಳೆಯ
ದನ್ನು ಮಾಡಿದೆ. ನಾನು ಒಳ್ಳೆಯದೆಂದು ಹೇಳಿದ್ದನ್ನೇ
ನೀನು ಮಾಡಿದೆ. ನನ್ನ ಅಪೇಕ್ಷೆಯಂತೆ ನೀನು ಅಹಾಬನ
ಕುಟುಂಬವನ್ನು ನಾಶಗೊಳಿಸಿದೆ. ಆದ್ದರಿಂದ ನಿನ್ನ
ಸಂತತಿಯವರು ಇಸ್ರೇಲನ್ನು ನಾಲ್ಕು ತಲೆಮಾರುಗಳ
ವರೆಗೆ ಆಳುತ್ತಾರೆ'' ಎಂದು ಹೇಳಿದನು.

31ಆದರೆ ಯೇಹು ಇಸ್ರೇಲಿನ ದೇವರಾದ ಯೆಹೋ
ವನ ನಿಯಮಗಳನ್ನು ಪೂರ್ಣಮನಸ್ಸಿನಿಂದಲೂ ಎಚ್ಚರಿಕೆ
ಯಿಂದಲೂ ಪಾಲಿಸಲಿಲ್ಲ. ಇಸ್ರೇಲಿನ ಪಾಪಗಳಿಗೆ ಪ್ರೇರಕ
ನಾದ ಯಾರೊಬ್ಬಾಮನ ಪಾಪಗಳನ್ನು ಯೇಹುವು
ಮಾಡುವುದನ್ನು ನಿಲ್ಲಿಸಲೇ ಇಲ್ಲ.

### ಹಜಾಯೇಲನು ಇಸ್ರೇಲನ್ನು ಸೋಲಿಸಿದನು.

32ಆ ಸಮಯದಲ್ಲಿ, ಯೆಹೋವನು ಇಸ್ರೇಲಿನ ಭಾಗ
ಗಳನ್ನು ಕುಗ್ಗಿಸತೊಡಗಿದನು. ಅರಾಮ್ಯರ ರಾಜನಾದ
ಹಜಾಯೇಲನು ಇಸ್ರೇಲಿನ ಪ್ರತಿಯೊಂದು ಗಡಿ
ಯಲ್ಲಿಯೂ ಇಸ್ರೇಲರನ್ನು ಸೋಲಿಸುತ್ತಿದ್ದನು. 33ಹಜಾ
ಯೇಲನು ಜೋರ್ಡನ್ ನದಿಯ ಪೂರ್ವಕ್ಕಿರುವ
ಪ್ರದೇಶವನ್ನೆಲ್ಲ ಗೆದ್ದುಕೊಂಡನು. ಅವನು ಗಾದ್,
ರೂಬೇನ್ ಮತ್ತು ಮನಸ್ಸೆ ಕುಲಗಳಿಗೆ ಸೇರಿದ ಎಲ್ಲಾ
ಪ್ರದೇಶವನ್ನೂ, ಗಿಲ್ಯಾದ್‌ನ ಎಲ್ಲ ಪ್ರದೇಶವನ್ನೂ
ಗೆದ್ದನು. ಹಜಾಯೇಲನು ಅರ್ನೋನ್ ಕಣಿವೆಯಿಂದ
ಗಿಲ್ಯಾದ್, ಬಾಷಾನ್‌ವರೆಗಿನ ಅರೋಯೇರ್ ಪ್ರದೇಶ
ವನ್ನೆಲ್ಲ ಗೆದ್ದುಕೊಂಡನು.

### ಯೇಹುವಿನ ಸಾವು

34'ಇಸ್ರೇಲಿನ ರಾಜರುಗಳ ಇತಿಹಾಸ' ಎಂಬ ಪುಸ್ತಕ
ದಲ್ಲಿ ಯೇಹು ಮಾಡಿದ ಇತರ ಉತ್ತಮ ಕಾರ್ಯಗಳನ್ನೆಲ್ಲ
ಬರೆಯಲಾಗಿದೆ. 35ಯೇಹು ಸತ್ತುಹೋದನು. ಅವನನ್ನು
ಅವನ ಪೂರ್ವಿಕರ ಬಳಿ ಸಮಾರ್ಯದಲ್ಲಿ ಸಮಾಧಿ
ಮಾಡಿದರು. ಯೇಹುವಿನ ನಂತರ ಅವನ ಮಗನಾದ
ಯೇಹೋವಾಹಾಜನು ಇಸ್ರೇಲಿನ ನೂತನ ರಾಜ
ನಾದನು. 36ಯೇಹುವು ಸಮಾರ್ಯದಲ್ಲಿ ಇಸ್ರೇಲನ್ನು
ಇಪ್ಪತ್ತೆಂಟು ವರ್ಷ ಆಳಿದನು.

### ಯೆಹೂದದಲ್ಲಿ ರಾಜನ ಮಕ್ಕಳನ್ನೆಲ್ಲ ಅತಲ್ಯಳು ನಾಶಗೊಳಿಸಿದಳು

11 ಅಹಜ್ಯನ ತಾಯಿಯಾದ ಅತಲ್ಯಳು ತನ್ನ ಮಗ
ಸತ್ತದ್ದನ್ನು ನೋಡಿದಳು. ಅವಳು ಮೇಲೆದ್ದು
ರಾಜನ ಕುಟುಂಬವನ್ನೆಲ್ಲ ಕೊಂದುಬಿಟ್ಟಳು.

2ಯೆಹೋಷೆಬಳು ರಾಜನಾದ ಯೋರಾಮನ ಮಗ
ಳಾಗಿದ್ದಳು ಮತ್ತು ಅಹಜ್ಯನ ಸೋದರಿಯಾಗಿದ್ದಳು.

---

**ಒಳಕೋಣೆ** ಅಕ್ಷರಶಃ, ''ಬಾಳನ ದೇವಾಲಯದ ಪಟ್ಟಣ.''

**ಸ್ಮಾರಕಸ್ತಂಭ** ಜನರು ವಿಶೇಷವಾದದ್ದನ್ನು ನೆನಪು ಮಾಡಿಕೊಳ್ಳಲು ಸಹಾಯಕವಾಗುವಂತೆ ಕಲ್ಲುಗಳನ್ನು ನಿಲ್ಲಿಸುತ್ತಿದ್ದರು. ಪೂರ್ವಕಾಲದ ಇಸ್ರೇಲಿನಲ್ಲಿ ಜನರು ಆಗಾಗ್ಗೆ ಸುಳ್ಳು ದೇವತೆಗಳ ಆರಾಧನೆಗಾಗಿ ಕಲ್ಲುಗಳನ್ನು ವಿಶೇಷ ಸ್ಥಳಗಳಲ್ಲಿ ನಿಲ್ಲಿಸುತ್ತಿದ್ದರು.

ಯೆಹೋವಾಷನು ರಾಜನ ಮಕ್ಕಳಲ್ಲಿ ಒಬ್ಬನಾಗಿದ್ದನು.
ಅತಲ್ಯಳು ಇತರ ಮಕ್ಕಳನ್ನು ಕೊಲ್ಲುವಾಗ ಯೆಹೋಷೆ
ಬಳು ಯೆಹೋವಾಷನನ್ನು ತೆಗೆದುಕೊಂಡು ಹೋದಳು.
ಅವಳು ಯೆಹೋವಾಷನನ್ನು ಮತ್ತು ಅವನ ದಾದಿಯನ್ನು
ತನ್ನ ಮಲಗುವ ಕೊಠಡಿಯಲ್ಲಿ ಅಡಗಿಸಿದಳು. ಯೆಹೋ
ವಾಷನನ್ನು ಅವನ ದಾದಿಯು ಮತ್ತು ಯೆಹೋಷೆಬಳು
ಅತಲ್ಯಳಿಂದ ತಪ್ಪಿಸಿ ಅಡಗಿಸಿಟ್ಟರು. ಈ ರೀತಿ ಯೆಹೋ
ವಾಷನನ್ನು ಕೊಲ್ಲಲಾಗಲಿಲ್ಲ.

3ನಂತರ ಯೆಹೋವಾಷ ಮತ್ತು ಯೆಹೋಷೆಬಳು
ಯೆಹೋವನ ಆಲಯದಲ್ಲಿ ಅಡಗಿಕೊಂಡರು. ಯೆಹೋ
ವಾಷನು ಆರು ವರ್ಷಗಳ ಕಾಲ ಅಡಗಿಕೊಂಡಿದ್ದನು.
ಅತಲ್ಯಳು ಯೆಹೂದ ದೇಶವನ್ನು ಆಳಿದಳು.

4ಏಳನೆ ವರ್ಷದಲ್ಲಿ, (ಪ್ರಧಾನ ಯಾಜಕನಾದ)
ಯೆಹೋಯಾದಾವನು ಕೇರೇತ್ಯರ ಸೇನಾಧಿಪತಿಗಳನ್ನು
ಮತ್ತು ಕಾವಲುಗಾರರನ್ನು ಕರೆಸಿಕೊಂಡನು. ಯೆಹೋ
ಯಾದಾವನು ಅವರನ್ನೆಲ್ಲ ಯೆಹೋವನ ಆಲಯದಲ್ಲಿ
ಒಟ್ಟಾಗಿ ಸೇರಿಸಿದನು. ನಂತರ ಯೆಹೋಯಾದಾವನು
ಅವರೊಡನೆ ಒಂದು ಒಪ್ಪಂದವನ್ನು ಮಾಡಿಕೊಂಡನು.
ಯೆಹೋಯಾದಾವನು ಆಲಯದಲ್ಲಿ ಅವರು ವಾಗ್ದಾನ
ಮಾಡುವಂತೆ ಬಲಾತ್ಕಾರಗೊಳಿಸಿದನು. ನಂತರ ಅವನು
ಅವರಿಗೆ ರಾಜನ ಮಗನನ್ನು (ಯೆಹೋವಾಷನನ್ನು)
ತೋರಿಸಿದನು.

5ಯೆಹೋಯಾದಾವನು ಅವರಿಗೆ, ''ನೀವು ಈ
ಕಾರ್ಯವನ್ನು ಮಾಡಲೇಬೇಕು. ನಿಮ್ಮಲ್ಲಿ ಸಬ್ಬತ್
ದಿನದಂದು ಬರುವ ಮೂರನೆ ಒಂದು ಭಾಗದ ಜನರು
ರಾಜನನ್ನು ಅವನ ಅರಮನೆಯಲ್ಲಿ ರಕ್ಷಿಸಬೇಕು.
6ಇನ್ನೊಂದು ಮೂರನೆಯ ಒಂದು ಭಾಗವು ಸೂರ್
ಬಾಗಿಲಿನಲ್ಲಿರಬೇಕು. ಮತ್ತೊಂದು ಮೂರನೆಯ ಒಂದು
ಭಾಗವು ಕಾವಲುಗಾರನ ಹಿಂದೆ ಬಾಗಿಲಿನಲ್ಲಿರಬೇಕು.
ಈ ರೀತಿ ನೀವು ಗೋಡೆಯಂತೆ ನಿಂತು ಯೆಹೋವಾಷ
ನನ್ನು ರಕ್ಷಿಸುತ್ತಿರಬೇಕು. 7ಸಬ್ಬತ್ ದಿನದಂದು ಕಾಯಲು
ಬರುವ ನಿಮ್ಮೆಲ್ಲರ ಎರಡು ಪಡೆಗಳು ಯೆಹೋವನ
ಆಲಯವನ್ನು ಕಾಯುತ್ತಾ ರಾಜನಾದ ಯೆಹೋವಾಷ
ನನ್ನು ಕಾಯಬೇಕು. 8ರಾಜನಾದ ಯೆಹೋವಾಷನು
ಎಲ್ಲಿಗಾದರೂ ಯಾವಾಗಲಾದರೂ ಹೋದರೆ ಅವ
ನೊಂದಿಗೆ ನೀವು ಇರಲೇಬೇಕು. ನೀವೆಲ್ಲರೂ ರಾಜನನ್ನು
ಸುತ್ತುವರಿದಿರಬೇಕು. ಪ್ರತಿಯೊಬ್ಬ ಕಾವಲುಗಾರನೂ
ಆಯುಧವನ್ನು ತನ್ನ ಕೈಯಲ್ಲಿ ಹಿಡಿದಿರಲೇಬೇಕು. ನಿಮ್ಮ
ಸಮೀಪಕ್ಕೆ ಯಾರಾದರೂ ಬಂದರೆ ಅವರನ್ನು ಕೊಲ್ಲ
ಬೇಕು'' ಎಂದನು.

9ಯಾಜಕನಾದ ಯೆಹೋಯಾದಾವನು ಆಜ್ಞಾಪಿಸಿದ
ಸಂಗತಿಗಳಿಗೆಲ್ಲ ಸೇನಾಧಿಪತಿಗಳು ವಿಧೇಯರಾಗಿದ್ದರು.
ಪ್ರತಿಯೊಬ್ಬ ಸೇನಾಧಿಪತಿಯೂ ತನ್ನ ಕಾವಲುಗಾರರನ್ನು
ಅಂದರೆ ಸಬ್ಬತ್‌ದಿನದಂದು ಕಾಯಲು ಬರಬೇಕಾಗಿದ್ದ
ಮತ್ತು ಸಬ್ಬತ್‌ದಿನದಂದು ಕೆಲಸದಿಂದ ಹೋಗ ಬೇಕಾ
ಗಿದ್ದ ಸಿಪಾಯಿಗಳನ್ನು ಕರೆದೊಯ್ದನು. ಅವರೆಲ್ಲರೂ
ಯಾಜಕನಾದ ಯೆಹೋಯಾದಾವನ ಹತ್ತಿರಕ್ಕೆ
ಹೋದರು. 10ಸೇನಾಧಿಪತಿಗಳಿಗೆ ಬರ್ಜಿಗಳನ್ನು ಮತ್ತು
ಗುರಾಣಿಗಳನ್ನು ಯಾಜಕನು ಕೊಟ್ಟನು. ರಾಜನಾದ
ದಾವೀದನು ಯೆಹೋವನ ಆಲಯದಲ್ಲಿ ಈ ಬರ್ಜಿ
ಗಳನ್ನು ಮತ್ತು ಗುರಾಣಿಗಳನ್ನು ಇಟ್ಟಿದ್ದನು. 11ಈ
ಕಾವಲುಗಾರರು ಆಲಯದ ಬಲಗಡೆಯ ಮೂಲೆ
ಯಿಂದ ಎಡಗಡೆಯ ಮೂಲೆಯವರೆಗೆ ತಮ್ಮ ಕೈಗಳಲ್ಲಿ
ಆಯುಧಗಳನ್ನು ಹಿಡಿದುಕೊಂಡು ನಿಂತರು. ರಾಜನು
ಆಲಯದೊಳಕ್ಕೆ ಹೋದಾಗ ಅವರು ಅವನ ಸುತ್ತಲೂ,
ಯಜ್ಞವೇದಿಕೆಯ ಮತ್ತು ಆಲಯದ ಸುತ್ತಲೂ ನಿಂತು
ಕೊಂಡರು.

12ಈ ಜನರು ಯೆಹೋವಾಷಾನನ್ನು ಹೊರಗೆ
ತಂದರು. ಅವರು ಯೆಹೋವಾಷನ ಮೇಲೆ ಕಿರೀಟ
ವನ್ನಿಟ್ಟು ಕೈಯಲ್ಲಿ ಧರ್ಮಶಾಸ್ತ್ರವನ್ನು ಕೊಟ್ಟರು. ನಂತರ
ಅವರು ಅವನನ್ನು ಅಭಿಷೇಕಿಸಿ, ನೂತನ ರಾಜನನ್ನಾಗಿ
ಮಾಡಿದರು. ಅವರು ಚಪ್ಪಾಳೆ ತಟ್ಟುತ್ತಾ 'ರಾಜನು ಚಿರಂ
ಜೀವಿಯಾಗಿರಲಿ!'' ಎಂದು ಆರ್ಭಟಿಸಿದರು.

13ಕಾವಲುಗಾರರ ಮತ್ತು ಜನರ ಗದ್ದಲವು ರಾಣಿ
ಯಾದ ಅತಲ್ಯಳಿಗೆ ಕೇಳಿಸಿತು. ಅವಳು ಯೆಹೋವನ
ಆಲಯದಲ್ಲಿದ್ದ ಜನರ ಬಳಿಗೆ ಹೋದಳು. 14ರಾಜನು
ಪದ್ಧತಿಯಂತೆ ಸ್ತಂಭದ ಬಳಿ ನಿಂತಿರುವುದನ್ನೂ ಜನರು
ಮತ್ತು ನಾಯಕರು ರಾಜನಿಗಾಗಿ ತುತ್ತೂರಿ ಊದುತ್ತಿರು
ವುದನ್ನೂ ಜನರೆಲ್ಲರೂ ಬಹಳ ಸಂತೋಷದಿಂದಿರು
ವುದನ್ನೂ ಅವಳು ನೋಡಿ ದುಃಖದಿಂದ ತನ್ನ ಬಟ್ಟೆಗಳನ್ನು
ಹರಿದುಕೊಂಡು ''ದ್ರೋಹ, ದ್ರೋಹ!'' ಎಂದು
ಕೂಗಿಕೊಂಡಳು.

15ಯಾಜಕನಾದ ಯೆಹೋಯಾದಾವನು ಸೈನಿಕರ
ಮೇಲ್ವಿಚಾರಕರಾದ ಸೇನಾಧಿಪತಿಗಳಿಗೆ ಆಜ್ಞಾಪಿಸಿದನು.
ಯೆಹೋಯಾದಾವನು ಅವರಿಗೆ, ''ಅತಲ್ಯಳನ್ನು ಆಲ
ಯದ ಆವರಣದಿಂದ ಹೊರಗೆ ತೆಗೆದುಕೊಂಡು ಹೋಗಿ.
ಅವಳ ಹಿಂಬಾಲಕರು ಯಾರೇ ಆಗಿದ್ದರೂ ಕೊಂದುಬಿಡಿ.
ಆದರೆ ಅವರನ್ನು ಯೆಹೋವನ ಆಲಯದಲ್ಲಿ ಕೊಲ್ಲ
ಬೇಡಿ'' ಎಂದು ಹೇಳಿದನು.

16ಆದ್ದರಿಂದ ಸೈನಿಕರು ಅವಳನ್ನು ಹಿಡಿದುಕೊಂಡು
ಹೊರಗೆ ಕರೆದೊಯ್ದರು, ಆಕೆಯು ಕುದುರೆಗಳ
ಪ್ರವೇಶದ್ವಾರದ ಮೂಲಕ ಅರಮನೆಗೆ ಹೋದಳು.
ಸೈನಿಕರು ಅತಲ್ಯಳನ್ನು ಅಲ್ಲಿ ಕೊಂದುಹಾಕಿದರು.

17ಅನಂತರ ಯೆಹೋಯಾದಾವನ ಪ್ರೇರಣೆಯಿಂದ
ಅರಸನೂ ಪ್ರಜೆಗಳೂ ತಾವು ಯೆಹೋವನ ಪ್ರಜೆಗಳಾ
ಗಿರುವುದಾಗಿ ಆತನಿಗೆ ಪ್ರಮಾಣಮಾಡಿದರು.

18ಆಗ ಜನರೆಲ್ಲರೂ ಸುಳ್ಳುದೇವರಾದ ಬಾಳನ ಗುಡಿಗೆ
ಹೋಗಿ ಬಾಳನ ವಿಗ್ರಹವನ್ನೂ ಮತ್ತು ಅವನ ಯಜ್ಞ
ವೇದಿಕೆಯನ್ನೂ ಚೂರುಚೂರು ಮಾಡಿದರು. ಬಾಳನ
ಯಾಜಕನಾದ ಮತ್ತಾನನನ್ನು ಜನರು ಯಜ್ಞವೇದಿಕೆಯ
ಎದುರಿನಲ್ಲಿಯೇ ಕೊಂದುಹಾಕಿದರು.

ಯಾಜಕನಾದ ಯೆಹೋಯಾದಾವನು ಯೆಹೋವನ
ಆಲಯಕ್ಕೆ ಕಾವಲುಗಾರರನ್ನು ನೇಮಿಸಿದನು. 19ಯಾಜ
ಕನು ಜನರನ್ನೆಲ್ಲ ಕರೆದುಕೊಂಡು ಹೋದನು. ಅವರು
ಸಿಪಾಯಿಗಳ ದ್ವಾರದ ಮೂಲಕ ಅರಮನೆಗೆ ಹೋದರು.
ರಾಜನ ವಿಶೇಷ ಅಂಗರಕ್ಷಕರು ಮತ್ತು ಸೇನಾಧಿಪತಿಗಳು
ರಾಜನ ಜೊತೆಯಲ್ಲಿ ಹೋದರು. ಅವರನ್ನು ಇತರ
ಜನರೆಲ್ಲರೂ ಹಿಂಬಾಲಿಸಿದರು. ಅವರು ರಾಜನ ಅರ
ಮನೆಯ ಬಾಗಿಲಿಗೆ ಹೋದರು. ನಂತರ ರಾಜನಾದ
ಯೆಹೋವಾಷನು ಸಿಂಹಾಸನದ ಮೇಲೆ ಕುಳಿತು
ಕೊಂಡನು. 20ಜನರೆಲ್ಲರೂ ಬಹಳ ಹರ್ಷಗೊಂಡರು.
ನಗರದಲ್ಲಿ ಸಮಾಧಾನವಿತ್ತು. ರಾಜನ ಅರಮನೆಯ
ಹತ್ತಿರ ರಾಣಿಯಾದ ಅತಲ್ಯಳನ್ನು ಖಡ್ಗದಿಂದ ಕೊಂದಿ
ದ್ದರು. 21ಯೆಹೋವಾಷನು ರಾಜನಾದಾಗ ಅವನಿಗೆ ಏಳು
ವರ್ಷ ವಯಸ್ಸಾಗಿತ್ತು.

## ಯೆಹೋವಾಷನು ತನ್ನ ಆಳ್ವಿಕೆಯನ್ನು ಆರಂಭಿಸಿದನು

12 ಯೇಹುವು ಇಸ್ರೇಲಿನ ರಾಜನಾಗಿದ್ದ ಏಳನೆಯ
ವರ್ಷದಲ್ಲಿ ಯೆಹೋವಾಷನು ಆಳಲಾರಂಭಿಸಿ
ದನು. ಯೆಹೋವಾಷನು ಜೆರುಸಲೇಮಿನಲ್ಲಿ ನಲವತ್ತು
ವರ್ಷ ಆಳಿದನು. ಬೇರ್ಷೆಬದ ಚಿಬ್ಯಳು ಯೆಹೋವಾಷನ
ತಾಯಿ. 2ಯೆಹೋವಾಷನು ಯೆಹೋವನು ಸರಿಯೆಂದು
ಹೇಳಿದ ಕಾರ್ಯಗಳನ್ನು ಮಾಡಿದನು. ಯೆಹೋವಾಷನು
ತನ್ನ ಜೀವಮಾನವೆಲ್ಲ ಯೆಹೋವನಿಗೆ ವಿಧೇಯನಾ
ಗಿದ್ದನು. ಯಾಜಕನಾದ ಯೆಹೋಯಾದಾವನು ಉಪ
ದೇಶಿಸಿದ್ದ ಕಾರ್ಯಗಳನ್ನೆಲ್ಲ ಯೆಹೋವಾಷನು ಮಾಡಿ
ದನು. 3ಆದರೆ ಅವನು ಉನ್ನತ ಪೂಜಾಸ್ಥಳಗಳನ್ನು
ನಾಶಗೊಳಿಸಲಿಲ್ಲ. ಜನರು ಇನ್ನೂ ಆ ಸ್ಥಳಗಳಲ್ಲಿ
ಯಜ್ಞಗಳನ್ನು ಅರ್ಪಿಸುತ್ತಾರೆ ಮತ್ತು ಧೂಪಗಳನ್ನು
ಸುಡುತ್ತಾರೆ.

## ದೇವಾಲಯವನ್ನು ಸರಿಪಡಿಸಲು ಯೆಹೋವಾಷನ ಆಜ್ಞೆ

4-5ಯೆಹೋವಾಷನು ಯಾಜಕರಿಗೆ, ‘‘ದೇವಾಲಯ
ದಲ್ಲಿ ಬಹಳ ಹಣವಿದೆ. ಜನರು ಅನೇಕ ವಸ್ತುಗಳನ್ನು
ಆಲಯಕ್ಕೆ ಕೊಟ್ಟಿದ್ದಾರೆ. ಜಣಗಣತಿಯಲ್ಲಿ ಲೆಕ್ಕಿಸಲ್ಪಟ್ಟ
ಜನರು ಆಲಯದ ತೆರಿಗೆಯನ್ನು ಕೊಟ್ಟಿದ್ದಾರೆ. ಜನರು
ತಮ್ಮ ಸ್ವಇಚ್ಛೆಯಿಂದ ಹಣವನ್ನು ಕೊಟ್ಟಿದ್ದಾರೆ. ಯಾಜಕ
ರಾದ ನೀವು ಆ ಹಣವನ್ನು ತೆಗೆದುಕೊಂಡು, ಯೆಹೋ
ವನ ಆಲಯವನ್ನು ಸರಿಪಡಿಸಿ. ಪ್ರತಿಯೊಬ್ಬ ಯಾಜಕನೂ
ತಾನು ಜನರ ಸೇವೆಯಿಂದ ಪಡೆದ ಹಣವನ್ನು ಉಪಯೋ
ಗಿಸಲೇಬೇಕು. ಅವನು ಆ ಹಣವನ್ನು ದೇವಾಲಯದ
ಶಿಥಿಲತೆಯನ್ನು ಸರಿಪಡಿಸಲು ಉಪಯೋಗಿಸಲೇ
ಬೇಕು’’ ಎಂದು ಹೇಳಿದನು.

6ಆದರೆ ಯಾಜಕರು ಸರಿಪಡಿಸಲಿಲ್ಲ. ಯೆಹೋವಾ
ಷನು ರಾಜನಾದ ಇಪ್ಪತ್ತಮೂರನೆಯ ವರ್ಷದಲ್ಲಿ,
ಯಾಜಕರಿನ್ನೂ ದೇವಾಲಯವನ್ನು ಸರಿಪಡಿಸಲಿಲ್ಲ.
7ಆದ್ದರಿಂದ ರಾಜನಾದ ಯೆಹೋವಾಷನು ಯಾಜಕ
ನಾದ ಯೆಹೋಯಾದಾವ ಮತ್ತು ಇತರ ಯಾಜಕರನ್ನು
ಕರೆಸಿ, ‘‘ನೀವು ಆಲಯವನ್ನು ಸರಿಪಡಿಸಲಿಲ್ಲವೇಕೆ?
ನಿಮ್ಮಿಂದ ಸೇವೆ ಹೊಂದುವ ಜನರು ಕೊಡುವ ಹಣವನ್ನು
ಉಪಯೋಗಿಸಬೇಡಿ. ಆಲಯವನ್ನು ಸರಿಪಡಿಸುವುದ
ಕ್ಕಾಗಿ ಆ ಹಣವನ್ನು ಉಪಯೋಗಿಸಬೇಕು’’ ಎಂದು
ಹೇಳಿದನು.

8ಆಗ ಯಾಜಕರು ಅವನಿಗೆ, ‘‘ನಾವು ಜನರಿಂದ ಹಣ
ತೆಗೆದುಕೊಳ್ಳುವುದಿಲ್ಲ ಮತ್ತು ಆಲಯವನ್ನು ಸರಿಪಡಿ
ಸುವುದಕ್ಕೆ ಕೈಹಾಕುವುದಿಲ್ಲ’’ ಎಂದು ಹೇಳಿದರು.
9ಯಾಜಕನಾದ ಯೆಹೋಯಾದಾವನು ಒಂದು ಪೆಟ್ಟಿಗೆ
ಯನ್ನು ತೆಗೆದುಕೊಂಡು, ಅದರ ಮೇಲೆ ಒಂದು ತೂತು
ಮಾಡಿದನು. ನಂತರ ಯೊಹೋಯಾದಾವನು ಆ ಪೆಟ್ಟಿಗೆ
ಯನ್ನು ಯಜ್ಞವೇದಿಕೆಯ ಬಲಗಡೆಯಲ್ಲಿ ಇಟ್ಟನು.
ದೇವಾಲಯಕ್ಕೆ ಜನರು ಬರುವ ಬಾಗಿಲಿನಲ್ಲಿ ಈ
ಪೆಟ್ಟಿಗೆಯಿತ್ತು. ಕೆಲವು ಮಂದಿ ಯಾಜಕರು ಆಲಯದ
ಬಾಗಿಲಿನಲ್ಲಿ ರಕ್ಷಕರಾಗಿ ನಿಂತರು. ಆ ಯಾಜಕರು ಜನರು
ಯೆಹೋವನಿಗೆಂದು ಕೊಡುವ ಆ ಹಣವನ್ನು ಪೆಟ್ಟಿಗೆ
ಯಲ್ಲಿ ಹಾಕಿದರು.

10ಜನರು ದೇವಾಲಯಕ್ಕೆ ಹೋದಾಗ ಆ ಪೆಟ್ಟಿಗೆಯಲ್ಲಿ
ಹಣವನ್ನು ಹಾಕಲಾರಂಭಿಸಿದರು. ರಾಜನ ಕಾರ್ಯ
ದರ್ಶಿಯಾಗಲೀ, ಪ್ರಧಾನ ಯಾಜಕನಾಗಲೀ ನೋಡಿ
ದಾಗ ಸಾಕಷ್ಟು ಹಣವು ತುಂಬಿದ್ದರೆ ಅದನ್ನು ಲೆಕ್ಕಹಾಕಿ
ಚೀಲಗಳಲ್ಲಿ ತುಂಬಿಡುತ್ತಿದ್ದರು. 11ನಂತರ ಅವರು ಆ
ಹಣದಿಂದ ದೇವಾಲಯದ ಕೆಲಸಗಾರರಿಗೂ ಬಡಗಿ
ಗಳಿಗೂ ಮತ್ತು ದೇವಾಲಯದ ಇತರ ಕೆಲಸಗಾರರಿಗೂ
12ಕಲ್ಲುಕುಟಿಕರಿಗೂ ಶಿಲ್ಪಿಗಳಿಗೂ ಸಂಬಳ ಕೊಡುತ್ತಿ
ದ್ದರು. ಅವರು ಆ ಹಣದಿಂದ ಮರವನ್ನೂ ಕೆತ್ತಿದ ಕಲ್ಲು
ಗಳನ್ನೂ ಕೊಂಡುಕೊಂಡರು; ಯೆಹೋವನ ಆಲಯ
ವನ್ನು ಸರಿಪಡಿಸಲು ಇತರ ಕೆಲಸಗಳಿಗೆ ಆ ಹಣವನ್ನು
ಬಳಸುತ್ತಿದ್ದರು.

13-14ಜನರು ದೇವಾಲಯಕ್ಕೆ ಹಣವನ್ನು ಕೊಟ್ಟರು.
ಆದರೆ ಯಾಜಕರು ಆ ಹಣವನ್ನು ಬೆಳ್ಳಿಯ ಬಟ್ಟಲು,
ಕತ್ತರಿ, ಬೋಗುಣಿ, ತುತ್ತೂರಿ ಅಥವಾ ಬೆಳ್ಳಿ
ಬಂಗಾರಗಳ ಪಾತ್ರೆಗಳಿಗೆ ಉಪಯೋಗಿಸದೆ ಕೆಲಸ
ಗಾರರ ವೇತನಕ್ಕೆ ಉಪಯೋಗಿಸಿದರು. ಆ ಕೆಲಸಗಾರರು

ದೇವಾಲಯವನ್ನು ಸರಿಪಡಿಸಿದರು. 15ಯಾರೂ ಆ ಹಣ
ವನ್ನು ಲೆಕ್ಕ ಹಾಕಲಿಲ್ಲ. ಇಲ್ಲವೆ ಆ ಹಣವೇನಾಯಿತೆಂದು
ಯಾವ ಕೆಲಸಗಾರನನ್ನೂ ಒತ್ತಾಯಿಸಿ ಕೇಳಲಿಲ್ಲ.
ಏಕೆಂದರೆ ಆ ಕೆಲಸಗಾರರು ನಂಬಿಗಸ್ತರಾಗಿದ್ದರು!
16ಜನರು ತಮ್ಮ ಅಪರಾಧ ಪ್ರಾಯಶ್ಚಿತ್ತ ಮತ್ತು
ದೋಷಪರಿಹಾರದ ಸಮಯದಲ್ಲಿ ಹಣವನ್ನು ಕೊಟ್ಟರು.
ಆದರೆ ಅಂತಹ ಹಣವನ್ನು ಕೆಲಸಗಾರರ ವೇತನಕ್ಕೆ ಉಪ
ಯೋಗಿಸಲಿಲ್ಲ. ಆ ಹಣವು ಯಾಜಕರಿಗೆ ಸೇರಿತ್ತು.

## ಯೆಹೋವಾಷನು ಹಜಾಯೇಲನಿಂದ ಜೆರುಸಲೇಮನ್ನು ರಕ್ಷಿಸಿದನು

17ಹಜಾಯೇಲನು ಅರಾಮ್ಯರ ರಾಜನಾಗಿದ್ದನು.
ಹಜಾಯೇಲನು ಗತ್ ಊರನ್ನು ಸೋಲಿಸಿದನು. ಆಗ
ಅವನು ಜೆರುಸಲೇಮಿನ ವಿರುದ್ಧ ಯುದ್ಧಕ್ಕೆ ಹೋಗಲು
ಯೋಚಿಸಿದನು.
18ಯೆಹೋಷಾಫಾಟ್, ಯೆಹೋರಾಮ್ ಮತ್ತು ಅಹ
ಜ್ಯರು ಯೆಹೂದದ ರಾಜರಾಗಿದ್ದರು. ಅವರೆಲ್ಲ
ಯೆಹೋವಾಷನ ಪೂರ್ವಿಕರು. ಅವರು ಅನೇಕ ವಸ್ತು
ಗಳನ್ನು ಯೆಹೋವನಿಗೆ ಕೊಟ್ಟಿದ್ದರು. ಅವುಗಳನ್ನೆಲ್ಲ
ಆಲಯದಲ್ಲಿ ಇಟ್ಟಿದ್ದರು. ಯೆಹೋವಾಷನೂ ಯೆಹೋ
ವನಿಗೆ ಅನೇಕ ವಸ್ತುಗಳನ್ನು ಕೊಟ್ಟಿದ್ದನು. ಯೆಹೋ
ವಾಷನು ಅವುಗಳ ಜೊತೆಗೆ, ಆಲಯದಲ್ಲಿದ್ದ ಮತ್ತು ತನ್ನ
ಮನೆಯಲ್ಲಿದ್ದ ಬಂಗಾರವನ್ನೆಲ್ಲ ತೆಗೆದುಕೊಂಡನು.
ನಂತರ ಯೆಹೋವಾಷನು ಆ ಬೆಲೆಬಾಳುವ ವಸ್ತುಗಳ
ನ್ನೆಲ್ಲ ಅರಾಮ್ಯರ ರಾಜನಾದ ಹಜಾಯೇಲನಿಗೆ ಕಳುಹಿಸಿ
ದನು. ಆದ್ದರಿಂದ ಹಜಾಯೇಲನು ಜೆರುಸಲೇಮಿನ
ವಿರುದ್ಧ ಯುದ್ಧಮಾಡದೆ ಹೊರಟುಹೋದನು.

## ಯೆಹೋವಾಷನ ಮರಣ

19‘‘ಯೆಹೂದದ ರಾಜರುಗಳ ಇತಿಹಾಸ’’ ಎಂಬ
ಪುಸ್ತಕದಲ್ಲಿ ಯೆಹೋವಾಷನು ಮಾಡಿದ ಇತರ ಮಹಾ
ಕಾರ್ಯಗಳ ಬಗ್ಗೆ ಬರೆಯಲಾಗಿದೆ.
20ಯೆಹೋವಾಷನ ಅಧಿಕಾರಿಗಳು ಅವನ ವಿರುದ್ಧ
ವಾಗಿ ಸಂಚುಮಾಡಿ ಅವನನ್ನು ಸಿಲ್ಲಾಕ್ಕೆ ಹೋಗುವ
ರಸ್ತೆಯಲ್ಲಿದ್ದ ಮಿಲ್ಲೋ ಮನೆಯಲ್ಲಿ ಕೊಂದುಹಾಕಿದರು.
21ಶಿಮೆಯಾತನ ಮಗನಾದ ಯೋಜಾಕಾರನು ಮತ್ತು
ಶೋಮೇರನ ಮಗನಾದ ಯೆಹೋದಾಬಾದನು
ಯೆಹೋವಾಷನ ಅಧಿಕಾರಿಗಳಾಗಿದ್ದರು. ಅವರು
ಯೆಹೋವಾಷನನ್ನು ಕೊಂದರು.

ಜನರು ಯೆಹೋವಾಷನನ್ನು ದಾವೀದನಗರದಲ್ಲಿ
ಅವನ ಪೂರ್ವಿಕರ ಬಳಿ ಸಮಾಧಿ ಮಾಡಿದರು. ಯೆಹೋ
ವಾಷನ ನಂತರ ಅವನ ಮಗನಾದ ಅಮಚ್ಯನು ನೂತನ
ರಾಜನಾದನು.

## ಯೆಹೋವಾಹಾಜನು ತನ್ನ ಆಳ್ವಿಕೆಯನ್ನು ಆರಂಭಿಸಿದನು.

13 ಯೆಹೂದದ ಅರಸನೂ ಅಹಜ್ಯನ ಮಗನೂ ಆದ
ಯೆಹೋವಾಷನ ಆಳ್ವಿಕೆಯ ಇಪ್ಪತ್ತಮೂರ
ನೆಯ ವರ್ಷದಲ್ಲಿ ಯೇಹುವಿನ ಮಗನಾದ ಯೆಹೋ
ವಾಹಾಜನು ಸಮಾರ್ಯದಲ್ಲಿ ಇಸ್ರೇಲಿನ ರಾಜನಾದನು.
ಯೆಹೋವಾಹಾಜನು ಹದಿನೇಳು ವರ್ಷ ಆಳಿದನು.
2ಯೆಹೋವನು ತಪ್ಪೆಂದು ಹೇಳಿದ ಕಾರ್ಯಗಳನ್ನು
ಯೆಹೋವಾಹಾಜನು ಮಾಡಿದನು. ಇಸ್ರೇಲರನ್ನು ಪಾಪ
ಮಾಡುವಂತೆ ಪ್ರೇರೇಪಿಸಿದ ನೆಬಾಟನ ಮಗನಾದ
ಯಾರೊಬ್ಬಾಮನ ಪಾಪಗಳನ್ನೂ ಯೆಹೋವಾಹಾಜನು
ಅನುಸರಿಸುತ್ತಲೇ ಹೋದನು. 3ಆಗ ಯೆಹೋವನು
ಇಸ್ರೇಲಿಗೆ ವಿರುದ್ಧವಾಗಿ ಕೋಪಗೊಂಡು ಅರಾಮ್ಯರ
ರಾಜನಾದ ಹಜಾಯೇಲನ ಮತ್ತು ಅವನ ಮಗನಾದ
ಬೆನ್ಹದದನ ಅಧೀನಕ್ಕೆ ಇಸ್ರೇಲನ್ನು ಒಪ್ಪಿಸಿದನು.

## ಇಸ್ರೇಲಿನ ಮೇಲೆ ಯೆಹೋವನ ಕರುಣೆ

4ಆಗ ಯೆಹೋವಾಹಾಜನು ಯೆಹೋವನಿಗೆ ಮೊರೆ
ಯಿಟ್ಟನು. ಯೆಹೋವನು ಅವನ ಮೊರೆಯನ್ನು ಕೇಳಿ,
ಅರಾಮ್ಯರ ರಾಜನಿಂದ ಬಾಧೆಗೆ ಒಳಗಾಗಿದ್ದ 5ಇಸ್ರೇ
ಲನ್ನು ರಕ್ಷಿಸಲು ಒಬ್ಬನನ್ನು ಯೆಹೋವನು ಕಳುಹಿಸಿ
ದನು. ಇಸ್ರೇಲರು ಅರಾಮ್ಯದಿಂದ ಬಿಡುಗಡೆಗೊಂಡು
ಸ್ವತಂತ್ರರಾದರು. ಇಸ್ರೇಲರು ತಮ್ಮ ಸ್ವಂತ ಮನೆಗಳಿಗೆ
ಹಿಂದಿರುಗಿ ಸುರಕ್ಷಿತವಾಗಿ ವಾಸಿಸಿದರು.
6ಆದರೂ ಇಸ್ರೇಲರು ಪಾಪಗಳನ್ನು ಮಾಡುವಂತೆ
ಪ್ರೇರೇಪಿಸಿದ ಯಾರೊಬ್ಬಾಮನ ಕುಟುಂಬದ ಪಾಪ
ಗಳನ್ನು ಮಾಡುವುದನ್ನು ಇಸ್ರೇಲರು ನಿಲ್ಲಿಸಲಿಲ್ಲ.
ಇಸ್ರೇಲರು ಯಾರೊಬ್ಬಮನ ಪಾಪಗಳನ್ನು ಮಾಡುತ್ತಲೇ
ಹೋದರು. ಅವರು ಸಮಾರ್ಯದಲ್ಲಿ ಅಶೇರ ವಿಗ್ರಹ
ಸ್ತಂಭವನ್ನು ನೆಟ್ಟರು.
7ಅರಾಮ್ಯರ ರಾಜನು ಯೆಹೋವಾಹಾಜನ ಸೇನೆ
ಯನ್ನು ಸೋಲಿಸಿದನು, ಅರಾಮ್ಯರ ರಾಜನು ಐವತ್ತು
ಮಂದಿ ರಾಹುತರನ್ನು, ಹತ್ತು ರಥಗಳನ್ನು ಮತ್ತು ಹತ್ತು
ಸಾವಿರ ಭೂಸೈನಿಕರನ್ನು ಬಿಟ್ಟು ಉಳಿದವರೆಲ್ಲರನ್ನು
ಸುಗ್ಗಿಯ ಕಾಲದಲ್ಲಿ ಗಾಳಿಗೆ ಹಾರಿಹೋಗುವ ಹೊಟ್ಟಿ
ನಂತೆ ನಾಶಮಾಡಿದನು.
8‘‘ಇಸ್ರೇಲಿನ ರಾಜರುಗಳ ಇತಿಹಾಸ’’ ಎಂಬ ಪುಸ್ತಕ
ದಲ್ಲಿ ಯೆಹೋವಾಹಾಜನು ಮಾಡಿದ ಇತರ ಮಹಾ
ಕಾರ್ಯಗಳನ್ನು ಕುರಿತು ಬರೆಯಲಾಗಿದೆ. 9ಯೆಹೋ
ವಾಹಾಜನು ತೀರಿಕೊಂಡಾಗ ಅವನನ್ನು ಅವನ ಪೂರ್ವಿ
ಕರ ಬಳಿ ಸಮಾರ್ಯದಲ್ಲಿ ಸಮಾಧಿ ಮಾಡಿದರು.
ಯೆಹೋವಾಹಾಜನ ನಂತರ ಅವನ ಮಗನಾದ
ಯೋವಾಷಾನು ನೂತನ ರಾಜನಾದನು.

### ಇಸ್ರೇಲಿನಲ್ಲಿ ಯೋವಾಷನ ಆಳ್ವಿಕೆ

[10]ಯೆಹೂದದ ರಾಜನಾಗಿದ್ದ ಯೆಹೋವಾಷನ
ಆಳ್ವಿಕೆಯ ಮೂವತ್ತೇಳನೆಯ ವರ್ಷದಲ್ಲಿ ಯೆಹೋವಾ
ಹಾಜನ ಮಗನಾದ ಯೋವಾಷನು ಸಮಾರ್ಯದಲ್ಲಿ
ಇಸ್ರೇಲಿನ ರಾಜನಾದನು. ಯೋವಾಷನು ಇಸ್ರೇಲನ್ನು
ಹದಿನಾರು ವರ್ಷ ಆಳಿದನು. [11]ಯೆಹೋವನು ತಪ್ಪೆಂದು
ಹೇಳಿದ ಕಾರ್ಯಗಳನ್ನು ಇಸ್ರೇಲಿನ ರಾಜನಾದ ಯೋವಾ
ಷನು ಮಾಡಿದನು. ಇಸ್ರೇಲರು ಪಾಪಗಳನ್ನು ಮಾಡು
ವಂತೆ ಪ್ರೇರೇಪಿಸಿದ ನೆಬಾಟನ ಮಗನಾದ ಯಾರೊ
ಬ್ಬಾಮನ ಪಾಪಗಳನ್ನು ಮತ್ತೆ ಮಾಡುವುದನ್ನು ಅವನು
ನಿಲ್ಲಿಸಲಿಲ್ಲ. [12]ಯೋವಾಷಾನು ಮಾಡಿದ ಮಹಾ
ಕಾರ್ಯಗಳನ್ನು ಮತ್ತು ಯೆಹೂದದ ರಾಜನಾದ
ಅಮಚ್ಯನ ವಿರುದ್ಧವಾಗಿ ಅವನು ಮಾಡಿದ ಯುದ್ಧ
ಗಳನ್ನು, ''ಇಸ್ರೇಲರ ರಾಜರುಗಳ ಇತಿಹಾಸ'' ಎಂಬ
ಪುಸ್ತಕದಲ್ಲಿ ಬರೆಯಲಾಗಿದೆ. [13]ಯೋವಾಷಾನು ತೀರಿ
ಕೊಂಡಾಗ ಅವನ ಪೂರ್ವಿಕರ ಬಳಿಯಲ್ಲಿ ಅವನನ್ನು
ಸಮಾಧಿಮಾಡಿದರು. ಅನಂತರ ಯಾರೊಬ್ಬಾಮನು
ಯೋವಾಷಾನ ಸಿಂಹಾಸನದ ಮೇಲೆ ಕುಳಿತುಕೊಂಡು
ನೂತನ ರಾಜನಾದನು. ಯೋವಾಷನನ್ನು ಸಮಾರ್ಯ
ದಲ್ಲಿ ಇಸ್ರೇಲಿನ ರಾಜರುಗಳ ಜೊತೆ ಸಮಾಧಿ
ಮಾಡಿದರು.

### ಯೋವಾಷನು ಎಲೀಷನನ್ನು ಸಂಧಿಸುವನು

[14]ಎಲೀಷನು ಕಾಯಿಲೆ ಬಿದ್ದನು. ತರುವಾಯ, ಈ
ಕಾಯಿಲೆಯಿಂದ ಎಲೀಷನು ಸತ್ತುಹೋದನು. ಇಸ್ರೇಲಿನ
ರಾಜನಾದ ಯೋವಾಷಾನು ಎಲೀಷನ ಬಳಿಗೆ
ಹೋದನು. ಯೋವಾಷನು ಎಲೀಷನಿಗಾಗಿ ಗೋಳಾಡಿ
ದನು. ಯೋವಾಷನು ''ನನ್ನ ತಂದೆಯೇ, ನನ್ನ
ತಂದೆಯೇ, ದೇವರು ಬಂದು ನಿನ್ನನ್ನು ತೆಗೆದುಕೊಂಡು
ಹೋಗಲು ಇದು ಸಕಾಲವೇ?''* ಎಂದು ಹೇಳಿದನು.

[15]ಎಲೀಷನು ಯೋವಾಷನಿಗೆ, ''ಒಂದು ಬಿಲ್ಲು ಮತ್ತು
ಕೆಲವು ಬಾಣಗಳನ್ನು ತೆಗೆದುಕೋ'' ಎಂದು ಹೇಳಿದನು.

ಯೋವಾಷನು ಒಂದು ಬಿಲ್ಲು ಮತ್ತು ಕೆಲವು ಬಾಣ
ಗಳನ್ನು ತೆಗೆದುಕೊಂಡನು. [16]ಆಗ ಎಲೀಷನು ಇಸ್ರೇಲಿನ
ರಾಜನಿಗೆ, ''ಬಿಲ್ಲಿನ ಮೇಲೆ ನಿನ್ನ ಕೈಯನ್ನು ಇಡು''ಎಂದು
ಹೇಳಿದನು. ಯೋವಾಷನು ತನ್ನ ಕೈಯನ್ನು ಬಿಲ್ಲಿನ
ಮೇಲಿಟ್ಟನು. ನಂತರ ಎಲೀಷನು ತನ್ನ ಕೈಗಳನ್ನು ರಾಜನ
ಕೈಗಳ ಮೇಲಿಟ್ಟನು. [17]ಎಲೀಷನು,''ಪೂರ್ವದಿಕ್ಕಿನ ಕಿಟಕಿ
ಯನ್ನು ತೆಗೆ'' ಎಂದು ಹೇಳಿದನು. ಯೋವಾಷನು ಕಿಟಕಿ
ಯನ್ನು ತೆರೆದನು. ಆಗ ಎಲೀಷನು, ''ಹೊಡಿ'' ಎಂದನು.
ಯೋವಾಷನು ಹೊಡೆದನು. ಆಗ ಎಲೀಷನು, ''ಅದು
ಯೆಹೋವನ ವಿಜಯದ ಬಾಣ! ಅರಾಮ್ಯರ ಮೇಲಿನ
ವಿಜಯದ ಬಾಣ! ನೀನು ಅರಾಮ್ಯರನ್ನು ಅಫೇಕದಲ್ಲಿ
ಸೋಲಿಸುವೆ. ನೀನು ಅವರನ್ನು ನಾಶಗೊಳಿಸುವೆ''ಎಂದು
ಹೇಳಿದನು.

[18]ಎಲೀಷನು, ''ಬಾಣಗಳನ್ನು ತೆಗೆದುಕೊ'' ಎಂದನು.
ಯೋವಾಷನು ಬಾಣಗಳನ್ನು ತೆಗೆದುಕೊಂಡನು. ಆಗ
ಎಲೀಷನು ಇಸ್ರೇಲಿನ ರಾಜನಿಗೆ, ''ನೆಲದ ಮೇಲೆ
ಹೊಡಿ'' ಎಂದನು.

ಯೋವಾಷನು ನೆಲವನ್ನು ಮೂರು ಸಲ ಹೊಡೆದನು.
ನಂತರ ಅವನು ನಿಲ್ಲಿಸಿದನು. [19]ದೇವಮನುಷ್ಯನು (ಎಲೀ
ಷನು) ಯೋವಾಷನ ಮೇಲೆ ಕೋಪಗೊಂಡು, ''ನೀನು
ಐದು ಅಥವಾ ಆರು ಸಲ ಹೊಡೆಯಬೇಕಾಗಿತ್ತು! ಆಗ
ನೀನು ಅರಾಮ್ಯರನ್ನು ನಾಶಗೊಳಿಸುವವರೆಗೆ ಸೋಲಿಸಿ
ಬಿಡಬಹುದಾಗಿತ್ತು! ಆದರೆ ಈಗ ನೀನು ಅರಾಮ್ಯರನ್ನು
ಮೂರು ಸಲ ಮಾತ್ರ ಸೋಲಿಸುವೆ!''ಎಂದು ಹೇಳಿದನು.

### ಎಲೀಷನ ಸಮಾಧಿಯಲ್ಲಿ ಸಂಭವಿಸಿದ ಆಶ್ಚರ್ಯಕರವಾದ ಸಂಗತಿ

[20]ಎಲೀಷನು ತೀರಿಕೊಂಡಾಗ ಜನರು ಅವನನ್ನು
ಸಮಾಧಿಮಾಡಿದರು.

ವಸಂತಮಾಸದ ಒಂದು ದಿನ, ಮೋವಾಬ್ಯ ಸೈನಿಕರ
ಒಂದು ಗುಂಪು ಇಸ್ರೇಲಿಗೆ ಸುಲಿಗೆ ಮಾಡಲು ಬಂದಿತು.
[21]ಇಸ್ರೇಲರಲ್ಲಿ ಕೆಲವರು ಸತ್ತವನೊಬ್ಬನನ್ನು ಸಮಾಧಿ
ಮಾಡುತ್ತಿರುವಾಗ ಸೈನಿಕರ ಆ ಗುಂಪನ್ನು ನೋಡಿ
ಸತ್ತವನನ್ನು ಎಲೀಷನ ಸಮಾಧಿಯಲ್ಲಿ ಎಸೆದು ಓಡಿ
ಹೋದರು. ಎಲೀಷನ ಮೂಳೆಗಳನ್ನು ಸತ್ತವನು ಸ್ಪರ್ಶಿ
ಸಿದ ತಕ್ಷಣ, ಸತ್ತ ಮನುಷ್ಯನಿಗೆ ಜೀವ ಬಂದು, ಅವನು
ತನ್ನ ಕಾಲುಗಳ ಮೇಲೆ ನಿಂತುಕೊಂಡನು!

### ಯೋವಾಷನು ಅರಾಮ್ಯರಿಂದ ಇಸ್ರೇಲಿನ ನಗರಗಳನ್ನು ಮತ್ತೆ ಗೆದ್ದುಕೊಂಡನು

[22]ಯೆಹೋವಾಹಾಜನು ಆಳುತ್ತಿದ್ದ ದಿನಗಳಲ್ಲೆಲ್ಲಾ
ಅರಾಮ್ಯರ ರಾಜನಾದ ಹಜಾಯೇಲನು ಇಸ್ರೇಲಿಗೆ
ತೊಂದರೆ ಕೊಡುತ್ತಿದ್ದನು. [23]ಆದರೆ ಯೆಹೋವನು
ಇಸ್ರೇಲರಿಗೆ ದಯಾಪರನಾಗಿದ್ದನು. ಯೆಹೋವನು
ಕರುಣೆಯಿಂದ ಇಸ್ರೇಲರಿಗೆ ಅಭಿಮುಖನಾದನು.
ಏಕೆಂದರೆ ಆತನು ಅಬ್ರಹಾಮನೊಂದಿಗೆ ಇಸಾಕ
ನೊಂದಿಗೆ ಮತ್ತು ಯಾಕೋಬನೊಂದಿಗೆ ಒಡಂಬಡಿಕೆ
ಮಾಡಿಕೊಂಡಿದ್ದನು. ಯೆಹೋವನು ಇಸ್ರೇಲರನ್ನು ನಾಶ
ಗೊಳಿಸಲಿಲ್ಲ. ಅವರನ್ನು ಇನ್ನೂ ತಳ್ಳಿಬಿಟ್ಟಿರಲಿಲ್ಲ.

[24]ಅರಾಮ್ಯರ ರಾಜನಾದ ಹಜಾಯೇಲನು ಸತ್ತಮೇಲೆ
ಬೆನ್ಹದದನು ನೂತನ ರಾಜನಾದನು. [25]ಹಜಾಯೇಲನು

---

**ದೇವರು … ಸಕಾಲವೇ** ಅಕ್ಷರಶಃ, '' ಇಸ್ರೇಲಿನ ರಥಗಳಿಗೂ ಕುದುರೆ
ಗಳಿಗೂ ಇದು ಸಕಾಲವೇ?'' ನೋಡಿ 2 ರಾಜರುಗಳು .

ಸಾಯುವುದಕ್ಕೆ ಮೊದಲು, ಯೋವಾಷನ ತಂದೆಯಾದ ಯೆಹೋವಾಹಾಜನಿಂದ ಯುದ್ಧದಲ್ಲಿ ಕೆಲವು ನಗರ ಗಳನ್ನು ಮತ್ತೆ ವಶಪಡಿಸಿಕೊಂಡನು. ಆದರೆ ಈಗ ಯೋವಾಷನು ಹಜಾಯೇಲನ ಮಗನಾದ ಬೆನ್ಹದದ ನಿಂದ ಈ ನಗರಗಳನ್ನು ವಶಪಡಿಸಿಕೊಂಡನು. ಯೋವಾ ಷಾನು ಬೆನ್ಹದದನನ್ನು ಮೂರು ಸಲ ಸೋಲಿಸಿ ಇಸ್ರೇಲಿನ ನಗರಗಳನ್ನು ವಶಪಡಿಸಿಕೊಂಡನು.

### ಅಮಚ್ಯನು ಯೆಹೂದದಲ್ಲಿ ತನ್ನ ಆಳ್ವಿಕೆಯನ್ನು ಆರಂಭಿಸುವನು

14 ಯೆಹೋವಾಹಾಜನ ಮಗನಾದಯೋವಾಷನು
ಇಸ್ರೇಲಿನ ರಾಜನಾಗಿದ್ದ ಎರಡನೆಯ ವರ್ಷದಲ್ಲಿ
ಯೆಹೋವಾಷನ ಮಗ ಅಮಚ್ಯನು ಯೆಹೂದದ ರಾಜ
ನಾದನು. 2ಅಮಚ್ಯನು ಆಳಲಾರಂಭಿಸಿದಾಗ ಅವನಿಗೆ
ಇಪ್ಪತ್ತೈದು ವರ್ಷ ವಯಸ್ಸಾಗಿತ್ತು. ಅಮಚ್ಯನು ಜೆರುಸ
ಲೇಮಿನಲ್ಲಿ ಇಪ್ಪತ್ತೊಂಭತ್ತು ವರ್ಷ ಆಳಿದನು. ಜೆರುಸ
ಲೇಮಿನ ಯೆಹೋವದ್ದೀನಳು ಅಮಚ್ಯನ ತಾಯಿ.
3ಯೆಹೋವನು ಸರಿಯೆಂದು ಹೇಳಿದ ಕಾರ್ಯಗಳನ್ನು
ಅಮಚ್ಯನು ಮಾಡಿದನು. ಆದರೆ ಅವನು ತನ್ನ ಪೂರ್ವಿ
ಕನಾದ ದಾವೀದನು ಅನುಸರಿಸಿದಂತೆ ಸಂಪೂರ್ಣವಾಗಿ
ಯೆಹೋವನನ್ನು ಅನುಸರಿಸಲಿಲ್ಲ. ಅಮಚ್ಯನು ತನ್ನ
ತಂದೆಯಾದ ಯೆಹೋವಾಷನು ಮಾಡಿದ ಕಾರ್ಯ
ಗಳನ್ನೆಲ್ಲ ಮಾಡಿದನು.

4ಆದರೆ ಅವನು ಉನ್ನತ ಪೂಜಾ ಸ್ಥಳಗಳನ್ನು ನಾಶ
ಗೊಳಿಸಲಿಲ್ಲ. ಜನರು ಪೂಜಾಸ್ಥಳಗಳಲ್ಲಿ ಇನ್ನೂ ಯಜ್ಞ
ಗಳನ್ನು ಅರ್ಪಿಸುತ್ತಿದ್ದರು ಮತ್ತು ಧೂಪಗಳನ್ನು
ಸುಡುತ್ತಿದ್ದರು.

5ಅಮಚ್ಯನು ರಾಜ್ಯಾಧಿಕಾರವನ್ನು ಬಿಗಿಗೊಳಿಸಿಕೊಂಡ
ಮೇಲೆ, ತನ್ನ ತಂದೆಯನ್ನು ಕೊಂದ ಅಧಿಕಾರಿಗಳನ್ನು
ಕೊಂದುಹಾಕಿದನು. 6ಆದರೆ ಮೋಶೆಯ ಧರ್ಮ
ಶಾಸ್ತ್ರದಲ್ಲಿನ ನಿಯಮಗಳಿಗನುಸಾರವಾಗಿ ಅವನು ಕೊಲೆ
ಗಾರರ ಮಕ್ಕಳನ್ನು ಕೊಂದುಹಾಕಲಿಲ್ಲ. ಮೋಶೆಯ
ಧರ್ಮಶಾಸ್ತ್ರದಲ್ಲಿ ಯೆಹೋವನು, ‘‘ಮಕ್ಕಳು ಮಾಡಿದ
ತಪ್ಪಿಗೆ ತಂದೆತಾಯಿಗಳನ್ನು ಸಾವಿಗೆ ಗುರಿಪಡಿಸಬಾರದು.
ತಂದೆತಾಯಿಗಳು ಮಾಡಿದ ತಪ್ಪಿಗೆ ಅವರ ಮಕ್ಕಳನ್ನು
ಸಾವಿಗೆ ಗುರಿಪಡಿಸಬಾರದು. ಒಬ್ಬ ವ್ಯಕ್ತಿಯನ್ನು ಅವನು
ಮಾಡಿದ ಕೆಟ್ಟ ಕಾರ್ಯಕ್ಕಾಗಿ ಮಾತ್ರ ಸಾವಿಗೆ ಗುರಿ
ಪಡಿಸಬೇಕು’’ ಎಂದು ಆಜ್ಞಾಪಿಸಿದ್ದಾನೆ.

7ಅಮಚ್ಯನು ಉಪ್ಪಿನ ಕಣಿವೆಯಲ್ಲಿ ಹತ್ತು ಸಾವಿರ
ಎದೋಮ್ಯರನ್ನು ಕೊಂದುಹಾಕಿ ಅವರಿಂದ ಸೆಲ ದುರ್ಗ
ವನ್ನು ವಶಪಡಿಸಿಕೊಂಡು ಅದನ್ನು ‘‘ಯೊಕ್ತೆಯೇಲ್’’
ಎಂದು ಕರೆದನು. ಆ ಸ್ಥಳಕ್ಕೆ ಇಂದಿಗೂ ಅದೇ ಹೆಸರಿದೆ.

### ಯೋವಾಷನ ವಿರುದ್ಧ ಯುದ್ಧಮಾಡಲು ಅಮಚ್ಯನ ಅಪೇಕ್ಷೆ

8ಇಸ್ರೇಲರ ರಾಜನೂ ಯೇಹುವಿನ ಮೊಮ್ಮಗನೂ
ಯೆಹೋವಾಹಾಜನ ಮಗನೂ ಆದ ಯೋವಾಷನ ಬಳಿಗೆ
ಅಮಚ್ಯನು ಸಂದೇಶಕರನ್ನು ಕಳುಹಿಸಿದನು. ಅಮಚ್ಯನು
ಸಂದೇಶದಲ್ಲಿ, ‘‘ಬಾ, ನಾವು ಪರಸ್ಪರ ಯುದ್ಧ
ಮಾಡೋಣ!’’ ಎಂದು ಹೇಳಿದ್ದನು.

9ಇಸ್ರೇಲಿನ ರಾಜನಾದ ಯೋವಾಷನು ಯೆಹೂದದ
ರಾಜನಾದ ಅಮಚ್ಯನಿಗೆ,‘‘ಲೆಬನೋನಿನ ಒಂದು ಮುಳ್ಳು
ಗಿಡವು ಲೆಬನೋನಿನ ದೇವದಾರುಮರಕ್ಕೆ ಒಂದು
ಸಂದೇಶವನ್ನು ಕಳುಹಿಸಿತು. ಅದು, ‘ನನ್ನ ಮಗನಿಗೆ ನಿನ್ನ
ಮಗಳನ್ನು ಕೊಟ್ಟು ಮದುವೆ ಮಾಡು’ ಎಂದಿತು. ಆದರೆ
ಲೆಬನೋನಿನ ಒಂದು ಕಾಡುಮೃಗವು ಆ ದಾರಿಯಲ್ಲಿ
ಹೋಗುವಾಗ, ಮುಳ್ಳುಗಿಡದ ಮೇಲೆ ಹಾದು
ಹೋಯಿತು. 10ನೀನು ಎದೋಮ್ಯರನ್ನು ಸೋಲಿಸಿದೆ
ಯೆಂಬುದು ನಿಜ. ಆದರೆ ನೀನು ಎದೋಮ್ಯರ ಮೇಲೆ
ಜಯಗಳಿಸಿದ್ದರಿಂದ ಗರ್ವಿತನಾಗಿರುವೆ. ನೀನು ನಿನ್ನ
ಮನೆಯಲ್ಲೇ ಕುಳಿತು ಬಡಾಯಿಕೊಚ್ಚಿಕೋ. ನಿನಗೆ
ತೊಂದರೆಯನ್ನು ತಂದುಕೊಳ್ಳಬೇಡ. ಇಲ್ಲವಾದರೆ
ನೀನೂ ಬೀಳುವುದಲ್ಲದೆ, ಯೆಹೂದವೂ ನಿನ್ನೊಂದಿಗೆ
ಬಿದ್ದುಹೋಗುವುದು!’’ ಎಂದು ಹೇಳಿದನು.

11ಆದರೆ ಯೋವಾಷನ ಎಚ್ಚರಿಕೆಯನ್ನು ಅಮಚ್ಯನು
ಆಲಿಸಲೇ ಇಲ್ಲ. ಆದ್ದರಿಂದ ಇಸ್ರೇಲಿನ ರಾಜನಾದ
ಯೋವಾಷನು ಯೆಹೂದದ ರಾಜನಾದ ಅಮಚ್ಯನ
ವಿರುದ್ಧ ಹೋರಾಟ ಮಾಡಲು ಯೆಹೂದದ ಬೇತ್ಷೆ
ಮೆಷಿಗೆ ಹೋದನು. 12ಯೆಹೂದ್ಯರನ್ನು ಇಸ್ರೇಲರು
ಸೋಲಿಸಿದರು. ಯೆಹೂದದ ಪ್ರತಿಯೊಬ್ಬರೂ ಮನೆಗೆ
ಓಡಿಹೋದರು. 13ಇಸ್ರೇಲಿನ ರಾಜನಾದ ಯೋವಾಷನು
ಬೇತ್ಷೆಮೆಷಿನಲ್ಲಿ ಯೆಹೂದದ ರಾಜನಾದ ಅಮಚ್ಯನನ್ನು
ಸೆರೆಹಿಡಿದನು. ಅಮಚ್ಯನು ಯೆಹೋವಾಷನ ಮಗನೂ
ಅಹಜ್ಯನ ಮೊಮ್ಮಗನೂ ಆಗಿದ್ದನು. ಯೋವಾಷನು
ಜೆರುಸಲೇಮಿಗೆ ಬಂದು ಎಫ್ರಾಯೀಮ್ ಬಾಗಿಲಿನಿಂದ
ಮೂಲೆಯ ಬಾಗಿಲಿನವರೆಗೆ ಆರುನೂರು ಅಡಿ ಉದ್ದದ
ಗೋಡೆಯನ್ನು ಒಡೆದುಹಾಕಿದನು. 14ನಂತರ ಯೋವಾ
ಷನು ದೇವಾಲಯದಲ್ಲಿದ್ದ ಮತ್ತು ಅರಮನೆಯ ಭಂಡಾ
ರದಲ್ಲಿದ್ದ ಬೆಳ್ಳಿಬಂಗಾರಗಳನ್ನು ಮತ್ತು ಪಾತ್ರೆಗಳನ್ನೆಲ್ಲ
ತೆಗೆದುಕೊಂಡನು. ಇದಲ್ಲದೆ ಯೋವಾಷನು ಜನರನ್ನು
ಸಹ ತನ್ನ ಸೆರೆಯಾಳುಗಳನ್ನಾಗಿ ತೆಗೆದುಕೊಂಡು ಸಮಾ
ರ್ಯಕ್ಕೆ ಹಿಂದಿರುಗಿದನು.

15‘‘ಇಸ್ರೇಲಿನ ರಾಜರುಗಳ ಇತಿಹಾಸ’’ಎಂಬ ಪುಸ್ತಕ
ದಲ್ಲಿ ಯೋವಾಷನು ಮಾಡಿದ ಇತರ ಮಹಾಕಾರ್ಯ
ಗಳನ್ನೂ ಯೆಹೂದದ ರಾಜನಾದ ಅಮಚ್ಯನ ವಿರುದ್ಧ
ಅವನು ಹೇಗೆ ಹೋರಾಡಿದನೆಂಬುದನ್ನೂ ಬರೆಯ

ಲಾಗಿದೆ. 16ಯೋವಾಷನು ತೀರಿಕೊಂಡಾಗ ಅವನನ್ನು
ಅವನ ಪೂರ್ವಿಕರಾದ ಇಸ್ರೇಲಿನ ರಾಜರೊಡನೆ
ಸಮಾರ್ಯದಲ್ಲಿ ಸಮಾಧಿಮಾಡಿದರು. ಯೋವಾಷನ
ನಂತರ ಅವನ ಮಗನಾದ ಯಾರೊಬ್ಬಮನು ನೂತನ
ರಾಜನಾದನು.

## ಅಮಚ್ಯನ ಸಾವು

17ಇಸ್ರೇಲರ ರಾಜನೂ ಯೆಹೋವಾಹಾಜನ ಮಗನೂ
ಆದ ಯೋವಾಷನು ಸತ್ತ ನಂತರ ಹದಿನೈದು ವರ್ಷ
ಯೆಹೂದದ ರಾಜನೂ ಯೆಹೋವಾಷನ ಮಗನೂ ಆದ
ಅಮಚ್ಯನು ಬದುಕಿದ್ದನು. 18“ ಯೆಹೂದದ ರಾಜರುಗಳ
ಇತಿಹಾಸ” ಎಂಬ ಪುಸ್ತಕದಲ್ಲಿ ಅಮಚ್ಯನು ಮಾಡಿದ ಇತರ
ಮಹಾಕಾರ್ಯಗಳನ್ನೆಲ್ಲ ಬರೆಯಲಾಗಿದೆ. 19ಜನರು
ಜೆರುಸಲೇಮಿನಲ್ಲಿ ಅಮಚ್ಯನ ವಿರುದ್ಧವಾಗಿ ಒಳಸಂಚು
ಮಾಡಿದರು. ಅಮಚ್ಯನು ಲಾಕೀಷಿಗೆ ಓಡಿಹೋದನು.
ಆದರೆ ಜನರು ಅಮಚ್ಯನ ಹಿಂದೆ ಲಾಕೀಷಿಗೆ ಆಳುಗಳನ್ನು
ಕಳುಹಿಸಿದರು. ಅವರು ಲಾಕೀಷಿನಲ್ಲಿ ಅಮಚ್ಯನನ್ನು
ಕೊಂದುಹಾಕಿದರು. 20ಅಮಚ್ಯನ ದೇಹವನ್ನು ಜನರು
ಕುದುರೆಗಳ ಮೇಲೆ ತೆಗೆದುಕೊಂಡು ಬಂದರು. ಅಮಚ್ಯ
ನನ್ನು ಜೆರುಸಲೇಮಿನಲ್ಲಿರುವ ದಾವೀದನಗರದಲ್ಲಿ
ಅವನ ಪೂರ್ವಿಕರ ಬಳಿ ಸಮಾಧಿಮಾಡಿದರು.

## ಅಜರ್ಯನು ಯೆಹೂದದಲ್ಲಿ ತನ್ನ ಆಳ್ವಿಕೆಯನ್ನು ಆರಂಭಿಸಿದನು

21ನಂತರ ಯೆಹೂದದ ಜನರೆಲ್ಲರೂ ಅಜರ್ಯನನ್ನು
ನೂತನ ರಾಜನನ್ನಾಗಿ ಮಾಡಿದರು. ಅಜರ್ಯನಿಗೆ ಹದಿ
ನಾರು ವರ್ಷ ವಯಸ್ಸಾಗಿತ್ತು. 22ರಾಜನಾದ ಅಮಚ್ಯನು
ಸತ್ತಮೇಲೆ ಅವನನ್ನು ಅವನ ಪೂರ್ವಿಕರ ಸ್ಮಶಾನದಲ್ಲಿ
ಸಮಾಧಿಮಾಡಿದರು. ನಂತರ ಅರ್ಜಯನು ಏಲತ್
ಪಟ್ಟಣವನ್ನು ಮತ್ತೆ ನಿರ್ಮಿಸಿ ಅದನ್ನು ಯೆಹೂದ ರಾಜ್ಯಕ್ಕೆ
ಸೇರಿಸಿಕೊಂಡನು.

## ಎರಡನೆಯ ಯಾರೊಬ್ಬಾಮನು ಇಸ್ರೇಲಿನಲ್ಲಿ ತನ್ನ ಆಳ್ವಿಕೆಯನ್ನು ಆರಂಭಿಸಿದನು

23ಯೆಹೂದದ ರಾಜನೂ ಯೆಹೋವಾಷನ ಮಗನೂ
ಆದ ಅಮಚ್ಯನ ಆಳ್ವಿಕೆಯ ಹದಿನೈದನೆಯ ವರ್ಷದಲ್ಲಿ
ಇಸ್ರೇಲರ ರಾಜನೂ ಯೋವಾಷನ ಮಗನೂ ಆದ
ಯಾರೊಬ್ಬಾಮನು ಸಮಾರ್ಯದಲ್ಲಿ ಆಳಲಾರಂಭಿಸಿ
ದನು. ಯಾರೊಬ್ಬಾಮನು ನಲವತ್ತೊಂದು ವರ್ಷ
ಆಳಿದನು. 24ಯೆಹೋವನು ಕೆಟ್ಟದ್ದೆಂದು ಹೇಳಿದ
ಕಾರ್ಯಗಳನ್ನು ಯಾರೊಬ್ಬಾಮನು ಮಾಡಿದನು.
ಇಸ್ರೇಲರನ್ನು ಪಾಪ ಮಾಡುವಂತೆ ಪ್ರೇರೇಪಿಸಿದ
ನೆಬಾಟನ ಮಗನಾದ ಯಾರೊಬ್ಬಾಮನ ಪಾಪಕಾರ್ಯ
ಗಳನ್ನು ಮಾಡುವುದನ್ನು ಯಾರೊಬ್ಬಾಮನು ನಿಲ್ಲಿ
ಸಲಿಲ್ಲ. 25ಲೆಬೊ ಹಮಾತಿನಿಂದ ಅರಾಬ ಸಮುದ್ರದ
ವರೆಗೆ ಹಬ್ಬಿದ ಇಸ್ರೇಲರ ದೇಶವನ್ನು ಯಾರೊಬ್ಬಾಮನು
ಮತ್ತೆ ವಶಪಡಿಸಿಕೊಂಡನು. ಇಸ್ರೇಲರ ಯೆಹೋವನು
ತನ್ನ ಸೇವಕನೂ ಅಮಿತ್ತೈನ ಮಗನೂ ಗತ್ ಹೇಫೆರಿನ
ಪ್ರವಾದಿಯೂ ಆದ ಯೋನಾ ಎಂಬವನ ಮೂಲಕ
ಮೊದಲೇ ತಿಳಿಸಿದ್ದಂತೆ ಇದು ಸಂಭವಿಸಿತು. 26ಇಸ್ರೇಲಿನ
ಸ್ವತಂತ್ರರಾದ ಜನರೂ ಗುಲಾಮರೂ ಬಾಧೆಪಡುತ್ತಿರು
ವುದನ್ನು ಯೆಹೋವನು ನೋಡಿದನು. ಇಸ್ರೇಲರಿಗೆ
ಸಹಾಯ ಮಾಡುವವರು ಯಾರೂ ಇರಲಿಲ್ಲ. 27ಈ
ಲೋಕದಿಂದ ಇಸ್ರೇಲರ ಹೆಸರನ್ನೇ ತಾನು ಅಳಿಸಿ ಹಾಕು
ತ್ತೇನೆಂದು ಯೆಹೋವನು ಹೇಳಿರಲಿಲ್ಲ. ಆದ್ದರಿಂದ
ಇಸ್ರೇಲಿನ ಜನರನ್ನು ರಕ್ಷಿಸಲು ಯೆಹೋವನು ಯೋವಾ
ಷನ ಮಗನಾದ ಯಾರೊಬ್ಬಾಮನನ್ನು ಉಪಯೋಗಿಸಿ
ಕೊಂಡನು.

28“ಇಸ್ರೇಲಿನ ರಾಜರುಗಳ ಇತಿಹಾಸ” ಎಂಬ ಪುಸ್ತಕ
ದಲ್ಲಿ ಯಾರೊಬ್ಬಾಮನು ಮಾಡಿದ ಇತರ ಮಹಾ
ಕಾರ್ಯಗಳ ಬಗ್ಗೆ ಬರೆಯಲಾಗಿದೆ. ಯಾರೊಬ್ಬಾಮನು
ಇಸ್ರೇಲಿಗಾಗಿ ದಮಸ್ಕವನ್ನು ಮತ್ತು ಹಮಾತನ್ನು ವಶಪಡಿಸಿ
ಕೊಂಡದ್ದನ್ನು ಇದು ಒಳಗೊಂಡಿದೆ. (ಈ ನಗರಗಳು
ಯೆಹೂದಕ್ಕೆ ಸೇರಿದ್ದವು.) 29ಯಾರೊಬ್ಬಾಮನು ಸತ್ತ
ಮೇಲೆ ಅವನನ್ನು ಅವನ ಪೂರ್ವಿಕರಾದ ಇಸ್ರೇಲಿನ
ರಾಜರುಗಳ ಸ್ಮಶಾನದಲ್ಲಿ ಸಮಾಧಿಮಾಡಿದರು.
ಯಾರೊಬ್ಬಾಮನ ಮಗನಾದ ಜೆಕರ್ಯನು ಅವನ
ನಂತರ ಹೊಸ ರಾಜನಾದನು.

## ಯೆಹೂದದಲ್ಲಿ ಅಜರ್ಯನ ಆಳ್ವಿಕೆ

15 ಯಾರೊಬ್ಬಾಮನು ಇಸ್ರೇಲಿನ ರಾಜನಾಗಿದ್ದ
ಇಪ್ಪತ್ತೇಳನೆಯ ವರ್ಷದಲ್ಲಿ ಅಮಚ್ಯನ ಮಗ
ನಾದ ಅಜರ್ಯನು ಯೆಹೂದದ ರಾಜನಾದನು.
2ಅಜರ್ಯನು ಆಳಲಾರಂಭಿಸಿದಾಗ ಅವನಿಗೆ ಹದಿನಾರು
ವರ್ಷ ವಯಸ್ಸಾಗಿತ್ತು. ಅವನು ಜೆರುಸಲೇಮಿನಲ್ಲಿ ಐವತ್ತೆ
ರಡು ವರ್ಷ ಆಳಿದನು. ಜೆರುಸಲೇಮಿನ ಯೆಕೊಲ್ಯ ಎಂಬ
ಹೆಸರಿನವಳು ಅಜರ್ಯನ ತಾಯಿ. 3ಅಜರ್ಯನು ತನ್ನ
ತಂದೆಯಾದ ಅಮಚ್ಯನಂತೆ ಯೆಹೋವನ ದೃಷ್ಟಿಗೆ
ಯೋಗ್ಯವಾದ ಕಾರ್ಯಗಳನ್ನು ಮಾಡಿದನು. ಅಜ
ರ್ಯನು ತನ್ನ ತಂದೆಯಾದ ಅಮಚ್ಯನು ಮಾಡಿದ
ಕಾರ್ಯಗಳನ್ನೇ ಅನುಸರಿಸಿದನು.4ಆದರೆ ಅವನು ಉನ್ನತ
ಸ್ಥಳಗಳನ್ನು ನಾಶಗೊಳಿಸಲಿಲ್ಲ. ಈ ಪೂಜಾಸ್ಥಳಗಳಲ್ಲಿ
ಜನರು ಇನ್ನೂ ಯಜ್ಞಗಳನ್ನು ಅರ್ಪಿಸುತ್ತಿದ್ದರು ಮತ್ತು
ಧೂಪವನ್ನು ಸುಡುತ್ತಿದ್ದರು.

5ರಾಜನಾದ ಅಜರ್ಯನು ಕುಷ್ಠರೋಗ ಪೀಡಿತ
ನಾಗುವಂತೆ ಯೆಹೋವನು ಮಾಡಿದನು. ಅವನು

ಸಾಯುವವರೆಗೂ ಕುಷ್ಠರೋಗಿಯಾಗಿಯೇ ಇದ್ದನು.
ಅಜರ್ಯನು ಪ್ರತ್ಯೇಕವಾದ ಮನೆಯಲ್ಲಿ ವಾಸಿಸು
ತ್ತಿದ್ದನು. ರಾಜನ ಮಗನಾದ ಯೋತಾಮನು ರಾಜನ
ಅರಮನೆಯನ್ನು ನೋಡಿಕೊಳ್ಳುತ್ತಿದ್ದನು ಮತ್ತು ಜನ
ರನ್ನು ಪಾಲಿಸುತ್ತಿದ್ದನು.
[6]‘‘ಯೆಹೂದದ ರಾಜರುಗಳ ಇತಿಹಾಸ’’ ಎಂಬ ಪುಸ್ತಕ
ದಲ್ಲಿ ಅಜರ್ಯನು ಮಾಡಿದ ಇತರ ಮಹಾ ಕಾರ್ಯ
ಗಳನ್ನು ಕುರಿತು ಬರೆಯಲಾಗಿದೆ. [7]ಅಜರ್ಯನು ಸತ್ತ
ಮೇಲೆ ಅವನನ್ನು ಅವನ ಪೂರ್ವಿಕರ ಬಳಿ, ದಾವೀದ
ನಗರದಲ್ಲಿ ಸಮಾಧಿಮಾಡಲಾಯಿತು. ಅಜರ್ಯನ
ನಂತರ ಅವನ ಮಗನಾದ ಯೋತಾಮನು ಹೊಸ
ರಾಜನಾದನು.

## ಜೆಕರ್ಯನು ಇಸ್ರೇಲನ್ನು ಸ್ವಲ್ಪ ಕಾಲ ಆಳುವನು

[8]ಯಾರೊಬ್ಬಾಮನ ಮಗನಾದ ಜೆಕರ್ಯನು ಇಸ್ರೇ
ಲಿನ ಸಮಾರ್ಯದಲ್ಲಿ ಆರು ತಿಂಗಳ ಕಾಲ ಆಳಿದನು.
ಅದು ಯೆಹೂದದ ರಾಜನಾಗಿದ್ದ ಅಜರ್ಯನ ಆಳ್ವಿಕೆಯ
ಮೂವತ್ತೆಂಟನೆಯ ವರ್ಷವಾಗಿತ್ತು. [9]ಯೆಹೋವನು
ಕೆಟ್ಟದ್ದೆಂದು ಹೇಳಿದ ಕಾರ್ಯಗಳನ್ನು ಜೆಕರ್ಯನು
ಮಾಡಿದನು. ಅವನ ಪೂರ್ವಿಕರು ಮಾಡಿದಂತೆಯೇ
ಅವನೂ ಮಾಡಿದನು. ಇಸ್ರೇಲರನ್ನು ಪಾಪಮಾಡುವಂತೆ
ಪ್ರೇರೇಪಿಸಿದ ನೆಬಾಟನ ಮಗನಾದ ಯಾರೊಬ್ಬಾಮನು
ಮಾಡಿದಂತಹ ಪಾಪ ಕಾರ್ಯಗಳನ್ನು ಅವನು
ನಿಲ್ಲಿಸಲಿಲ್ಲ.
[10]ಯಾಬೇಷನ ಮಗನಾದ ಶಲ್ಲೂಮನು ಜೆಕರ್ಯನ
ವಿರುದ್ಧವಾಗಿ ಸಂಚುಗಳನ್ನು ಮಾಡಿದನು. ಶಲ್ಲೂಮನು
ಜೆಕರ್ಯನನ್ನು ಜನರ ಮುಂದೆ ಕೊಂದುಹಾಕಿ ಹೊಸ
ರಾಜನಾದನು.[11]‘‘ಇಸ್ರೇಲಿನ ರಾಜರುಗಳ ಇತಿಹಾಸ’’
ಎಂಬ ಪುಸ್ತಕದಲ್ಲಿ ಜೆಕರ್ಯನು ಮಾಡಿದ ಇತರ ಕಾರ್ಯ
ಗಳನ್ನೆಲ್ಲ ಬರೆಯಲಾಗಿದೆ. [12]ಹೀಗೆ ಯೆಹೋವನ
ವಾಕ್ಯವು ನೆರವೇರಿತು. ಯೇಹುವಿನ ಸಂತತಿಯವರು
ನಾಲ್ಕನೆಯ ತಲೆಮಾರಿನವರೆಗೆ ಇಸ್ರೇಲಿನ ರಾಜರಾಗಿರು
ತ್ತಾರೆ ಎಂದು ಯೆಹೋವನು ಅವನಿಗೆ ಮೊದಲೇ
ತಿಳಿಸಿದ್ದನು.

## ಶಲ್ಲೂಮನು ಇಸ್ರೇಲನ್ನು ಸ್ವಲ್ಪ ಕಾಲ ಆಳುವನು

[13]ಯೆಹೂದದ ರಾಜನಾದ ಉಜ್ಜೀಯನ ಮೂವ
ತ್ತೊಂಭತ್ತನೆಯ ವರ್ಷದ ಆಳ್ವಿಕೆಯಲ್ಲಿ ಯಾಬೇಷನ
ಮಗನಾದ ಶಲ್ಲೂಮನು ಇಸ್ರೇಲಿನ ರಾಜನಾದನು.
ಶಲ್ಲೂಮನು ಸಮಾರ್ಯದಲ್ಲಿ ಒಂದು ತಿಂಗಳು
ಆಳಿದನು.
[14]ಗಾದಿಯ ಮಗನಾದ ಮೆನಹೇಮನು ತಿರ್ಚದಿಂದ
ಸಮಾರ್ಯಕ್ಕೆ ಬಂದನು. ಮೆನಹೇಮನು ಯಾಬೇಷನ
ಮಗನಾದ ಶಲ್ಲೂಮನನ್ನು ಕೊಂದುಹಾಕಿದನು. ನಂತರ
ಮೆನಹೇಮನು ಅವನ ನಂತರ ಹೊಸ ರಾಜನಾದನು.
[15]‘‘ಇಸ್ರೇಲಿನ ರಾಜರುಗಳ ಇತಿಹಾಸ’’ಎಂಬ ಪುಸ್ತಕ
ದಲ್ಲಿ ಶಲ್ಲೂಮನು ಮಾಡಿದ ಕಾರ್ಯಗಳನ್ನೂ ಜೆಕ
ರ್ಯನ ವಿರುದ್ಧವಾಗಿ ಅವನು ಯೋಜಿಸಿದ ಉಪಾಯ
ಗಳನ್ನೂ ಬರೆಯಲಾಗಿದೆ.

## ಇಸ್ರೇಲಿನಲ್ಲಿ ಮೆನಹೇಮನ ಆಳ್ವಿಕೆ

[16]ಶಲ್ಲೂಮನು ಸತ್ತನಂತರ, ಮೆನಹೇಮನು ತಿಪ್ಸ
ಹುವನ್ನು ಮತ್ತು ಅದರ ಸುತ್ತಲಿನ ಪ್ರದೇಶವನ್ನು
ಸೋಲಿಸಿದನು. ಜನರು (ನಗರದ ಬಾಗಿಲನ್ನು) ಅವನಿಗೆ
ತೆರೆಯಲು ನಿರಾಕರಿಸಿದರು. ಆದ್ದರಿಂದ ಮೆನಹೇಮನು
ಅವರನ್ನು ಸೋಲಿಸಿ ಆ ನಗರದಲ್ಲಿದ್ದ ಗರ್ಭಿಣಿ ಸ್ತ್ರೀಯರ
ಹೊಟ್ಟೆಗಳನ್ನು ಸೀಳಿಸಿದನು.
[17]ಅಜರ್ಯನು ಯೆಹೂದದ ರಾಜನಾಗಿದ್ದ ಮೂವ
ತ್ತೊಂಭತ್ತನೆಯ ವರ್ಷದಲ್ಲಿ ಗಾದಿಯ ಮಗನಾದ ಮೆನ
ಹೇಮನು ಇಸ್ರೇಲಿನ ರಾಜನಾದನು. ಮೆನಹೇಮನು
ಸಮಾರ್ಯದಲ್ಲಿ ಹತ್ತು ವರ್ಷಗಳ ಕಾಲ ಆಳಿದನು.
[18]ಯೆಹೋವನು ಕೆಟ್ಟದ್ದೆಂದು ಹೇಳಿದ ಕಾರ್ಯಗಳನ್ನು
ಮೆನಹೇಮನು ಮಾಡಿದನು. ಇಸ್ರೇಲರನ್ನು ಪಾಪಕ್ಕೆ
ಪ್ರೇರೇಪಿಸಿದ ನೆಬಾಟನ ಮಗನಾದ ಯಾರೊಬ್ಬಾಮನ
ಪಾಪ ಕಾರ್ಯಗಳನ್ನು ಮೆನಹೇಮನು ಮುಂದು
ವರಿಸಿದನು.
[19]ಅಶ್ಶೂರ್ ದೇಶದ ರಾಜನಾದ ಪೂಲನು ಇಸ್ರೇಲಿನ
ವಿರುದ್ಧ ಯುದ್ಧಕ್ಕೆ ಬಂದನು. ಮೆನಹೇಮನು ಪೂಲನಿಗೆ
ಮೂವತ್ನಾಲ್ಕು ಕಿಲೋ. ಗ್ರಾಂ. ಬೆಳ್ಳಿಯನ್ನು ಕೊಟ್ಟನು.
ಪೂಲನು ಮೆನಹೇಮನಿಗೆ ಬೆಂಬಲವನ್ನು ನೀಡಲು
ಮತ್ತು ಮೆನಹೇಮನ ರಾಜ್ಯವನ್ನು ಬಲಪಡಿಸಲು ಹೀಗೆ
ಮಾಡಿದನು: [20]ಶ್ರೀಮಂತರು ಮತ್ತು ಅಧಿಕಾರವುಳ್ಳ
ಜನರು ತೆರಿಗೆಯನ್ನು ನೀಡುವಂತೆ ಮಾಡಿ, ಮೆನಹೇ
ಮನು ಈ ಹಣವನ್ನು ಸಂಗ್ರಹಿಸಿದನು. ಮೆನಹೇಮನು
ಪ್ರತಿಯೊಬ್ಬ ಮನುಷ್ಯನಿಗೂ ಆರುನೂರು ಗ್ರಾಂ ಬೆಳ್ಳಿಯ
ತೆರಿಗೆಯನ್ನು ವಿಧಿಸಿದನು. ನಂತರ ಮೆನಹೇಮನು
ಅಶ್ಶೂರದ ರಾಜನಿಗೆ ಹಣವನ್ನು ಕೊಟ್ಟನು. ಆದ್ದರಿಂದ
ಅಶ್ಶೂರದ ರಾಜನು ಬಿಟ್ಟುಹೋದನು; ಅವನು
ಇಸ್ರೇಲಿನಲ್ಲೇ ನೆಲೆಸಲಿಲ್ಲ.
[21]‘‘ಇಸ್ರೇಲಿನ ರಾಜರುಗಳ ಇತಿಹಾಸ’’ ಎಂಬ ಪುಸ್ತಕ
ದಲ್ಲಿ ಮೆನಹೇಮನು ಮಾಡಿದ ಉಳಿದ ಮಹಾಕಾರ್ಯ
ಗಳನ್ನು ಬರೆಯಲಾಗಿದೆ.
[22]ಮೆನಹೇಮನು ಸತ್ತಮೇಲೆ ಅವನನ್ನು ಅವನ
ಪೂರ್ವಿಕರ ಬಳಿ ಸಮಾಧಿಮಾಡಿದರು. ಮೆನಹೇಮನ
ನಂತರ ಅವನ ಮಗನಾದ ಪೆಕಹ್ಯನು ಹೊಸ ರಾಜ
ನಾದನು.

### ಇಸ್ರೇಲನ್ನು ಪೆಕಹ್ಯನು ಆಳಿದನು

[23]ಅಜರ್ಯನು ಯೆಹೂದದ ರಾಜನಾಗಿದ್ದ ಐವತ್ತ
ನೆಯ ವರ್ಷದಲ್ಲಿ ಮೆನಹೇಮನ ಮಗನಾದ ಪೆಕಹ್ಯನು
ಸಮಾರ್ಯದಲ್ಲಿ ಇಸ್ರೇಲಿನ ರಾಜನಾದನು. ಪೆಕಹ್ಯನು
ಎರಡು ವರ್ಷ ಆಳಿದನು. [24]ಯೆಹೋವನು ಕೆಟ್ಟದ್ದೆಂದು
ಹೇಳಿದ ಕಾರ್ಯಗಳನ್ನು ಪೆಕಹ್ಯನು ಮಾಡಿದನು. ಇಸ್ರೇಲ
ರನ್ನು ಪಾಪಕಾರ್ಯಗಳಿಗೆ ಪ್ರೇರೇಪಿಸಿದ ನೆಬಾಟನ ಮಗ
ನಾದ ಯಾರೊಬ್ಬಾಮನ ಪಾಪ ಕಾರ್ಯಗಳನ್ನೇ
ಪೆಕಹ್ಯನು ಮುಂದುವರಿಸಿದನು.

[25]ಪೆಕಹ್ಯನ ಸೇನೆಗೆ ರೆಮಲ್ಯನ ಮಗನಾದ ಪೆಕಹನು
ಸೇನಾಧಿಪತಿಯಾಗಿದ್ದನು. ಅವನು ಪೆಕಹ್ಯನನ್ನು ಕೊಂದು
ಹಾಕಿದನು. ಅವನು ಸಮಾರ್ಯದಲ್ಲಿನ ರಾಜನ ಅರಮನೆ
ಯಲ್ಲಿ ಅರ್ಗೋಬ್ ಮತ್ತು ಅರ್ಯೇ ಎಂಬವರೊಡನೆ
ಪೆಕಹ್ಯನನ್ನು ಕೊಂದುಹಾಕಿದನು. ಪೆಕಹ್ಯನನ್ನು ಪೆಕಹನು
ಕೊಂದುಹಾಕಿದಾಗ ಅವನ ಸಂಗಡ ಗಿಲ್ಯಾದಿನ ಐವತ್ತು
ಜನರಿದ್ದರು. ಪೆಕಹ್ಯನ ನಂತರ ಪೆಕಹನು ಹೊಸ
ರಾಜನಾದನು.

[26]''ಇಸ್ರೇಲಿನ ರಾಜರುಗಳ ಇತಿಹಾಸ'' ಎಂಬ ಪುಸ್ತಕ
ದಲ್ಲಿ ಪೆಕಹ್ಯನು ಮಾಡಿದ ಇತರ ಮಹಾಕಾರ್ಯಗಳನ್ನು
ಕುರಿತು ಬರೆಯಲಾಗಿದೆ.

### ಇಸ್ರೇಲನ್ನು ಪೆಕಹನು ಆಳುವನು

[27]ಅಜರ್ಯನು ಯೆಹೂದದ ರಾಜನಾಗಿದ್ದ ಐವತ್ತೆರಡ
ನೆಯ ವರ್ಷದಲ್ಲಿ ರೆಮಲ್ಯನ ಮಗನಾದ ಪೆಕಹನು
ಸಮಾರ್ಯದಲ್ಲಿ ಇಸ್ರೇಲನ್ನು ಆಳಲಾರಂಭಿಸಿದನು.
ಪೆಕಹನು ಇಪ್ಪತ್ತು ವರ್ಷ ಆಳಿದನು. [28]ಯೆಹೋವನು
ಕೆಟ್ಟದ್ದೆಂದು ಹೇಳಿದ ಕಾರ್ಯಗಳನ್ನೇ ಪೆಕಹನು ಮಾಡಿ
ದನು. ಇಸ್ರೇಲರನ್ನು ಪಾಪ ಮಾಡುವಂತೆ ಪ್ರೇರೇಪಿಸಿದ
ನೆಬಾಟನ ಮಗನಾದ ಯಾರೊಬ್ಬಾಮನ ಪಾಪಕಾರ್ಯ
ಗಳನ್ನು ಪೆಕಹನು ಮುಂದುವರಿಸಿದನು.

[29]ಅಶ್ಶೂರದ ರಾಜನಾದ ತಿಗ್ಲತ್ಪಿಲೆಸರನೆಂಬವನು
ಇಸ್ರೇಲಿನ ವಿರುದ್ಧ ಯುದ್ಧಕ್ಕೆ ಬಂದನು. ಪೆಕಹನು ಇಸ್ರೇ
ಲಿನ ರಾಜನಾಗಿದ್ದ ಸಂದರ್ಭದಲ್ಲಿ ಇದು ಸಂಭವಿಸಿತು.
ತಿಗ್ಲತ್ಪಿಲೆಸರನು ಇಯ್ಯೋನ್, ಅಬೇಲ್ಬೇತ್ಮಾಕಾ,
ಯಾನೋಹ, ಕದೇಷ್, ಹಾಚೋರ್, ಗಿಲ್ಯಾದ್, ಗಲಿ
ಲಾಯ ಮತ್ತು ನಫ್ತಾಲಿಯ ಪ್ರಾಂತ್ಯಗಳನ್ನೆಲ್ಲ ಸ್ವಾಧೀನ
ಪಡಿಸಿಕೊಂಡನು. ತಿಗ್ಲತ್ಪಿಲೆಸರನು ಈ ಸ್ಥಳಗಳಲ್ಲಿದ್ದ
ಜನರನ್ನು ಸೆರೆಯಾಳುಗಳನ್ನಾಗಿಸಿ ಅಶ್ಶೂರಿಗೆ
ಕೊಂಡೊಯ್ದನು.

[30]ಏಲನ ಮಗನಾದ ಹೋಶೇಯನು ರೆಮಲ್ಯನ
ಮಗನಾದ ಪೆಕಹನ ವಿರುದ್ಧ ಸಂಚುಗಳನ್ನು ಮಾಡಿ ಪೆಕಹ
ನನ್ನು ಕೊಂದುಹಾಕಿದನು. ಪೆಕಹನ ನಂತರ ಹೋಶೇ
ಯನು ಹೊಸ ರಾಜನಾದನು. ಉಜ್ಜೀಯನ ಮಗನಾದ
ಯೋತಾಮನು ಯೆಹೂದದ ರಾಜನಾಗಿದ್ದ ಇಪ್ಪತ್ತನೆಯ
ವರ್ಷದಲ್ಲಿ ಹೀಗಾಯಿತು. [31]ಇಸ್ರೇಲಿನ ರಾಜರುಗಳ
ಇತಿಹಾಸ'' ಎಂಬ ಪುಸ್ತಕದಲ್ಲಿ ಪೆಕಹನು ಮಾಡಿದ ಇತರ
ಮಹಾಕಾರ್ಯಗಳನ್ನು ಬರೆಯಲಾಗಿದೆ.

### ಯೆಹೂದವನ್ನು ಯೋತಾಮನು ಆಳುವನು

[32]ಉಜ್ಜೀಯನ ಮಗನಾದ ಯೋತಾಮನು ಯೆಹೂ
ದದ ರಾಜನಾದನು. ರೆಮಲ್ಯನ ಮಗನಾದ ಪೆಕಹನು
ಇಸ್ರೇಲಿನ ರಾಜನಾದ ಎರಡನೆಯ ವರ್ಷದಲ್ಲಿ ಹೀಗಾ
ಯಿತು. [33]ಯೋತಾಮನು ರಾಜನಾದಾಗ ಅವನಿಗೆ
ಇಪ್ಪತ್ತೈದು ವರ್ಷ ವಯಸ್ಸಾಗಿತ್ತು. ಯೋತಾಮನು ಜೆರುಸ
ಲೇಮಿನಲ್ಲಿ ಹದಿನಾರು ವರ್ಷ ಆಳಿದನು. ಯೋತಾಮನ
ತಾಯಿಯು ಚಾದೋಕನ ಮಗಳಾದ ಯೆರೂಷಾ ಎಂಬ
ಹೆಸರಿನವಳು. [34]ಯೋತಾಮನು ತನ್ನ ತಂದೆಯಾದ
ಉಜ್ಜೀಯನಂತೆ ಯೆಹೋವನು ಯೋಗ್ಯವೆಂದು ಹೇಳಿದ
ಕಾರ್ಯಗಳನ್ನು ಮಾಡಿದನು. [35]ಆದರೆ ಅವನು ಉನ್ನತ
ಸ್ಥಳಗಳನ್ನು ನಾಶಗೊಳಿಸಲಿಲ್ಲ. ಈ ಪೂಜಾ ಸ್ಥಳಗಳಲ್ಲಿ
ಜನರು ಯಜ್ಞಗಳನ್ನು ಅರ್ಪಿಸುತ್ತಿದ್ದರು ಮತ್ತು ಧೂಪ
ವನ್ನು ಸುಡುತ್ತಿದ್ದರು. ಯೋತಾಮನು ಯೆಹೋವನ ಆಲ
ಯಕ್ಕೆ ಮೇಲ್ಬಾಗಿಲನ್ನು ನಿರ್ಮಿಸಿದನು. [36]''ಯೆಹೂದದ
ರಾಜರುಗಳ ಇತಿಹಾಸ'' ಎಂಬ ಪುಸ್ತಕದಲ್ಲಿ ಯೋತಾ
ಮನು ಮಾಡಿದ ಇತರ ಮಹಾಕಾರ್ಯಗಳನ್ನು ಬರೆಯ
ಲಾಗಿದೆ. [37]ಆ ಕಾಲದಲ್ಲಿ, ಅರಾಮ್ಯರ ರಾಜನಾದ
ರೆಚೀನನನ್ನು ಮತ್ತು ರೆಮಲ್ಯನ ಮಗನಾದ ಪೆಕಹನನ್ನು
ಯೆಹೂದದ ವಿರುದ್ಧ ಹೋರಾಡಲು ಯೆಹೋವನು
ಕಳುಹಿಸಲಾರಂಭಿಸಿದನು.

[38]ಯೋತಾಮನು ಸತ್ತಮೇಲೆ ಅವನನ್ನು ಅವನ
ಪೂರ್ವಿಕರ ಬಳಿಯಲ್ಲಿ ಸಮಾಧಿಮಾಡಿದರು. ಯೋತಾ
ಮನನ್ನು ಅವನ ಪೂರ್ವಿಕನಾದ ದಾವೀದನ ನಗರದಲ್ಲಿ
ಸಮಾಧಿಮಾಡಿದರು. ಯೋತಾಮನ ನಂತರ ಅವನ
ಮಗನಾದ ಅಹಾಜನು ಹೊಸ ರಾಜನಾದನು.

### ಅಹಾಜನು ಯೆಹೂದದ ರಾಜನಾದನು

16 ರೆಮಲ್ಯನ ಮಗನಾದ ಪೆಕಹನು ಇಸ್ರೇಲಿನ
ರಾಜನಾಗಿದ್ದ ಹದಿನೇಳನೆಯ ವರ್ಷದಲ್ಲಿ
ಯೋತಾಮನ ಮಗನಾದ ಅಹಾಜನು ಯೆಹೂದದ ರಾಜ
ನಾದನು. [2]ಅಹಾಜನು ರಾಜನಾದಾಗ ಅವನಿಗೆ ಇಪ್ಪತ್ತು
ವರ್ಷ ವಯಸ್ಸಾಗಿತ್ತು. ಅಹಾಜನು ಜೆರುಸಲೇಮನ್ನು
ಹದಿನಾರು ವರ್ಷ ಆಳಿದನು. ಯೆಹೋವನ ದೃಷ್ಟಿಯಲ್ಲಿ
ಒಳ್ಳೆಯದಾಗಿದ್ದ ಕಾರ್ಯಗಳನ್ನು ಅಹಾಜನು ಮಾಡ
ಲಿಲ್ಲ. ಅವನ ಪೂರ್ವಿಕನಾದ ದಾವೀದನು ದೇವರಿಗೆ
ವಿಧೇಯನಾಗಿದ್ದನು; ಆದರೆ ಅಹಾಜನು ವಿಧೇಯ
ನಾಗಲಿಲ್ಲ. [3]ಅಹಾಜನು ಇಸ್ರೇಲಿನ ರಾಜರುಗಳಂತೆ

ಜೀವಿಸಿದನು. ಅವನು ತನ್ನ ಮಗನನ್ನೇ ಬೆಂಕಿಯಲ್ಲಿ
ಆಹುತಿಕೊಟ್ಟನು. ಇಸ್ರೇಲರು ದೇಶಕ್ಕೆ ಬಂದ ಕಾಲದಲ್ಲಿ
ಯೆಹೋವನು ಬಲಾತ್ಕಾರದಿಂದ ಓಡಿಸಿದ ಜನಾಂಗಗಳ
ಅಸಹ್ಯಪಾಪಗಳನ್ನು ಅವನು ಅನುಸರಿಸಿದನು. [4]ಅಹಾ
ಜನು ಉನ್ನತಸ್ಥಳಗಳಲ್ಲಿ ಮತ್ತು ಬೆಟ್ಟಗಳ ಮೇಲೆ ಮತ್ತು
ಹಸಿರು ಮರಗಳ ಕೆಳಗೆ ಯಜ್ಞಗಳನ್ನು ಅರ್ಪಿಸಿದನು
ಮತ್ತು ಧೂಪವನ್ನು ಸುಟ್ಟನು.

[5]ಅರಾಮ್ಯರ ರಾಜನಾದ ರೆಚೀನನು ಮತ್ತು ರೆಮಲ್ಯನ
ಮಗನೂ ಇಸ್ರೇಲಿನ ರಾಜನೂ ಆದ ಪೆಕಹನು ಜೆರುಸ
ಲೇಮಿನ ವಿರುದ್ಧ ಯುದ್ಧಕ್ಕೆ ಬಂದರು. ರೆಚೀನ ಮತ್ತು
ಪೆಕಹ ಅಹಾಜನಿಗೆ ಮುತ್ತಿಗೆ ಹಾಕಿದರು. ಆದರೆ ಅವನನ್ನು
ಸೋಲಿಸಲಾಗಲಿಲ್ಲ. [6]ಆ ಸಮಯದಲ್ಲಿ ಅರಾಮ್ಯರ ರಾಜ
ನಾದ ರೆಚೀನನು ಏಲತ್ ಪಟ್ಟಣವನ್ನು ಅರಾಮ್ಯಕ್ಕೆ
ಸೇರಿಸಿಕೊಂಡನು. ರೆಚೀನನು ಏಲತ್ ಪಟ್ಟಣದಲ್ಲಿ
ವಾಸಿಸುತ್ತಿದ್ದ ಯೆಹೂದ್ಯರನ್ನೆಲ್ಲಾ ಓಡಿಸಿದನು. ಅರಾ
ಮ್ಯರು ಬಂದು ಏಲತ್ ಪಟ್ಟಣದಲ್ಲಿ ನೆಲೆಸಿದರು; ಅವರು
ಇಂದಿನವರೆಗೂ ಅಲ್ಲಿಯೇ ವಾಸಿಸುತ್ತಿದ್ದಾರೆ.

[7]ಅಹಾಜನು ಅಶ್ಶೂರದ ರಾಜನಾದ ತಿಗ್ಲತ್ಪಿಲೆಸರನ
ಬಳಿಗೆ ಸಂದೇಶಕರನ್ನು ಕಳುಹಿಸಿದನು. ಆ ಸಂದೇಶವೇ
ನಂದರೆ: ‘‘ನಾನು ನಿನ್ನ ಸೇವಕ. ನಾನು ನಿನಗೆ ಮಗನಂತಿ
ದ್ದೇನೆ. ನೀನು ಬಂದು, ಅರಾಮ್ಯರ ರಾಜನಿಂದ ಮತ್ತು
ಇಸ್ರೇಲಿನ ರಾಜನಿಂದ ನನ್ನನ್ನು ರಕ್ಷಿಸು. ಅವರು ನನ್ನ
ವಿರುದ್ಧ ಯುದ್ಧಕ್ಕೆ ಬಂದಿದ್ದಾರೆ.’’ [8]ಅಹಾಜನು
ಯೆಹೋವನ ಆಲಯದಲ್ಲಿದ್ದ ಮತ್ತು ರಾಜನ ಅರಮನೆ
ಯಲ್ಲಿದ್ದ ಬೆಳ್ಳಿ ಬಂಗಾರಗಳನ್ನು ತೆಗೆದುಕೊಂಡು
ಅಶ್ಶೂರದ ರಾಜನಿಗೆ ಕಾಣಿಕೆಯಾಗಿ ಕಳುಹಿಸಿದನು.
[9]ಅಶ್ಶೂರದ ರಾಜನು ಅಹಾಜನ ಮಾತುಗಳನ್ನು ಕೇಳಿ
ದಮಸ್ಕದ ವಿರುದ್ಧ ಯುದ್ಧಕ್ಕೆ ಹೊರಟು ಆ ನಗರಕ್ಕೆ
ಮುತ್ತಿಗೆ ಹಾಕಿ, ದಮಸ್ಕದ ಜನರನ್ನು ಸೆರೆಹಿಡಿದುಕೊಂಡು
ಕೀರ್‌ಗೆ ಒಯ್ದನು. ಅವನು ರೆಚೀನನ್ನು ಕೊಂದು
ಹಾಕಿದನು.

[10]ರಾಜನಾದ ಅಹಾಜನು ಅಶ್ಶೂರದ ರಾಜನಾದ
ತಿಗ್ಲತ್ಪಿಲೆಸರನನ್ನು ಭೇಟಿ ಮಾಡಲು ದಮಸ್ಕಕ್ಕೆ
ಹೋದನು. ಅಹಾಜನು ದಮಸ್ಕದಲ್ಲಿದ್ದ ಯಜ್ಞವೇದಿಕೆ
ಯನ್ನು ನೋಡಿದನು. ರಾಜನಾದ ಅಹಾಜನು
ಯಜ್ಞವೇದಿಕೆಯ ವಿನ್ಯಾಸವನ್ನು ಮತ್ತು ಮಾದರಿಯನ್ನು
ಯಾಜಕನಾದ ಊರೀಯನಿಗೆ ಕಳುಹಿಸಿದನು. [11]ಆಗ
ಯಾಜಕನಾದ ಊರೀಯನು, ದಮಸ್ಕದಿಂದ ರಾಜನಾದ
ಅಹಾಜನು ತನಗೆ ಕಳುಹಿಸಿದ ಯಜ್ಞವೇದಿಕೆಯ ಮಾದರಿ
ಯಲ್ಲೇ ಮತ್ತೊಂದು ಯಜ್ಞವೇದಿಕೆಯೊಂದನ್ನು
ನಿರ್ಮಿಸಿದನು. ಹೀಗೆ ರಾಜನಾದ ಅಹಾಜನು ದಮಸ್ಕ
ದಿಂದ ಹಿಂತಿರುಗುವುದಕ್ಕೆ ಮೊದಲೇ ಊರೀಯನು
ಯಜ್ಞವೇದಿಕೆಯೊಂದನ್ನು ನಿರ್ಮಿಸಿದ್ದನು.

[12]ರಾಜನು ದಮಸ್ಕದಿಂದ ಹಿಂದಿರುಗಿಬಂದು ಯಜ್ಞ
ವೇದಿಕೆಯನ್ನು ನೋಡಿದನು. ಅವನು ಯಜ್ಞಗಳನ್ನು
ಅದರ ಮೇಲೆ ಅರ್ಪಿಸಿದನು. [13]ಅಹಾಜನು ಯಜ್ಞವೇದಿ
ಕೆಯ ಮೇಲೆ ಸರ್ವಾಂಗಹೋಮವನ್ನು ಮತ್ತು ಧಾನ್ಯ
ನೈವೇದ್ಯವನ್ನು ಅರ್ಪಿಸಿದನು; ಪಾನನೈವೇದ್ಯವನ್ನು ಸುರಿಸಿ
ದನು; ಸಮಾಧಾನಯಜ್ಞಕ್ಕಾಗಿ ವಧಿಸಿದ ಪಶುಗಳ ರಕ್ತ
ವನ್ನು ಯಜ್ಞವೇದಿಕೆಯ ಮೇಲೆ ಚಿಮಿಕಿಸಿದನು.

[14]ಅಹಾಜನು ದೇವಾಲಯದ ಎದುರಿನಲ್ಲಿ ಯೆಹೋ
ವನ ಸನ್ನಿಧಿಯಲ್ಲಿದ್ದ ತಾಮ್ರದ ಯಜ್ಞವೇದಿಕೆಯನ್ನು
ತೆಗೆಸಿದನು. ಈ ತಾಮ್ರದ ಯಜ್ಞವೇದಿಕೆಯು ಅಹಾಜನ
ಯಜ್ಞವೇದಿಕೆ ಮತ್ತು ದೇವಾಲಯದ ನಡುವೆ ಇದ್ದಿತು.
ಅಹಾಜನು ತಾಮ್ರದ ಯಜ್ಞವೇದಿಕೆಯನ್ನು ತನ್ನ ಸ್ವಂತ
ಯಜ್ಞವೇದಿಕೆಯ ಉತ್ತರದಿಕ್ಕಿನಲ್ಲಿಡಿಸಿದನು. [15]ಅಹಾ
ಜನು ಯಾಜಕನಾದ ಊರೀಯನಿಗೆ, ‘‘ಈ ದೇಶದ ಜನ
ರೆಲ್ಲರೂ ಪ್ರಾತಃಕಾಲದಲ್ಲಿ ಸರ್ವಾಂಗಹೋಮವನ್ನೂ
ಸಾಯಂಕಾಲದಲ್ಲಿ ಧಾನ್ಯನೈವೇದ್ಯವನ್ನೂ ಮತ್ತು ಪಾನ
ದ್ರವ್ಯಗಳನ್ನೂ ಸಮರ್ಪಿಸಲು ಮಹಾವೇದಿಕೆಯನ್ನು ಬಳಸ
ಬೇಕು; ಸರ್ವಾಂಗಹೋಮಕ್ಕಾಗಿ ಮತ್ತು ಸಮಾಧಾನ
ಯಜ್ಞಕ್ಕಾಗಿ ವಧಿಸುವ ಪಶುಗಳ ರಕ್ತವನ್ನು ಈ ಮಹಾ
ವೇದಿಕೆಯ ಮೇಲೆ ಚಿಮುಕಿಸಿ. ಆದರೆ ನಾನು ದೇವರಿಂದ
ದೈವೋತ್ತರಗಳನ್ನು ಕೇಳಲು ತಾಮ್ರವೇದಿಕೆಯನ್ನು ಉಪ
ಯೋಗಿಸುತ್ತೇನೆ’’ ಎಂದು ಹೇಳಿದನು. [16]ರಾಜನಾದ
ಅಹಾಜನು ಆಜ್ಞಾಪಿಸಿದಂತೆಯೇ ಯಾಜಕನಾದ
ಊರೀಯನು ಮಾಡಿದನು.

[17]ನಂತರ ರಾಜನಾದ ಅಹಾಜನು ಪೀಠಗಳ ಪಟ್ಟಿ
ಗಳನ್ನು ಕತ್ತರಿಸಿದನು. ಅವುಗಳ ಮೇಲಿದ್ದ ಗಂಗಾಳಗಳನ್ನು
ತೆಗೆದಿಟ್ಟನು; ಸಮುದ್ರವೆಂಬ ತೊಟ್ಟಿಯನ್ನು ತಾಮ್ರದ
ಹೋರಿಗಳಿಂದ ಕೆಳಗಿಳಿಸಿ ಕಲ್ಲುಕಟ್ಟೆಯ ಮೇಲಿಟ್ಟನು.
[18]ಅಹಾಜನು ಸಬ್ಬತ್ ದಿನಕ್ಕಾಗಿ ಕಟ್ಟಿದ ಮಂಟಪವನ್ನೂ
ಬದಲಾಯಿಸಿದನು. ಕೆಲಸಗಾರರು ಆಲಯದ ಒಳಗೆ
ಇದನ್ನು ನಿರ್ಮಿಸಿದ್ದರು. ಅಹಾಜನು ರಾಜನಿಗಾಗಿ ಇದ್ದ
ಹೊರಭಾಗದ ಬಾಗಿಲನ್ನೂ ಬದಲಾಯಿಸಿದನು. ಅಹಾ
ಜನು ದೇವಾಲಯದಿಂದ ಇವುಗಳನ್ನೆಲ್ಲಾ ಅಶ್ಶೂರದ
ರಾಜನ* ದೆಸೆಯಿಂದ ಬದಲಾಯಿಸಿದನು.

[19]‘‘ಯೆಹೂದದ ರಾಜರುಗಳ ಇತಿಹಾಸ’’ ಎಂಬ
ಪುಸ್ತಕದಲ್ಲಿ ಅಹಾಜನು ಮಾಡಿದ ಇತರ ಮಹಾಕಾರ್ಯ
ಗಳನ್ನು ಬರೆಯಲಾಗಿದೆ. [20]ಅಹಾಜನು ಸತ್ತಮೇಲೆ ಅವ
ನನ್ನು ಅವನ ಪೂರ್ವಿಕರ ಬಳಿ ದಾವೀದನಗರದಲ್ಲಿ
ಸಮಾಧಿಮಾಡಿದರು. ಅಹಾಜನ ಮಗನಾದ ಹಿಜ್ಕೀ
ಯನು ಅವನ ನಂತರ ಹೊಸ ರಾಜನಾದನು.

---

**ಅಶ್ಶೂರದ ರಾಜ** ಯಾಕೆಂದರೆ ಅಶ್ಶೂರದ ರಾಜನು ಅವುಗಳ ಬಗ್ಗೆ ಕೇಳಿದ್ದರೆ ಅವುಗಳನ್ನು ಸ್ವಾಧೀನಪಡಿಸಿಕೊಳ್ಳುತ್ತಿದ್ದನು.

## ಹೋಶೇಯನು ಇಸ್ರೇಲಿನಲ್ಲಿ ತನ್ನ ಆಳ್ವಿಕೆಯನ್ನು ಆರಂಭಿಸಿದನು

17 ಏಲನ ಮಗನಾದ ಹೋಶೇಯನು ಸಮಾರ್ಯ
ದಲ್ಲಿ ಇಸ್ರೇಲನ್ನು ಆಳಲಾರಂಭಿಸಿದನು. ಇದು
ಅಹಾಜನು ಯೆಹೂದದ ರಾಜನಾಗಿದ್ದ ಹನ್ನೆರಡನೆಯ
ವರ್ಷದಲ್ಲಾಯಿತು. ಹೋಶೇಯನು ಒಂಭತ್ತು ವರ್ಷ
ಆಳಿದನು.
2ಯೆಹೋವನು ಕೆಟ್ಟದ್ದೆಂದು ಹೇಳಿದ ಕಾರ್ಯಗಳನ್ನು
ಹೋಶೇಯನು ಮಾಡಿದನು. ಆದರೆ ಹೋಶೇಯನು
ಅವನಿಗಿಂತ ಮೊದಲು ಇಸ್ರೇಲನ್ನು ಆಳಿದ ರಾಜರು
ಗಳಷ್ಟು ಕೆಟ್ಟವನಲ್ಲ.
3ಅಶ್ಶೂರದ ರಾಜನಾದ ಶಲ್ಮನೆಸರನು ಹೋಶೇಯನ
ವಿರುದ್ಧ ಯುದ್ಧಕ್ಕೆ ಬಂದನು. ಶಲ್ಮನೆಸರನು ಹೋಶೇಯ
ನನ್ನು ಸೋಲಿಸಿದನು. ಆದುದರಿಂದ ಹೋಶೇಯನು
ಶಲ್ಮನೆಸರನಿಗೆ ಸೇವಕನಾಗಿ ಕಪ್ಪವನ್ನು ಕೊಟ್ಟನು.
4ಹೋಶೇಯನು ಈಜಿಪ್ಟಿನ ರಾಜನಲ್ಲಿಗೆ ಸಂದೇಶ
ಕರನ್ನು ಕಳುಹಿಸಿದ್ದನು. ಈಜಿಪ್ಟಿನ ರಾಜನಿಗೆ ಸೋ ಎಂಬ
ಹೆಸರಿತ್ತು. ಹೋಶೇಯನು ಅಶ್ಶೂರದ ರಾಜನಿಗೆ ಪ್ರತಿ
ವರ್ಷ ಕಪ್ಪವನ್ನು ಕೊಡುತ್ತಿದ್ದನು, ಆದರೆ ಆ ವರ್ಷ ಕೊಡ
ಲಿಲ್ಲ. ಆದರೆ ಅಶ್ಶೂರದ ರಾಜನಿಗೆ ಹೋಶೇಯನು ತನ್ನ
ವಿರುದ್ಧ ಮಾಡಿರುವ ಒಳಸಂಚು ತಿಳಿದುಬಿಂದಿತು. ಆದ್ದ
ರಿಂದ ಅಶ್ಶೂರದ ರಾಜನು ಹೋಶೇಯನನ್ನು ಬಂಧಿಸಿ,
ಸೆರೆಯಲ್ಲಿಟ್ಟನು.
5ನಂತರ ಅಶ್ಶೂರದ ರಾಜನು ಇಸ್ರೇಲಿನಲ್ಲೆಲ್ಲಾ
ಸಂಚರಿಸಿ ಸಮಾರ್ಯಕ್ಕೆ ಬಂದನು. ಅವನು ಸಮಾರ್ಯ
ವನ್ನು ಮೂರು ವರ್ಷ ಮುತ್ತಿಗೆ ಹಾಕಿದನು. 6ಹೋಶೇ
ಯನು ಇಸ್ರೇಲಿನ ರಾಜನಾಗಿದ್ದ ಒಂಭತ್ತನೆಯ ವರ್ಷ
ದಲ್ಲಿ ಅಶ್ಶೂರದ ರಾಜನು ಸಮಾರ್ಯವನ್ನು ಸ್ವಾಧೀನ
ಪಡಿಸಿಕೊಂಡನು. ಅಶ್ಶೂರದ ರಾಜನು ಇಸ್ರೇಲರನ್ನು ಸೆರೆ
ಯಾಳುಗಳನ್ನಾಗಿ ಒಯ್ದು ಹಲಹು ಪ್ರಾಂತ್ಯದಲ್ಲಿಯೂ
ಹಾಬೋರ್ ಹೊಳೆಯಿರುವ ಗೋಜಾನ್ ಪ್ರಾಂತ್ಯ
ದಲ್ಲಿಯೂ ಮೇದ್ಯರ ನಗರಗಳಲ್ಲಿಯೂ ಇರಿಸಿದನು.
7ಇಸ್ರೇಲರು ತಮ್ಮ ದೇವರಾದ ಯೆಹೋವನ ವಿರುದ್ಧ
ಪಾಪಗಳನ್ನು ಮಾಡಿದ್ದರಿಂದ ಇವೆಲ್ಲವೂ ಸಂಭವಿಸಿದವು.
ಈಜಿಪ್ಟಿನ ರಾಜನಾದ ಫರೋಹನ ಆಳ್ವಿಕೆಯಿಂದ
ಇಸ್ರೇಲರನ್ನು ತಪ್ಪಿಸಿ ಯೆಹೋವನು ಅವರನ್ನು ಈಜಿಪ್ಟ್
ದೇಶದಿಂದ ಹೊರತಂದಿದ್ದನು. ಆದರೆ ಇಸ್ರೇಲರು ಬೇರೆ
ದೇವರುಗಳನ್ನು ಪೂಜಿಸಲು ಆರಂಭಿಸಿ 8ಅನ್ಯರು ಮಾಡು
ವಂತಹ ಕಾರ್ಯಗಳನ್ನೇ ಮಾಡತೊಡಗಿದರು. ಇಸ್ರೇ
ಲರು ಈಜಿಪ್ಟಿನಿಂದ ತಮ್ಮ ದೇಶಕ್ಕೆ ಬಂದಾಗ ಯೆಹೋ
ವನು ಅಲ್ಲಿಯ ನಿವಾಸಿಗಳನ್ನು ಬಲವಂತವಾಗಿ ಹೊರ
ಗಟ್ಟಿದ್ದನು. ಆದರೆ ಇಸ್ರೇಲರು ತಮ್ಮನ್ನು ಆಳುವುದಕ್ಕಾಗಿ
ದೇವರನ್ನು ತೊರೆದು ರಾಜರನ್ನು ಆರಿಸಿಕೊಂಡರು.
9ಇಸ್ರೇಲರು ತಮ್ಮ ದೇವರಾದ ಯೆಹೋವನ ವಿರುದ್ಧ
ರಹಸ್ಯವಾದ ಕೆಟ್ಟಕಾರ್ಯಗಳನ್ನು ಮಾಡಿದರು.
ಇಸ್ರೇಲರು ಚಿಕ್ಕ ಊರಿನಿಂದಿಡಿದು ದೊಡ್ಡ ನಗರ
ದವರೆಗೂ ತಮ್ಮ ಎಲ್ಲಾ ನಗರಗಳಲ್ಲಿ ಉನ್ನತಸ್ಥಳಗಳನ್ನು
ನಿರ್ಮಿಸಿದರು. 10ಇಸ್ರೇಲರು ಪ್ರತಿಯೊಂದು ಬೆಟ್ಟದ
ಮೇಲೂ ಪ್ರತಿಯೊಂದು ಹಸಿರು ಗಿಡಗಳ ಅಡಿಯಲ್ಲೂ
ಸ್ಮಾರಕಕಲ್ಲುಗಳನ್ನು* ಮತ್ತು ಅಶೇರ್ ವಿಗ್ರಹಕಲ್ಲುಗ
ಳನ್ನು ನಿಲ್ಲಿಸಿದರು. 11ಇಸ್ರೇಲರು ಪೂಜಾಸ್ಥಳಗಳಲ್ಲೆಲ್ಲಾ
ಧೂಪವನ್ನು ಸುಡುತ್ತಿದ್ದರು. ಯೆಹೋವನು ಆ ದೇಶ
ದಿಂದ ಬಲವಂತವಾಗಿ ಹೊರಗಟ್ಟಿದ ಆ ಮೊದಲಿನ
ಜನಾಂಗಗಳಂತೆ ಇಸ್ರೇಲರು ಮಾಡಿದರು. ಇಸ್ರೇಲರು
ಮಾಡಿದ ದುಷ್ಟಕಾರ್ಯಗಳಿಂದ ಯೆಹೋವನು ಕೋಪ
ಗೊಂಡನು. 12ಅವರು ವಿಗ್ರಹಗಳ ಸೇವೆಮಾಡಿದರು.
ಯೆಹೋವನು ಇಸ್ರೇಲರಿಗೆ, ‘‘ನೀವು ವಿಗ್ರಹಗಳನ್ನು
ಪೂಜಿಸಲೇಬಾರದು’’ ಎಂದು ಹೇಳಿದ್ದನು.
13ಇಸ್ರೇಲ್ ಮತ್ತು ಯೆಹೂದಗಳನ್ನು ಎಚ್ಚರಿಸಲು
ಯೆಹೋವನು ಪ್ರತಿಯೊಬ್ಬ ಪ್ರವಾದಿಯನ್ನು ಮತ್ತು
ದೇವದರ್ಶಿಯನ್ನು ಬಳಸಿಕೊಂಡನು. ಯೆಹೋವನು,
‘‘ನಿಮ್ಮ ಕೆಟ್ಟಕಾರ್ಯಗಳಿಂದ ದೂರವಾಗಿ! ನನ್ನ ಆಜ್ಞೆ
ಗಳಿಗೆ ಮತ್ತು ಧರ್ಮಶಾಸ್ತ್ರಗಳಿಗೆ ವಿಧೇಯತೆಯಿಂದಿರಿ.
ನಿಮ್ಮ ಪೂರ್ವಿಕರಿಗೆ ನಾನು ನೀಡಿದ ಕಟ್ಟಳೆಗಳನ್ನೆಲ್ಲಾ
ಅನುಸರಿಸಿ. ನಾನು ನನ್ನ ಸೇವಕರಾದ ಪ್ರವಾದಿಗಳ
ಮೂಲಕ ಇವುಗಳನ್ನು ನೀಡಿದ್ದೇನೆ’’ ಎಂದು ಹೇಳಿದ್ದನು.
14ಆದರೆ ಅವರು ಯೆಹೋವನ ಮಾತುಗಳಿಗೆ ಕಿವಿ
ಗೊಡಲಿಲ್ಲ; ತಮ್ಮ ದೇವರಾದ ಯೆಹೋವನನ್ನು ನಂಬದೆ
ಹೋದ ತಮ್ಮ ಪೂರ್ವಿಕರನ್ನೇ ಅನುಸರಿಸಿದರು.
15ಯೆಹೋವನು ಅವರ ಪೂರ್ವಿಕರೊಂದಿಗೆ ಮಾಡಿ
ಕೊಂಡಿದ್ದ ಒಡಂಬಡಿಕೆಯನ್ನು ಮತ್ತು ಆತನ ನಿಯಮ
ಗಳನ್ನು ಅವರು ಒಪ್ಪಲಿಲ್ಲ. ಅವರು ಯೆಹೋವನ ಎಚ್ಚರಿ
ಕೆಗೆ ಗಮನವನ್ನೂ ನೀಡಲಿಲ್ಲ. ಅವರು ನಿರರ್ಥಕವಾದ
ವಿಗ್ರಹಗಳನ್ನು ಅನುಸರಿಸಿ ನಿಷ್ಪ್ರಯೋಜಕರಾದರು,
ಅವರು ತಮ್ಮ ಸುತ್ತಮುತ್ತಲಿನ ಜನಾಂಗಗಳನ್ನು ಅನುಸ
ರಿಸಿದರು. ಯೆಹೋವನು ಇಸ್ರೇಲಿನ ಜನರಿಗೆ ಮಾಡ
ಬಾರದೆಂದು ಎಚ್ಚರಿಸಿ ಹೇಳಿದ್ದನ್ನು ಈ ಜನಾಂಗಗಳು
ಮಾಡಿದವು.
16ಜನರು ತಮ್ಮ ದೇವರಾದ ಯೆಹೋವನ ಆಜ್ಞೆಗಳನ್ನು
ಅನುಸರಿಸುವುದನ್ನು ನಿಲ್ಲಿಸಿದರು. ಅವರು ಚಿನ್ನದ ಎರಡು
ಬಸವನ ಮೂರ್ತಿಗಳನ್ನು ನಿರ್ಮಿಸಿದರು. ಅವರು ಅಶೇರ
ಸ್ತಂಭಗಳನ್ನು ನಿರ್ಮಿಸಿದರು. ಅವರು ಪರಲೋಕದ
ಎಲ್ಲಾ ನಕ್ಷತ್ರಗಳನ್ನು ಮತ್ತು ಬಾಳ್ ದೇವರನ್ನು

---

**ಸ್ಮಾರಕಕಲ್ಲು** ಜನರು ವಿಶೇಷವಾದದ್ದನ್ನು ನೆನಪು ಮಾಡಿಕೊಳ್ಳಲು ನಿಲ್ಲಿಸುತ್ತಿದ್ದ ಕಲ್ಲು, ಪ್ರಾಚೀನ ಇಸ್ರೇಲ್‌ನಲ್ಲಿ ಸುಳ್ಳುದೇವತೆಗಳ ಪೂಜೆಗಾಗಿ ಈ ವಿಶೇಷ ಸ್ಥಳಗಳಲ್ಲಿ ಕಲ್ಲುಗಳನ್ನು ನಿಲ್ಲಿಸುತ್ತಿದ್ದರು.

ಪೂಜಿಸಿದರು. 17 ಅವರು ತಮ್ಮ ಗಂಡುಮಕ್ಕಳನ್ನು ಮತ್ತು ಹೆಣ್ಣು ಮಕ್ಕಳನ್ನು ಬೆಂಕಿಯಲ್ಲಿ ಆಹುತಿಕೊಟ್ಟರು. ಅವರು ಭವಿಷ್ಯವನ್ನು ತಿಳಿಯಲು ಮಾಂತ್ರಿಕ ವಿದ್ಯೆಯನ್ನು ಮತ್ತು ಕಣಿ ಹೇಳುವುದನ್ನು ಕಲಿತರು. ಯೆಹೋವನು ಕೆಟ್ಟದ್ದೆಂದು ಹೇಳಿದ್ದಕ್ಕೆ ತಮ್ಮನ್ನು ತಾವು ಮಾರಿಕೊಂಡು ಯೆಹೋವನಿಗೆ ಕೋಪವನ್ನು ಉಂಟುಮಾಡಿದರು.
18 ಆದ್ದರಿಂದ ಯೆಹೋವನು ಇಸ್ರೇಲಿನ ಬಗ್ಗೆ ಉಗ್ರ ಕೋಪಿಯಾಗಿ, ಅವರನ್ನು ತನ್ನ ದೃಷ್ಟಿಯಿಂದ ದೂರ ಮಾಡಿದನು. ಯೆಹೂದಕುಲದವರ ಹೊರತಾಗಿ ಇಸ್ರೇಲರಲ್ಲಿ ಯಾರೂ ಉಳಿಯಲಿಲ್ಲ!

### ಯೆಹೂದದ ಜನರೂ ಸಹ ತಪ್ಪಿತಸ್ಥರಾದರು

19 ಆದರೆ ಯೆಹೂದದ ಜನರೂ ಸಹ ತಮ್ಮ ದೇವರಾದ ಯೆಹೋವನ ಆಜ್ಞೆಗಳಿಗೆ ವಿಧೇಯರಾಗಿರಲಿಲ್ಲ. ಯೆಹೂದದ ಜನರು ಇಸ್ರೇಲಿನ ಜನರಂತೆಯೇ ಜೀವಿಸುತ್ತಿದ್ದರು.
20 ಯೆಹೋವನು ಇಸ್ರೇಲಿನ ಜನರೆಲ್ಲರನ್ನೂ ತಿರಸ್ಕರಿಸಿದನು. ಅವನು ಅವರಿಗೆ ಅನೇಕ ತೊಂದರೆಗಳನ್ನು ಉಂಟುಮಾಡಿದನು. ಅವರನ್ನು ನಾಶಗೊಳಿಸಲು ನಾಶಕರಿಗೆ ಆತನು ಅವಕಾಶ ನೀಡಿದನು. ಕೊನೆಗೆ, ಆತನು ಅವರನ್ನು ದೂರತಳ್ಳಿ, ತನ್ನ ದೃಷ್ಟಿಯಿಂದ ಅವರನ್ನು ದೂರ ಮಾಡಿದನು.
21 ಯೆಹೋವನು ಇಸ್ರೇಲನ್ನು ದಾವೀದನ ವಂಶಾವಳಿಯಿಂದ ಕಿತ್ತುಹಾಕಿದನು. ಇಸ್ರೇಲರು ನೆಬಾಟನ ಮಗನಾದ ಯಾರೊಬ್ಬಾಮನನ್ನು ತಮ್ಮ ರಾಜನನ್ನಾಗಿಸಿ ಕೊಂಡರು. ಯಾರೊಬ್ಬಾಮನು ಇಸ್ರೇಲರನ್ನು ಯೆಹೋವನಿಂದ ದೂರಮಾಡಿದನು. ಇಸ್ರೇಲರು ಮಹಾಪಾಪಗಳನ್ನು ಮಾಡುವಂತೆ ಯಾರೊಬ್ಬಾಮನು ಪ್ರೇರೇಪಿಸಿದನು.
22 ಆದ್ದರಿಂದ ಇಸ್ರೇಲರು ಯಾರೊಬ್ಬಾಮನು ಮಾಡಿದ ಪಾಪಗಳನ್ನೆಲ್ಲ ಅನುಸರಿಸಿದರು.
23 ಯೆಹೋವನು ಇಸ್ರೇಲನ್ನು ತನ್ನ ದೃಷ್ಟಿಯಿಂದ ದೂರ ತಳ್ಳುವವರೆಗೆ, ಅವರು ಈ ಪಾಪಗಳನ್ನು ಮಾಡುವುದನ್ನು ನಿಲ್ಲಿಸಲೇ ಇಲ್ಲ. ಇದು ಸಂಭವಿಸುತ್ತದೆಂದು ಯೆಹೋವನು ಹೇಳಿದ್ದನು! ಆತನು ಜನರಿಗೆ ಇದನ್ನು ಮುಂಚೆಯೇ ತಿಳಿಸಲು ತನ್ನ ಪ್ರವಾದಿಗಳನ್ನು ಕಳುಹಿಸಿದ್ದನು. ಆದ್ದರಿಂದಲೇ ಇಸ್ರೇಲರನ್ನು ತಮ್ಮ ದೇಶದಿಂದ ಅಶ್ಶೂರಿಗೆ ಸೆರೆಹಿಡಿದು ಒಯ್ದರು. ಅವರು ಇಂದಿಗೂ ಅಲ್ಲಿಯೇ ಇದ್ದಾರೆ.

### ಸಮಾರ್ಯದ ಜನರ ಆರಂಭ ಕಾಲ

24 ಇಸ್ರೇಲರನ್ನು ಸಮಾರ್ಯದಿಂದ ಅಶ್ಶೂರದ ರಾಜನು ಒಯ್ದನು. ನಂತರ ಅಶ್ಶೂರದ ರಾಜನು ಬಾಬಿಲೋನ್, ಕೂತಾ, ಅವ್ವಾ, ಹಮಾತ್ ಮತ್ತು ಸೆಫರ್ವಯಿಮ್‌ಗಳಿಂದ ಜನರನ್ನು ಕರೆತಂದು ಇಸ್ರೇಲರ ಬದಲಾಗಿ ಅವರನ್ನು ಸಮಾರ್ಯದಲ್ಲಿ ನೆಲೆಗೊಳಿಸಿದನು. ಅವರು ಸಮಾರ್ಯವನ್ನು ಹೊಂದಿಕೊಂಡು ಅವರ ಸುತ್ತಲಿನ ನಗರಗಳಲ್ಲಿ ವಾಸಿಸಿದರು.
25 ಆದರೆ ಅವರು ಯೆಹೋವನನ್ನು ಗೌರವಿಸಲಿಲ್ಲ. ಆದ್ದರಿಂದ ಅವರ ಮೇಲೆ ಆಕ್ರಮಣಮಾಡಲು ಯೆಹೋವನು ಸಿಂಹಗಳನ್ನು ಕಳುಹಿಸಿದನು. ಈ ಸಿಂಹಗಳು ಆ ಜನರಲ್ಲಿ ಕೆಲವರನ್ನು ಕೊಂದುಹಾಕಿದವು.
26 ಅಶ್ಶೂರದ ರಾಜನಿಗೆ ಕೆಲವು ಜನರು, ‘‘ನೀನು ಕೆಲವು ಜನರನ್ನು ಒಯ್ದು ಸಮಾರ್ಯ ನಗರಗಳಲ್ಲಿ ಇರಿಸಿದೆ. ಅವರು ಆ ದೇಶದ ದೇವರ ನಿಯಮಗಳ ಬಗ್ಗೆ ತಿಳಿದುಕೊಂಡಿಲ್ಲ. ಆದ್ದರಿಂದ ಅವರನ್ನು ಆಕ್ರಮಣ ಮಾಡಲು ದೇವರು ಸಿಂಹಗಳನ್ನು ಕಳುಹಿಸಿದನು. ಆ ದೇಶದ ದೇವರ ನಿಯಮಗಳನ್ನು ಅವರು ತಿಳಿದಿಲ್ಲದಿರುವುದರಿಂದ ಅವರನ್ನು ಸಿಂಹಗಳು ಕೊಂದುಹಾಕಿದವು’’ ಎಂದು ಹೇಳಿದರು.

27 ಆದ್ದರಿಂದ ಅಶ್ಶೂರದ ರಾಜನು, ‘‘ನೀವು ಸಮಾರ್ಯದಿಂದ ಕೆಲವು ಯಾಜಕರನ್ನು ಕರೆದೊಯ್ದಿರುವಿರಿ. ನಾನು ಸಮಾರ್ಯದಿಂದ ಸೆರೆಹಿಡಿದು ತಂದಿರುವ ಯಾಜಕರಲ್ಲೊಬ್ಬನನ್ನು ಅಲ್ಲಿಗೆ ಕಳುಹಿಸಿ. ಆ ಯಾಜಕನು ಹೋಗಿ ಅಲ್ಲಿಯೇ ನೆಲೆಸಲಿ. ನಂತರ ಆ ಯಾಜಕನು ಆ ದೇಶದ ದೇವರ ಕಟ್ಟಳೆಗಳನ್ನು ಜನರಿಗೆ ಬೋಧಿಸಲಿ’’ ಎಂದು ಆಜ್ಞಾಪಿಸಿದನು.

28 ಹೀಗೆ ಅಶ್ಶೂರದವರು ಸಮಾರ್ಯದಿಂದ ಕರೆದೊಯ್ದಿದ್ದ ಯಾಜಕರಲ್ಲೊಬ್ಬನು ಬೇತೇಲಿನಲ್ಲಿ ವಾಸಿಸಲು ಬಂದನು. ಈ ಯಾಜಕನು ಜನರಿಗೆ, ಯೆಹೋವ ಭಕ್ತಿಯನ್ನು ಬೋಧಿಸಿದನು.

29 ಆದರೆ ಅವರೆಲ್ಲರೂ ತಮ್ಮ ಸ್ವಂತ ದೇವರುಗಳನ್ನು ನಿರ್ಮಿಸಿ, ಅವುಗಳನ್ನು ಸಮಾರ್ಯದವರು ನಿರ್ಮಿಸಿದ್ದ ಉನ್ನತಸ್ಥಳಗಳಲ್ಲಿನ ಆಲಯಗಳಲ್ಲಿ ಇರಿಸಿದರು. ಅವರು ಎಲ್ಲೆಲ್ಲಿ ವಾಸಿಸುತ್ತಿದ್ದರೋ ಅಲ್ಲೆಲ್ಲಾ ಹೀಗೆಯೇ ಮಾಡಿದರು.
30 ಬಾಬಿಲೋನಿನ ಜನರು ಸುಳ್ಳುದೇವತೆಯಾದ ಸುಕ್ಕೋತ್ಬೆನೋತನ್ನು ನಿರ್ಮಿಸಿದರು. ಕೂತದ ಜನರು ಸುಳ್ಳುದೇವತೆಯಾದ ನೇರ್ಗಲ್‌ಯನ್ನು ಮಾಡಿದರು. ಹಮಾತಿನ ಜನರು ಸುಳ್ಳುದೇವತೆಯಾದ ಅಷೀಮಾವನ್ನು ಮಾಡಿದರು.
31 ಅವ್ವೀಯರು ಸುಳ್ಳುದೇವತೆಯಾದ ನಿಭಜ್ ಮತ್ತು ತರ್ತಕ್‌ಗಳನ್ನು ಮಾಡಿದರು. ಸೆಫರ್ವಯಿಮಿನವರು ತಮ್ಮ ದೇವರುಗಳಾದ ಅದ್ರಮ್ಮೆಲೆಕ್ ಮತ್ತು ಅನ್ನಮ್ಮೆಲೆಕ್‌ಗಳನ್ನು ಗೌರವಿಸಲು ತಮ್ಮ ಮಕ್ಕಳನ್ನು ಬೆಂಕಿಯಲ್ಲಿ ಆಹುತಿಕೊಟ್ಟರು.

32 ಆದರೆ ಅವರು ಯೆಹೋವನಲ್ಲಿಯೂ ಭಕ್ತಿಯನ್ನಿಟ್ಟಿದ್ದರು. ಅವರು ಉನ್ನತಸ್ಥಳಗಳಿಗೆ ಯಾಜಕರನ್ನು ಜನರಲ್ಲಿಯೇ ಆಯ್ಕೆ ಮಾಡಿಕೊಂಡರು. ಆ ಯಾಜಕರು ಜನರಿಗಾಗಿ ಉನ್ನತಸ್ಥಳಗಳಲ್ಲಿನ ದೇವಾಲಯಗಳಲ್ಲಿ ಯಜ್ಞವನ್ನು ಅರ್ಪಿಸಿದರು.
33 ಅವರು ಯೆಹೋವನಲ್ಲಿ ಭಕ್ತಿಯಿಟ್ಟಿದ್ದರು, ಆದರೆ ತಮ್ಮ ಸ್ವಂತ ದೇವರುಗಳ

ಸೇವೆಯನ್ನೂ ಮಾಡಿದರು. ಅವರು ತಮ್ಮನ್ನು ತೆಗೆದು
ಕೊಂಡು ಬಂದ ದೇಶಗಳಲ್ಲಿ ಮಾಡುತ್ತಿದ್ದಂತೆ ತಮ್ಮ
ದೇವರುಗಳ ಸೇವೆಯನ್ನು ಮಾಡಿದರು.

34ಇಂದಿಗೂ ಸಹ ಅವರು ಪೂರ್ವಕಾಲದಲ್ಲಿ ಮಾಡು
ತ್ತಿದ್ದಂತೆಯೇ ಜೀವಿಸುತ್ತಿದ್ದಾರೆ. ಅವರಿಗೆ ಯೆಹೋವನಲ್ಲಿ
ಭಕ್ತಿಯಿಲ್ಲ. ಅವರು ಇಸ್ರೇಲರ ನಿಯಮಗಳಿಗೆ ಮತ್ತು
ಆಜ್ಞೆಗಳಿಗೆ ವಿಧೇಯರಾಗುವುದಿಲ್ಲ. ಯೆಹೋವನು
ಯಾಕೋಬನ (ಇಸ್ರೇಲ) ಸಂತತಿಗೆ ನೀಡಿದ ನಿಯಮ
ಗಳನ್ನು ಮತ್ತು ಆಜ್ಞೆಗಳನ್ನು ಅನುಸರಿಸುವುದಿಲ್ಲ.
35ಯೆಹೋವನು ಇಸ್ರೇಲಿನ ಜನರೊಂದಿಗೆ ಒಂದು
ಒಡಂಬಡಿಕೆಯನ್ನು ಮಾಡಿಕೊಂಡು ಅವರಿಗೆ, ‘‘ನೀವು
ಅನ್ಯದೇವತೆಗಳನ್ನು ಪೂಜಿಸಬಾರದು; ನೀವು ಅವುಗಳಿಗೆ
ಕೈಮುಗಿಯಬಾರದು; ಅವುಗಳ ಸೇವೆಯನ್ನು ಮಾಡ
ಬಾರದು; ಅವುಗಳಿಗೆ ಯಜ್ಞಗಳನ್ನು ಅರ್ಪಿಸಬಾರದು.
36ಆದರೆ ನೀವು ಯೆಹೋವನನ್ನು ಅನುಸರಿಸಲೇಬೇಕು.
ನಿಮ್ಮನ್ನು ಈಜಿಪ್ಟಿನಿಂದ ಹೊರಗೆತಂದ ದೇವರೇ ನಿಮ್ಮ
ಯೆಹೋವ. ಯೆಹೋವನು ನಿಮ್ಮನ್ನು ರಕ್ಷಿಸಲು ತನ್ನ
ಮಹಾಶಕ್ತಿಯನ್ನು ಬಳಸಿದನು. ನೀವು ಯೆಹೋವನನ್ನು
ಆರಾಧಿಸಬೇಕು ಮತ್ತು ಆತನಿಗೆ ಯಜ್ಞಗಳನ್ನು ಅರ್ಪಿಸ
ಬೇಕು. 37ಆತನು ನಿಮಗೆ ಬರೆಯಿಸಿಕೊಟ್ಟ ನಿಮಯ
ಗಳಿಗೆ, ಶಾಸ್ತ್ರಗಳಿಗೆ, ಉಪದೇಶಗಳಿಗೆ ಮತ್ತು ಆಜ್ಞೆಗಳಿಗೆ
ನೀವು ವಿಧೇಯರಾಗಿರಬೇಕು. ನೀವು ಎಲ್ಲಾ ಕಾಲ
ದಲ್ಲೂ ಇವುಗಳಿಗೆ ವಿಧೇಯತೆಯಿಂದಿರಬೇಕು. ನೀವು
ಆನ್ಯದೇವತೆಗಳನ್ನು ಪೂಜಿಸಲೇಬಾರದು. 38ನಾನು
ನಿಮ್ಮೊಂದಿಗೆ ಮಾಡಿಕೊಂಡ ಒಡಂಬಡಿಕೆಯನ್ನು ನೀವು
ಮರೆಯಲೇಬಾರದು. ನೀವು ಅನ್ಯದೇವರುಗಳನ್ನು
ಪೂಜಿಸಬಾರದು. 39ನೀವು ನಿಮ್ಮ ದೇವರಾದ
ಯೆಹೋವನನ್ನು ಮಾತ್ರ ಆರಾಧಿಸಬೇಕು. ಆಗ ಆತನು
ನಿಮ್ಮನ್ನು ನಿಮ್ಮ ಶತ್ರುಗಳಿಂದ ರಕ್ಷಿಸುತ್ತಾನೆ’’ ಎಂದು
ಆಜ್ಞಾಪಿಸಿದನು.

40ಆದರೆ ಇಸ್ರೇಲರು ಆತನ ಮಾತಿಗೆ ಕಿವಿಗೊಡದೆ ತಮ್ಮ
ಮೊದಲಿನ ಕಾರ್ಯಗಳನ್ನೇ ಮುಂದುವರಿಸಿದರು.
41ಅನ್ಯಜನಾಂಗಗಳು ಯೆಹೋವನಲ್ಲಿ ಭಕ್ತಿಯಿಂದಿ
ದ್ದರೂ ತಮ್ಮ ಸ್ವಂತ ವಿಗ್ರಹಗಳನ್ನು ಪೂಜಿಸುತ್ತಿದ್ದರು.
ಅವರ ಮಕ್ಕಳು ಮತ್ತು ಮೊಮ್ಮಕ್ಕಳು ತಮ್ಮ ಪೂರ್ವಿಕರು
ಮಾಡಿದಂತಹ ಕಾರ್ಯಗಳನ್ನು ಮಾಡುತ್ತಿದ್ದರು. ಅವರು
ಇಂದಿಗೂ ಇಂತಹ ಕಾರ್ಯಗಳನ್ನು ಮಾಡುತ್ತಿದ್ದಾರೆ.

### ಹಿಜ್ಕೀಯನು ಯೆಹೂದದಲ್ಲಿ ತನ್ನ ಆಳ್ವಿಕೆಯನ್ನು ಆರಂಭಿಸಿದನು.

18 ಅಹಾಜನ ಮಗನಾದ ಹಿಜ್ಕೀಯನು ಯೆಹೂ
ದದ ರಾಜನಾದನು. ಏಲನ ಮಗನಾದ ಹೋಶೇ
ಯನು ಇಸ್ರೇಲಿನ ರಾಜನಾಗಿದ್ದ ಮೂರನೆಯ ವರ್ಷದಲ್ಲಿ
ಹಿಜ್ಕೀಯನು ಆಳಲಾರಂಭಿಸಿದನು. 2ಹಿಜ್ಕೀಯನು ಆಳ
ಲಾರಂಭಿಸಿದಾಗ ಅವನಿಗೆ ಇಪ್ಪತ್ತೊಂಭತ್ತು ವರ್ಷ ವಯ
ಸ್ಸಾಗಿತ್ತು. ಹಿಜ್ಕೀಯನು ಜೆರುಸಲೇಮಿನಲ್ಲಿ ಇಪ್ಪತ್ತೈದು
ವರ್ಷ ಆಳಿದನು. ಜೆಕರ್ಯನ ಮಗಳಾದ ಅಬೀ ಎಂಬ
ಹೆಸರಿನವಳು ಅವನ ತಾಯಿ.

3ಹಿಜ್ಕೀಯನು ತನ್ನ ಪೂರ್ವಿಕನಾದ ದಾವೀದ
ನಂತೆ, ಯೆಹೋವನು ಯೋಗ್ಯವೆಂದು ಹೇಳಿದ್ದನ್ನು
ಮಾಡಿದನು.

4ಹಿಜ್ಕೀಯನು ಉನ್ನತಸ್ಥಳಗಳನ್ನು ನಾಶಗೊಳಿಸಿದನು.
ಅವನು ಸ್ಮಾರಕಕಲ್ಲುಗಳನ್ನು ಒಡೆದುಹಾಕಿದನು ಮತ್ತು
ಅಶೇರಕಲ್ಲುಗಳನ್ನು ಕತ್ತರಿಸಿಹಾಕಿದನು. ಆ ಸಮಯದಲ್ಲಿ
ಇಸ್ರೇಲರು ಮೋಶೆಯು ಮಾಡಿದ ತಾಮ್ರಸರ್ಪಕ್ಕೆ
ಧೂಪವನ್ನು ಸುಡುತ್ತಿದ್ದರು. ಈ ತಾಮ್ರಸರ್ಪವನ್ನು
‘ನೆಹುಷ್ಟಾನ್’ ಎಂದು ಕರೆಯುತ್ತಿದ್ದರು. ಜನರು ಈ
ಸರ್ಪವನ್ನು ಆರಾಧಿಸುತ್ತಿದ್ದುದರಿಂದ ಹಿಜ್ಕೀಯನು ಈ
ತಾಮ್ರಸರ್ಪವನ್ನು ಒಡೆದು ಚೂರುಚೂರು ಮಾಡಿದನು.
5ಹಿಜ್ಕೀಯನು ಇಸ್ರೇಲಿನ ದೇವರಾದ ಯೆಹೋವನಲ್ಲಿ
ನಂಬಿಕೆಯಿಟ್ಟನು. ಯೆಹೂದದ ರಾಜರುಗಳಲ್ಲೆಲ್ಲಾ
ಹಿಜ್ಕೀಯನಂಥವರು ಅವನ ಮುಂಚೆಯಾಗಲೀ ಅವನ
ನಂತರವಾಗಲೀ ಇರಲಿಲ್ಲ. 6ಹಿಜ್ಕೀಯನು ಯೆಹೋವ
ನಿಗೆ ಬಹಳ ನಂಬಿಕೆಯುಳ್ಳವನಾಗಿದ್ದನು. ಅವನು
ಯೆಹೋವನನ್ನು ಅನುಸರಿಸುವುದನ್ನು ನಿಲ್ಲಿಸಲೇ ಇಲ್ಲ.
ಯೆಹೋವನು ಮೋಶೆಗೆ ನೀಡಿದ ಆಜ್ಞೆಗಳಿಗೆ ಅವನು
ವಿಧೇಯನಾಗಿ ಅನುಸರಿಸಿದನು. 7ಯೆಹೋವನು ಹಿಜ್ಕೀ
ಯನೊಂದಿಗಿದ್ದನು. ಹಿಜ್ಕೀಯನು ತಾನು ಮಾಡಿದ್ದರ
ಲ್ಲೆಲ್ಲಾ ಜಯಗಳಿಸಿದನು.

ಹಿಜ್ಕೀಯನು ಅಶ್ಶೂರ್ಯದ ರಾಜನೊಂದಿಗಿದ್ದ ಸಂಬಂಧ
ವನ್ನು ಕಡಿದುಹಾಕಿದನು. ಅಶ್ಶೂರ್ಯದ ರಾಜನ ಸೇವೆ
ಯನ್ನು ಹಿಜ್ಕೀಯನು ನಿಲ್ಲಿಸಿದನು. 8ಹಿಜ್ಕೀಯನು ಗಾಜ
ಪ್ರಾಂತ್ಯದವರೆಗಿದ್ದ ಮತ್ತು ಅದರ ಸುತ್ತಲಿನ ಪ್ರದೇಶ
ದಲ್ಲಿದ್ದ ಫಿಲಿಷ್ಟಿಯರನ್ನು ಸೋಲಿಸಿದನು. ಅವನು
ಫಿಲಿಷ್ಟಿಯರ ಚಿಕ್ಕ ಊರಿನಿಂದಿಡಿದು ದೊಡ್ಡ ನಗರ
ಗಳನ್ನೆಲ್ಲಾ ಸೋಲಿಸಿದನು.

### ಸಮಾರ್ಯಕ್ಕೆ ಅಶ್ಶೂರದವರ ಮುತ್ತಿಗೆ

9ಅಶ್ಶೂರ್ಯದ ರಾಜನಾದ ಶಲ್ಮನೆಸರನು ಸಮಾರ್ಯದ
ವಿರುದ್ಧ ಹೋರಾಡಲು ಹೋದನು. ಅವನ ಸೈನ್ಯವು ನಗರ
ವನ್ನು ಸುತ್ತುವರಿಯಿತು. ಹಿಜ್ಕೀಯನು ಯೆಹೂದದ
ರಾಜನಾಗಿದ್ದ ನಾಲ್ಕನೆಯ ವರ್ಷದಲ್ಲಿ ಇದು ಸಂಭವಿಸಿತು.
(ಅದು ಏಲನ ಮಗನಾದ ಹೋಶೇಯನು ಇಸ್ರೇಲಿನ
ರಾಜನಾಗಿ ಆಳುತ್ತಿದ್ದ ಏಳನೆಯ ವರ್ಷದಲ್ಲಿ ಸಂಭವಿ
ಸಿತು.) 10ಮೂರು ವರ್ಷಗಳ ಕೊನೆಯಲ್ಲಿ ಶಲ್ಮನೆಸರನು
ಸಮಾರ್ಯವನ್ನು ವಶಪಡಿಸಿಕೊಂಡನು. ಹಿಜ್ಕೀಯನು

ಯೆಹೂದದ ರಾಜನಾಗಿದ್ದ ಆರನೆಯ ವರ್ಷದಲ್ಲಿ ಅವನು
ಸಮಾರ್ಯವನ್ನು ವಶಪಡಿಸಿಕೊಂಡನು. (ಹೋಶೇ
ಯನು ಇಸ್ರೇಲಿನ ರಾಜನಾಗಿ ಆಳುತ್ತಿದ್ದ ಒಂಭತ್ತನೆಯ
ವರ್ಷದಲ್ಲಿ ಇದು ಸಂಭವಿಸಿತು.) 11ಅಶ್ಶೂರದ ರಾಜನು
ಇಸ್ರೇಲರನ್ನು, ಸೆರೆಯಾಳುಗಳನ್ನಾಗಿ ಅಶ್ಶೂರಿಗೆ
ಒಯ್ದನು. ಅವನು ಅವರನ್ನು ಹಲಹು ಪ್ರಾಂತ್ಯದಲ್ಲಿಯೂ
ಹಾಬೋರ್ ಹೊಳೆಯಿರುವ ಗೋಜಾನ್ ಪ್ರಾಂತ್ಯ
ದಲ್ಲಿಯೂ ಮೇದ್ಯರ ನಗರಗಳಲ್ಲಿಯೂ ವಾಸಿಸುವಂತೆ
ಮಾಡಿದನು. 12ಇಸ್ರೇಲರು ತಮ್ಮ ದೇವರಾದ ಯೆಹೋ
ವನಿಗೆ ಅವಿಧೇಯರಾದದ್ದೂ ಆತನ ಒಡಂಬಡಿಕೆಯನ್ನು
ಉಲ್ಲಂಘಿಸಿದ್ದೂ ಆತನ ಸೇವಕನಾದ ಮೋಶೆಯ ಆಜ್ಞೆ
ಗಳಿಗೆ ಅವಿಧೇಯರಾದದ್ದೂ ಇದಕ್ಕೆ ಕಾರಣ.

### ಯೆಹೂದವನ್ನು ವಶಪಡಿಸಿಕೊಳ್ಳಲು ಅಶ್ಶೂರದವರು ಸಿದ್ಧರಾದರು

13ಹಿಜ್ಕೀಯನು ರಾಜನಾಗಿದ್ದ ಹದಿನಾಲ್ಕನೆಯ ವರ್ಷ
ದಲ್ಲಿ ಅಶ್ಶೂರದ ರಾಜನಾದ ಸನ್ಹೇರೀಬನು. ಯೆಹೂದದ
ಬಲಾಢ್ಯ ನಗರಗಳ ವಿರುದ್ಧವಾಗಿ ಹೋರಾಡಲು
ಹೋದನು. ಸನ್ಹೇರೀಬನು ಆ ನಗರಗಳನ್ನೆಲ್ಲ ಸೋಲಿಸಿ
ದನು. 14ಆಗ ಯೆಹೂದದ ರಾಜನಾದ ಹಿಜ್ಕೀಯನು
ಲಾಕೀಷಿನಲ್ಲಿದ್ದ ಅಶ್ಶೂರದ ರಾಜನಿಗೆ ಒಂದು ಸಂದೇಶ
ವನ್ನು ಕಳುಹಿಸಿದನು. ಹಿಜ್ಕೀಯನು, ‘‘ನಾನು ತಪ್ಪು ಮಾಡಿ
ದ್ದೇನೆ. ನನ್ನನ್ನು ಒಬ್ಬಂಟಿಗನನ್ನಾಗಿ ಬಿಡು. ನಂತರ ನೀನು
ಅಪೇಕ್ಷಿಸಿದ್ದನ್ನೆಲ್ಲಾ ಕೊಡುತ್ತೇನೆ’’ಎಂದು ಹೇಳಿದನು.

ಆಗ ಅಶ್ಶೂರದ ರಾಜನು ಯೆಹೂದದ ರಾಜನಾದ
ಹಿಜ್ಕೀಯನಿಗೆ ಸುಮಾರು ಹನ್ನೊಂದು ಟನ್ನು ಬೆಳ್ಳಿಯನ್ನು
ಮತ್ತು ಒಂದು ಟನ್ನು ಚಿನ್ನವನ್ನು ಕೊಡುವಂತೆ ಹೇಳಿದನು.
15ಹಿಜ್ಕೀಯನು ದೇವಾಲಯದಲ್ಲಿದ್ದ ಮತ್ತು ರಾಜನ
ಭಂಡಾರದಲ್ಲಿದ್ದ ಬೆಳ್ಳಿಯನ್ನೆಲ್ಲ ನೀಡಿದನು. 16ಈ
ಸಮಯದಲ್ಲಿ, ಹಿಜ್ಕೀಯನು ಯೆಹೋವನ ಆಲಯದ
ಬಾಗಿಲುಗಳಿಗೆ ಮತ್ತು ಕದಗಳಿಗೆ ಹೊದಿಸಿದ್ದ ಬಂಗಾರ
ವನ್ನು ಕತ್ತರಿಸಿಹಾಕಿದನು. ರಾಜನಾದ ಹಿಜ್ಕೀಯನು ಈ
ಬಾಗಿಲುಗಳ ಮತ್ತು ಕದಗಳ ಮೇಲೆ ಬಂಗಾರವನ್ನು
ಹೊದಿಸಿದ್ದನು. ಹಿಜ್ಕಿಯನು ಈ ಬಂಗಾರವನ್ನು
ಅಶ್ಶೂರದ ರಾಜನಿಗೆ ನೀಡಿದನು.

### ಅಶ್ಶೂರದ ರಾಜನು ಜೆರುಸಲೇಮಿಗೆ ಜನರನ್ನು ಕಳುಹಿಸಿದನು

17ಅಶ್ಶೂರದ ರಾಜ ಜೆರುಸಲೇಮಿನಲ್ಲಿದ್ದ ರಾಜನಾದ
ಹಿಜ್ಕೀಯನ ಬಳಿಗೆ ತನ್ನ ಮೂವರು ಮಹಾಸೇನಾಧಿಪತಿ
ಗಳನ್ನು ಸೈನ್ಯದೊಂದಿಗೆ ಕಳುಹಿಸಿದನು. ಅವರು ಲಾಕೀಷಿ
ನಿಂದ ಜೆರುಸಲೇಮಿಗೆ ಹೋದರು. ಅವರು ಮೇಲಿನ
ಕೆರೆಯ ನೀರಿನ ಕೊಳವೆಯ ಬಳಿ ನಿಂತರು. (ಮೇಲಿನ
ಕೆರೆಯು ರಸ್ತೆಯ ಮೇಲೆ ದೋಭಿಘಾಟ್ ಬಳಿಯಿತ್ತು.)
18ಈ ಜನರು ರಾಜನನ್ನು ಕರೆದರು. ಹಿಲ್ಕೀಯನ ಮಗ
ನಾದ ಎಲ್ಯಾಕೀಮ್ (ಎಲ್ಯಾಕೀಮನು ರಾಜ ಗೃಹಾಧಿ
ಪತಿ), ಶೆಬ್ನ (ಕಾರ್ಯದರ್ಶಿ), ಆಸಾಫನ ಮಗನಾದ
ಯೋವನು (ಮಂತ್ರಿ). ಅವರನ್ನು ಭೇಟಿ ಮಾಡಲು
ಹೊರಗೆ ಬಂದರು. 19ಸೇನಾಧಿಪತಿಗಳಲ್ಲಿ ಒಬ್ಬನಾದ
ರಬ್ಷಾಕೆಯು ಅವರಿಗೆ, ‘‘ಅಶ್ಶೂರದ ಮಹಾರಾಜನು
ಹಿಜ್ಕೀಯನಿಗೆ ತಿಳಿಸುವುದೇನಂದರೆ:

ನಿನ್ನ ನಂಬಿಕೆಗೆ ಆಧಾರವು ಎಲ್ಲಿದೆ? 20‘ಯುದ್ಧ
ದಲ್ಲಿ ನನಗೆ ಸಹಾಯ ಮಾಡಲು ನಿನ್ನಲ್ಲಿ ಬೇಕಾ
ದಷ್ಟು ವಿವೇಕವೂ ಬಲವೂ ಇದೆ’ ಎಂದು ನೀನು
ಹೇಳುವೆ. ಆದರೆ ನೀನು ಯಾರನ್ನು ನಂಬಿಕೊಂಡು
ನನಗೆ ವಿರುದ್ಧವಾಗಿ ದಂಗೆ ಎದ್ದಿರುವೆ? 21ನೀನು
ಮುರಿದುಬಿದ್ದಿರುವ ದಂಟನ್ನು ಊರುಗೋಲೆಂದು
ನಂಬಿ ಭರವಸೆಯಿಟ್ಟಿರುವೆ! ಈಜಿಪ್ಟ್ ಊರು
ಗೋಲಾಗಿದೆ. ಒಬ್ಬ ಮನುಷ್ಯನು ಈ ಊರು
ಗೋಲಿನ ಮೇಲೆ ಭರವಸೆಯಿಟ್ಟರೆ ಅದು ಮುರಿದು
ಬೀಳುತ್ತದೆ ಮತ್ತು ಅವನ ಕೈಯನ್ನೇ ಚುಚ್ಚಿ ಅವನಿಗೆ
ನೋವನ್ನು ಉಂಟುಮಾಡುತ್ತದೆ! ಈಜಿಪ್ಟಿನ
ರಾಜನು ತನ್ನನ್ನು ನಂಬಿದ ಜನರೆಲ್ಲರಿಗೂ ಇದೇ
ರೀತಿಯಲ್ಲಿದ್ದಾನೆ. 22ಬಹುಶಃ ನೀನು, ‘‘ನೀವು
ನಮ್ಮ ದೇವರಾದ ಯೆಹೋವನಲ್ಲಿ ಭರವಸೆಯಿಟ್ಟಿ
ದ್ದೇವೆ’’ ಎಂದು ಹೇಳುವೆ. ಆದರೆ ಹಿಜ್ಕೀಯನು
ಯೆಹೋವನ ಉನ್ನತಸ್ಥಳಗಳನ್ನು ಮತ್ತು ಯಜ್ಞ
ವೇದಿಕೆಯನ್ನು ನಾಶಪಡಿಸಿ ಯೆಹೂದಕ್ಕೆ ಮತ್ತು
ಜೆರುಸಲೇಮಿಗೆ, ‘‘ನೀವು ಜೆರುಸಲೇಮಿನಲ್ಲಿರುವ
ಯಜ್ಞವೇದಿಕೆಯ ಸನ್ನಿಧಿಯಲ್ಲಿ ಮಾತ್ರ ಆರಾಧಿಸ
ಬೇಕು’’ ಎಂದು ಹೇಳಿದನೆಂಬುದು ನನಗೆ ತಿಳಿದಿದೆ.
23ಈಗ ನಮ್ಮ ಒಡೆಯನಾದ ಅಶ್ಶೂರದ ರಾಜ
ನೊಂದಿಗೆ ಈ ಒಡಂಬಡಿಕೆಯನ್ನು ಮಾಡಿಕೊ.
ನಿನ್ನಲ್ಲಿ ಸವಾರಿಮಾಡಬಲ್ಲ ಸವಾರರು ಇದ್ದರೆ ನಿನಗೆ
ಎರಡು ಸಾವಿರ ಕುದುರೆಗಳನ್ನು ಕೊಡುತ್ತೇನೆಂದು
ನಾನು ಪ್ರಮಾಣ ಮಾಡುತ್ತೇನೆ. 24ನನ್ನ ಒಡೆಯನ
ಅಧಿಕಾರಿಗಳಲ್ಲಿ ಕನಿಷ್ಠನಾದ ಒಬ್ಬ ಅಧಿಕಾರಿ
ಯನ್ನೂ ನೀನು ಸೋಲಿಸಲಾಗುವುದಿಲ್ಲ! ನಿನಗೆ
ರಥಗಳನ್ನು ಮತ್ತು ಕುದುರೆಯ ಸವಾರರನ್ನು
ಕೊಡಲು ನೀನು ಈಜಿಪ್ಟನ್ನು ಅವಲಂಬಿಸಿರುವೆ.
25ನಾನು ಯೆಹೋವನ ಚಿತ್ತವಿಲ್ಲದೆ ಜೆರುಸಲೇ
ಮನ್ನು ನಾಶಗೊಳಿಸಲು ಬಂದೆನೆಂದು ನೆನಸು
ತ್ತೀಯೋ? ‘‘ಈ ದೇಶದ ವಿರುದ್ಧವಾಗಿ ನುಗ್ಗಿ ನಾಶ
ಗೊಳಿಸು’’ ಎಂದು ಯೆಹೋವನೇ ನನಗೆ ಆಜ್ಞಾಪಿ
ಸಿದನು ಎಂದು ಹೇಳಿದನು.

26ನಂತರ ಹಿಲ್ಕೀಯನ ಮಗನಾದ ಎಲ್ಯಾಕೀಮ್, ಶೆಬ್ನ
ಮತ್ತು ಯೋವ ಎಂಬುವರು ಸೇನಾಧಿಪತಿಗೆ, ''ದಯ
ವಿಟ್ಟು ನಮ್ಮೊಂದಿಗೆ ಅರಾಮ್ಯರ ಭಾಷೆಯಲ್ಲಿ ಮಾತ
ನಾಡು. ನಾವು ಆ ಭಾಷೆಯನ್ನು ಅರ್ಥಮಾಡಿಕೊಳ್ಳು
ತ್ತೇವೆ. ಗೋಡೆಯ ಮೇಲಿರುವ ಜನರಿಗೆ ನಮ್ಮ
ಮಾತುಗಳು ಕೇಳುವುದರಿಂದ ಯೆಹೂದದ ಭಾಷೆಯಲ್ಲಿ
ನಮ್ಮೊಂದಿಗೆ ಮಾತನಾಡಬೇಡ'' ಎಂದು ಹೇಳಿದರು.
27ಆದರೆ ರಬ್ಷಾಕೆಯು ಅವರಿಗೆ, ''ನನ್ನ ಒಡೆಯನು
ನನ್ನನ್ನು ಕಳುಹಿಸಿದ್ದು ನಾನು ನಿಮ್ಮೊಂದಿಗೆ ಮತ್ತು ನಿಮ್ಮ
ರಾಜನೊಂದಿಗೆ ಮಾತ್ರ ಮಾತಾಡುವುದಕ್ಕಲ್ಲ.
ಗೋಡೆಯ ಮೇಲೆ ಕುಳಿತಿರುವ ಇತರ ಜನರೊಂದಿಗೂ
ನಾನು ಮಾತನಾಡುತ್ತೇನೆ! ಅವರು ನಿಮ್ಮೊಂದಿಗಿದ್ದರೆ
ತಮ್ಮ ಮಲವನ್ನು ತಾವೇ ತಿನ್ನಬೇಕಾಗುತ್ತದೆ ಮತ್ತು ತಮ್ಮ
ಮೂತ್ರವನ್ನು ತಾವೇ ಕುಡಿಯಬೇಕಾಗುತ್ತದೆ!'' ಎಂದು
ಹೇಳಿದನು.
28ನಂತರ ಸೇನಾಧಿಪತಿಯು ಯೂದಾಯ ಭಾಷೆ
ಯಲ್ಲಿ ಗಟ್ಟಿಯಾಗಿ,''ಅಶ್ಶೂರದ ಮಹಾರಾಜನ ಈ
ಸಂದೇಶವನ್ನು ಕೇಳಿರಿ! 29ನಿಮ್ಮನ್ನು ಮೂರ್ಖರನ್ನಾಗಿ
ಸಲು ಹಿಜ್ಕೀಯನಿಗೆ ಅವಕಾಶ ಕೊಡಬೇಡಿ! ನನ್ನ ಶಕ್ತಿ
ಯಿಂದ ಅವನು ನಿಮ್ಮನ್ನು ರಕ್ಷಿಸಲಾಗುವುದಿಲ್ಲ.
30ಯೆಹೋವನನ್ನು ನೀವು ನಂಬುವಂತೆ ಮಾಡಲು
ಹಿಜ್ಕೀಯನಿಗೆ ಅವಕಾಶ ನೀಡಬೇಡಿ! 'ಯೆಹೋವನು
ನಮ್ಮನ್ನು ರಕ್ಷಿಸುತ್ತಾನೆ! ಅಶ್ಶೂರದ ರಾಜನು ಈ ನಗರ
ವನ್ನು ಸೋಲಿಸಲಾಗುವುದಿಲ್ಲ!' ಎಂದು ಹಿಜ್ಕೀಯನು
ಹೇಳುತ್ತಾನೆ.
31ಆದರೆ ಹಿಜ್ಕೀಯನ ಮಾತುಗಳನ್ನು ಕೇಳಬೇಡಿ!''
ಎಂದು ಹೇಳಿದನು.
''ಅಶ್ಶೂರದ ರಾಜ ಹೀಗೆ ಹೇಳುತ್ತಾನೆ: 'ನನ್ನೊಂದಿಗೆ
ಶಾಂತಿಒಪ್ಪಂದ ಮಾಡಿಕೊಂಡು ನನ್ನ ಆಶ್ರಯಕ್ಕೆ ಬನ್ನಿರಿ.
ನಂತರ ಪ್ರತಿಯೊಬ್ಬರೂ ತನ್ನ ಸ್ವಂತ ದ್ರಾಕ್ಷಿಯನ್ನು ತಿನ್ನ
ಬಹುದು; ತನ್ನ ಸ್ವಂತ ಅಂಜೂರವನ್ನು ತಿನ್ನಬಹುದು; ತನ್ನ
ಸ್ವಂತ ಬಾವಿಯಿಂದ ನೀರನ್ನು ಕುಡಿಯಬಹುದು.
32ನಾನು ಬಂದು, ನಿಮ್ಮನ್ನು ಈ ದೇಶಕ್ಕೆ ಸಮಾನವಾದ
ಬೇರೊಂದು ದೇಶಕ್ಕೆ ಕರೆದೊಯ್ಯುವವರೆಗೆ ನೀವು ಹೀಗೆ
ಮಾಡಬಹುದು. ಆ ದೇಶವು ಧಾನ್ಯ, ದ್ರಾಕ್ಷಾರಸ,
ಆಹಾರ, ದ್ರಾಕ್ಷಿತೋಟ, ಆಲೀವ್‌ಮರ ಮತ್ತು ಜೇನು
ತುಪ್ಪ ಮುಂತಾದವುಗಳಿಂದ ಸಮೃದ್ಧಿಯಾಗಿದೆ. ನೀವು
ಅಲ್ಲಿ ಸಾಯದೆ ಜೀವಿಸಬಹುದು. ಆದರೆ ಹಿಜ್ಕೀಯನ
ಮಾತುಗಳನ್ನು ಕೇಳಬೇಡಿ! ಅವನು ನಿಮ್ಮ ಮನಸ್ಸನ್ನು
ಬದಲಾಯಿಸಲು ಪ್ರಯತ್ನಿಸುತ್ತಿದ್ದಾನೆ' 'ಯೆಹೋವನು
ನಮ್ಮನ್ನು ರಕ್ಷಿಸುತ್ತಾನೆ' ಎಂದು ಅವನು ಹೇಳುತ್ತಾನೆ.
33ಬೇರೆ ಜನಾಂಗಗಳ ದೇವರುಗಳು ಅವರ ದೇಶಗಳನ್ನು
ಅಶ್ಶೂರದ ರಾಜನಿಗೆ ಸಿಗದಂತೆ ರಕ್ಷಿಸಿದನೇ? ಇಲ್ಲ!
34ಹತಾಮ್ ಮತ್ತು ಅರ್ಪಾದ್ ದೇವರುಗಳು ಎಲ್ಲಿವೆ?
ಸೆಫರ್ವಯಿಮ್, ಹೇನ, ಇವ್ವಾದ ದೇವರುಗಳು ಎಲ್ಲಿವೆ?
ಸಮಾರ್ಯವನ್ನು ನನ್ನ ಕೈಗೆ ಸಿಗದಂತೆ ಅವು ರಕ್ಷಿಸಿದವೇ?
ಇಲ್ಲ!
35ಬೇರೆ ಜನಾಂಗಗಳ ದೇವತೆಗಳು ಯಾವುದಾದರೂ
ತಮ್ಮ ದೇಶವನ್ನು ನನ್ನಿಂದ ರಕ್ಷಿಸುತ್ತವೆಯೇ? ಇಲ್ಲ!
ಜೆರುಸಲೇಮನ್ನು ಯೆಹೋವನು ನನ್ನಿಂದ ರಕ್ಷಿಸು
ತ್ತಾನೆಯೇ ಇಲ್ಲ!''
36ಆದರೆ ಜನರೆಲ್ಲರೂ ಸುಮ್ಮನಿದ್ದರು. ರಾಜನಾದ
ಹಿಜ್ಕೀಯನು ಜನರಿಗೆ ಆಜ್ಞಾಪಿಸಿದ್ದರಿಂದ ಅವರು ಸೇನಾ
ಧಿಪತಿಯೊಂದಿಗೆ ಒಂದು ಮಾತನ್ನೂ ಆಡಲಿಲ್ಲ. ''ಅವನಿಗೆ
ಏನನ್ನೂ ಹೇಳಬೇಡಿ'' ಎಂದು ಹಿಜ್ಕೀಯನು ಹೇಳಿದ್ದನು.
37ಹಿಲ್ಕೀಯನ ಮಗನಾದ ಎಲ್ಯಾಕೀಮ್ (ಎಲ್ಯಾ
ಕೀಮನು ರಾಜಗೃಹಾಧಿಪತಿಯಾಗಿದ್ದನು), ಶೆಬ್ನ
(ಕಾರ್ಯದರ್ಶಿ) ಮತ್ತು ಆಸಾಫನ ಮಗನಾದ ಯೋವ
(ಮಂತ್ರಿ) ಹಿಜ್ಕೀಯನ ಬಳಿಗೆ ಬಂದರು. ಅವರು ದುಃಖ
ದಿಂದ ತಮ್ಮ ಬಟ್ಟೆಗಳನ್ನು ಹರಿದುಕೊಂಡಿದ್ದರು. ಅಶ್ಶೂ
ರದ ಸೇನಾಧಿಪತಿಯಾದ ರಬ್ಷಾಕೆಯು ಹೇಳಿದ ಸಂಗತಿ
ಗಳನ್ನು ಅವರು ಹಿಜ್ಕೀಯನಿಗೆ ತಿಳಿಸಿದರು.

### ಹಿಜ್ಕೀಯನು ತನ್ನ ಅಧಿಕಾರಿಗಳನ್ನು ಪ್ರವಾದಿಯಾದ ಯೆಶಾಯನ ಬಳಿಗೆ ಕಳುಹಿಸಿದನು

19 ರಾಜನಾದ ಹಿಜ್ಕೀಯನು ಅವುಗಳನ್ನೆಲ್ಲ ಕೇಳಿ
ದುಃಖದಿಂದ ತನ್ನ ಬಟ್ಟೆಗಳನ್ನು ಹರಿದುಕೊಂಡು
ಗೋಣಿತಟ್ಟನ್ನು ಕಟ್ಟಿಕೊಂಡು ಯೆಹೋವನ ಆಲಯ
ದೊಳಕ್ಕೆ ಹೋದನು.
2ಹಿಜ್ಕೀಯನು ಎಲ್ಯಾಕೀಮನನ್ನು (ರಾಜಗೃಹಾಧಿ
ಪತಿ), ಶೆಬ್ನ (ಕಾರ್ಯದರ್ಶಿ) ಮತ್ತು ಹಿರಿಯರಾದ
ಯಾಜಕರನ್ನು ಆಮೋಚನ ಮಗನೂ ಪ್ರವಾದಿಯೂ
ಆಗಿದ್ದ ಯೆಶಾಯನ ಬಳಿಗೆ ಕಳುಹಿಸಿದನು. ಅವರು ತಮ್ಮ
ದುಃಖವನ್ನೂ ಕಳವಳವನ್ನೂ ತೋರ್ಪಡಿಸುವಂತೆ
ಗೋಣಿತಟ್ಟನ್ನು ಧರಿಸಿದ್ದರು.
3ಅವರು ಯೆಶಾಯನಿಗೆ, ''ಹಿಜ್ಕೀಯನು ಹೇಳುವುದೇ
ನಂದರೆ, ಇಂದು ಮಹಾಕಷ್ಟದ ದಿನವಾಗಿದೆ. ನಾವು ಶಿಕ್ಷೆ
ಯನ್ನೂ ನಿಂದೆಯನ್ನೂ ಅನುಭವಿಸಬೇಕಾಯಿತು. ಇದು
ಪ್ರಸವವೇದನೆಯ ದಿನದಂತಿದೆ. ಆದರೆ ಹೆರಲು ಶಕ್ತಿಯೇ
ಇಲ್ಲವಾಗಿದೆ. 4ಸೇನಾಧಿಪತಿಯ ಒಡೆಯನಾದ ಅಶ್ಶೂರದ
ರಾಜನು, ಜೀವಸ್ವರೂಪನಾದ ದೇವರ ಬಗ್ಗೆ ಕೆಟ್ಟದ್ದನ್ನು
ನುಡಿಯಲು ಅವನನ್ನು ಕಳುಹಿಸಿದನು. ನಿಮ್ಮ ದೇವರಾದ
ಯೆಹೋವನು ಅವುಗಳನ್ನೆಲ್ಲ ಕೇಳಿರುತ್ತಾನೆ. ಯೆಹೋ
ವನು ಶತ್ರುಗಳನ್ನು ತಪ್ಪಿತಸ್ಥರೆಂದು ನಿರ್ಧರಿಸಬಹುದು!
ಆದ್ದರಿಂದ ಇನ್ನೂ ಜೀವಸಹಿತ ಉಳಿದಿರುವ ಜನರಿಗಾಗಿ
ಪ್ರಾರ್ಥಿಸಿ'' ಎಂದು ಹೇಳಿದರು.

5ರಾಜನಾದ ಹಿಜ್ಕೀಯನ ಅಧಿಕಾರಿಗಳು ಯೆಶಾಯನ
ಬಳಿಗೆ ಹೋದರು. 6ಯೆಶಾಯನು ಅವರಿಗೆ, ‘‘ನಿಮ್ಮ
ಒಡೆಯನಾದ ಹಿಜ್ಕೀಯನಿಗೆ ಈ ಸಂದೇಶವನ್ನು ತಿಳಿಸಿ:
‘ಯೆಹೋವನು ಇಂತೆನ್ನುತ್ತಾನೆ: ಅಶ್ಶೂರದ ರಾಜನ
ಅಧಿಕಾರಿಗಳು ನನ್ನನ್ನು ಅಪಹಾಸ್ಯ ಮಾಡಲೆಂದು ಹೇಳಿದ
ಸಂಗತಿಗಳಿಂದ ನೀವು ಹೆದರಬೇಡಿ. 7ನಾನು ಅವನಲ್ಲಿ
ಒಂದು ಆತ್ಮವನ್ನಿರಿಸುತ್ತೇನೆ. ಅವನು ಒಂದು ಸುದ್ದಿಯನ್ನು
ಕೇಳುತ್ತಾನೆ. ನಂತರ ಅವನು ತನ್ನ ಸ್ವಂತ ದೇಶಕ್ಕೆ
ಹಿಂದಿರುಗಿ ಓಡಿಹೋಗುತ್ತಾನೆ. ನಾನು ಅವನನ್ನು ಅವನ
ಸ್ವಂತ ದೇಶದಲ್ಲಿ ಖಡ್ಗದಿಂದ ಕೊಲ್ಲಲ್ಪಡುವಂತೆ ಮಾಡು
ತ್ತೇನೆ’’ಎಂದು ಹೇಳಿದನು.

### ಅಶ್ಶೂರದ ರಾಜ ಹಿಜ್ಕೀಯನನ್ನು ಮತ್ತೆ ಎಚ್ಚರಿಸುವನು

8ಅಶ್ಶೂರದ ರಾಜನು ಲಾಕೀಷನ್ನು ಬಿಟ್ಟು ಹೋದ
ನೆಂಬ ಸುದ್ದಿಯನ್ನು ಸೇನಾಧಿಪತಿಯು ಕೇಳಿ ಲಿಬ್ನಕ್ಕೆ
ಹೋದಾಗ ರಾಜನು ಲಿಬ್ನದ ವಿರುದ್ಧ ಯುದ್ಧ
ಮಾಡುತ್ತಿದ್ದನು. 9ಇಥಿಯೋಪಿಯದ ರಾಜ ತಿರ್ಹಾಕನ
ಬಗ್ಗೆ ಅಶ್ಶೂರದ ರಾಜ ಒಂದು ಗಾಳಿ ಸುದ್ದಿಯನ್ನು
ಕೇಳಿದನು. ‘‘ತಿರ್ಹಾಕನು ನಿನ್ನ ವಿರುದ್ಧ ಹೋರಾಡಲು
ಬಂದಿದ್ದಾನೆ’’ ಎಂಬುದೇ ಆ ಗಾಳಿ ಸುದ್ದಿಯಾಗಿತ್ತು.

ಆದ್ದರಿಂದ ಅಶ್ಶೂರದ ರಾಜನು ಹಿಜ್ಕೀಯನ ಬಳಿಗೆ
ಮತ್ತೆ ಸಂದೇಶಕರನ್ನು ಕಳುಹಿಸಿದನು. ಅಶ್ಶೂರದ
ರಾಜನು ಈ ಸಂದೇಶಕರಿಗೆ ಒಂದು ಸಂದೇಶವನ್ನು
ನೀಡಿದನು.

10ಯೆಹೂದದ ರಾಜನಾದ ಹಿಜ್ಕೀಯನಿಗೆ
ಇದನ್ನು ಹೇಳಿ:
‘‘ನೀನು ನಂಬುವ ದೇವರು ನಿನ್ನನ್ನು ಮೋಸ
ಗೊಳಿಸಲು ಅವಕಾಶ ನೀಡಬೇಡ. ಅಶ್ಶೂರದ ರಾಜ
ಜೆರುಸಲೇಮನ್ನು ಸೋಲಿಸುವುದಿಲ್ಲ ಎಂಬ ನಿನ್ನ
ದೇವರ ಮಾತನ್ನು ನಂಬಬೇಡ. 11ಅಶ್ಶೂರದ
ರಾಜನು ಇತರ ಎಲ್ಲಾ ಜನಾಂಗಗಳಿಗೆ ಮಾಡಿದವು
ಗಳನ್ನು ನೀನು ಕೇಳಿರುವೆ. ನಾವು ಅವರನ್ನು
ಸಂಪೂರ್ಣವಾಗಿ ನಾಶಗೊಳಿಸಿದೆವು! ನೀನು ರಕ್ಷಿಸ
ಲ್ಪಡುವೆಯಾ? ಇಲ್ಲ! 12ಆ ರಾಜ್ಯಗಳ ದೇವರುಗಳು
ತಮ್ಮ ಜನರನ್ನು ರಕ್ಷಿಸಲಾಗಲಿಲ್ಲ. ನನ್ನ ಪೂರ್ವಿಕರು
ಅವರನ್ನೆಲ್ಲ ನಾಶಗೊಳಿಸಿದರು. ಅವರು
ಗೋಜಾನ್, ಖಾರಾನ್, ರೆಚೆಫ್ ಮತ್ತು ತೆಲ
ಸ್ಸಾರ್‌ನ ಎದೆನಿನ ಜನರನ್ನು ನಾಶಗೊಳಿಸಿದರು!
13ಹಮಾತಿನ ರಾಜನು ಎಲ್ಲಿದ್ದಾನೆ? ಅರ್ಪಾದ್‌ನ
ರಾಜನೆಲ್ಲಿ? ಸೆಫರ್ವಯಿಮ್ ರಾಜನೆಲ್ಲಿ? ಹೇನ
ಮತ್ತು ಇವ್ವಾಗಳ ರಾಜರೆಲ್ಲಿ? (ಅವರೆಲ್ಲರೂ
ಹತರಾದರು!)’’

### ಹಿಜ್ಕೀಯನು ಯೆಹೋವನಿಗೆ ಪ್ರಾರ್ಥಿಸುವನು

14ಹಿಜ್ಕೀಯನು ಸಂದೇಶಕರಿಂದ ಬಂದ ಪತ್ರಗಳನ್ನು
ತೆಗೆದುಕೊಂಡು ಓದಿದನು. ನಂತರ ಹಿಜ್ಕೀಯನು
ದೇವಾಲಯದವರೆಗೆ ಹೋಗಿ, ಯೆಹೋವನ ಸನ್ನಿಧಿ
ಯಲ್ಲಿ ಆ ಪತ್ರಗಳನ್ನಿರಿಸಿದನು. 15ಹಿಜ್ಕೀಯನು ಯೆಹೋ
ವನ ಸನ್ನಿಧಿಯಲ್ಲಿ, ‘‘ಯೆಹೋವನೇ, ಕೆರೂಬಿಗಳ ಮೇಲೆ
ರಾಜನಾಗಿ ಕುಳಿತುಕೊಳ್ಳುವ ಇಸ್ರೇಲರ ದೇವರೇ,
ಲೋಕದ ರಾಜ್ಯಗಳಿಗೆಲ್ಲಾ ನೀನೊಬ್ಬನೇ ದೇವರಾ
ಗಿರುವೆ. ನೀನು ಪರಲೋಕವನ್ನು ಮತ್ತು ಈ ಲೋಕವನ್ನು
ಸೃಷ್ಟಿಸಿದೆ! 16ಯೆಹೋವನೇ, ದಯವಿಟ್ಟು ನನ್ನ ಮಾತು
ಗಳನ್ನು ಆಲಿಸು! ಯೆಹೋವನೇ, ನಿನ್ನ ಕಣ್ಣುಗಳನ್ನು
ತೆರೆದು, ಈ ಪತ್ರವನ್ನು ನೋಡು. ಸನ್ಹೇರೀಬನು ಜೀವ
ಸ್ವರೂಪನಾದ ದೇವರನ್ನು ನಿಂದಿಸಿ ಕಳುಹಿಸಿರುವ ಈ
ವಾಕ್ಯವನ್ನು ಕೇಳು! 17ಯೆಹೋವನೇ, ಅಶ್ಶೂರದ
ರಾಜರು ಆ ರಾಜ್ಯಗಳನ್ನೆಲ್ಲ ನಾಶಗೊಳಿಸಿದ್ದು ನಿಜ!
18ಅವರು ಆ ದೇಶಗಳ ದೇವರುಗಳನ್ನು ಬೆಂಕಿಯಲ್ಲಿ
ಎಸೆದರು. ಆದರೆ ಅವು ನಿಜವಾದ ದೇವರುಗಳಲ್ಲ. ಅವು
ಗಳು ಮಾನವರಿಂದ ಮರ ಮತ್ತು ಕಲ್ಲುಗಳಿಂದ ನಿರ್ಮಿತ
ವಾಗಿದ್ದವು. ಆದಕಾರಣವೇ ಅಶ್ಶೂರದ ರಾಜರುಗಳು
ಅವುಗಳನ್ನು ನಾಶಗೊಳಿಸಿದರು. 19ನಮ್ಮ ದೇವರಾದ
ಯೆಹೋವನೇ, ಅಶ್ಶೂರದ ರಾಜನಿಂದ ನಮ್ಮನ್ನು
ರಕ್ಷಿಸು. ಭೂಲೋಕದ ರಾಜ್ಯಗಳೆಲ್ಲ ನೀನೊಬ್ಬನೇ ದೇವ
ರಾದ ಯೆಹೋವನೆಂದು ತಿಳಿದುಕೊಳ್ಳುವಂತೆ ನಮ್ಮನ್ನು
ಇವನ ಕೈಯಿಂದ ಬಿಡಿಸು’’ ಎಂದು ಪ್ರಾರ್ಥಿಸಿದನು.

20ಆಮೋಚನ ಮಗನಾದ ಯೆಶಾಯನು ಹಿಜ್ಕೀಯ
ನಿಗೆ ಈ ಸಂದೇಶವನ್ನು ಕಳುಹಿಸಿದನು: ‘‘ಇಸ್ರೇಲಿನ
ದೇವರಾದ ಯೆಹೋವನು ಇಂತೆನ್ನುತ್ತಾನೆ, ‘ಅಶ್ಶೂರದ
ರಾಜನಾದ ಸನ್ಹೇರೀಬನ ವಿರುದ್ಧವಾಗಿ ನೀವು ನನ್ನಲ್ಲಿ
ಪ್ರಾರ್ಥಿಸಿರುವಿರಿ. ನಾನು ನಿಮ್ಮ ಪ್ರಾರ್ಥನೆಯನ್ನು ಕೇಳಿ
ದ್ದೇನೆ.’ 21‘‘ಸನ್ಹೇರೀಬನನ್ನು ಕುರಿತು ಯೆಹೋವನು
ಹೇಳುವುದೇನಂದರೆ:

ಚೀಯೋನ್ (ಜೆರುಸಲೇಮ್) ಕುವರಿಯು
ನಿನ್ನನ್ನು ತಿರಸ್ಕರಿಸುತ್ತಾಳೆ; ನಿನ್ನನ್ನು ಪರಿಹಾಸ್ಯ
ಮಾಡುತ್ತಾಳೆ. ಜೆರುಸಲೇಮಿನ ಕುವರಿಯು ನಿನ್ನ
ಹಿಂದಿನಿಂದ ತಲೆಯಾಡಿಸುತ್ತಾಳೆ.

22 ನೀನು ಯಾರನ್ನು ನಿಂದಿಸಿ ಪರಿಹಾಸ್ಯ ಮಾಡಿದೆ?
ನೀನು ಯಾರ ವಿರುದ್ಧ ಮಾತನಾಡಿದೆ? ನೀನು
ಇಸ್ರೇಲಿನ ಪವಿತ್ರನಿಗೆ ವಿರೋಧಿಯಲ್ಲವೆ! ನೀನು
ಅವನಿಗಿಂತ ಉತ್ತಮನಂತೆ ನಟಿಸಿದೆ!

23 ನೀನು ಯೆಹೋವನನ್ನು ನಿಂದಿಸಲು ನಿನ್ನ ಸಂದೇಶ
ಕರನ್ನು ಬಳಸಿದೆ. ‘‘ನಾನು ನನ್ನ ಅನೇಕ ರಥಗ
ಳೊಂದಿಗೆ ಉನ್ನತ ಗಿರಿಗಳಿಗೆ ಬಂದೆನು. ನಾನು

ಲೆಬನೋನಿನ ದುರ್ಗಮ ಸ್ಥಳಗಳಿಗೆ ಹೋದೆನು.
ನಾನು ಲೆಬನೋನಿನ ಎತ್ತರವಾದ ದೇವದಾರು
ಮರಗಳನ್ನೂ ಲೆಬನೋನಿನ ಉತ್ತಮ ತುರಾಯಿ
ಮರಗಳನ್ನೂ ಕಡಿದುರುಳಿಸಿದೆನು.
24 ನಾನು ಬಾವಿಗಳನ್ನು ತೋಡಿ ಹೊಸ ಸ್ಥಳಗಳಲ್ಲಿ
ನೀರು ಕುಡಿದೆನು. ನಾನು ಈಜಿಪ್ಟಿನ ನದಿಗಳನ್ನು
ಬತ್ತಿಸಿದ್ದೇನೆ; ಆ ದೇಶದ ಮೇಲೆಲ್ಲಾ ನಡೆದಾಡಿ
ದ್ದೇನೆ'' ಎಂದು ನೀನು ಹೇಳಿದೆ.
25 ಆದರೆ ನೀನು ಕೇಳಿಲ್ಲವೇ? ''ನಾನು ಬಹುಕಾಲದ
ಹಿಂದೆಯೇ ಅದನ್ನು ಯೋಜಿಸಿದ್ದೆನು. ಪುರಾತನ
ಕಾಲದಿಂದಲೇ ಅದನ್ನು ಆಲೋಚಿಸಿದ್ದೆನು, ಈಗ
ನಾನು ಅದನ್ನು ನೆರವೇರಿಸಿದ್ದೇನೆ. ನೀನು ಬಲಾಢ್ಯ
ನಗರಗಳನ್ನು ಹಾಳುದಿಬ್ಬಗಳನ್ನಾಗಿ ಮಾಡಲು
ಅವಕಾಶ ನೀಡಿದವನು ನಾನೇ.
26 ನಗರಗಳಲ್ಲಿ ವಾಸಿಸುವ ಜನರು ಬಲವಿಲ್ಲದವರಾಗಿ
ನಿರಾಶೆಯಿಂದ ಗಲಿಬಿಲಿಗೊಂಡರು. ಜನರು
ಹೊಲಗಳಲ್ಲಿನ ಹುಲ್ಲಿನಂತೆಯೂ ಹಸಿರು ಗಿಡಗ
ಳಂತೆಯೂ ಮಾಳಿಗೆಯ ಮೇಲೆ ಒಣಗಿ
ಹಾಳಾಗುವ ಹುಲ್ಲಿನಂತೆಯೂ ಇದ್ದರು.
27 ನೀನು ಮೇಲೇಳುವುದೂ ಕುಳಿತುಕೊಳ್ಳುವುದೂ
ನನಗೆ ಗೊತ್ತಿದೆ. ನೀನು ಒಳಗೆ ಬರುವುದೂ
ಹೊರಗೆ ಹೋಗುವುದೂ ನನಗೆ ತಿಳಿದಿದೆ. ನೀನು
ನನ್ನ ವಿರುದ್ಧ ಯಾವಾಗ ದಂಗೆಯೇಳುವೆ
ಎಂಬುದೂ ನನಗೆ ತಿಳಿದಿದೆ.
28 ನೀನು ನನ್ನ ವಿರುದ್ಧ ದಂಗೆ ಎದ್ದಿರುವೆ. ನಿನ್ನ ಗರ್ವದ
ನಿಂದನೆಯನ್ನು ನಾನು ಕೇಳಿರುವೆ. ಆದ್ದರಿಂದ
ನಾನು ನಿನ್ನ ಬಾಯಿಗೆ ಕಡಿವಾಣವನ್ನು ಹಾಕಿ ನೀನು
ಬಂದ ದಾರಿಯಲ್ಲಿಯೇ ಹಿಂದಿರುಗುವಂತೆ
ಮಾಡುತ್ತೇನೆ.''

### ಹಿಜ್ಕೀಯನಿಗೆ ಯೆಹೋವನ ಸಂದೇಶ

29 ''ನಾನು ನಿನಗೆ ಸಹಾಯ ಮಾಡುತ್ತೇನೆಂಬುದಕ್ಕೆ
ಇದು ಸಾಕ್ಷಿಯ ಗುರುತಾಗಿದೆ: ಈ ವರ್ಷ ನೀವು ತನಾ
ಗಿಯೇ ಬೆಳೆಯುವ ಧಾನ್ಯವನ್ನು ತಿನ್ನುತ್ತೀರಿ. ಮುಂದಿನ
ವರ್ಷ ನೀವು ಬೀಜದಿಂದ ಬೆಳೆಯುವ ಧಾನ್ಯವನ್ನು
ತಿನ್ನುತ್ತೀರಿ. ಆದರೆ ಮೂರನೆಯ ವರ್ಷದಲ್ಲಿ ನೀವು
ಬೆಳೆಸಿದ ಧಾನ್ಯವನ್ನು ಒಟ್ಟುಗೂಡಿಸುತ್ತೀರಿ. ನೀವು ದ್ರಾಕ್ಷಿ
ತೋಟಗಳನ್ನು ಬೆಳೆಸುತ್ತೀರಿ; ಅವುಗಳ ದ್ರಾಕ್ಷಿಯನ್ನು
ತಿನ್ನುತ್ತೀರಿ. 30 ಅಳಿದುಳಿದವರು (ಬದುಕಿಕೊಂಡ
ಯೆಹೂದ ಕುಲದವರು) ಮತ್ತೆ ವೃದ್ಧಿಯಾಗುವರು.
ಅವರು ಆಳವಾಗಿ ಬೇರೂರಿ ಫಲವನ್ನು ಫಲಿಸುವರು.
31 ಜೆರುಸಲೇಮಿನಲ್ಲಿ ಉಳಿದವರು ಹರಡಿಕೊಳ್ಳುವರು;
ಚೆಯೋನ್ ಪರ್ವತದಲ್ಲಿ ತಪ್ಪಿಸಿಕೊಂಡವರು ಅಭಿವೃದ್ಧಿ
ಹೊಂದುವರು; ಯೆಹೋವನ ಸ್ವಾಭಿಮಾನವೇ ಇದನ್ನು
ನೆರವೇರಿಸುವುದು.
32 ''ಯೆಹೋವನು ಅಶ್ಶೂರದ ರಾಜನನ್ನು ಕುರಿತು
ಇಂತೆನ್ನುತ್ತಾನೆ:

ಅವನು ಈ ನಗರದೊಳಕ್ಕೆ ಬರುವುದಿಲ್ಲ. ಅವನು
ಈ ನಗರದಲ್ಲಿ ಒಂದು ಬಾಣವನ್ನೂ ಎಸೆಯು
ವುದಿಲ್ಲ. ಅವನು ಈ ನಗರದ ವಿರುದ್ಧ ಗುರಾಣಿ
ಗಳೊಂದಿಗೆ ಬರುವುದಿಲ್ಲ. ಅವನು ಈ ನಗರವನ್ನು
ಮುತ್ತಲು ಮಣ್ಣಿನ ದಿಬ್ಬವನ್ನು ನಿರ್ಮಿಸುವುದಿಲ್ಲ.
33 ಅವನು ತಾನು ಬಂದ ದಾರಿಯಲ್ಲೇ ಹಿಂದಕ್ಕೆ
ಹೋಗುತ್ತಾನೆ. ಅವನು ಈ ನಗರದೊಳಕ್ಕೆ ಬರು
ವುದಿಲ್ಲ. ಯೆಹೋವನೇ ಇದನ್ನು ನುಡಿದಿದ್ದಾನೆ.
34 ನಾನು ಈ ನಗರವನ್ನು ಕಾಪಾಡುತ್ತೇನೆ ಮತ್ತು
ಇದನ್ನು ರಕ್ಷಿಸುತ್ತೇನೆ. ನನಗಾಗಿಯೂ ನನ್ನ ಸೇವಕ
ನಾದ ದಾವೀದನಿಗಾಗಿಯೂ ನಾನು ಇದನ್ನು
ಮಾಡುತ್ತೇನೆ.''

### ಅಶ್ಶೂರದ ಸೇನೆಯು ನಾಶಗೊಳಿಸಲ್ಪಟ್ಟಿತು

35 ಆ ರಾತ್ರಿ ಯೆಹೋವನ ದೂತನು ಹೊರಕ್ಕೆ ಹೋಗಿ,
ಅಶ್ಶೂರದ ಶಿಬಿರದಲ್ಲಿ ಒಂದುಲಕ್ಷದ ಎಂಭತ್ತೈದು ಸಾವಿರ
ಜನರನ್ನು ಕೊಂದುಹಾಕಿದನು. ಜನರು ಬೆಳಗಿನ ಜಾವ
ದಲ್ಲಿ ಮೇಲಕ್ಕೆದ್ದಾಗ ಸತ್ತ ದೇಹಗಳನ್ನು ನೋಡಿದರು.
36 ಆಗ ಅಶ್ಶೂರದ ರಾಜನಾದ ಸನ್ಹೇರೀಬನು ತಾನು
ವಾಸಿಸುತ್ತಿದ್ದ ನಿನವೆಗೆ ಹಿಂದಿರುಗಿಹೋದನು. 37 ಸನ್ಹೇರೀ
ಬನು ಒಂದು ದಿನ ತನ್ನ ದೇವರಾದ ನಿಸ್ರೋಕನನ್ನು
ಆಲಯದಲ್ಲಿ ಆರಾಧಿಸುತ್ತಿದ್ದನು. ಅವನ ಮಕ್ಕಳಾದ
ಅದ್ರಮ್ಮೆಲೆಕ್ ಮತ್ತು ಸರೆಚೆರ್ ಅವನನ್ನು ಖಡ್ಗದಿಂದ
ಇರಿದುಕೊಂದರು. ನಂತರ ಅದ್ರಮ್ಮೆಲೆಕ್ ಮತ್ತು
ಸರೆಚೆರ್ ಅರರಾಟ್ ದೇಶಕ್ಕೆ ತಪ್ಪಿಸಿಕೊಂಡು
ಹೋದರು. ಸನ್ಹೇರೀಬನ ಮಗನಾದ ಏಸರ್‌ಹದ್ದೋ
ನನು ಅವನ ನಂತರ ಹೊಸ ರಾಜನಾದನು.

### ಹಿಜ್ಕೀಯನಿಗೆ ಕಾಯಿಲೆ

20 ಆ ಸಮಯದಲ್ಲಿ ಹಿಜ್ಕೀಯನಿಗೆ ಕಾಯಿಲೆಯಾಗಿ
ಸತ್ತಂತಾದನು. ಆಮೋಚನ ಮಗನೂ ಪ್ರವಾ
ದಿಯೂ ಆದ ಯೆಶಾಯನು ಹಿಜ್ಕೀಯನ ಬಳಿಗೆ ಹೋಗಿ,
''ಯೆಹೋವನು ಇಂತೆನ್ನುತ್ತಾನೆ: 'ನಿನ್ನ ಮನೆಯನ್ನು
ವ್ಯವಸ್ಥೆಗೊಳಿಸು; ಏಕೆಂದರೆ ನೀನು ಸಾಯುವೆ, ಬದುಕು
ವುದಿಲ್ಲ!'' ಎಂದು ಹೇಳಿದನು.
2 ಹಿಜ್ಕೀಯನು ತನ್ನ ಮುಖವನ್ನು ಗೋಡೆಯ ಕಡೆಗೆ
ತಿರುಗಿಸಿ ಯೆಹೋವನಲ್ಲಿ ಪ್ರಾರ್ಥಿಸುತ್ತಾ, 3 ''ಯೆಹೋ
ವನೇ, ನಾನು ಪೂರ್ಣಮನಸ್ಸಿನಿಂದ ನಿಜವಾಗಿಯೂ ನಿನ್ನ

ಸೇವೆಮಾಡಿದ್ದೇನೆಂಬುದನ್ನು ನೆನಪು ಮಾಡಿಕೊ. ನೀನು
ಯೋಗ್ಯವೆಂದು ಹೇಳಿದವುಗಳನ್ನು ನಾನು ಮಾಡಿದೆನು''
ಎಂದು ಹೇಳಿದನು. ನಂತರ ಹಿಜ್ಕೀಯನು ಬಹಳ
ಜೋರಾಗಿ ಗೋಳಾಡಿದನು.

4ಯೆಶಾಯನು ಮಧ್ಯಪ್ರಾಕಾರವನ್ನು ಬಿಡುವುದಕ್ಕೆ
ಮುಂಚೆಯೇ, ಯೆಹೋವನ ವಾಕ್ಯವು ಅವನಿಗೆ ಬಂದಿತು.
ಯೆಹೋವನು 5''ಹಿಂದಿರುಗಿ ಹೋಗಿ, ನನ್ನ ಜನರ
ನಾಯಕನಾದ ಹಿಜ್ಕೀಯನಿಗೆ ಇದನ್ನು ಹೇಳು: 'ನಿನ್ನ
ಪೂರ್ವಿಕನಾದ ದಾವೀದನ ದೇವರಾದ ಯೆಹೋವನು
ಇಂತೆನ್ನುತ್ತಾನೆ: 'ನಾನು ನಿನ್ನ ಪ್ರಾರ್ಥನೆಯನ್ನು ಕೇಳಿ
ದೆನು; ನಿನ್ನ ಕಣ್ಣೀರನ್ನು ನೋಡಿದೆನು. ಆದ್ದರಿಂದ ನಾನು
ನಿನ್ನನ್ನು ಗುಣಪಡಿಸುತ್ತೇನೆ. ಮೂರನೆಯ ದಿನ, ನೀನು
ದೇವಾಲಯದ ಮೇಲಿನವರೆಗೆ ಹೋಗುವೆ. 6ನಾನು ನಿನ್ನ
ಜೀವಕ್ಕೆ ಹದಿನೈದು ವರ್ಷಗಳನ್ನು ಕೂಡಿಸುತ್ತೇನೆ. ನಾನು
ನಿನ್ನನ್ನು ಮತ್ತು ಈ ನಗರವನ್ನು ಅಶ್ಶೂರದ ರಾಜನ
ಅಧಿಕಾರದಿಂದ ರಕ್ಷಿಸುತ್ತೇನೆ. ನಾನು ಈ ನಗರವನ್ನು
ಸಂರಕ್ಷಿಸುತ್ತೇನೆ. ನಾನು ನನ್ನ ಸೇವಕನಾದ ದಾವೀದನಿಗೆ
ವಾಗ್ದಾನ ಮಾಡಿದ್ದಕ್ಕಾಗಿಯೂ ನನಗಾಗಿಯೂ ಇದನ್ನು
ಮಾಡುತ್ತೇನೆ'' ಎಂದು ಹೇಳಿದನು. 7ಆಗ ಯೆಶಾಯನು,
''ಅಂಜೂರಹಣ್ಣಿನಿಂದ ಒಂದು ಉಂಡೆಯನ್ನು ಮಾಡಿಸಿ
ಅದನ್ನು ಕುರುವಿನ ಮೇಲೆ ಇಡು'' ಎಂದು ಹೇಳಿದನು.

ಅಂತೆಯೇ ಅವರು ಅಂಜೂರಹಣ್ಣಿನ ಒಂದು ಉಂಡೆ
ಯನ್ನು ಹಿಜ್ಕೀಯನ ಕುರುವಿನ ಮೇಲೆ ಇಟ್ಟರು. ಆಗ
ಹಿಜ್ಕೀಯನಿಗೆ ಗುಣವಾಯಿತು.

## ಹಿಜ್ಕೀಯನು ಗುಣಮುಖನಾಗುತ್ತಾನೆಂಬುದಕ್ಕೆ ಗುರುತು

8ಹಿಜ್ಕೀಯನು ಯೆಶಾಯನಿಗೆ, ''ಯೆಹೋವನು
ನನ್ನನ್ನು ಗುಣಪಡಿಸುತ್ತಾನೆಂಬುದಕ್ಕೆ ಮತ್ತು ಮೂರನೆಯ
ದಿನ ನಾನು ದೇವಾಲಯದವರೆಗೆ ಹೋಗುವೆನೆಂಬುದಕ್ಕೆ
ಏನು ಗುರುತು?''ಎಂದು ಕೇಳಿದನು.

9ಯೆಶಾಯನು, ''ನೆರಳು ಹತ್ತು ಮೆಟ್ಟಲು ಮುಂದಕ್ಕೆ
ಹೋಗಬೇಕೋ ಅಥವಾ ಹತ್ತು ಮೆಟ್ಟಲು ಹಿಂದಕ್ಕೆ
ಹೋಗಬೇಕೋ?* ನಿನಗೆ ಯಾವುದು ಬೇಕಾಗಿದೆ?
ಯೆಹೋವನು ತಾನು ಹೇಳಿದ್ದನ್ನು ಮಾಡುತ್ತಾನೆಂಬು
ದಕ್ಕೆ ಇದೇ ನಿನಗೆ ಗುರುತು''ಎಂದು ಹೇಳಿದನು.

10ಹಿಜ್ಕೀಯನು, ''ನೆರಳು ಮುಂದೆ ಹೋಗುವುದು
ಸುಲಭ, ಆದ್ದರಿಂದ ಹತ್ತು ಮೆಟ್ಟಲು ಹಿಂದೆ ಬರುವಂತೆ
ಮಾಡು'' ಎಂದು ಉತ್ತರಿಸಿದನು.

11ಆಗ ಯೆಶಾಯನು ಯೆಹೋವನಲ್ಲಿ ಪ್ರಾರ್ಥಿಸಿ
ದನು. ಯೆಹೋವನು ಈಗಾಗಲೇ ಹತ್ತು ಮೆಟ್ಟಲು
ಮುಂದೆ ಹೋಗಿದ್ದ ನೆರಳನ್ನು ಹತ್ತು ಮೆಟ್ಟಲು ಹಿಂದಕ್ಕೆ
ಬರುವಂತೆ ಮಾಡಿದನು.

## ಹಿಜ್ಕೀಯನು ತನ್ನ ಭಂಡಾರವನ್ನು ಬಾಬಿಲೋನಿನ ಜನರಿಗೆ ತೋರಿಸಿದನು

12ಆ ಸಮಯದಲ್ಲಿ, ಬಲದಾನನ ಮಗನಾದ
ಬೆರೋದಕ ಬಲದಾನ ಎಂಬುವನು ಬಾಬಿಲೋನಿನ
ರಾಜನಾಗಿದ್ದನು. ಅವನು ಹಿಜ್ಕೀಯನಿಗೆ ಪತ್ರಗಳನ್ನು
ಮತ್ತು ಕಾಣಿಕೆಯನ್ನು ಕಳುಹಿಸಿದನು. ಹಿಜ್ಕೀಯನು
ಅಸ್ವಸ್ಥನಾಗಿದ್ದಾನೆ ಎಂಬುದನ್ನು ಬೆರೋದಕ ಬಲದಾ
ನನು ತಿಳಿದುಕೊಂಡದ್ದರಿಂದ ಹೀಗೆ ಮಾಡಿದನು.
13ಹಿಜ್ಕೀಯನು ಬಾಬಿಲೋನಿನ ಜನರನ್ನು ಸ್ವಾಗತಿಸಿ,
ಅವರಿಗೆ ತನ್ನ ಮನೆಯಲ್ಲಿದ್ದ ಎಲ್ಲಾ ಬೆಲೆಬಾಳುವ ವಸ್ತು
ಗಳನ್ನು ತೋರಿಸಿದನು. ಅವನು ತನ್ನ ಭಂಡಾರದಲ್ಲಿದ್ದ
ಬೆಳ್ಳಿಬಂಗಾರಗಳನ್ನು, ಸುಗಂಧದ್ರವ್ಯಗಳನ್ನು, ಪರಿಮಳ
ಭರಿತ ತೈಲವನ್ನು, ಆಯುಧಗಳನ್ನು ತೋರಿಸಿದನು.
ಹಿಜ್ಕೀಯನ ಮನೆಯಲ್ಲಿ ಮತ್ತು ಅವನ ರಾಜ್ಯದಲ್ಲಿ
ಅವರಿಗೆ ತೋರಿಸದೆ ಉಳಿದದ್ದು ಏನೂ ಇರಲಿಲ್ಲ.

14ನಂತರ ಪ್ರವಾದಿಯಾದ ಯೆಶಾಯನು ರಾಜನಾದ
ಹಿಜ್ಕೀಯನ ಬಳಿಗೆ ಬಂದು, ''ಈ ಜನರು ಹೇಳುವು
ದೇನು? ಇವರು ಎಲ್ಲಿಂದ ಬಂದರು?'' ಎಂದು
ಕೇಳಿದನು.

ಹಿಜ್ಕೀಯನು, ''ಅವರು ಬಹಳ ದೂರದೇಶದಿಂದ,
ಬಾಬಿಲೋನಿನಿಂದ ಬಂದಿದ್ದಾರೆ'' ಎಂದನು.

15ಯೆಶಾಯನು, ''ಅವರು ನಿನ್ನ ಮನೆಯಲ್ಲಿ ಏನನ್ನು
ನೋಡಿದರು?'' ಎಂದು ಕೇಳಿದನು.

ಹಿಜ್ಕೀಯನು, ''ಅವರು ನನ್ನ ಮನೆಯಲ್ಲಿರುವು
ದನ್ನೆಲ್ಲಾ ನೋಡಿದರು. ಅವರಿಗೆ ತೋರಿಸದೆ ಉಳಿದಿರು
ವುದು ನನ್ನ ಭಂಡಾರದಲ್ಲಿ ಏನೂ ಇಲ್ಲ'' ಎಂದು
ಉತ್ತರಿಸಿದನು.

16ಆಗ ಯೆಶಾಯನು ಹಿಜ್ಕೀಯನಿಗೆ, ''ಯೆಹೋವ
ನಿಂದ ಬಂದ ಈ ಸಂದೇಶವನ್ನು ಆಲಿಸು. 17ನಿನ್ನ ಮನೆ
ಯಲ್ಲಿರುವ ವಸ್ತುಗಳೆಲ್ಲವನ್ನು ನಿನ್ನ ಮನೆಯಿಂದ ಬಾಬಿ
ಲೋನಿಗೆ ಕೊಂಡೊಯ್ಯುವ ಕಾಲವು ಬರುತ್ತಿದೆ; ನಿನ್ನ
ಪೂರ್ವಿಕರು ಇಂದಿನವರೆಗೆ ರಕ್ಷಿಸಿದ ವಸ್ತುಗಳೆಲ್ಲವನ್ನು
ಬಾಬಿಲೋನಿಗೆ ತೆಗೆದುಕೊಂಡು ಹೋಗುವ ಸಮಯವು
ಬರುತ್ತಿದೆ. ಏನನ್ನೂ ಬಿಡುವುದಿಲ್ಲ! ಯೆಹೋವನೇ
ಇದನ್ನು ನುಡಿದಿದ್ದಾನೆ. 18ಬಾಬಿಲೋನಿನವರು ನಿನ್ನ
ಮಕ್ಕಳನ್ನೂ ತೆಗೆದುಕೊಂಡು ಹೋಗುವರು. ನಿನ್ನ
ಮಕ್ಕಳು ಬಾಬಿಲೋನಿನ ರಾಜನ ಅರಮನೆಯಲ್ಲಿ ಕಂಚು
ಕಿಗಳಾಗುತ್ತಾರೆ'' ಎಂದು ಹೇಳಿದನು.

---

**ನೆರಳು … ಹೋಗಬೇಕೋ?** ಹಿಜ್ಕೀಯನು ಗಡಿಯಾರದಂತೆ ಬಳಸುತ್ತಿದ್ದ ಒಂದು ವಿಶೇಷ ಕಟ್ಟಡವು ಹೊರಗಡೆಯಿದ್ದಿತು. ಸೂರ್ಯ ಕಿರಣಗಳು ಮೆಟ್ಟಲಿನ ಮೇಲೆ ಬಿದ್ದಾಗ, ನೆರಳು ಆ ದಿನದ ಸಮಯವನ್ನು ತೋರಿಸುತ್ತಿತ್ತು ಎಂಬುದು ಇದರ ಅರ್ಥ.

19ಹಿಜ್ಕೀಯನು ತನ್ನ ಜೀವಮಾನದಲ್ಲಿ ಹೇಗೂ
ಶಾಂತಿಯಿರುವುದೆಂದು ತಿಳಿದುಕೊಂಡು ಯೆಶಾಯನಿಗೆ,
''ಯೆಹೋವನ ಈ ಸಂದೇಶವು ಒಳ್ಳೆಯದಾಗಿದೆ'' ಎಂದು
ಹೇಳಿದನು.

20''ಯೆಹೂದದ ರಾಜರುಗಳ ಇತಿಹಾಸ'' ಎಂಬ
ಪುಸ್ತಕದಲ್ಲಿ ಹಿಜ್ಕೀಯನು ಮಾಡಿದ ಇತರ ಎಲ್ಲಾ ಮಹಾ
ಕಾರ್ಯಗಳನ್ನೂ ಅವನು ನಗರಕ್ಕೆ ಕೆರೆಯಿಂದ ಕೊಳವೆ
ಗಳ ಮೂಲಕ ನೀರಿನ ವ್ಯವಸ್ಥೆಮಾಡಿದ್ದನ್ನೂ ಬರೆಯ
ಲಾಗಿದೆ.

21ಹಿಜ್ಕೀಯನು ತೀರಿಕೊಂಡಾಗ ಅವನನ್ನು ಅವನ
ಪೂರ್ವಿಕರ ಬಳಿ ಸಮಾಧಿಮಾಡಲಾಯಿತು. ಹಿಜ್ಕೀಯನ
ನಂತರ ಅವನ ಮಗನಾದ ಮನಸ್ಸೆಯು ಹೊಸ
ರಾಜನಾದನು.

## ಮನಸ್ಸೆಯು ತನ್ನ ಕೆಟ್ಟ ಆಳ್ವಿಕೆಯನ್ನು ಯೆಹೂದದಲ್ಲಿ ಆರಂಭಿಸಿದನು

21 ಮನಸ್ಸೆಯು ಆಳಲಾರಂಭಿಸಿದಾಗ ಅವನಿಗೆ ಹನ್ನೆ
ರಡು ವರ್ಷ ವಯಸ್ಸಾಗಿತ್ತು. ಅವನು ಐವತ್ತೈದು
ವರ್ಷ ಜೆರುಸಲೇಮಿನಲ್ಲಿ ಆಳಿದನು. ಅವನ ತಾಯಿಯ
ಹೆಸರು ಹೆಫ್ಜಿಬಾ.

2ಯೆಹೋವನು ಕೆಟ್ಟದ್ದೆಂದು ಹೇಳಿದ ಕಾರ್ಯಗಳನ್ನು
ಮನಸ್ಸೆಯು ಮಾಡಿದನು. ಇಸ್ರೇಲರು ತಮ್ಮ ದೇಶಕ್ಕೆ
ಬಂದಾಗ ಯೆಹೋವನು ಹೊರಗಟ್ಟಿದ ಅನ್ಯಜನಾಂಗ
ಗಳ ಅಸಹ್ಯ ಕಾರ್ಯಗಳನ್ನು ಮನಸ್ಸೆಯು ಮಾಡಿದನು.
3ಮನಸ್ಸೆಯು ತನ್ನ ತಂದೆಯಾದ ಹಿಜ್ಕೀಯನು ನಾಶ
ಪಡಿಸಿದ್ದ ಉನ್ನತಸ್ಥಳಗಳನ್ನು ಮತ್ತೆ ನಿರ್ಮಿಸಿದನು.
ಮನಸ್ಸೆಯು ಇಸ್ರೇಲಿನ ರಾಜನಾದ ಅಹಾಬನಂತೆ ಬಾಳನಿ
ಗಾಗಿ ಯಜ್ಞವೇದಿಕೆಯನ್ನು ಮತ್ತು ಅಶೇರಸ್ತಂಭಗಳನ್ನು
ನಿರ್ಮಿಸಿದನು. ಮನಸ್ಸೆಯು ಪರಲೋಕದ ನಕ್ಷತ್ರಗಳನ್ನು
ಆರಾಧಿಸಿ ಅವುಗಳ ಸೇವೆಮಾಡಿದನು. 4ಮನಸ್ಸೆಯು
ಸುಳ್ಳುದೇವತೆಗಳನ್ನು ಗೌರವಿಸಲು ದೇವಾಲಯದಲ್ಲಿ
ಯಜ್ಞವೇದಿಕೆಗಳನ್ನು ನಿರ್ಮಿಸಿದನು. (''ನಾನು ನನ್ನ
ಹೆಸರನ್ನು ಜೆರುಸಲೇಮಿನಲ್ಲಿ ಸ್ಥಾಪಿಸುತ್ತೇನೆ'' ಎಂದು
ಯೆಹೋವನು ಮಾತನಾಡುವಾಗ ಹೇಳುತ್ತಿದ್ದ ಸ್ಥಳವು
ಇದೇ ಆಗಿತ್ತು.) 5ಮನಸ್ಸೆಯು ಪರಲೋಕದ ನಕ್ಷತ್ರಗಳಿ
ಗಾಗಿ ದೇವಾಲಯದ ಎರಡು ಪ್ರಾಕಾರಗಳಲ್ಲಿ ಯಜ್ಞ
ವೇದಿಕೆಗಳನ್ನು ನಿರ್ಮಿಸಿದನು. 6ಮನಸ್ಸೆಯು ತನ್ನ ಮಗ
ನನ್ನು ಆಹುತಿಕೊಟ್ಟು ಅವನನ್ನು ಯಜ್ಞವೇದಿಕೆಯ ಮೇಲೆ
ಹೋಮಮಾಡಿದನು. ಮನಸ್ಸೆಯು ಭವಿಷ್ಯತ್ಕಾಲವನ್ನು
ಅರಿಯಲು ಅನೇಕ ಮಾರ್ಗಗಳಲ್ಲಿ ಪ್ರಯತ್ನಿಸುತ್ತಿದ್ದನು.
ಅವನು ಪ್ರೇತಾತ್ಮಗಳನ್ನು ವಶಪಡಿಸಿ ಕೊಂಡಿರುವ
ಮಾಂತ್ರಿಕರನ್ನು ಮತ್ತು ತಾಂತ್ರಿಕರನ್ನು ಭೇಟಿ
ಮಾಡಿದನು.

ಯೆಹೋವನು ಕೆಟ್ಟದ್ದೆಂದು ಹೇಳಿದ ಅನೇಕಾನೇಕ
ಕಾರ್ಯಗಳನ್ನು ಮನಸ್ಸೆಯು ಮಾಡಿದನು. ಯೆಹೋ
ವನು ಕೋಪಗೊಳ್ಳಲು ಇದು ಕಾರಣವಾಯಿತು.
7ಮನಸ್ಸೆಯು ಅಶೇರ ವಿಗ್ರಹಗಳನ್ನು ಕೆತ್ತಿಸಿದನು. ಅವನು
ಈ ವಿಗ್ರಹವನ್ನು ಆಲಯದಲ್ಲಿ ಇರಿಸಿದನು. ಯೆಹೋ
ವನು ದಾವೀದನಿಗೆ ಮತ್ತು ದಾವೀದನ ಮಗನಾದ
ಸೊಲೊಮೋನನಿಗೆ ಈ ಆಲಯವನ್ನು ಕುರಿತು ಹೀಗೆ
ಹೇಳಿದ್ದನು: ''ಇಸ್ರೇಲಿನಲ್ಲಿರುವ ಎಲ್ಲಾ ನಗರಗಳಿಂದ
ನಾನು ಜೆರುಸಲೇಮನ್ನು ಆರಿಸಿದ್ದೇನೆ. ನಾನು ನನ್ನ
ಹೆಸರನ್ನು ಜೆರುಸಲೇಮಿನ ಆಲಯದಲ್ಲಿ ಎಂದೆಂದಿಗೂ
ಇರಿಸುತ್ತೇನೆ. 8ಇಸ್ರೇಲಿನ ಜನರು ತಮ್ಮ ದೇಶವನ್ನು
ತೊರೆದು ಅಲೆದಾಡದೆ ತಮ್ಮ ಪೂರ್ವಿಕರಿಗೆ ಕೊಡಲ್ಪಟ್ಟ
ದೇಶದಲ್ಲಿಯೇ ನೆಲೆಸುವಂತೆ ನಾನು ಮಾಡುತ್ತೇನೆ.
ನಾನು ನನ್ನ ಸೇವಕನಾದ ಮೋಶೆಯ ಮೂಲಕ ಅವರಿಗೆ
ಬೋಧಿಸಿದ ಆಜ್ಞೆಗಳಿಗೆಲ್ಲಾ ಅವರು ವಿಧೇಯರಾಗಿದ್ದರೆ,
ನಾನು ಅವರನ್ನು ಅವರ ದೇಶದಲ್ಲಿ ನೆಲೆಗೊಳಿಸುವೆನು.''
9ಆದರೆ ಜನರು ದೇವರ ಮಾತನ್ನು ಆಲಿಸಲಿಲ್ಲ. ಇಸ್ರೇ
ಲರು ಕಾನನಿಗೆ ಬರುವುದಕ್ಕೆ ಮುಂಚೆ ಅಲ್ಲಿ ವಾಸಿಸುತ್ತಿದ್ದ
ಜನಾಂಗಗಳು ಮಾಡಿದ್ದಕ್ಕಿಂತ ಹೆಚ್ಚು ಕೆಟ್ಟಕಾರ್ಯಗಳನ್ನು
ಮನಸ್ಸೆಯು ಮಾಡಿದನು. ಇಸ್ರೇಲರು ಅವರ ದೇಶಗ
ಳನ್ನು ವಶಪಡಿಸಿಕೊಳ್ಳಲು ಬಂದಾಗ ಯೆಹೋವನು ಆ
ಜನಾಂಗಗಳನ್ನು ನಾಶಪಡಿಸಿದ್ದನು.

10ಯೆಹೋವನು ತನ್ನ ಸೇವಕರಾದ ಪ್ರವಾದಿಗಳಿಂದ
ಈ ಸಂಗತಿಗಳನ್ನು ತಿಳಿಸಿದನು. 11''ಯೆಹೂದದ ರಾಜ
ನಾದ ಮನಸ್ಸೆಯು ತನಗಿಂತಲೂ ಮುಂಚೆ ಇದ್ದ
ಅಮೋರಿಯರಿಗಿಂತ ಹೆಚ್ಚು ಅಸಹ್ಯವಾದ ಕೃತ್ಯಗಳನ್ನು
ಮಾಡಿದನು. ಮನಸ್ಸೆಯು ತನ್ನ ವಿಗ್ರಹಗಳಿಂದ ಯೆಹೂ
ದವನ್ನು ಪಾಪಕ್ಕೆ ಪ್ರೇರೇಪಿಸಿದನು. 12ಆದ್ದರಿಂದ ಇಸ್ರೇ
ಲಿನ ದೇವರು ಇಂತೆನ್ನುತ್ತಾನೆ: 'ಇಗೋ, ಜೆರುಸಲೇ
ಮಿಗೂ ಯೆಹೂದಕ್ಕೂ ಎಷ್ಟು ತೊಂದರೆಯನ್ನು ತರುತ್ತೇ
ನೆಂದರೆ, ಅದನ್ನು ಕೇಳಿದ ಯಾರಾದರೂ ನಡುಗಿ
ಬಿಡಬೇಕು. 13ನಾನು ಸಮಾರ್ಯದ ಮೇಲೆ ಚಾಚಿದ
ಮಟ್ಟಗೋಲನ್ನೂ ಅಹಾಬನ ಕುಟುಂಬದ ಮೇಲಿಟ್ಟ
ತೂಕದ ಗುಂಡನ್ನೂ ಜೆರುಸಲೇಮಿನ ಮೇಲೆ ಚಾಚು
ತ್ತೇನೆ. ಒಬ್ಬನು ಒಂದು ಪಾತ್ರೆಯನ್ನು ಒರೆಸಿ, ಅದನ್ನು
ಕೆಳಮುಖವಾಗಿ ತಿರುಗಿಸುವಂತೆ ನಾನು ಜೆರುಸಲೇಮಿಗೆ
ಮಾಡುತ್ತೇನೆ. 14ಆದರೂ ಅಲ್ಲಿ ನನ್ನ ಕೆಲವು ಜನರು
ಉಳಿದುಕೊಳ್ಳುತ್ತಾರೆ. ನಾನು ಅವರನ್ನು ಬಿಟ್ಟು
ಬಿಡುತ್ತೇನೆ. ನಾನು ಅವರನ್ನು ಅವರ ಶತ್ರುಗಳಿಗೆ
ಒಪ್ಪಿಸುತ್ತೇನೆ. ಅವರ ಶತ್ರುಗಳು ಅವರನ್ನು ಸೆರೆಯಾಳು
ಗಳನ್ನಾಗಿ ಇಟ್ಟುಕೊಳ್ಳುವರು; ಯುದ್ಧಗಳಲ್ಲಿ ಸೈನಿಕರು
ವಶಪಡಿಸಿಕೊಳ್ಳುವ ಬೆಲೆಯುಳ್ಳ ವಸ್ತುಗಳಂತೆ ಅವರಿ
ರುವರು. 15ಏಕೆಂದರೆ ನಾನು ಕೆಟ್ಟದ್ದೆಂದು ಹೇಳಿದ

ಕಾರ್ಯಗಳನ್ನೇ ನನ್ನ ಜನರು ಮಾಡಿದರು. ಅವರ
ಪೂರ್ವಿಕರು ಈಜಿಪ್ಟಿನಿಂದ ಹೊರಬಂದ ದಿನದಿಂದ
ಅವರು ನನ್ನನ್ನು ರೇಗಿಸಿದರು. 16ಮನಸ್ಸೆಯು ಅನೇಕ ನಿರ
ಪರಾಧಿಗಳನ್ನು ಕೊಂದುಹಾಕಿದನು; ಜೆರುಸಲೇಮನ್ನು
ಒಂದು ಕೊನೆಯಿಂದ ಮತ್ತೊಂದು ಕೊನೆಯವರೆಗೆ ರಕ್ತ
ದಿಂದ ತುಂಬಿಸಿದನು. ಯೆಹೂದವನ್ನು ಪಾಪಕ್ಕೆ ಪ್ರೇರೇಪಿ
ಸಿದ್ದರ ಜೊತೆಗೆ ಅವನ ಈ ಪಾಪಗಳು ಕೂಡಿಕೊಂಡವು.
ಯೆಹೋವನು ಕೆಟ್ಟದ್ದೆಂದು ಹೇಳಿದ ಕಾರ್ಯಗಳನ್ನು
ಯೆಹೂದವು ಮಾಡುವಂತೆ ಮನಸ್ಸೆಯು
ಪ್ರೇರೇಪಿಸಿದನು.''

17''ಯೆಹೂದದ ರಾಜರುಗಳ ಇತಿಹಾಸ'' ಎಂಬ
ಪುಸ್ತಕದಲ್ಲಿ ಮನಸ್ಸೆಯು ಮಾಡಿದ ಎಲ್ಲಾ ಕಾರ್ಯ
ಗಳನ್ನೂ ಅವನು ಮಾಡಿದ ಪಾಪಕಾರ್ಯಗಳನ್ನೂ
ಬರೆಯಲಾಗಿದೆ. 18ಮನಸ್ಸೆಯು ಸತ್ತುಹೋದನು ಮತ್ತು
ಅವನನ್ನು ಅವನ ಪೂರ್ವಿಕರ ಬಳಿ ಸಮಾಧಿಮಾಡಿದರು.
ಮನಸ್ಸೆಯನ್ನು ಉಜ್ಜನವನದಲ್ಲಿ ಸಮಾಧಿಮಾಡಿದರು.
ಈ ವನವು ಅವನ ಸ್ವಂತ ಮನೆಯಲ್ಲಿತ್ತು. ಮನಸ್ಸೆಯ
ನಂತರ ಅವನ ಮಗನಾದ ಆಮೋನನು ಹೊಸ ರಾಜ
ನಾದನು.

### ಆಮೋನನ ಸ್ವಲ್ಪಕಾಲದ ಆಳ್ವಿಕೆ

19ಆಮೋನನು ಆಳಲಾರಂಭಿಸಿದಾಗ ಅವನಿಗೆ ಇಪ್ಪತ್ತೆ
ರಡು ವರ್ಷ ವಯಸ್ಸಾಗಿತ್ತು. ಅವನು ಎರಡು ವರ್ಷ
ಜೆರುಸಲೇಮಿನಲ್ಲಿ ಆಳಿದನು. ಅವನ ತಾಯಿಯ ಹೆಸರು
ಮೆಷುಲ್ಲೆಮೆತ್. ಅವಳು ಯೊಟ್ಬಾ ಊರಿನ ಹಾರೂಚನ
ಮಗಳು.

20ಆಮೋನನು ಅವನ ತಂದೆಯಾದ ಮನಸ್ಸೆಯಂತೆ
ಯೆಹೋವನು ಕೆಟ್ಟದ್ದೆಂದು ಹೇಳಿದವುಗಳನ್ನೆಲ್ಲಾ ಮಾಡಿ
ದನು. 21ಆಮೋನನು ತನ್ನ ತಂದೆಯಂತೆ ಜೀವಿಸಿದ್ದನು.
ತನ್ನ ತಂದೆಯು ಪೂಜಿಸಿದ ವಿಗ್ರಹಗಳನ್ನು ಆಮೋನನು
ಪೂಜಿಸಿದನು. 22ಆಮೋನನು ತನ್ನ ಪೂರ್ವಿಕರ ದೇವ
ರಾದ ಯೆಹೋವನನ್ನು ತ್ಯಜಿಸಿದನು ಮತ್ತು ಯೆಹೋ
ವನಿಗೆ ಮೆಚ್ಚಿಗೆಯಾದ ಮಾರ್ಗದಲ್ಲಿ ಜೀವಿಸಲಿಲ್ಲ.

23ಆಮೋನನ ಸೇವಕರು ಅವನ ವಿರುದ್ಧ ಒಳಸಂಚು
ಮಾಡಿದರು ಮತ್ತು ಅವನ ಸ್ವಂತ ಮನೆಯಲ್ಲಿಯೇ
ಅವನನ್ನು ಕೊಂದುಹಾಕಿದರು. 24ರಾಜನಾದ ಆಮೋ
ನನ ವಿರುದ್ಧ ಒಳಸಂಚು ಮಾಡಿದ ಅವನ ಅಧಿಕಾರಿಗಳನ್ನು
ಆ ದೇಶದ ಜನಸಾಮಾನ್ಯರು ಕೊಂದುಹಾಕಿದರು.
ಆಮೋನನ ಮಗನಾದ ಯೋಷೀಯನನ್ನು ಜನರು
ಅವನ ನಂತರ ಹೊಸ ರಾಜನನ್ನಾಗಿ ಮಾಡಿದರು.

25''ಯೆಹೂದದ ರಾಜರುಗಳ ಇತಿಹಾಸ'' ಎಂಬ
ಪುಸ್ತಕದಲ್ಲಿ ಆಮೋನನು ಮಾಡಿದ ಇತರ ಕಾರ್ಯ
ಗಳನ್ನು ಕುರಿತು ಬರೆಯಲಾಗಿದೆ. 26ಆಮೋನನನ್ನು
ಉಜ್ಜನ ವನದಲ್ಲಿ ಅವನ ಸ್ಮಶಾನದಲ್ಲಿ ಸಮಾಧಿ
ಮಾಡಿದರು. ಆಮೋನನ ಮಗನಾದ ಯೋಷೀಯನು
ಹೊಸ ರಾಜನಾದನು.

### ಯೋಷೀಯನು ಯೆಹೂದದಲ್ಲಿ ತನ್ನ ಆಳ್ವಿಕೆಯನ್ನು ಆರಂಭಿಸುವನು

22 ಯೋಷೀಯನು ಆಳಲಾರಂಭಿಸಿದಾಗ ಅವನಿಗೆ
ಎಂಟು ವರ್ಷ ವಯಸ್ಸಾಗಿತ್ತು. ಅವನು ಮೂವ
ತ್ತೊಂದು ವರ್ಷ ಜೆರುಸಲೇಮಿನಲ್ಲಿ ಆಳಿದನು. ಅವನ
ತಾಯಿಯ ಹೆಸರು ಯದೀದಾ. ಇವಳು ಬೊಚ್ಕತ್ ಎಂಬ
ಸ್ಥಳದ ಅದಾಯ ಎಂಬವನ ಮಗಳು. 2ಯೆಹೋವನು
ಯೋಗ್ಯವೆಂದು ಹೇಳಿದ ಕಾರ್ಯಗಳನ್ನು ಯೋಷೀ
ಯನು ಮಾಡಿದನು. ಯೋಷೀಯನು ತನ್ನ ಪೂರ್ವಿಕ
ನಾದ ದಾವೀದನಂತೆ ದೇವರನ್ನು ಅನುಸರಿಸಿದನು.
ಯೋಷೀಯನು ದೇವರ ಬೋಧನೆಗಳಲ್ಲಿ ಯಾವುದೇ
ಬದಲಾವಣೆ ಮಾಡದೆ ಅವುಗಳನ್ನು ಅನುಸರಿಸಿದನು.

### ಯೋಷೀಯನು ದೇವಾಲಯದ ದುರಸ್ತಿಗೆ ಆಜ್ಞಾಪಿಸುವನು

3ಯೋಷೀಯನು ರಾಜನಾಗಿದ್ದ ಹದಿನೆಂಟನೆಯ
ವರ್ಷದಲ್ಲಿ ಅಚೆಲ್ಯನ ಮಗನೂ ಮೆಷುಲ್ಲಾಮನ ಮೊಮ್ಮ
ಗನೂ ಕಾರ್ಯದರ್ಶಿಯೂ ಆದ ಶಾಫಾನನನ್ನು ದೇವಾ
ಲಯಕ್ಕೆ ಕಳುಹಿಸಿದನು. 4ಯೋಷೀಯನು, ''ಮಹಾ
ಯಾಜಕನಾದ ಹಿಲ್ಕೀಯನ ಬಳಿಗೆ ಹೋಗು. ದ್ವಾರ
ಪಾಲಕರು ಜನರಿಂದ ಒಟ್ಟುಗೂಡಿಸಿರುವ ಹಣವನ್ನು
ಅವನು ಲೆಕ್ಕಿಸಲಿ. ಜನರು ದೇವಾಲಯಕ್ಕೆ ತೆಗೆದು
ಕೊಂಡು ಬಂದು ಕೊಟ್ಟ ಹಣವೇ ಇದು. 5ನಂತರ
ಯಾಜಕರು ದೇವಾಲಯದಲ್ಲಿ ಕೆಲಸದ ಉಸ್ತು
ವಾರಿಯನ್ನು ನೋಡಿಕೊಳ್ಳುವ ಮುಖ್ಯಸ್ತರಿಗೆ ಕೊಡಲಿ.
ಯಾಜಕರು ದೇವಾಲಯವನ್ನು ದುರಸ್ತಿ ಮಾಡುವ
ಕೆಲಸಗಾರರಿಗೆ ಈ ಹಣವನ್ನು ವಿನಿಯೋಗಿಸಲಿ. 6ಅಲ್ಲಿ
ಬಡಗಿಗಳು, ಶಿಲ್ಪಿಗಳು ಮತ್ತು ಕಲ್ಲುಕುಟಿಕರಿದ್ದಾರೆ.
ಮರವನ್ನು ಕೊಳ್ಳಲು ಮತ್ತು ಕಲ್ಲುಗಳನ್ನು ಕೆತ್ತಿಸಲು ಈ
ಹಣವನ್ನು ಬಳಸಿ. 7ನೀವು ಕೆಲಸಗಾರರಿಗೆ ಕೊಡುವ
ಹಣವನ್ನು ಲೆಕ್ಕಹಾಕಬೇಡಿ. ಯಾಕೆಂದರೆ ಆ ಕೆಲಸ
ಗಾರರು ನಂಬಿಗಸ್ತರಾಗಿದ್ದಾರೆ'' ಎಂದು ಹೇಳಿದನು.

### ದೇವಾಲಯದಲ್ಲಿ ಧರ್ಮಶಾಸ್ತ್ರವು ಸಿಕ್ಕಿತು

8ಪ್ರಧಾನಯಾಜಕನಾದ ಹಿಲ್ಕೀಯನು ಕಾರ್ಯದರ್ಶಿ
ಯಾದ ಶಾಫಾನನಿಗೆ, ''ದೇವಾಲಯದಲ್ಲಿ ನನಗೆ ಧರ್ಮ
ಶಾಸ್ತ್ರವು ಸಿಕ್ಕಿತು'' ಎಂದು ಹೇಳಿದನು. ಹಿಲ್ಕೀಯನು
ಅದನ್ನು ಶಾಫಾನನಿಗೆ ನೀಡಿದನು. ಶಾಫಾನನು ಅದನ್ನು
ಓದಿದನು.

9 ಕಾರ್ಯದರ್ಶಿಯಾದ ಶಾಫಾನನು ರಾಜನಾದ
ಯೋಷೀಯನ ಬಳಿಗೆ ಬಂದು ಅವನಿಗೆ, ‘‘ನಿನ್ನ ಸೇವಕರು
ದೇವಾಲಯದಲ್ಲಿದ್ದ ಹಣವನ್ನು ವ್ಯಯಮಾಡಿದರು.
ಅವರು ಆ ಹಣವನ್ನು ದೇವಾಲಯದಲ್ಲಿ ಕೆಲಸ ಮಾಡಿ
ಸುವ ಮೊಕ್ತೇಸರರಿಗೆ ಒಪ್ಪಿಸಿದರು’’ ಎಂದು ಹೇಳಿದನು.
10 ನಂತರ ಕಾರ್ಯದರ್ಶಿಯಾದ ಶಾಫಾನನು ರಾಜನಿಗೆ,
‘‘ಯಾಜಕನಾದ ಹಿಲ್ಕೀಯನು ನನಗೆ ಒಂದು ಗ್ರಂಥವನ್ನು
ಕೊಟ್ಟನು’’ಎಂದು ಹೇಳಿದನು. ಶಾಫಾನನು ರಾಜನಿಗೆ ಆ
ಗ್ರಂಥವನ್ನು ಓದಿದನು.
11 ರಾಜನು ಧರ್ಮಶಾಸ್ತ್ರದ ವಾಕ್ಯಗಳನ್ನು ಕೇಳಿದಾಗ,
ಗಲಿಬಿಲಿಗೊಂಡು ತನ್ನ ಬಟ್ಟೆಗಳನ್ನು ಹರಿದುಕೊಂಡನು.
12 ಅನಂತರ ರಾಜನು ಯಾಜಕನಾದ ಹಿಲ್ಕೀಯನಿಗೆ,
ಶಾಫಾನನ ಮಗನಾದ ಅಹೀಕಾಮನಿಗೆ, ಮೀಕಾಯನ
ಮಗನಾದ ಅಕ್ಬೋರನಿಗೆ, ಕಾರ್ಯದರ್ಶಿಯಾದ
ಶಾಫಾನನಿಗೆ ಮತ್ತು ರಾಜಸೇವಕನಾದ ಅಸಾಯನಿಗೆ
ಒಂದು ಆಜ್ಞೆಯನ್ನು ನೀಡಿದನು. 13 ರಾಜನಾದ ಯೋಷೀ
ಯನು, ‘‘ಈಗ ನಾವು ಏನು ಮಾಡಬೇಕೆಂದು ಯೆಹೋ
ವನನ್ನು ಕೇಳಿ. ನನಗಾಗಿ, ಜನರಿಗಾಗಿ ಮತ್ತು ಎಲ್ಲಾ
ಯೆಹೂದಕ್ಕಾಗಿ ಯೆಹೋವನನ್ನು ಕೇಳಿ. ಈಗ ಸಿಕ್ಕಿರುವ
ಈ ಗಂಥದ ವಾಕ್ಯಗಳನ್ನು ಕುರಿತಾಗಿಯೂ ಕೇಳಿ.
ಯಹೋವನು ನಮ್ಮ ಮೇಲೆ ಕೋಪಗೊಂಡಿದ್ದಾನೆ.
ಏಕೆಂದರೆ ನಮ್ಮ ಪೂರ್ವಿಕರು ಈ ಗ್ರಂಥದ ವಾಕ್ಯಗಳಿಗೆ
ಕಿವಿಗೊಡಲಿಲ್ಲ; ಅವುಗಳನ್ನು ಕೈಕೊಂಡು ನಡೆಯಲಿಲ್ಲ’’
ಎಂದು ಹೇಳಿದನು.

### ಯೋಷೀಯನು ತನ್ನ ಜನರನ್ನು ಪ್ರವಾದಿಯಾದ ಹುಲ್ದಳ ಬಳಿಗೆ ಕಳುಹಿಸಿದನು

14 ಆದ್ದರಿಂದ ಯಾಜಕನಾದ ಹಿಲ್ಕೀಯ, ಅಹೀ
ಕಾಮ್, ಅಕ್ಬೋರ್, ಶಾಫಾನ್ ಮತ್ತು ಅಸಾಯ ಎಂಬ
ವರು ಪ್ರವಾದಿನಿಯಾದ ಹುಲ್ದಳ ಬಳಿಗೆ ಹೋದರು.
ಹುಲ್ದಳು ಹರ್ಹಸನ ಮೊಮ್ಮಗನೂ ತಿಕ್ವನ ಮಗನೂ ಆದ
ಶಲ್ಲೂಮನ ಹೆಂಡತಿ. ಅವನು ಯಾಜಕರ ವಸ್ತ್ರಗಳಿಗೆ
ಮೇಲ್ವಿಚಾರಕನಾಗಿದ್ದನು. ಹುಲ್ದಳು ಜೆರುಸಲೇಮಿನ
ಎರಡನೆಯ ಭಾಗದಲ್ಲಿ* ವಾಸಿಸುತ್ತಿದ್ದಳು. ಅವರು
ಹೋಗಿ ಹುಲ್ದಳ ಜೊತೆಯಲ್ಲಿ ಮಾತನಾಡಿದರು.
15 ಆಗ ಹುಲ್ದಳು ಅವರಿಗೆ, ‘‘ನಿಮ್ಮನ್ನು ನನ್ನ ಬಳಿಗೆ
ಕಳುಹಿಸಿದವನ ಬಳಿಗೆ ಹೋಗಿ 16 ಇಸ್ರೇಲಿನ ದೇವರಾದ
ಯೆಹೋವನು ಇಂತೆನ್ನುತ್ತಾನೆ: ‘ಈ ದೇಶದ ಮೇಲೆ
ಮತ್ತು ಇಲ್ಲಿ ವಾಸಮಾಡುತ್ತಿರುವ ಜನರ ಮೇಲೆ ನಾನು
ಕೇಡುಗಳನ್ನು ಬರಮಾಡುವೆನು. ಯೆಹೂದದ ರಾಜನು
ಓದಿದ ಗ್ರಂಥದಲ್ಲಿ ಈ ಕೇಡುಗಳನ್ನು ತಿಳಿಸಲಾಗಿದೆ.
17 ಯೆಹೂದದ ರಾಜರು ನನ್ನನ್ನು ತ್ಯಜಿಸಿದರು ಮತ್ತು
ಇತರ ದೇವರುಗಳಿಗೆ ಧೂಪವನ್ನು ಸುಟ್ಟರು. ಅವರು
ನನ್ನಲ್ಲಿ ಹೆಚ್ಚು ಕೋಪವನ್ನು ಉಂಟುಮಾಡಿದರು. ಅವರು
ಅನೇಕ ವಿಗ್ರಹಗಳನ್ನು ನಿರ್ಮಿಸಿದರು. ಆದಕಾರಣವೇ
ನಾನು ನನ್ನ ಕೋಪವನ್ನು ಈ ಸ್ಥಳದ ವಿರುದ್ಧ ತೋರ್ಪ
ಡಿಸುತ್ತೇನೆ. ನನ್ನ ಕೋಪವು ಆರಿಹೋಗದ ಬೆಂಕಿ
ಯಂತಿರುತ್ತದೆ!’
18-19 ‘‘ಯೆಹೂದದ ರಾಜನಾದ ಯೋಷೀಯನು
ಯೆಹೋವನ ಸಲಹೆಯನ್ನು ಕೇಳಲು ನಿಮ್ಮನ್ನು ಕಳುಹಿ
ಸಿದನು. ಯೋಷೀಯನಿಗೆ ಈ ಸಂಗತಿಗಳನ್ನು ಹೇಳಿ:
‘ನೀನು ಕೇಳುವ ಈ ಮಾತುಗಳನ್ನು ಇಸ್ರೇಲರ ದೇವರಾದ
ಯೆಹೋವನು ಹೇಳಿದನು. ಈ ದೇಶವನ್ನು ಮತ್ತು ಇಲ್ಲಿ
ವಾಸಿಸುವ ಜನರನ್ನು ಕುರಿತು ನಾನು ಹೇಳಿದ ಸಂಗತಿ
ಗಳನ್ನು ನೀನು ಕೇಳಿರುವೆ. ನಿನ್ನ ಹೃದಯವು ಮೃದು
ವಾಗಿರುವುದರಿಂದ, ನೀನು ಅವುಗಳನ್ನು ಕೇಳಿದಾಗ
ದೈನ್ಯತೆಯುಳ್ಳವನಾದೆ. ಈ ಸ್ಥಳಕ್ಕೆ (ಜೆರುಸಲೇಮಿಗೆ) ಆ
ಭೀಕರ ಸಂಗತಿಗಳಾಗುತ್ತವೆಯೆಂದು ನಾನು ಹೇಳಿದೆ. ಆಗ
ನೀನು ದುಃಖದಿಂದ ನಿನ್ನ ಬಟ್ಟೆಗಳನ್ನು ಹರಿದುಕೊಂಡು
ಅಳಲಾರಂಭಿಸಿದೆ. ಆದಕಾರಣವೇ ನಾನು ನಿನಗೆ
ಕಿವಿಗೊಟ್ಟೆನು.’ ಯೆಹೋವನು ಹೇಳುವುದೇನಂದರೆ:
20 ‘ನೀನು ನಿನ್ನ ಪೂರ್ವಿಕರ ಜೊತೆ ಸೇರುವಂತೆ ನಾನು
ಮಾಡುತ್ತೇನೆ. ನೀನು ಶಾಂತಿಯಿಂದ ಸತ್ತು ನಿನ್ನ ಸಮಾಧಿ
ಯನ್ನು ಸೇರುವೆ. ಈ ದೇಶದ (ಜೆರುಸಲೇಮಿನ) ಮೇಲೆ
ನಾನು ತರಲಿರುವ ಕೇಡುಗಳನ್ನು ನಿನ್ನ ಕಣ್ಣುಗಳು
ನೋಡುವುದಿಲ್ಲ’ ಎಂಬುದೇ’’ ಎಂದು ಹೇಳಿದಳು.
ನಂತರ ಯಾಜಕನಾದ ಹಿಲ್ಕೀಯ, ಅಹೀಕಾಮ್,
ಅಕ್ಬೋರ್, ಶಾಫಾನ್ ಮತ್ತು ಅಸಾಯ ಹಿಂತಿರುಗಿ
ಬಂದು ರಾಜನಿಗೆ ತಿಳಿಸಿದರು.

### ಜನರು ಧರ್ಮಶಾಸ್ತ್ರವನ್ನು ಕೇಳುವರು

23 ಯೆಹೂದದ ಮತ್ತು ಜೆರುಸಲೇಮಿನ ನಾಯಕ
ರೆಲ್ಲರೂ ಬಂದು ತನ್ನನ್ನು ಭೇಟಿಯಾಗ
ಬೇಕೆಂದು ರಾಜನಾದ ಯೋಷೀಯನು ಹೇಳಿದನು.
2 ನಂತರ ರಾಜನು ದೇವಾಲಯಕ್ಕೆ ಹೋದನು. ಯೆಹೂ
ದದ ಜನರೆಲ್ಲರು ಮತ್ತು ಜೆರುಸಲೇಮಿನಲ್ಲಿ ವಾಸಿಸುತ್ತಿದ್ದ
ಜನರೆಲ್ಲರು ಅವನ ಜೊತೆಯಲ್ಲಿ ಹೋದರು. ಯಾಜ
ಕರು, ಪ್ರವಾದಿಗಳು, ಚಿಕ್ಕವರು ಮತ್ತು ದೊಡ್ಡವರು
ಅವನೊಡನೆ ಹೋದರು. ಆಗ ಅವನು ನಿಬಂಧನ
ಗ್ರಂಥವನ್ನು ಓದಿದನು. ಇದು ದೇವಾಲಯದಲ್ಲಿ ಸಿಕ್ಕಿದ
ಗ್ರಂಥವಾಗಿತ್ತು. ಜನರೆಲ್ಲರಿಗೂ ಕೇಳಿಸುವಂತೆ ಯೋಷೀ
ಯನು ಗ್ರಂಥವನ್ನು ಓದಿದನು.
3 ರಾಜನು ಸ್ತಂಭದ ಬಳಿ ನಿಂತು ತಾನು ಯೆಹೋವನ
ಮಾರ್ಗದಲ್ಲಿ ನಡೆಯುವುದಾಗಿಯೂ ಆತನ ಆಜ್ಞೆಗಳಿಗೆ,

---

**ಎರಡನೆಯ ಭಾಗ** ಜೆರುಸಲೇಮನ್ನು ನಾಲ್ಕು ಭಾಗಗಳನ್ನಾಗಿ ವಿಂಗಡಿಸಲಾಗಿತ್ತು.

ಒಡಂಬಡಿಕೆಗೆ ಮತ್ತು ಆತನ ನಿಯಮಗಳಿಗೆ ಪೂರ್ಣ
ಹೃದಯದಿಂದಲೂ ಪೂರ್ಣಆತ್ಮದಿಂದಲೂ ವಿಧೇಯ
ನಾಗಿರುವುದಾಗಿಯೂ ನಿಬಂಧನ ಗ್ರಂಥದಲ್ಲಿ ಬರೆದಿ
ರುವ ಎಲ್ಲಾ ವಾಕ್ಯಗಳನ್ನು ನೇರವೇರಿಸುವುದಾಗಿಯೂ
ಯೆಹೋವನಿಗೆ ಪ್ರಮಾಣಮಾಡಿದನು. ರಾಜನ ಪ್ರಮಾ
ಣಕ್ಕೆ ಬೆಂಬಲ ನೀಡಲು ಜನರೆಲ್ಲರೂ ಎದ್ದು ನಿಂತರು.
4ನಂತರ ರಾಜನು ಪ್ರಧಾನಯಾಜಕನಾದ ಹಿಲ್ಕೀಯ
ನಿಗೆ, ಇತರ ಯಾಜಕರಿಗೆ, ದ್ವಾರಪಾಲಕರಿಗೆ, ಬಾಳ್
ದೇವರಿಗೂ ಅಶೇರ ದೇವತೆಗೂ ಮತ್ತು ಆಕಾಶದ
ನಕ್ಷತ್ರಗಳಿಗೂ ಉಪಯೋಗಿಸುತ್ತಿದ್ದ ಎಲ್ಲಾ ಸಲಕರಣೆ
ಗಳನ್ನು ದೇವಾಲಯದಿಂದ ಹೊರತರುವಂತೆ ಆಜ್ಞಾಪಿ
ಸಿದನು. ಯೋಷೀಯನು ಜೆರುಸಲೇಮಿನ ಹೊರಗೆ
ಕಿದ್ರೋನ್ ಹೊಲಗಳಲ್ಲಿ ಅವುಗಳನ್ನು ಸುಟ್ಟುಹಾಕಿದನು.
ಅವರು ಬೂದಿಯನ್ನು ಬೇತೇಲಿಗೆ ತೆಗೆದುಕೊಂಡು
ಹೋದರು.

5ಯೆಹೂದದ ರಾಜರುಗಳು ಯಾಜಕರಾಗಿ ಸೇವೆ
ಮಾಡಲು ಕೆಲವು ಸಾಮಾನ್ಯ ಜನರನ್ನು ಆರಿಸಿಕೊಂಡರು.
ಈ ಜನರು ಆರೋನನ ಕುಲದಿಂದ ಬಂದವರಲ್ಲ! ಈ
ಸುಳ್ಳುಯಾಜಕರು ಯೆಹೂದದ ನಗರಗಳಲ್ಲಿನ ಮತ್ತು
ಜೆರುಸಲೇಮಿನ ಊರುಗಳಲ್ಲಿನ ಉನ್ನತಸ್ಥಳಗಳಲ್ಲಿ
ಧೂಪವನ್ನು ಸುಡುತ್ತಿದ್ದರು. ಅವರು ಬಾಳನನ್ನು,
ಸೂರ್ಯನನ್ನು, ಚಂದ್ರನನ್ನು, ಆಕಾಶ ಸೈನ್ಯವಾದ ನಕ್ಷತ್ರ
ಗಳನ್ನು ಗೌರವಿಸಲು ಧೂಪವನ್ನು ಸುಡುತ್ತಿದ್ದರು. ಆದರೆ
ಯೋಷೀಯನು ಆ ಸುಳ್ಳು ಯಾಜಕರನ್ನು ನಿಲ್ಲಿಸಿದನು.
6ಯೋಷೀಯನು ಅಶೇರಸ್ತಂಭವನ್ನು ದೇವಾಲಯ
ದಿಂದ ತೆಗೆದುಹಾಕಿದನು. ಅವನು ಅಶೇರಸ್ತಂಭವನ್ನು
ನಗರದ ಹೊರವಲಯದ ಕಿದ್ರೋನ್ ಕಣಿವೆಗೆ ತೆಗೆದು
ಕೊಂಡು ಹೋಗಿ ಅದನ್ನು ಅಲ್ಲಿ ಸುಟ್ಟುಹಾಕಿದನು. ನಂತರ
ಅವನು ಅದನ್ನು ಪುಡಿಪುಡಿ ಮಾಡಿಸಿ ಧೂಳಿನಲ್ಲಿ ಬೆರಸಿ
ಸಾಮಾನ್ಯ ಜನರ ಸ್ಮಶಾನದಲ್ಲಿ ಆ ಧೂಳನ್ನು ಚೆಲ್ಲಿದನು.
7ನಂತರ ರಾಜನಾದ ಯೋಷೀಯನು ದೇವಾಲಯ
ದಲ್ಲಿದ್ದ ದೇವದಾಸ ದೇವದಾಸಿಯರ ಮನೆಗಳನ್ನು ಕೆಡವಿ
ಹಾಕಿಸಿದನು. ಆ ಮನೆಗಳಲ್ಲಿ ಸುಳ್ಳುದೇವತೆಯಾದ
ಅಶೇರಳಿಗೋಸ್ಕರ ಚಿಕ್ಕ ಗುಡಾರಗಳನ್ನು ನೇಯುತ್ತಿ
ದ್ದರು. 8-9ಆ ಸಮಯದಲ್ಲಿ ಯಾಜಕರು ಯಜ್ಞಗಳನ್ನು
ಜೆರುಸಲೇಮಿಗೆ ತರಲಿಲ್ಲ ಮತ್ತು ದೇವಾಲಯದಲ್ಲಿನ
ಯಜ್ಞವೇದಿಕೆಯ ಮೇಲೆ ಅವುಗಳನ್ನು ಅರ್ಪಿಸಲಿಲ್ಲ.
ಯಾಜಕರು ಯೆಹೂದದ ಎಲ್ಲಾ ನಗರಗಳಲ್ಲಿಯೂ
ವಾಸಿಸುತ್ತಿದ್ದರು. ಅವರು ಆ ನಗರಗಳಲ್ಲಿನ ಉ್ನನತ
ಸ್ಥಳಗಳಲ್ಲಿ ಧೂಪವನ್ನು ಸುಡುತ್ತಿದ್ದರು ಮತ್ತು ಯಜ್ಞ
ಗಳನ್ನು ಅರ್ಪಿಸುತ್ತಿದ್ದರು. ಆ ಉನ್ನತಸ್ಥಳಗಳು ಗೆಬದಿಂದ
ಬೇರ್ಷೆಬದವರೆಗೆ ಎಲ್ಲಾ ಕಡೆಗಳಲ್ಲಿದ್ದವು. ಯಾಜಕರು
ತಮ್ಮ ಹುಳಿಯಿಲ್ಲದ ರೊಟ್ಟಿಗಳನ್ನು ಜೆರುಸಲೇಮಿನ
ದೇವಾಲಯದಲ್ಲಿ ಯಾಜಕರಾಗಿದ್ದ ವಿಶೇಷ ಸ್ಥಳಗಳಲ್ಲಿ
ತಿನ್ನದೆ ಆ ಊರುಗಳಲ್ಲಿ ಸಾಮಾನ್ಯ ಜನರೊಂದಿಗೆ ತಿನ್ನುತ್ತಿ
ದ್ದರು. ಆದರೆ ರಾಜನಾದ ಯೋಷೀಯನು ಆ ಉನ್ನತ
ಸ್ಥಳಗಳನ್ನು ನಾಶಗೊಳಿಸಿ ಆ ಯಾಜಕರನ್ನು ಜೆರುಸ
ಲೇಮಿಗೆ ಕರೆತಂದನು. ಯೆಹೋಶುವನ ದ್ವಾರದ ಎಡ
ಗಡೆಯಲ್ಲಿದ್ದ ಉನ್ನತಸ್ಥಳಗಳನ್ನು ಯೋಷೀಯನು ನಾಶ
ಗೊಳಿಸಿದನು. (ಯೆಹೋಶುವನು ನಗರಾಧಿಕಾರಿ
ಯಾಗಿದ್ದನು.)

10ತೋಫೆತ್ ಎನ್ನುವುದು ಬೆನ್‌ಹಿನ್ನೋಮ್‌ನ
ಮಗನಿಗೆ ಸೇರಿದ ಒಂದು ಕಣಿವೆ. ಅಲ್ಲಿ ಸುಳ್ಳುದೇವರಾದ
ಮೋಲೆಕನ ಗೌರವಾರ್ಥವಾಗಿ ಜನರು ತಮ್ಮ ಮಕ್ಕಳನ್ನು
ಆಹುತಿ ಕೊಡುತ್ತಿದ್ದರು ಮತ್ತು ಯಜ್ಞವೇದಿಕೆಯ ಮೇಲೆ
ಸುಡುತ್ತಿದ್ದರು. ಯೋಷೀಯನು, ಜನರು ಮತ್ತೆ ಆ
ಸ್ಥಳವನ್ನು ಉಪಯೋಗಿಸದಂತೆ ನಾಶಗೊಳಿಸಿದನು.
11ಪೂರ್ವಕಾಲದಲ್ಲಿ ಯೆಹೂದದ ರಾಜರುಗಳು
ದೇವಾಲಯದ ಬಾಗಿಲಿನ ಹತ್ತಿರ ಕೆಲವು ಕುದುರೆಗಳನ್ನು
ಮತ್ತು ರಥಗಳನ್ನು ನಿಲ್ಲಿಸುತ್ತಿದ್ದರು. ಇದು ನಾತಾನ್
ಮೆಲೆಕನೆಂಬ ಮುಖ್ಯ ಅಧಿಕಾರಿಯ ಕೋಣೆಯ ಹತ್ತಿರ
ದಲ್ಲಿತ್ತು. ಆ ಕುದುರೆಗಳು ಮತ್ತು ರಥಗಳು ಸೂರ್ಯ
ದೇವತೆಯನ್ನು ಗೌರವಿಸಬೇಕಾಗಿತ್ತು. ಯೋಷೀಯನು
ಕುದುರೆಗಳನ್ನು ತೆಗೆಸಿ ರಥಗಳನ್ನು ಸುಡಿಸಿಬಿಟ್ಟನು.
12ಪೂರ್ವಕಾಲದಲ್ಲಿ, ಯೆಹೂದದ ರಾಜರುಗಳು
ಅಹಾಬನ ಕಟ್ಟಡದ ಮಾಳಿಗೆಯ ಮೇಲೆ ಯಜ್ಞ
ವೇದಿಕೆಗಳನ್ನು ನಿರ್ಮಿಸಿದ್ದರು. ರಾಜನಾದ ಮನಸ್ಸೆಯು
ದೇವಾಲಯದ ಎರಡು ಪ್ರಾಕಾರಗಳಲ್ಲಿ ಯಜ್ಞವೇದಿಕೆ
ಗಳನ್ನು ನಿರ್ಮಿಸಿದ್ದನು. ಯೋಷೀಯನು ಆ ಯಜ್ಞ
ವೇದಿಕೆಗಳನ್ನೆಲ್ಲ ನಾಶಗೊಳಿಸಿ, ಅವುಗಳ ಚೂರುಗಳನ್ನು
ಕಿದ್ರೋನ್ ಕಣಿವೆಗೆ ಎಸೆದನು.

13ಪೂರ್ವಕಾಲದಲ್ಲಿ, ರಾಜನಾದ ಸೊಲೊಮೋನನು
ಜೆರುಸಲೇಮಿನ ಬಳಿಯಲ್ಲಿದ್ದ ವಿಘ್ನಪರ್ವತದ ಮೇಲೆ
ಕೆಲವು ಉನ್ನತಸ್ಥಳಗಳನ್ನು ನಿರ್ಮಿಸಿದ್ದನು. ಆ ಉನ್ನತ
ಸ್ಥಳಗಳು ಪರ್ವತದ ದಕ್ಷಿಣದಿಕ್ಕಿನ ಮೇಲಿದ್ದವು. ರಾಜ
ನಾದ ಸೊಲೊಮೋನನು ಚೀದೋನ್ಯರ ಅಷ್ಟೋರೆತ್,
ಮೋವಾಬ್ಯರ ಕೆಮೋಷ್, ಅಮ್ಮೋನಿಯರ
ಮಿಲ್ಕೋಮ್ ಎಂಬ ಅಸಹ್ಯ ವಿಗ್ರಹಗಳಿಗಾಗಿ ಆ ಉನ್ನತ
ಸ್ಥಳಗಳನ್ನು ನಿರ್ಮಿಸಿದ್ದನು. ಆದರೆ ರಾಜನಾದ ಯೋಷೀ
ಯನು ಆ ಪೂಜಾಸ್ಥಳಗಳನ್ನೆಲ್ಲಾ ನಾಶಪಡಿಸಿದನು.
14ರಾಜನಾದ ಯೋಷೀಯನು ಎಲ್ಲಾ ಸ್ಮಾರಕಕಲ್ಲು
ಗಳನ್ನು ಮತ್ತು ಅಶೇರಸ್ತಂಭಗಳನ್ನು ಒಡೆದು ಹಾಕಿ
ಸಿದನು. ಆಮೇಲೆ ಅವನು ಆ ಸ್ಥಳದ ಮೇಲೆ ಸತ್ತವರ
ಎಲುಬುಗಳನ್ನು ಹರಡಿದನು.

15ಯೋಷೀಯನು ಬೇತೇಲಿನ ಉನ್ನತಸ್ಥಳವನ್ನು
ಮತ್ತು ಯಜ್ಞವೇದಿಕೆಯನ್ನು ಕೆಡವಿಬಿಟ್ಟನು. ನೆಬಾಟನ

ಮಗನಾದ ಯಾರೊಬ್ಬಾಮನು ಈ ಯಜ್ಞವೇದಿಕೆಯನ್ನು ನಿರ್ಮಿಸಿದ್ದನು. ಇಸ್ರೇಲರು ಪಾಪ ಮಾಡುವಂತೆ ಯಾರೊಬ್ಬಾಮನು ಪ್ರೇರೇಪಿಸಿದ್ದನು. ಯೋಷೀಯನು ಯಜ್ಞವೇದಿಕೆಯನ್ನು ಮತ್ತು ಉನ್ನತಸ್ಥಳವನ್ನು ಕೆಡವಿಬಿಟ್ಟನು. ಯೋಷೀಯನು ಯಜ್ಞವೇದಿಕೆಯ ಕಲ್ಲುಗಳನ್ನು ಪುಡಿಪುಡಿಮಾಡಿ ಧೂಳಿನಲ್ಲಿ ಬೆರಸಿದನು. ಅವನು ಅಶೇರಸ್ತಂಭವನ್ನು ಸುಟ್ಟುಹಾಕಿದನು.

16 ಯೋಷೀಯನು ಸುತ್ತಲೂ ನೋಡಿದಾಗ ಬೆಟ್ಟದ ಮೇಲಿದ್ದ ಸ್ಮಶಾನಗಳನ್ನು ಕಂಡನು. ಅವನು ಜನರನ್ನು ಕಳುಹಿಸಿ ಆ ಸ್ಮಶಾನಗಳಿಂದ ಎಲುಬುಗಳನ್ನು ತರಿಸಿ ಆ ಎಲುಬುಗಳನ್ನು ಯಜ್ಞವೇದಿಕೆಯ ಮೇಲೆ ಸುಟ್ಟನು. ಈ ರೀತಿಯಲ್ಲಿ, ಯೋಷೀಯನು ಯಜ್ಞವೇದಿಕೆಯನ್ನು ಹೊಲಸು ಮಾಡಿದನು. ಇದು ಪ್ರವಾದಿಯು ಘೋಷಿಸಿದ್ದ* ಯೆಹೋವನ ಸಂದೇಶದಂತೆ ಸಂಭವಿಸಿತು. ಯಾರೊಬ್ಬಾಮನು ಯಜ್ಞವೇದಿಕೆಯ ಪಕ್ಕದಲ್ಲಿ ನಿಂತಿದ್ದಾಗ ಪ್ರವಾದಿಯು ಈ ಸಂಗತಿಗಳನ್ನು ಪ್ರಕಟಿಸಿದ್ದನು.

ನಂತರ ಯೋಷೀಯನು ಸುತ್ತಲೂ ನೋಡಿದಾಗ, ದೇವಮನುಷ್ಯನ ಸಮಾಧಿಯನ್ನು ಕಂಡನು.

17 ಯೋಷೀಯನು, ''ನಾನು ನೋಡುತ್ತಿರುವ ಆ ಸ್ಮಾರಕ ಯಾವುದು?'' ಎಂದು ಕೇಳಿದನು.

ಆ ನಗರದ ಜನರು ಅವನಿಗೆ, ''ಅದು ಯೆಹೂದದಿಂದ ಬಂದ ದೇವಮನುಷ್ಯನ ಸಮಾಧಿ. ನೀನು ಬೇತೇಲಿನ ಯಜ್ಞವೇದಿಕೆಗೆ ಮಾಡಿದ ಕಾರ್ಯಗಳನ್ನು ಕುರಿತು ಈ ಪ್ರವಾದಿಯು ಬಹಳ ಕಾಲದ ಹಿಂದೆಯೇ ಹೇಳಿದ್ದನು''
ಎಂದರು. 18 ಯೋಷೀಯನು, ''ಆ ಸಮಾಧಿಗೆ ಏನೂ ಮಾಡಬೇಡಿ. ಅವನ ಎಲುಬುಗಳನ್ನು ತೆಗೆಯಬೇಡಿ'' ಎಂದು ಹೇಳಿದನು.

19 ಯೋಷೀಯನು ಸಮಾರ್ಯದ ನಗರಗಳಲ್ಲಿದ್ದ ಉನ್ನತಸ್ಥಳಗಳ ಆಲಯಗಳನ್ನೆಲ್ಲ ನಾಶಗೊಳಿಸಿದನು. ಇಸ್ರೇಲಿನ ರಾಜರುಗಳು ಈ ಆಲಯಗಳನ್ನು ನಿರ್ಮಿಸಿದ್ದರು. ಇದರಿಂದ ಯೆಹೋವನು ಬಹಳ ಕೋಪಗೊಂಡಿದ್ದನು. ಯೋಷೀಯನು ಬೇತೇಲಿನಲ್ಲಿ ಆರಾಧನೆಯ ಸ್ಥಳಗಳನ್ನು ನಾಶಪಡಿಸಿದಂತೆ ಆ ಆಲಯಗಳನ್ನೂ ನಾಶಗೊಳಿಸಿದನು.

20 ಯೋಷೀಯನು ಸಮಾರ್ಯದ ಉನ್ನತಸ್ಥಳಗಳಲ್ಲಿದ್ದ ಯಾಜಕರನ್ನೆಲ್ಲ ಕೊಂದುಹಾಕಿದನು. ಅವನು ಯಾಜಕರನ್ನು ಯಜ್ಞವೇದಿಕೆಗಳ ಮೇಲೆಯೇ ಕೊಂದು ಹಾಕಿದನು. ಅವನು ಜನರ ಎಲುಬುಗಳನ್ನು ಯಜ್ಞವೇದಿಕೆಯ ಮೇಲೆ ಸುಟ್ಟನು. ಈ ರೀತಿ ಅವನು ಪೂಜೆಯ ಸ್ಥಳಗಳನ್ನು ನಾಶಗೊಳಿಸಿದನು. ನಂತರ ಅವನು ಜೆರುಸಲೇಮಿಗೆ ಹಿಂದಿರುಗಿದನು.

## ಯೆಹೂದದ ಜನರು ಪಸ್ಕಹಬ್ಬವನ್ನು ಆಚರಿಸಿದರು

21 ರಾಜನಾದ ಯೋಷೀಯನು ಜನರಿಗೆಲ್ಲ, ''ನಿಮ್ಮ ದೇವರಾದ ಯೆಹೋವನಿಗಾಗಿ ಪಸ್ಕಹಬ್ಬವನ್ನು ಆಚರಿಸಿರಿ. ಈ ನಿಬಂಧನ ಗ್ರಂಥದಲ್ಲಿ ಬರೆದಿರುವಂತೆಯೇ ಅದನ್ನು ಮಾಡಿ'' ಎಂದು ಆಜ್ಞಾಪಿಸಿದನು.

22 ನ್ಯಾಯಾಧೀಶರು ಇಸ್ರೇಲನ್ನು ಆಳಿದ ದಿನಗಳಿಂದ ಜನರು ಪಸ್ಕಹಬ್ಬವನ್ನು ಈ ರೀತಿಯಲ್ಲಿ ಆಚರಿಸಿರಲಿಲ್ಲ. ಇಸ್ರೇಲಿನ ರಾಜರುಗಳಾಗಲೀ ಇಲ್ಲವೆ ಯೆಹೂದದ ರಾಜರುಗಳಾಗಲೀ ಈ ರೀತಿ ಪಸ್ಕಹಬ್ಬವನ್ನು ವಿಜೃಂಭಣೆಯಿಂದ ಆಚರಿಸಿರಲಿಲ್ಲ.
23 ಯೋಷೀಯನು ರಾಜನಾಗಿದ್ದ ಹದಿನೆಂಟನೆ ವರ್ಷದಲ್ಲಿ ಅವರು ಯೆಹೋವನಿಗಾಗಿ ಈ ಪಸ್ಕಹಬ್ಬವನ್ನು ಜೆರುಸಲೇಮಿನಲ್ಲಿ ಆಚರಿಸಿದರು.

24 ಯೋಷೀಯನು ಮಾಂತ್ರಿಕರನ್ನು, ತಾಂತ್ರಿಕರನ್ನು, ಮನೆಯ ದೇವರುಗಳನ್ನು, ವಿಗ್ರಹಗಳನ್ನು, ಯೆಹೂದದಲ್ಲಿ ಮತ್ತು ಜೆರುಸಲೇಮಿನಲ್ಲಿ ಜನರು ಪೂಜಿಸುತ್ತಿದ್ದ ತೆರಾಫೀಮ್ ಎಂಬ ಗೊಂಬೆಗಳನ್ನು ನಾಶಪಡಿಸಿದನು. ಯಾಜಕನಾದ ಹಿಲ್ಕೀಯನಿಗೆ ದೇವಾಲಯದಲ್ಲಿ ಸಿಕ್ಕಿದ ಧರ್ಮಶಾಸ್ತ್ರದಲ್ಲಿ ಬರೆದಿರುವ ನಿಯಮಗಳಿಗೆ ವಿಧೇಯನಾಗಿರಲು ಯೋಷೀಯನು ಹೀಗೆ ಮಾಡಿದನು.

25 ಇದಕ್ಕೆ ಮೊದಲು ಯೋಷೀಯನಂತಹ ರಾಜನು ಇರಲೇ ಇಲ್ಲ. ಯೋಷೀಯನು ತನ್ನ ಪೂರ್ಣ ಹೃದಯದಿಂದಲೂ ತನ್ನ ಪೂರ್ಣಆತ್ಮದಿಂದಲೂ ತನ್ನ ಪೂರ್ಣ ಶಕ್ತಿಯಿಂದಲೂ ಯೆಹೋವನ ಕಡೆಗೆ ತಿರುಗಿದನು. ಮೋಶೆಯ ಧರ್ಮಶಾಸ್ತ್ರವನ್ನು ಯೋಷೀಯನಂತೆ ಬೇರೆ ಯಾವ ರಾಜನೂ ಅನುಸರಿಸಿರಲಿಲ್ಲ. ಆ ಕಾಲದವರೆಗೆ ಯೋಷೀಯನಂತಹ ಮತ್ತೊಬ್ಬ ರಾಜನು ಇರಲೇ ಇಲ್ಲ.

26 ಆದರೆ ಯೆಹೋವನು ಯೆಹೂದದ ಜನರ ಮೇಲೆ ಕೋಪಗೊಳ್ಳುವುದನ್ನು ನಿಲ್ಲಿಸಲೇ ಇಲ್ಲ. ಮನಸ್ಸೆಯು ಮಾಡಿದ ಕಾರ್ಯಗಳೆಲ್ಲವುಗಳಿಂದ ಯೆಹೋವನು ಅವರ ಮೇಲೆ ಇನ್ನೂ ಕೋಪಗೊಂಡಿದ್ದನು.
27 ಯೆಹೋವನು,''ನಾನು ಇಸ್ರೇಲರನ್ನು ತೆಗೆದುಹಾಕಿದಂತೆ ಯೆಹೂದ್ಯರನ್ನೂ ನನ್ನ ಸನ್ನಿಧಿಯಿಂದ ತೆಗೆದುಹಾಕುವೆನು. ನಾನು ಆರಿಸಿಕೊಂಡ ಜೆರುಸಲೇಮ್ ಪಟ್ಟಣವನ್ನೂ ನನ್ನ ನಾಮ ಮಹತ್ತಿಗಾಗಿ ಸ್ವೀಕರಿಸಿಕೊಂಡ ದೇವಾಲಯವನ್ನೂ ತಿರಸ್ಕರಿಸುವೆನು'' ಎಂದು ಹೇಳಿದನು.

28 ''ಯೆಹೂದದ ರಾಜರುಗಳ ಇತಿಹಾಸ'' ಎಂಬ ಪುಸ್ತಕದಲ್ಲಿ ಯೋಷೀಯನು ಮಾಡಿದ ಇತರ ಕಾರ್ಯಗಳನ್ನೆಲ್ಲವನ್ನು ಕುರಿತು ಬರೆಯಲಾಗಿದೆ.

## ಯೋಷೀಯನ ಮರಣ

29 ಯೋಷೀಯನ ಕಾಲದಲ್ಲಿ ಈಜಿಪ್ಟಿನ ರಾಜನಾದ ಫರೋಹ-ನೆಕೋ ಎಂಬವನು ಅಶ್ಶೂರದ ರಾಜನ

---

**ಘೋಷಿಸಿದ್ದ** ನೋಡಿ 1 ರಾಜರುಗಳು 13:1-3.

ವಿರುದ್ಧವಾಗಿ ಹೋರಾಡಲು ಯೂಫ್ರೇಟೀಸ್ ನದಿಯ
ಬಳಿಗೆ ಹೋದನು. ರಾಜನಾದ ಯೋಷೀಯನು
ಫರೋಹ-ನೆಕೋವನ ವಿರುದ್ಧ ಹೋರಾಡಲು
ಯೂಫ್ರೇಟೀಸ್ ನದಿಯ ಬಳಿಗೆ ಹೋದನು. ಆದರೆ
ಮೆಗಿದ್ದೋವಿನಲ್ಲಿ ಫರೋಹ-ನೆಕೋವನು ಯೋಷೀ
ಯನನ್ನು ನೋಡಿ, ಅವನನ್ನು ಕೊಂದುಹಾಕಿದನು.
30 ಯೋಷೀಯನ ಸೇವಕರು ಮೆಗಿದ್ದೋವಿನಿಂದ ರಥ
ದಲ್ಲಿ ಯೋಷೀಯನ ದೇಹವನ್ನು ಜೆರುಸಲೇಮಿಗೆ
ತೆಗೆದುಕೊಂಡು ಬಂದರು. ಅವರು ಯೋಷೀಯನನ್ನು
ಅವನ ಸ್ವಂತ ಸ್ಮಶಾನದಲ್ಲಿ ಸಮಾಧಿಮಾಡಿದರು.

ನಂತರ ಸಾಮಾನ್ಯ ಜನರು ಯೋಷೀಯನ ಮಗನಾದ
ಯೆಹೋವಾಹಾಜನನ್ನು ಕರೆದು, ಅವನನ್ನು ಅಭಿಷೇಕಿಸಿ
ಹೊಸ ರಾಜನನ್ನಾಗಿ ಮಾಡಿದರು.

### ಯೆಹೋವಾಹಾಜನು ಯೆಹೂದದ ರಾಜನಾಗುವನು

31 ಯೆಹೋವಾಹಾಜನು ರಾಜನಾದಾಗ ಅವನಿಗೆ
ಇಪ್ಪತ್ತಮೂರು ವರ್ಷ ವಯಸ್ಸಾಗಿತ್ತು. ಅವನು ಜೆರುಸ
ಲೇಮಿನಲ್ಲಿ ಮೂರು ತಿಂಗಳು ಆಳಿದನು. ಅವನ
ತಾಯಿಯು ಲಿಬ್ನದ ಯೆರೆಮೀಯನ ಮಗಳಾದ ಹಮೂ
ಟಲ್ ಎಂಬ ಹೆಸರಿನವಳು. 32 ಯೆಹೋವಾಹಾಜನು
ಯೆಹೋವನು ಕೆಟ್ಟದ್ದೆಂದು ಹೇಳಿದ ಕಾರ್ಯಗಳನ್ನು
ಮಾಡಿದನು. ಯೆಹೋವಾಹಾಜನು ತನ್ನ ಪೂರ್ವಿಕರೆ
ಲ್ಲರೂ ಮಾಡಿದಂತಹ ಕಾರ್ಯಗಳನ್ನು ಮಾಡಿದನು.
33 ಫರೋಹ-ನೆಕೋವನು ಹಮಾತ್ ದೇಶದ ರಿಬ್ಲಾ
ಎಂಬಲ್ಲಿ ಯೆಹೋವಾಹಾಜನನ್ನು ಸೆರೆಹಿಡಿದನು. ಆದ್ದ
ರಿಂದ ಯೆಹೋವಾಹಾಜನು ಜೆರುಸಲೇಮಿನಲ್ಲಿ ಆಳ
ಲಿಲ್ಲ. ಫರೋಹ-ನೆಕೋವನು ಮೂರು ಸಾವಿರದ
ನಾನೂರು ಕಿಲೋ. ಗ್ರಾಂ. ಬೆಳ್ಳಿಯನ್ನು ಮತ್ತು ಮೂವ
ತ್ನಾಲ್ಕು ಕಿಲೋ. ಗ್ರಾಂ. ಚಿನ್ನವನ್ನು ಕೊಡುವಂತೆ
ಯೆಹೂದದವರನ್ನು ಬಲವಂತಪಡಿಸಿದನು.

34 ಫರೋಹ ನೆಕೋವನು ಯೋಷೀಯನ ಮಗನಾದ
ಎಲ್ಯಾಕೀಮನನ್ನು ಹೊಸರಾಜನನ್ನಾಗಿ ಮಾಡಿ ಎಲ್ಯಾಕೀ
ಮನ ಹೆಸರನ್ನು ಯೆಹೋಯಾಕೀಮನೆಂದು ಬದಲಾಯಿ
ಸಿದನು. ಯೆಹೋವಾಹಾಜನನ್ನು ಫರೋಹ- ನೆಕೋ
ವನು ಈಜಿಪ್ಟಿಗೆ ಕರೆದೊಯ್ದನು. ಯೆಹೋವಾಹಾಜನು
ಈಜಿಪ್ಟಿನಲ್ಲಿ ಸತ್ತುಹೋದನು.

35 ಯೆಹೋಯಾಕೀಮನು ಫರೋಹ-ನೆಕೋವನಿಗೆ
ಬೆಳ್ಳಿಬಂಗಾರವನ್ನು ಕೊಟ್ಟನು; ಸಾಮಾನ್ಯ ಜನರಿಗೂ
ತೆರಿಗೆಗಳನ್ನು ಹಾಕಿ ಬಂದ ಹಣವನ್ನು ಫರೋಹ ನೆಕೋವ
ನಿಗೆ ಕೊಟ್ಟನು. ಆದ್ದರಿಂದ ಪ್ರತಿಯೊಬ್ಬರು ತಮ್ಮ ಪಾಲಿನ
ಬೆಳ್ಳಿಬಂಗಾರಗಳನ್ನು ಕೊಟ್ಟರು. ರಾಜನಾದ ಯೆಹೋ
ಯಾಕೀಮನು ಫರೋಹ-ನೆಕೋವನಿಗೆ ಅವುಗಳನ್ನು
ಕೊಟ್ಟನು.

36 ಯೆಹೋಯಾಕೀಮನು ರಾಜನಾದಾಗ ಅವನಿಗೆ
ಇಪ್ಪತ್ತೈದು ವರ್ಷ ವಯಸ್ಸಾಗಿತ್ತು. ಅವನು ಜೆರುಸಲೇಮಿ
ನಲ್ಲಿ ಹನ್ನೊಂದು ವರ್ಷ ಆಳಿದನು. ಅವನ ತಾಯಿಯ
ಹೆಸರು ಜೆಬೂದಾ. ಆಕೆಯು ರೂಮದ ಪೆದಾಯನ
ಮಗಳು.

37 ಯೆಹೋಯಾಕೀಮನು ಯೆಹೋವನು ಕೆಟ್ಟ
ದ್ದೆಂದು ಹೇಳಿದವುಗಳನ್ನು ಮಾಡಿದನು. ಯೆಹೋಯಾ
ಕೀಮನು ತನ್ನ ಪೂರ್ವಿಕರು ಮಾಡಿದ ಕಾರ್ಯಗಳನ್ನು
ಮಾಡಿದನು.

### ರಾಜನಾದ ನೆಬೂಕದ್ನೆಚ್ಚರನು ಯೆಹೂದಕ್ಕೆ ಬರುವನು

24 ಯೆಹೋಯಾಕೀಮನ ಕಾಲದಲ್ಲಿ ಬಾಬಿಲೋ
ನಿನ ರಾಜನಾದ ನೆಬೂಕದ್ನೆಚ್ಚರನು ಯೆಹೂದ
ದೇಶಕ್ಕೆ ಬಂದನು. ಯೆಹೋಯಾಕೀಮನು ಮೂರು
ವರ್ಷಗಳವರೆಗೆ ನೆಬೂಕದ್ನೆಚ್ಚರನ ಸೇವೆಮಾಡಿದನು.
ನಂತರ ಯೆಹೋಯಾಕೀಮನು ನೆಬೂಕದ್ನೆಚ್ಚರನಿಗೆ
ವಿರುದ್ಧವಾಗಿ ದಂಗೆ ಎದ್ದು ಅವನ ಆಳ್ವಿಕೆಯಿಂದ ದೂರ
ವಾದನು. 2 ಯೆಹೋವನು ಬಾಬಿಲೋನಿನವರನ್ನು,
ಅರಾಮ್ಯರನ್ನು, ಮೋವಾಬ್ಯರನ್ನು ಮತ್ತು ಅಮ್ಮೋನಿಯ
ರನ್ನು ಯೆಹೋಯಾಕೀಮನ ವಿರುದ್ಧ ಹೋರಾಡಲು
ಕಳುಹಿಸಿದನು. ಯೆಹೋವನು ಯೆಹೂದವನ್ನು ನಾಶ
ಗೊಳಿಸಲು ಈ ಗುಂಪುಗಳನ್ನು ಕಳುಹಿಸಿದನು.
ಯೆಹೋವನು ತನ್ನ ಸೇವಕರಾದ ಪ್ರವಾದಿಗಳ ಮೂಲಕ
ತಿಳಿಸಿದ್ದಂತೆಯೇ ಇದು ಸಂಭವಿಸಿತು. 3 ಆತನು ಯೆಹೂದ್ಯ
ರನ್ನು ತನ್ನ ಸನ್ನಿಧಿಯಿಂದ ತೆಗೆದುಹಾಕ ಬೇಕೆಂದಿದ್ದ
ಕಾರಣ ಆತನ ಆಜ್ಞೆಯ ಪ್ರಕಾರ ಈ ಶಿಕ್ಷೆಯು ಅವರಿ
ಗಾಯಿತು.

4 ಜೆರುಸಲೇಮನ್ನು ನಿರಪರಾಧದ ರಕ್ತದಿಂದ
ತುಂಬಿಸಿದ ಮನಸ್ಸೆಯ ದುಷ್ಕೃತ್ಯಗಳನ್ನು ಯೆಹೋವನು
ಕ್ಷಮಿಸಲಿಲ್ಲ.

5 ‘‘ಯೆಹೂದದ ರಾಜರುಗಳ ಇತಿಹಾಸ’’ ಎಂಬ ಪುಸ್ತಕ
ದಲ್ಲಿ ಯೆಹೋಯಾಕೀಮನು ಮಾಡಿದ ಇತರ ಕಾರ್ಯ
ಗಳನ್ನು ಬರೆಯಲಾಗಿದೆ. 6 ಯೆಹೋಯಾಕೀಮನು ತೀರಿ
ಕೊಂಡಾಗ ಅವನನ್ನು ಅವನ ಪೂರ್ವಿಕರ ಜೊತೆಯಲ್ಲಿ
ಸಮಾಧಿಮಾಡಿದರು. ಯೆಹೋಯಾಕೀ ಮನ ಮಗನಾದ
ಯೆಹೋಯಾಖೀನನು ಅವನ ನಂತರ ಹೊಸ ರಾಜ
ನಾದನು.

7 ಈಜಿಪ್ಟಿನ ರಾಜನು ಈಜಿಪ್ಟಿನ್ನು ಬಿಟ್ಟು ಹೊರಗೆ
ಹೋಗಲಿಲ್ಲ. ಏಕೆಂದರೆ ಬಾಬಿಲೋನ್ ರಾಜನು,
ಈಜಿಪ್ಟಿನ ಹಳ್ಳದಿಂದ ಯೂಫ್ರೇಟೀಸ್ ನದಿಯವರೆಗಿನ
ದೇಶವನ್ನೆಲ್ಲಾ ಆಕ್ರಮಿಸಿಕೊಂಡಿದ್ದನು.

### ನೆಬೂಕದ್ನೆಚ್ಚರನು ಜೆರುಸಲೇಮನ್ನು ಆಕ್ರಮಿಸಿಕೊಂಡನು

[8]ಯೆಹೋಯಾಖೀನನು ಆಳಲಾರಂಭಿಸಿದಾಗ ಅವ
ನಿಗೆ ಹದಿನೆಂಟು ವರ್ಷ ವಯಸ್ಸಾಗಿತ್ತು. ಅವನು ಜೆರುಸ
ಲೇಮಿನಲ್ಲಿ ಮೂರು ತಿಂಗಳ ಕಾಲ ಆಳಿದನು. ಅವನ
ತಾಯಿಯು ಜೆರುಸಲೇಮಿನ ಎಲ್ನಾತಾನನ ಮಗಳಾದ
ನೆಹುಷ್ಟಾ ಎಂಬ ಹೆಸರಿನವಳು. [9]ಯೆಹೋವನು ಕೆಟ್ಟ
ದ್ದೆಂದು ಹೇಳಿದ ಕಾರ್ಯಗಳನ್ನು ಯೆಹೋಯಾಖೀ
ನನು ಮಾಡಿದನು. ಅವನು ತನ್ನ ತಂದೆಯು ಮಾಡಿದಂತಹ
ಕಾರ್ಯಗಳನ್ನೆಲ್ಲ ಮಾಡಿದನು.

[10]ಆ ಸಮಯದಲ್ಲಿ ಬಾಬಿಲೋನ್ ರಾಜನಾದ
ನೆಬೂಕದ್ನೆಚ್ಚರನ ಅಧಿಕಾರಿಗಳು ಜೆರುಸಲೇಮಿಗೆ
ಮುತ್ತಿಗೆ ಹಾಕಿದರು. [11]ಆಗ ಬಾಬಿಲೋನ್ ರಾಜನಾದ
ನೆಬೂಕದ್ನೆಚ್ಚರನು ಆ ನಗರಕ್ಕೆ ಬಂದನು. [12]ಯೆಹೂದದ
ರಾಜನಾದ ಯೆಹೋಯಾಖೀನನು ಬಾಬಿಲೋನ್
ರಾಜನನ್ನು ಭೇಟಿ ಮಾಡಲು ಹೋದನು. ಯೆಹೋಯಾ
ಖೀನನ ತಾಯಿ, ಅವನ ಅಧಿಕಾರಿಗಳು, ನಾಯಕರು
ಮತ್ತು ಸಿಬ್ಬಂದಿಯೆಲ್ಲವೂ ಅವನೊಂದಿಗೆ ಹೋದರು.
ಆಗ ಬಾಬಿಲೋನ್ ರಾಜ ಯೆಹೋಯಾಖೀನನನ್ನು
ಸೆರೆಹಿಡಿದನು. ಇದು ಸಂಭವಿಸಿದ್ದು ನೆಬೂಕದ್ನೆಚ್ಚರನ
ಆಳ್ವಿಕೆಯ ಎಂಟನೆಯ ವರ್ಷದಲ್ಲಿ.

[13]ನೆಬೂಕದ್ನೆಚ್ಚರನು ಜೆರುಸಲೇಮಿನ ದೇವಾಲಯ
ದಲ್ಲಿದ್ದ ಭಂಡಾರವನ್ನೆಲ್ಲಾ ಮತ್ತು ರಾಜನ ಅರಮನೆ
ಯಲ್ಲಿದ್ದ ಭಂಡಾರವನ್ನೆಲ್ಲಾ ತೆಗೆದುಕೊಂಡು ಹೋದನು.
ಇಸ್ರೇಲರ ರಾಜನಾದ ಸೊಲೊಮೋನನು ದೇವಾಲಯ
ದಲ್ಲಿಟ್ಟಿದ್ದ ಬಂಗಾರವನ್ನೆಲ್ಲಾ ನೆಬೂಕದ್ನೆಚ್ಚರನು ತೆಗೆದು
ಕೊಂಡನು. ಯೆಹೋವನು ಹೇಳಿದ್ದಂತೆಯೇ ಇದು
ಸಂಭವಿಸಿತು.

[14]ನೆಬೂಕದ್ನೆಚ್ಚರನು ಜೆರುಸಲೇಮಿನ ಜನರನ್ನೆಲ್ಲಾ
ಸೆರೆಹಿಡಿದನು. ಅವನು ಎಲ್ಲಾ ನಾಯಕರನ್ನು ಮತ್ತು ಹಣ
ವಂತರನ್ನು ಸೆರೆಹಿಡಿದನು. ಅವನು ಹತ್ತು ಸಾವಿರ
ಜನರನ್ನು ಸೆರೆಯಾಳುಗಳನ್ನಾಗಿ ಒಯ್ದನು. ನೆಬೂಕದ್ನೆ
ಚ್ಚರನು ನುರಿತ ತಜ್ಞರನ್ನು ಮತ್ತು ಕಮ್ಮಾರರನ್ನು
ಕರೆದೊಯ್ದನು. ಸಾಮಾನ್ಯ ಜನರನ್ನೂ ಕಡುಬಡವ
ರನ್ನೂ ಬಿಟ್ಟು ಉಳಿದ ಯಾರನ್ನೂ ಬಿಡಲಿಲ್ಲ. [15]ನೆಬೂ
ಕದ್ನೆಚ್ಚರನು ಯೆಹೋಯಾಖೀನನನ್ನು ಸೆರೆಯಾಳಾಗಿ
ಬಾಬಿಲೋನಿಗೆ ಕರೆದೊಯ್ದನು. ನೆಬೂಕದ್ನೆಚ್ಚರನು
ರಾಜನ ತಾಯಿಯನ್ನು, ಅವನ ಪತ್ನಿಯರನ್ನು, ಅಧಿಕಾರಿ
ಗಳನ್ನು ಮತ್ತು ದೇಶದ ಪ್ರತಿಷ್ಠಿತರನ್ನು ಕರೆದೊಯ್ದನು.
ನೆಬೂಕದ್ನೆಚ್ಚರನು ಅವರನ್ನು ಜೆರುಸಲೇಮಿನಿಂದ ಬಾಬಿ
ಲೋನಿಗೆ ಸೆರೆಯಾಳುಗಳನ್ನಾಗಿ ಒಯ್ದನು. [16]ಬಾಬಿ
ಲೋನ್ ರಾಜನು ಏಳು ಸಾವಿರ ಮಂದಿ ಸೈನಿಕರನ್ನು
ಮತ್ತು ಒಂದು ಸಾವಿರ ಮಂದಿ ನುರಿತ ತಜ್ಞರನ್ನು ಮತ್ತು
ಕಮ್ಮಾರರನ್ನು ಕರೆದೊಯ್ದನು. ಈ ಜನರೆಲ್ಲರೂ ಸೈನಿಕ
ರಾಗಿದ್ದು, ಯುದ್ಧಗಳಲ್ಲಿ ಹೋರಾಡಲು ಸಮರ್ಥರಾಗಿ
ದ್ದರು. ಬಾಬಿಲೋನ್ ರಾಜನು ಅವರನ್ನು ಸೆರೆ
ಯಾಳುಗಳನ್ನಾಗಿ ಬಾಬಿಲೋನಿಗೆ ಒಯ್ದನು.

### ರಾಜನಾದ ಚಿದ್ಕೀಯನು

[17]ಬಾಬಿಲೋನ್ ರಾಜನು ಮತ್ತನ್ಯನನ್ನು ಹೊಸ ರಾಜ
ನನ್ನಾಗಿ ನೇಮಿಸಿದನು. ಅವನು ಯೆಹೋಯಾಖೀನನ
ಸ್ಥಳವನ್ನು ಪಡೆದನು. ಮತ್ತನ್ಯನು ಯೆಹೋಯಾಖೀನನ
ಚಿಕ್ಕಪ್ಪ. ಬಾಬಿಲೋನ್ ರಾಜನು ಮತ್ತನ್ಯನ ಹೆಸರನ್ನು
ಚಿದ್ಕೀಯ ಎಂದು ಬದಲಾಯಿಸಿದನು.

[18]ಚಿದ್ಕೀಯನು ಆಳಲಾರಂಭಿಸಿದಾಗ ಅವನಿಗೆ ಇಪ್ಪ
ತ್ತೊಂದು ವರ್ಷ ವಯಸ್ಸಾಗಿತ್ತು. ಅವನು ಜೆರುಸಲೇಮಿ
ನಲ್ಲಿ ಹನ್ನೊಂದು ವರ್ಷ ಆಳಿದನು. ಅವನ ತಾಯಿಯು
ಲಿಬ್ನದ ಯೆರೆಮೀಯನ ಮಗಳಾದ ಹಮೂಟಲ್ ಎಂಬ
ಹೆಸರಿನವಳು. [19]ಯೆಹೋವನು ಕೆಟ್ಟದ್ದೆಂದು ಹೇಳಿದ
ಕಾರ್ಯಗಳನ್ನು ಚಿದ್ಕೀಯನು ಮಾಡಿದನು. ಚಿದ್ಕೀಯನು
ಯೆಹೋಯಾಖೀನನು ಮಾಡಿದಂಥ ಕಾರ್ಯಗಳನ್ನು
ಮಾಡಿದನು.

[20]ಯೆಹೋವನ ಕೋಪದಿಂದ ಯೆಹೂದಕ್ಕೆ ಮತ್ತು
ಜೆರುಸಲೇಮಿಗೆ ಇವೆಲ್ಲವೂ ಸಂಭವಿಸಿದವು. ಹೀಗೆ
ಯೆಹೋವನು ಅವರನ್ನು ತನ್ನಿಂದ ದೂರಸರಿಸಿದನು.
ಚಿದ್ಕೀಯನು ಬಾಬಿಲೋನ್ ರಾಜನಿಗೆ ವಿರುದ್ಧವಾಗಿ
ದಂಗೆ ಎದ್ದನು.

### ನೆಬೂಕದ್ನೆಚ್ಚರನು ಚಿದ್ಕೀಯನ ಆಳ್ವಿಕೆಯನ್ನು ಕೊನೆಗೊಳಿಸಿದನು

25 ಆದ್ದರಿಂದ ಬಾಬಿಲೋನ್ ರಾಜನಾದ ನೆಬೂಕ
ದ್ನೆಚ್ಚರನು ಜೆರುಸಲೇಮಿನ ವಿರುದ್ಧ ಯುದ್ಧ
ಮಾಡಲು ತನ್ನ ಎಲ್ಲಾ ಸೇನೆಯೊಡನೆ ಬಂದನು. ನೆಬೂ
ಕದ್ನೆಚ್ಚರನು ಜೆರುಸಲೇಮಿನ ಸುತ್ತಲೂ ಪಾಳೆಯ ಮಾಡಿ
ಕೊಂಡು ಮಣ್ಣಿನ ದಿಬ್ಬವನ್ನು ನಿರ್ಮಿಸಿದನು. ಅವನು
ನಗರದೊಳಕ್ಕೆ ಹೋಗುವ ಮತ್ತು ನಗರದಿಂದ ಬರುವ
ಜನರನ್ನು ತಡೆಯಲು ಹೀಗೆ ಮಾಡಿದನು. ಇದು ನೆಬೂಕ
ದ್ನೆಚ್ಚರನ ಆಳ್ವಿಕೆಯ ಒಂಭತ್ತನೆಯ ವರ್ಷದ ಹತ್ತನೆಯ
ತಿಂಗಳಿನ ಹತ್ತನೆಯ ದಿನದಂದು ಸಂಭವಿಸಿತು.
[2]ನೆಬೂಕದ್ನೆಚ್ಚರನ ಸೇನೆಯು ಜೆರುಸಲೇಮಿನ ಸುತ್ತಲೂ
ಚಿದ್ಕೀಯನು ಯೆಹೂದದ ರಾಜನಾದ ಹನ್ನೊಂದನೆಯ
ವರ್ಷದವರೆಗೆ ನೆಲೆಸಿತು. [3]ನಾಲ್ಕನೆಯ ತಿಂಗಳ ಒಂಭತ್ತ
ನೆಯ ದಿನದಂದು ನಗರದಲ್ಲಿ ಭೀಕರ ಬರಗಾಲವಿತ್ತು.
ಅಲ್ಲಿನ ಸಾಮಾನ್ಯರಿಗೆ ಆಹಾರವೇನೂ ಇರಲಿಲ್ಲ.

[4]ಆಗ ನೆಬೂಕದ್ನೆಚ್ಚರನ ಸೇನೆಯು ನಗರದ ಗೋಡೆ
ಯಲ್ಲಿ ಒಂದು ರಂಧ್ರವನ್ನು ಕೊರೆದರು. ಅಂದಿನ ರಾತ್ರಿ

ರಾಜನಾದ ಚಿದ್ಕೀಯ ಮತ್ತು ಅವನ ಸೈನಿಕರೆಲ್ಲರೂ ಓಡಿಹೋದರು. ಅವರು ರಾಜನ ತೋಟದ ಎರಡು ಗೋಡೆಗಳ ಮಧ್ಯಭಾಗದ ರಹಸ್ಯ ಬಾಗಿಲಿನ ಮೂಲಕ ಓಡಿಹೋದರು. ಬಾಬಿಲೋನ್ ಸೇನೆಯು ನಗರವನ್ನು ಸುತ್ತುವರಿದಿತ್ತು. ಆದರೆ ಚಿದ್ಕೀಯ ಮತ್ತು ಅವನ ಸೇನೆಯು ಮರುಭೂಮಿಯ ರಸ್ತೆಯಲ್ಲಿ ತಪ್ಪಿಸಿಕೊಂಡರು. [5]ಬಾಬಿಲೋನ್ ಸೇನೆಯು ರಾಜನಾದ ಚಿದ್ಕೀಯನನ್ನು ಅಟ್ಟಿಸಿಕೊಂಡು ಹೋಗಿ, ಅವನನ್ನು ಜೆರಿಕೋವಿನ ಸಮೀಪದಲ್ಲಿ ಹಿಡಿದರು.

[6]ಬಾಬಿಲೋನಿನವರು ರಾಜನಾದ ಚಿದ್ಕೀಯನನ್ನು ರಿಬ್ಲದಲ್ಲಿ ಬಾಬಿಲೋನ್ ರಾಜನಿಗೆ ಒಪ್ಪಿಸಿದರು. ಬಾಬಿಲೋನ್ ರಾಜನು ಚಿದ್ಕೀಯನನ್ನು ದಂಡಿಸಲು ತೀರ್ಮಾನಿಸಿದನು.[7]ಅವರು ಚಿದ್ಕೀಯನ ಮಕ್ಕಳನ್ನು ಅವನ ಎದುರಿನಲ್ಲಿಯೇ ಕೊಂದುಹಾಕಿದರು. ನಂತರ ಅವರು ಚಿದ್ಕೀಯನ ಕಣ್ಣುಗಳನ್ನು ಕಿತ್ತುಹಾಕಿದರು. ಅವರು ಅವನನ್ನು ಸರಪಣಿಗಳಿಂದ ಬಂಧಿಸಿ, ಬಾಬಿಲೋನಿಗೆ ಕೊಂಡೊಯ್ದರು.

### ಜೆರುಸಲೇಮನ್ನು ನಾಶಗೊಳಿಸಲಾಯಿತು

[8]ಬಾಬಿಲೋನ್ ರಾಜನಾಗಿದ್ದ ನೆಬೂಕದ್ನೆಚ್ಚರನು ತನ್ನ ಆಳ್ವಿಕೆಯ ಹತ್ತೊಂಭತ್ತನೆಯ ವರ್ಷದ ಐದನೆಯ ತಿಂಗಳ ಏಳನೆಯ ದಿನದಂದು ಜೆರುಸಲೇಮಿಗೆ ಬಂದನು. ನೆಬೂಜರದಾನ ಎಂಬವನು ನೆಬೂಕದ್ನೆಚ್ಚರನ ರಕ್ಷಕದಳದ ಅಧಿಪತಿಯಾಗಿದ್ದನು. [9]ನೆಬೂಜರದಾನನು ದೇವಾಲಯವನ್ನೂ ರಾಜನ ಅರಮನೆಯನ್ನೂ ಜೆರುಸಲೇಮಿನಲ್ಲಿದ್ದ ಮನೆಗಳನ್ನೆಲ್ಲಾ ಸುಟ್ಟುಹಾಕಿದನು. ಅವನು ಮಹಾಸೌಧಗಳನ್ನು ನಾಶಗೊಳಿಸಿದನು,

[10]ನಂತರ ನೆಬೂಜರದಾನನೊಂದಿಗಿದ್ದ ಬಾಬಿಲೋನ್ ಸೈನ್ಯವು ಜೆರುಸಲೇಮಿನ ಸುತ್ತಲೂ ಇದ್ದ ಗೋಡೆಯನ್ನು ಕೆಡವಿಹಾಕಿತು. [11]ಆ ನಗರದಲ್ಲಿ ಉಳಿದ್ದಿದ್ದ ಜನರನ್ನೆಲ್ಲಾ ನೆಬೂಜರದಾನನು ಸೆರೆಹಿಡಿದನು. ರಾಜನಾದ ನೆಬೂಕದ್ನೆಚ್ಚರನಿಗೆ ವಿಧೇಯರಾಗಿರಲು ಕೆಲವು ಜನರು ಒಪ್ಪಿದರು. ಆದರೆ ನೆಬೂಜರದಾನನು ಆ ಜನರನ್ನೆಲ್ಲಾ ಸೆರೆಹಿಡಿದನು. ಅವನು ನಗರದಲ್ಲಿದ್ದ ಪ್ರತಿಯೊಬ್ಬರನ್ನೂ ಕರೆದೊಯ್ದನು. [12]ಸಾಮಾನ್ಯ ಜನರಲ್ಲಿ ತೀರ ಬಡವರಾದ ಜನರನ್ನು ಮಾತ್ರ ನೆಬೂಜರದಾನನು ಅಲ್ಲಿಯೇ ನೆಲೆಸಲು ಬಿಟ್ಟನು. ಆ ಬಡಜನರು ಅಲ್ಲಿಯೇ ನೆಲೆಸಿ, ಬೇಸಾಯಮಾಡಿ ದ್ರಾಕ್ಷಿಯನ್ನು ಬೆಳೆಯಲು ಅವರನ್ನು ಬಿಟ್ಟುಬಿಟ್ಟನು.

[13]ಬಾಬಿಲೋನ್ ಸೈನಿಕರು ದೇವಾಲಯದಲ್ಲಿದ್ದ ತಾಮ್ರದ ಸ್ತಂಭಗಳನ್ನು ಚೂರುಚೂರು ಮಾಡಿದರು. ಅವರು ಯೆಹೋವನ ಆಲಯದಲ್ಲಿದ್ದ ತಾಮ್ರದ ದೊಡ್ಡ ತೊಟ್ಟಿಯನ್ನು ಮತ್ತು ತಾಮ್ರದ ಬಂಡಿಯನ್ನು ಚೂರು ಚೂರಾಗಿ ಒಡೆದುಹಾಕಿದರು. ನಂತರ ಬಾಬಿಲೋನ್ ಸೈನಿಕರು ತಾಮ್ರದ ಚೂರುಗಳನ್ನು ಬಾಬಿಲೋನಿಗೆ ತೆಗೆದುಕೊಂಡು ಹೋದರು. [14]ಬಾಬಿಲೋನಿನವರು ದೇವಾಲಯದಲ್ಲಿ ಉಪಯೋಗಿಸುತ್ತಿದ್ದ ಬೋಗುಣಿ, ಸಲಿಕೆ,ಕತ್ತರಿ, ಧೂಪಾರತಿ ಮೊದಲಾದ ತಾಮ್ರದ ವಸ್ತುಗಳನ್ನು ತೆಗೆದುಕೊಂಡು ಹೋದನು. [15]ನೆಬೂಜರದಾನನು ಅಗ್ಗಿಷ್ಟಿಕೆಗಳನ್ನು ಮತ್ತು ಬಟ್ಟಲುಗಳನ್ನು ತೆಗೆದುಕೊಂಡು ಹೋದನು. ಅವನು ಬಂಗಾರದ ವಸ್ತುಗಳನ್ನು ಬಂಗಾರಕ್ಕಾಗಿಯೂ ಬೆಳ್ಳಿಯ ವಸ್ತುಗಳನ್ನು ಬೆಳ್ಳಿಗಾಗಿಯೂ ತೆಗೆದುಕೊಂಡು ಹೋದನು. [16]ಅವನು ತೆಗೆದುಕೊಂಡು ಹೋದ ವಸ್ತುಗಳ ಪಟ್ಟಿಯು ಹೀಗಿದೆ:

ಎರಡು ತಾಮ್ರ ಕಂಬಗಳು, ಒಂದು ತೊಟ್ಟಿ ಮತ್ತು ದೇವಾಲಯಕ್ಕೆ ಸೊಲೊಮೋನನು ನಿರ್ಮಿಸಿದ್ದ ಬಂಡಿಗಳು. ಈ ವಸ್ತುಗಳ ತಾಮ್ರವು ತೂಕ ಮಾಡಲಾರದಷ್ಟು ಅಧಿಕವಾಗಿತ್ತು.

17 ಪ್ರತಿಯೊಂದು ಕಂಬವೂ ಸುಮಾರು ಇಪ್ಪತ್ತೇಳು ಅಡಿ ಉದ್ದವಾಗಿತ್ತು. ಕಂಬಗಳ ಮೇಲಿದ್ದ ಬೋದಿಗೆಗಳನ್ನು ತಾಮ್ರದಿಂದ ನಿರ್ಮಿಸಿದ್ದರು. ಪ್ರತಿಯೊಂದು ಬೋದಿಗೆಯೂ ನಾಲ್ಕುವರೆ ಅಡಿ ಉದ್ದವಾಗಿತ್ತು. ಪ್ರತಿಯೊಂದು ಬೋದಿಗೆಯ ಮೇಲೆ ಜಾಲರಿಯ ಆಕಾರವಿತ್ತು ಮತ್ತು ದಾಳಿಂಬೆ ಹಣ್ಣುಗಳ ಆಕಾರಗಳಿದ್ದವು. ಇವೆಲ್ಲವುಗಳನ್ನು ತಾಮ್ರದಿಂದಲೇ ಮಾಡಿದ್ದರು. ಎರಡು ಕಂಬಗಳೂ ಒಂದೇ ರೀತಿಯ ಆಕಾರದಲ್ಲಿದ್ದವು.

### ಯೆಹೂದದ ಜನರನ್ನು ಸೆರೆಯಾಳುಗಳನ್ನಾಗಿಸಿ ಕರೆದೊಯ್ದರು

18 ನಂತರ, ನೆಬೂಜರದಾನನು, ಪ್ರಧಾನಯಾಜಕನಾದ ಸೆರಾಯನನ್ನು, ಎರಡನೆಯ ಯಾಜಕನಾದ ಚೆಫನ್ಯನನ್ನು ಮತ್ತು ಮೂವರು ದ್ವಾರಪಾಲಕರನ್ನು ಹಿಡಿದುಕೊಂಡು ಹೋದನು.

19 ನೆಬೂಜರದಾನನು ಸೇನೆಯ ಸೇನಾಧಿಕಾರಿಯೊಬ್ಬನನ್ನು ಹಿಡಿದುಕೊಂಡು ಹೋದನು. ನೆಬೂಜರದಾನನು ನಗರದಲ್ಲಿ ಸಿಕ್ಕಿದ ರಾಜನ ಐದು ಮಂದಿ ಸಲಹೆಗಾರರನ್ನು ಹಿಡಿದೊಯ್ದನು. ಅವನು ಸೇನೆಯ ಅಧಿಕಾರಿಯ ಕಾರ್ಯದರ್ಶಿಯನ್ನು ಹಿಡಿದೊಯ್ದನು. ಸೇನಾಧಿಕಾರಿಯ ಕಾರ್ಯದರ್ಶಿಯು ಸಾಮಾನ್ಯ ಜನರನ್ನು ಒಟ್ಟುಗೂಡಿಸಿ, ಅವರನ್ನು ಸೈನಿಕರನ್ನಾಗಿ ಆರಿಸುತ್ತಿದ್ದನು. ನೆಬೂಜರದಾನನು ನಗರದಲ್ಲಿ ಸಿಕ್ಕಿದ ಇತರ ಅರವತ್ತು ಮಂದಿಯನ್ನು ಹಿಡಿದೊಯ್ದನು. ಈ ಜನರು ಸಾಮಾನ್ಯ ಜನರಾಗಿದ್ದರು.

[20]ನಂತರ ನೆಬೂಜರದಾನನು ಆ ಜನರನ್ನೆಲ್ಲ ರಿಬ್ಲ
ದಲ್ಲಿದ್ದ ಬಾಬಿಲೋನ್ ರಾಜನ ಬಳಿಗೆ ಒಯ್ದನು.
[21]ಬಾಬಿಲೋನ್ ರಾಜನು ಹಮಾತ್ ದೇಶದ ರಿಬ್ಲದಲ್ಲಿ
ಅವರನ್ನೆಲ್ಲ ಕೊಂದುಹಾಕಿದನು. ಹೀಗೆ ಯೆಹೂದದ
ಜನರನ್ನೆಲ್ಲ ಅವರ ದೇಶದಿಂದ ಸೆರೆಯಾಳುಗಳನ್ನಾಗಿಸಿ
ಹಿಡಿದೊಯ್ದರು.

## ನೆಬೂಕದ್ನೆಚ್ಚರನು ಗೆದಲ್ಯನನ್ನು ಯೆಹೂದದ ರಾಜ್ಯಪಾಲನನ್ನಾಗಿ ನೇಮಿಸಿದನು

[22]ಬಾಬಿಲೋನ್ ರಾಜನಾದ ನೆಬೂಕದ್ನೆಚ್ಚರನು
ಯೆಹೂದದೇಶದಲ್ಲಿ ಕೆಲವು ಜನರನ್ನು ಬಿಟ್ಟನು. ಅವನು
ಅಹೀಕಾಮನ ಮಗನಾದ ಗೆದಲ್ಯನನ್ನು ಯೆಹೂದದಲ್ಲಿ
ಜನರಿಗೆ ರಾಜ್ಯಪಾಲನನ್ನಾಗಿ ಮಾಡಿದನು. (ಅಹೀಕಾ
ಮನು ಶಾಫಾನನ ಮಗ.)

[23]ಬಾಬಿಲೋನ್ ರಾಜನು ಗೆದಲ್ಯನನ್ನು ರಾಜ್ಯಪಾಲನ
ನ್ನಾಗಿ ನೇಮಿಸಿರುವುದನ್ನು ಸೇನಾಧಿಪತಿಗಳು ಮತ್ತು
ಅವನ ಜನರು ಕೇಳಿ ಮಿಚ್ಪದಲ್ಲಿದ್ದ ಗೆದಲ್ಯನ ಬಳಿಗೆ
ಬಂದರು. ಈ ಸೇನಾಧಿಪತಿಗಳು ಯಾರೆಂದರೆ: ನೆತನ್ಯನ
ಮಗನಾದ ಇಷ್ಮಾಯೇಲ, ಕಾರೇಹನ ಮಗನಾದ
ಯೋಹಾನಾನ್, ನೆಟೋಫದವನೂ ತನ್ಹುಮೆತನ
ಮಗನೂ ಆದ ಸೆರಾಯ, ಮಾಕಾನ್ಯನ ಮಗನಾದ
ಯಾಜನ್ಯ.

[24]ನಂತರ ಗೆದಲ್ಯನು ಈ ಸೇನಾಧಿಪತಿಗಳಿಗೆ ಮತ್ತು
ಅವರ ಜನರಿಗೆ, ''ಬಾಬಿಲೋನ್ ಅಧಿಕಾರಿಗಳಿಗೆ
ನೀವು ಹೆದರಬೇಡಿ. ನೀವು ದೇಶದಲ್ಲಿ ವಾಸಿಸುತ್ತ
ಬಾಬಿಲೋನ್ ರಾಜನ ಸೇವೆಯನ್ನು ಮಾಡಿ. ಆಗ ನಿಮ
ಗೇನೂ ತೊಂದರೆಯಾಗುವುದಿಲ್ಲ'' ಎಂದು ಪ್ರಮಾಣ
ಮಾಡಿದನು.

[25]ಆದರೆ ಏಳನೆಯ ತಿಂಗಳಲ್ಲಿ, ರಾಜನ ಕುಲದವನೂ
ಎಲೀಷಾಮನ ಮೊಮ್ಮಗನೂ ನೆತನ್ಯನ ಮಗನೂ ಆದ
ಇಷ್ಮಾಯೇಲನು ಹತ್ತು ಜನರೊಂದಿಗೆ ಬಂದು ಗೆದಲ್ಯ
ನನ್ನು ಕೊಂದುಹಾಕಿದನು. ಇಷ್ಮಾಯೇಲ ಮತ್ತು ಅವನ
ಜನರು ಮಿಚ್ಪದಲ್ಲಿ ಗೆದಲ್ಯನ ಜೊತೆಗಿದ್ದ ಯೆಹೂದ್ಯರನ್ನು
ಮತ್ತು ಬಾಬಿಲೋನಿನವರನ್ನು ಕೊಂದುಹಾಕಿದರು.
[26]ಇದಾದನಂತರ, ಕನಿಷ್ಠರಾದವರೂ ಮತ್ತು ಅತಿ
ಮುಖ್ಯರೂ ಆದ ಜನರೆಲ್ಲರು ಮತ್ತು ಸೇನೆಯ ನಾಯ
ಕರು ಬಾಬಿಲೋನಿನವರಿಗೆ ಹೆದರಿಕೊಂಡು ಈಜಿಪ್ಟಿಗೆ
ಓಡಿಹೋದರು.

[27]ಬಾಬಿಲೋನ್ ರಾಜನಾದ ಎವೀಲ್ಮೆರೋದಕನು,
ಯೆಹೂದದ ರಾಜನಾದ ಯೆಹೋಯಾಖೀನನನ್ನು
ಸೆರೆಯಿಂದ ಬಿಡುಗಡೆ ಮಾಡಿದನು. ಯೆಹೋಯಾಖೀ
ನನನ್ನು ಸೆರೆಹಿಡಿದ ಮೂವತ್ತೇಳನೆಯ ವರ್ಷದ ನಂತರ
ಇದು ಸಂಭವಿಸಿತು. ಎವೀಲ್ಮೆರೋದಕನ ಆಳ್ವಿಕೆಯ
ಹನ್ನೆರಡನೆ ತಿಂಗಳಿನ ಇಪ್ಪತ್ತೇಳನೆಯ ದಿನದಂದು ಇದು
ಸಂಭವಿಸಿತು. [28]ಎವೀಲ್ಮೆರೋದಕನು ಯೆಹೋಯಾಖೀ
ನನೊಂದಿಗೆ ದಯೆಯಿಂದ ಮಾತನಾಡಿದನು. ಎವೀಲ್ಮೆ
ರೋದಕನು ಯೆಹೋಯಾಖೀನನ ಸಿಂಹಾಸನವನ್ನು
ಬಾಬಿಲೋನಿನಲ್ಲಿ ತನ್ನೊಂದಿಗಿದ್ದ ರಾಜರುಗಳ ಸಿಂಹಾಸ
ನಗಳಿಗಿಂತ ಎತ್ತರದಲ್ಲಿರಿಸಿದನು. [29]ಎವೀಲ್ಮೆರೋದಕನು
ಯೆಹೋಯಾಖೀನನ ಸೆರೆವಾಸದ ಬಟ್ಟೆಗಳನ್ನು ತೆಗೆಸಿ
ಹೊಸ ಬಟ್ಟೆಗಳನ್ನು ತೊಡಿಸಿದನು. ಯೆಹೋಯಾ
ಖೀನನು ಬದುಕಿರುವ ತನಕ ತನ್ನ ಪಂಕ್ತಿಯಲ್ಲಿ ಊಟ
ಮಾಡಲು ಎವೀಲ್ಮೆರೋದಕನು ಅವಕಾಶ ಮಾಡಿ
ಕೊಟ್ಟನು. [30]ಹೀಗೆ ರಾಜನಾದ ಎವೀಲ್ಮೆರೋದಕನ
ಪಂಕ್ತಿಯಲ್ಲಿ ಯೆಹೋಯಾಖೀನನು ತನ್ನ ಉಳಿದ
ಜೀವಿತದಲ್ಲಿ ಊಟಮಾಡಿದನು.

# License Agreement for Bible Texts

***World Bible Translation Center***
***Last Updated: September 21, 2006***

Copyright © 2006 by World Bible Translation Center
All rights reserved.

**These Scriptures:**
- Are copyrighted by World Bible Translation Center.
- Are not public domain.
- May not be altered or modified in any form.
- May not be sold or offered for sale in any form.
- May not be used for commercial purposes (including, but not limited to, use in advertising or Web banners used for the purpose of selling online add space).
- May be distributed without modification in electronic form for non-commercial use. However, they may not be hosted on any kind of server (including a Web or ftp server) without written permission. A copy of this license (without modification) must also be included.
- May be quoted for any purpose, up to 1,000 verses, without written permission. However, the extent of quotation must not comprise a complete book nor should it amount to more than 50% of the work in which it is quoted. A copyright notice must appear on the title or copyright page using this pattern: "Taken from the HOLY BIBLE: EASY-TO-READ VERSION™ © 2006 by World Bible Translation Center, Inc. and used by permission." If the text quoted is from one of WBTC's non-English versions, the printed title of the actual text quoted will be substituted for "HOLY BIBLE: EASY-TO-READ VERSION™." The copyright notice must appear in English or be translated into another language. When quotations from WBTC's text are used in non-saleable media, such as church bulletins, orders of service, posters, transparencies or similar media, a complete copyright notice is not required, but the initials of the version (such as "ERV" for the Easy-to-Read Version™ in English) must appear at the end of each quotation.

Any use of these Scriptures other than those listed above is prohibited. For additional rights and permission for usage, such as the use of WBTC's text on a Web site, or for clarification of any of the above, please contact World Bible Translation Center in writing or by email at distribution@wbtc.com.

World Bible Translation Center
P.O. Box 820648
Fort Worth, Texas 76182, USA
Telephone: 1-817-595-1664
Toll-Free in US: 1-888-54-BIBLE
E-mail: info@wbtc.com

**WBTC's web site –** World Bible Translation Center's web site: http://www.wbtc.org

**Order online –** To order a copy of our texts online, go to: http://www.wbtc.org

**Current license agreement –** *This license is subject to change without notice. The current license can be found at:* http://www.wbtc.org/downloads/biblelicense.htm

**Trouble viewing this file –** If the text in this document does not display correctly, use Adobe Acrobat Reader 5.0 or higher. Download Adobe Acrobat Reader from:
http://www.adobe.com/products/acrobat/readstep2.html

**Viewing Chinese or Korean PDFs –** To view the Chinese or Korean PDFs, it may be necessary to download the Chinese Simplified or Korean font pack from Adobe. Download the font packs from:
http://www.adobe.com/products/acrobat/acrrasianfontpack.html